ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ | 45 | ಫೆಬ್ರವರಿ 19 ಬುಧವಾರ 2025

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 45 | ಸಂಚಿಕೆ: 302 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com
₹4

ಇನ್ನು ಮುಂದೆ ಅನಧಿಕೃತ ಬಡಾವಣೆ ತಲೆ ಎತ್ತಿದರೆ

ಡಿಸಿ, ನಗರ ಯೋಜನಾ ಅಧಿಕಾರಿಗಳೇ ಹೊಣೆ

● ಮುಖ್ಯಮಂತ್ರಿ ಸಿದ್ದರಾಮಯ್ಯ ಕಟ್ಟಾದೇಶ ● ಮೂರು ತಿಂಗಳೊಳಗೆ ಅಕ್ರಮ ನಿವೇಶನಗಳಿಗೆ ಬಿ–ಖಾತಾ ನೀಡಲು ಸೂಚನೆ ● ಮೇ ನಂತರ ರಾಜ್ಯದಲ್ಲಿ ಎಲ್ಲಿಯೂ ಅನಧಿಕೃತ ಬಡಾವಣೆ ಇರಕೂಡದು ● ವಿಡಿಯೋ ಕಾನ್ಫರೆನ್ಸ್‌ನಲ್ಲಿ ಡಿಸಿಗಳು, ಯೋಜನಾ ನಿರ್ದೇಶಕರು, ಸ್ಥಳೀಯ ಸಂಸ್ಥೆಗಳ ಆಯುಕ್ತರು, ಪೌರಾಯುಕ್ತರು, ಮುಖ್ಯಾಧಿಕಾರಿಗಳೊಂದಿಗೆ ಸಭೆ

ಬೆಂಗಳೂರು, ಫೆ.18(ಕೆಎಂಶಿ)–ರಾಜ್ಯದ ಯಾವುದೇ ಮೂಲೆಯಲ್ಲಿ ಅನಧಿಕೃತ ಬಡಾವಣೆ ತಲೆ ಎತ್ತಿದರೆ ಸಂಬಂಧಪಟ್ಟ ಜಿಲ್ಲಾಧಿಕಾರಿಗಳು ಮತ್ತು ನಗರ ಯೋಜನಾ ಅಧಿಕಾರಿಗಳನ್ನು ಜವಾಬ್ದಾರರನ್ನಾಗಿ ಮಾಡಿ, ಮುಲಾಜಿಲ್ಲದೆ ಕಾನೂನು ಕ್ರಮ ಜರುಗಿಸುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಎಚ್ಚರಿಸಿದ್ದಾರೆ. ನಗರ ಪ್ರದೇಶದಿಂದ ಗ್ರಾಮಗಳವರೆಗೂ ಅಕ್ರಮ ಬಡಾವಣೆ ಮತ್ತು ನಿವೇಶನಗಳು ತಲೆ ಎತ್ತಿವೆ, ಅಂತಹವುಗಳಿಗೆ ಇನ್ನು ಮೂರು ತಿಂಗಳೊಳಗಾಗಿ ಬಿ–ಖಾತಾ ನೀಡಿ ಎಂದು ಆದೇಶಿಸಿದ್ದಾರೆ.

ರಾಜ್ಯದ ಮಹಾನಗರ ಪಾಲಿಕೆ, ನಗರ ಸ್ಥಳೀಯ ಸಂಸ್ಥೆಗಳಲ್ಲಿ ಇ–ಖಾತಾ ನೀಡುವ ಕುರಿತು ಜಿಲ್ಲಾಧಿಕಾರಿಗಳು, ಯೋಜನಾ ನಿರ್ದೇಶಕರು, ಪಾಲಿಕೆ ಮತ್ತು ನಗರ ಸ್ಥಳೀಯ ಸಂಸ್ಥೆಗಳ ಆಯುಕ್ತರು, ಪೌರಾಯುಕ್ತರು, ಮುಖ್ಯಾಧಿಕಾರಿಗಳೊಂದಿಗೆ ವಿಡಿಯೊ ಕಾನ್ಫರೆನ್ಸ್ ನಡೆಸಿ ಈ ಕಟ್ಟಾದೇಶ ಮಾಡಿದರು. ಮೇ ತಿಂಗಳ ನಂತರ ರಾಜ್ಯದ ಯಾವುದೇ ಭಾಗದಲ್ಲೂ ಅನಧಿಕೃತ ಬಡಾವಣೆ ಎನ್ನುವುದೇ ಇರಬಾರದು ಮತ್ತು ಹೊಸ ಬಡಾವಣೆಗಳಿಗೆ ನಿಯಮಾನುಸಾರ ಅನುಮತಿ ನೀಡಬೇಕು ಎಂದು ಸೂಚಿಸಿದರು. ರಾಜ್ಯಾದ್ಯಂತ ಸಾವಿರಾರು ಅಕ್ರಮ ಬಡಾವಣೆಗಳು ತಲೆ ಎತ್ತಿ ಯೋಜನಾ ಸ್ವರೂಪವನ್ನೇ ಹಾಳು ಮಾಡಿವೆ, ಇಂತಹ ಬಡಾವಣೆಗಳಿಂದ ಸರ್ಕಾರಕ್ಕೆ ಒಂದು ರೂಪಾಯಿಯೂ ಆದಾಯ ಬರುತ್ತಿಲ್ಲ.

ನಾಗರಿಕರು ಇಂತಹ ಬಡಾವಣೆಗಳಲ್ಲಿ ನಿವೇಶನ ಮತ್ತು ಮನೆಗಳನ್ನು ಪಡೆದು ನಂತರ ಮೂಲಸೌಕರ್ಯ ನೀಡಿ ಎಂದು ನಮ್ಮ ಬಳಿ ಬರುತ್ತಾರೆ, ಆದರೆ, ಇಂತಹ ಬಡಾವಣೆಗಳಿಂದ ಯಾವುದೇ ತೆರಿಗೆ ಪಾವತಿ ಆಗುತ್ತಿಲ್ಲ. ಅಕ್ರಮ ಬಡಾವಣೆಗಳಲ್ಲಿನ ಮನೆ ಹಾಗೂ ■6ನೇ ಪುಟಕ್ಕೆ


ಮುಖ್ಯಮಂತ್ರಿ ಸಿದ್ದರಾಮಯ್ಯ ಡಿಸಿ, ನಗರ ಯೋಜನಾಧಿಕಾರಿಗಳೊಂದಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ಸಭೆ ನಡೆಸಿದರು.

ಸಿಎಂ ಸಭೆ ಹೈಲೈಟ್ಸ್

- ರಾಜ್ಯದಲ್ಲಿ ಇನ್ನು ಮುಂದೆ ಅನಧಿಕೃತ ಬಡಾವಣೆಗಳಿಗೆ ಕಿಂಚಿತ್ತೂ ಅವಕಾಶ ಇಲ್ಲ.
- ಮಧ್ಯವರ್ತಿಗಳಿಗೆ, ಬ್ರೋಕರ್‌ಗಳಿಗೆ ತಕ್ಷಣ ಗೇಟ್‌ಪಾಸ್.
- 11 ಮಹಾ ನಗರಪಾಲಿಕೆಗಳು ಒಳಗೊಂಡಂತೆ 316 ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಬಿ–ಖಾತಾ ಯೋಜನೆ.
- ಬಡವರು, ಮಧ್ಯಮ ವರ್ಗದವರಿಗೆ ಅನುಕೂಲ ಮಾಡಿಕೊಡಲು One Time Solution ಯೋಜನೆ.
- 3 ತಿಂಗಳಲ್ಲಿ ಎಲ್ಲರಿಗೂ ಬಿ–ಖಾತಾ, ದುಪ್ಪಟ್ಟು ತೆರಿಗೆ ಕಟ್ಟಬೇಕು, ಬಳಿಕ ರೆಗ್ಯುಲೇಟ್ ಮಾಡುವುದು.
- ಸೆ.10, 2024ರ ಒಳಗೆ ನಿರ್ಮಾಣಗೊಂಡಿರುವ ಅನಧಿಕೃತ ಆಸ್ತಿಗಳಿಗೆ ಮಾತ್ರ ಬಿ–ಖಾತಾ ಕೊಡುವ ಸರ್ಕಾರ.
- ಒಟ್ಟಾರೆ 40 ಲಕ್ಷ ಅನಧಿಕೃತ ಆಸ್ತಿಗಳನ್ನ ಗುರುತಿಸಿರುವ ರಾಜ್ಯ ಸರ್ಕಾರ.
- ಕಾವೇರಿ–2.0 ಇ–ತಂತ್ರಾಂಶದ ಮೂಲಕವೇ ಇ–ಖಾತೆಗೆ ಅರ್ಜಿ ಸಲ್ಲಿಸಿ ಬಿ–ಖಾತಾ ಪಡೆಯಬಹುದು.
- ಸರ್ಕಾರದ ಬಿ–ಖಾತಾ ಯೋಜನೆಯಿಂದ 4,000 ಕೋಟಿ ಹೆಚ್ಚುವರಿ ತೆರಿಗೆ ನಿರೀಕ್ಷೆ ಮಾಡಬಹುದು.

ಕ್ರಿಕೆಟ್, ಇತರೆ ಆನ್‌ಲೈನ್ ಬೆಟ್ಟಿಂಗ್ ಆಡಿ...ಆಡಿ...

ಆತ್ಮಹತ್ಯೆಗೆ ಶರಣಾದ ಅವಳಿ ಸಹೋದರರು, ಓರ್ವನ ಪತ್ನಿ

ಮೈಸೂರು, ಫೆ.18(ಬಿಎಲ್‌ಯು)–ಸಾಲದಿಂದಾಗಿ ಒಂದೇ ಕುಟುಂಬದ ನಾಲ್ವರು ಬಲಿಯಾದ ಘಟನೆ ನಡೆದು ದಿನ ಕಳೆಯುವಷ್ಟರಲ್ಲಿ ಬೆಟ್ಟಿಂಗ್ ದಂಧೆಯಿಂದ ಒಂದೇ ಕುಟುಂಬದ ಮೂವರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಮೈಸೂರಿನ ವಿದ್ಯಾನಗರದ ಕ್ಲಿಟರ್ಸ್ ಹಾಗೂ ಲೀಲಾ ದಂಪತಿಯ ಅವಳಿ ಮಕ್ಕಳಾದ ಜೋಶಿ ಆಂಟೋನಿ (46), ಜೋಬಿ ಆಂಟೋನಿ(46) ಹಾಗೂ ಜೋಬಿ ಪತ್ನಿ ಸ್ವಾತಿ ಅಲಿಯಾಸ್ ಶರ್ಮಿಳಾ (40) ಆತ್ಮಹತ್ಯೆ ಮಾಡಿಕೊಂಡವರು. ಜೋಶಿ ಸೋಮವಾರ ಹಂಚ್ಯಾ ಬಳಿ ಆತ್ಮಹತ್ಯೆ ಮಾಡಿಕೊಂಡರೆ ಜೋಬಿ ದಂಪತಿ ಮಂಗಳವಾರ ಬೆಳಗ್ಗೆ ವಿಜಯನಗರದ ಮುಡಾ ಕ್ರೀಡಾಂಗಣದ ನೀರಿನ ಟ್ಯಾಂಕ್‌ಗೆ ನೇಣು ಹಾಕಿಕೊಂಡ ಸ್ಥಿತಿಯಲ್ಲಿ ಸಾವನ್ನಪ್ಪಿದ್ದಾರೆ.

ಬೆಟ್ಟಿಂಗ್‌ನಲ್ಲಿ ಮುಳುಗಿದ್ದರು: ಜೋಬಿ ಆಂಟೋನಿ ಹಾಗೂ ಜೋಶಿ ಆಂಟೋನಿ ಪ್ರತ್ಯೇಕವಾಗಿ ಮೊಬೈಲ್ ಅಂಗಡಿ ಇಟ್ಟುಕೊಂಡು ಬದುಕು ಕಟ್ಟಿಕೊಂಡಿದ್ದರು. ಆದರೆ ಕೋಟಿ ಕೋಟಿ ಹಣ ಸಂಪಾದಿಸಿ, ದಿಢೀರ್ ಶ್ರೀಮಂತರಾಗಬೇಕೆಂಬ ಅತೀ ಆಸೆ ಹೊಂದಿದ್ದರು. ಅದಕ್ಕಾಗಿ ಅವರು ಜೂಜಾಟದ ದಾರಿ ಹಿಡಿದರು. ಜೋಶಿ ಆಂಟೋನಿ, ಜೋಬಿ ಆಂಟೋನಿ ಹಾಗೂ ಈತನ ಪತ್ನಿ ಶರ್ಮಿಳಾ ಆನ್‌ಲೈನ್ ಗೇಮ್, ಕ್ರಿಕೆಟ್ ಬೆಟ್ಟಿಂಗ್ ಹಾಗೂ ಹಣ ಡಬ್ಲಿಂಗ್ ಮಾಡುವ ದಂಧೆಯಲ್ಲಿ ತೊಡಗಿದ್ದರೆನ್ನಲಾಗಿದೆ. ಐಪಿಎಲ್, ಮಹಿಳೆಯರ ಕ್ರಿಕೆಟ್ ಪಂದ್ಯಾವಳಿ ಸೇರಿದಂತೆ ಎಲ್ಲಾ ಮಾದರಿ ಕ್ರಿಕೆಟ್ ಸರಣಿಯಲ್ಲೂ ಬೆಟ್ಟಿಂಗ್ ನಡೆಸುತ್ತಿದ್ದರು. ಬಾಲ್ ಟು ಬಾಲ್ ಬೆಟ್ಟಿಂಗ್ ಕಟ್ಟುವಷ್ಟರ ಮಟ್ಟಕ್ಕೆ ಸಂಪೂರ್ಣ ಜೂಜಾಟದಲ್ಲಿ ಮುಳುಗಿದ್ದರು. ಆರಂಭದಲ್ಲಿ ಬೆಟ್ಟಿಂಗ್ ಹೊರತು ಯಾವುದರ ಬಗ್ಗೆಯೂ ಚಿಂತಿಸದ ಅವರಿಗೆ ದಿನಕಳೆದಂತೆ ವಾಸ್ತವ ಅರಿವಾಯಿತು. ಅಷ್ಟರಲ್ಲಾಗಲೇ ಕಷ್ಟದ ದಿನಗಳು ಅವರ ಬೆನ್ನತ್ತಿದ್ದವು. ಮೊಬೈಲ್ ಅಂಗಡಿ ಯಲ್ಲಿ ಸಿಗುತ್ತಿದ್ದ ಆದಾಯ ಇವರ ಜೂಜಾಟಕ್ಕೆ ಸಾಲುತ್ತಿರಲಿಲ್ಲ. ಆಗ ಅನಿವಾರ್ಯವಾಗಿ ಮೂವರೂ ಸಾಲ ಮಾಡಲು ಆರಂಭಿಸಿದರು. ಸ್ನೇಹಿತರು, ನೆರೆಹೊರೆಯವರು, ಸಂಬಂಧಿಕರು ಮಾತ್ರವಲ್ಲದೆ ಮೈಕ್ರೋ ಫೈನಾನ್ಸ್‌ಗಳಿಂದಲೂ ಲಕ್ಷಾಂತರ ರೂ. ಸಾಲ ಮಾಡಿದ್ದರು. ಸಾಲದ ಹಣವನ್ನೂ ಕ್ರಿಕೆಟ್ ಬೆಟ್ಟಿಂಗ್, ಆನ್‌ಲೈನ್ ಬೆಟ್ಟಿಂಗ್ ಹಾಗೂ ಹಣ ಡಬ್ಲಿಂಗ್ ಮೇಲೆ ಹಣ ಹಾಕುತ್ತಾ ಹೋಗಿದ್ದರು. ಆದರೆ ಅದರಿಂದ ಭಾರೀ ನಷ್ಟವಾಗಿದೆ. ಆದರೂ ಯಾವಾಗಲಾದರೂ ಒಮ್ಮೊಮ್ಮೆ ಬರುತ್ತಿದ್ದ ಲಾಭದಿಂದ ಜೂಜಾಟ ಮುಂದುವರೆಸಲು ಪ್ರಚೋದನೆಗೆ ಒಳಗಾಗುತ್ತಿದ್ದರು. ಇದರಿಂದ ಸಾಲದ ಮೇಲೆ ಸಾಲ ಮಾಡಿದರು. ದಿನ ಕಳೆದಂತೆಲ್ಲಾ ಸಾಲದ ಹೊರೆ ಹೆಚ್ಚಾಗಿದೆ. ಹೀಗೆ ಮೂವರು ■6ನೇ ಪುಟಕ್ಕೆ


ಜೋಶಿ ಆಂಟೋನಿ ಜೋಬಿ ಆಂಟೋನಿ ಸ್ವಾತಿ ಅಲಿಯಾಸ್ ಶರ್ಮಿಳಾ

ಡ್ರೋನ್ ಮೂಲಕ ಮನೆ, ನಿವೇಶನಗಳ ಏರಿಯಲ್ ಸರ್ವೆ 'ನಕ್ಷಾ' ಯೋಜನೆ

ಮೈಸೂರಿನ ಬೋಗಾದಿ ಪಪಂನಲ್ಲಿ ಶಾಸಕ ಜಿ.ಟಿ.ದೇವೇಗೌಡ ಚಾಲನೆ


ಮೈಸೂರಿನ ಬೋಗಾದಿ ಪಟ್ಟಣ ಪಂಚಾಯಿತಿಯಲ್ಲಿ ಮಂಗಳವಾರ ಕೇಂದ್ರ ಸರ್ಕಾರದ ನಕ್ಷಾ ಯೋಜನೆಗೆ ಶಾಸಕ ಜಿ.ಟಿ.ದೇವೇಗೌಡರು ಚಾಲನೆ ನೀಡಿದರು. ವಿಧಾನಪರಿಷತ್ ಸದಸ್ಯರಾದ ಸಿ.ಎನ್.ಮಂಜೇಗೌಡ, ವಿವೇಕಾನಂದ, ಮೈಸೂರು ಪ್ರಾದೇಶಿಕ ಭೂ ದಾಖಲೆಗಳ ನಿರ್ದೇಶಕ ಇ.ಪ್ರಕಾಶ್ ಹಾಗೂ ಇತರರನ್ನು ಚಿತ್ರದಲ್ಲಿ ಕಾಣಬಹುದು.



ಮೈಸೂರು, ಫೆ.18(ಬಿಎಲ್‌ಯು)–ನಗರ ಪ್ರದೇಶಗಳಲ್ಲಿ ಮನೆ ಹಾಗೂ ನಿವೇಶನಗಳನ್ನು ಡ್ರೋನ್ ಮೂಲಕ ಏರಿಯಲ್ ಸರ್ವೇ ಮಾಡಿ ಮಾಲೀಕರಿಗೆ ಪಿಆರ್ ಕಾರ್ಡ್ ನೀಡುವ ನಕ್ಷಾ ಯೋಜನೆಗೆ ಶಾಸಕ ಜಿ.ಟಿ.ದೇವೇಗೌಡರು ಇಂದು ಚಾಲನೆ ನೀಡಿದರು. ಮೈಸೂರಿನ ಬೋಗಾದಿ ಪಟ್ಟಣ ಪಂಚಾಯಿತಿಯಲ್ಲಿ ಪ್ರಾಯೋಗಿಕವಾಗಿ ಆರಂಭಿಸಿರುವ ನಕ್ಷಾ ಯೋಜನೆಗೆ ಚಾಲನೆ ನೀಡಿ ಮಾತನಾಡಿದ ಜಿ.ಟಿ.ದೇವೇಗೌಡರು, ಕಂದಾಯ ಹಾಗೂ ಭೂಮಾಪನ ಇಲಾಖೆ ಡ್ರೋನ್ ಮೂಲಕ ಮನೆ ಹಾಗೂ ನಿವೇಶನಗಳನ್ನು ಏರಿಯಲ್ ಸರ್ವೆ ಮಾಡಿ, ಪಿಆರ್ ಕಾರ್ಡ್ ನೀಡಲಿದೆ ಎಂದರು.

ಬಹಳಷ್ಟು ಜನರು ನಕ್ಷೆ ಸೇರಿದಂತೆ ಅಗತ್ಯ ದಾಖಲಾತಿ ಇಲ್ಲದೆ ಮನೆ ನಿರ್ಮಾಣ ಮಾಡಿದ್ದಾರೆ. ಈಗ ನಕ್ಷಾ ಯೋಜನೆಯಲ್ಲಿ ಮನೆ ಹಾಗೂ ನಿವೇಶನಗಳ ನಕ್ಷೆ ದೊರೆಯಲಿದೆ ಎಂದರು.

ಪಟ್ಟಣ ಪಂಚಾಯಿತಿಯವರು ಖಾತೆ ಹಾಗೂ ನಕ್ಷೆ ನೀಡುತ್ತಿಲ್ಲ ಎಂದು ದೂರುಗಳ ಸುರಿಮಳೆಗೈಯ್ಯುತ್ತಿದ್ದರು. ಈಗ ಇದಕ್ಕೆ ಪರಿಹಾರ ದೊರೆತಿದೆ ಎಂದು ಜಿ.ಟಿ.ದೇವೇಗೌಡರು ಹೇಳಿದರು.

ಹಿಂದೆ ಇದ್ದ ಸರ್ವೆಯರ್‌ಗಳಿಗೆ ನೆನಪಿನ ಶಕ್ತಿ ಹೆಚ್ಚಿರುತ್ತಿತ್ತು. ಇದರಿಂದ ಕರಾರುವಕ್ಕಾಗಿ ಸರ್ವೆ ಮಾಡುತ್ತಿದ್ದರು. ಆದರೆ ಈಗಿನ ಸರ್ವೆಯರ್‌ಗಳಿಗೆ ಜ್ಞಾಪಕ ಶಕ್ತಿ ಕಡಿಮೆ. ಇವರಿಗೆ ಸೂಕ್ತ ತರಬೇತಿ ಹಾಗೂ ಅಧ್ಯಯನ ಇರುವುದಿಲ್ಲ. ಈಗಿನವರು ಒಬ್ಬರಿಗೆ ಆರ್‌ಟಿಸಿ ಕೊಟ್ಟರೆ, ಮತ್ತೊಬ್ಬರಿಗೆ ಪೋಡಿ ನೀಡುತ್ತಾರೆ. ಆದರೆ ಈಗ ನಕ್ಷಾ ಯೋಜನೆಯಲ್ಲಿ ಆಧುನಿಕ ತಂತ್ರಜ್ಞಾನದಡಿ ನಕ್ಷೆ ತಯಾರಿಸಿ ನೀಡಲಾಗುತ್ತಿದೆ. ಇದರಿಂದ ನಮ್ಮ ಮಕ್ಕಳು, ಮೊಮ್ಮಕ್ಕಳ ಕಾಲಕ್ಕೂ ಪಕ್ಕಾ ದಾಖಲಾತಿ ಇರುತ್ತದೆ ಎಂದರು. ಕಂದಾಯ ಹಾಗೂ ರೆವಿನ್ಯೂ ■6ನೇ ಪುಟಕ್ಕೆ

ಕಸ ಸುರಿಯುವವರಿಗೆ ದಂಡ ವಿಧಿಸಲು ಜಾಗೃತ ದಳ ರಚಿಸಿ



ಸಿಕ್ಕ ಸಿಕ್ಕ ಕಡೆ ಕಸ ಎಸೆಯುವವರಿಗೆ ದಂಡ ವಿಧಿಸಲು ಜಾಗೃತ ದಳ ರಚನೆ ಮಾಡಬೇಕು ಎಂದು ಶಾಸಕ ಜಿ.ಟಿ.ದೇವೇಗೌಡರು ಜಿಲ್ಲಾಡಳಿತಕ್ಕೆ ಸಲಹೆ ನೀಡಿದ್ದಾರೆ. ಹಸಿ ಕಸ, ಒಣ ಕಸ ಎಂದು ಬೇರ್ಪಡಿಸಲು ಎರಡು ಕಸ ಸಂಗ್ರಹದ ಬುಟ್ಟಿ ನೀಡಲಾಗಿದೆ. ಮನೆ ಮುಂದೆ ಬರುವ ಪೌರಕಾರ್ಮಿಕರಿಗೆ ಇದನ್ನು ನೀಡುವ ವ್ಯವಸ್ಥೆ ಮಾಡಲಾಗಿದೆ. ರಸ್ತೆಯಲ್ಲೆಲ್ಲಾ ಕಸ ಹರಡದಂತೆ ಈ ಕ್ರಮ ಕೈಗೊಳ್ಳಲಾಗಿದೆ. ಆದರೆ ಬಹಳಷ್ಟು ಜನರು ರಸ್ತೆ ಮಧ್ಯೆ ಅಥವಾ ಮೂಲೆಯಲ್ಲಿ ಕಸ ಬಿಸಾಡುತ್ತಾರೆ. ಇದರಿಂದ ನಗರದ ಸೌಂದರ್ಯ ಹಾಳಾಗುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಈ ಹಿನ್ನೆಲೆಯಲ್ಲಿ ಪೊಲೀಸ್ ಇಲಾಖೆ ಸಿಬ್ಬಂದಿ, ನಗರಪಾಲಿಕೆ ಹಾಗೂ ಪಟ್ಟಣ ಪಂಚಾಯಿತಿ ನೌಕರರು ಒಟ್ಟಾಗಿ ಜಾಗೃತ ದಳ ರಚನೆ ಮಾಡಿ. ರಸ್ತೆಯಲ್ಲಿ ಯಾರು ಕಸ ಬಿಸಾಡುತ್ತಾರೊ ಅವರಿಗೆ ಸ್ಥಳದಲ್ಲೇ ದಂಡ ವಿಧಿಸಿ ಎಂದು ಹೇಳಿದರು. ಸಂಚಾರ ನಿಯಮ ಉಲ್ಲಂಘನೆ ಮಾಡುವವರಿಗೆ ಪೊಲೀಸ್ ಇಲಾಖೆ ಹೀಗೆ ದಂಡ ವಿಧಿಸುತ್ತದೆ. ಇದೇ ರೀತಿ ಕಸ ಎಸೆಯುವವರಿಗೂ ದಂಡ ವಿಧಿಸಬೇಕು. ಆಗ ನಗರದ ಎಲ್ಲಾ ಬಡಾವಣೆಯಲ್ಲಿ ಸ್ವಚ್ಛತೆ ಕಾಣಬಹುದು ಎಂದು ಜಿ.ಟಿ.ದೇವೇಗೌಡರು ಅಭಿಪ್ರಾಯಪಟ್ಟರು.

ಕನ್ನಡ ಕಡ್ಡಾಯಕ್ಕಾಗಿ ಆಗ್ರಹಿಸಿ ಮೈಸೂರಲ್ಲಿ ಪ್ರತಿಭಟನಾ ಮೆರವಣಿಗೆ

ಕನ್ನಡಿಗರಿಗೆ ಉದ್ಯೋಗ ನೀಡಿ, ನಾಮಫಲಕಗಳಲ್ಲಿ ಕನ್ನಡವಿರಲಿ: ಮೊಳಗಿದ ಘೋಷಣೆ

ಕನ್ನಡ ಅಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷರಾಗಿ ಬಿಳಿಮಲೆ ನೇಮಕಕ್ಕೆ ಆಕ್ರೋಶ



ಕನ್ನಡ ಬಳಕೆ ಮಾಡುವುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಮೈಸೂರಿನ ಕೋಟೆ ಆಂಜನೇಯಸ್ವಾಮಿ ದೇವಸ್ಥಾನದಿಂದ ಆರಂಭಗೊಂಡ ಪ್ರತಿಭಟನಾ ಮೆರವಣಿಗೆಗೆ ಹಿರಿಯ ಸಾಹಿತಿ ಬನ್ನೂರು ಕೆ.ರಾಜು ಚಾಲನೆ ನೀಡಿದರು.

ಮೈಸೂರು, ಫೆ.18(ಜಿಎ)– ಖಾಸಗಿ ಕಂಪನಿಗಳಲ್ಲಿ ಕನ್ನಡಿಗರಿಗೆ ಉದ್ಯೋಗ ನೀಡಬೇಕು. ನಾಮ ಫಲಕಗಳಲ್ಲಿ ಕಡ್ಡಾಯವಾಗಿ ಶೇ.60ರಷ್ಟು ಕನ್ನಡ ಬಳಕೆ ಮಾಡುವುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಮೈಸೂರಲ್ಲಿ ಕನ್ನಡಾಂಭೆ ರಕ್ಷಣಾ ವೇದಿಕೆ ಸೇರಿದಂತೆ ವಿವಿಧ ಕನ್ನಡ ಪರ ಸಂಘಟನೆಗಳ ವತಿಯಿಂದ ಬೃಹತ್ ಪ್ರತಿಭಟನಾ ಮೆರವಣಿಗೆಯನ್ನು ನಡೆಸಲಾಯಿತು.

ಮೈಸೂರಿನ ಕೋಟೆ ಆಂಜನೇಯಸ್ವಾಮಿ ದೇವಸ್ಥಾನದಿಂದ ಆರಂಭಗೊಂಡ ಪ್ರತಿಭಟನಾ ಮೆರವಣಿಗೆಗೆ ಹಿರಿಯ ಸಾಹಿತಿ ಬನ್ನೂರು ಕೆ.ರಾಜು ಚಾಲನೆ ನೀಡಿದರು. ಈ ವೇಳೆ ಕನ್ನಡ ಪರ ಹೋರಾಟಗಾರರು 'ಕನ್ನಡ ನಾಮಫಲಕಗಳು ರಾರಾಜಿಸಲಿ', 'ಕನ್ನಡಿಗರಿಗೆ ಉದ್ಯೋಗ ನೀಡಬೇಕು', 'ರಾಜ್ಯ ಸರ್ಕಾರ ಕನ್ನಡ ಕಡ್ಡಾಯಗೊಳಿಸಲು ಆದೇಶ ಮಾಡಬೇಕು' ಎಂಬ ಪ್ಲೇಕಾರ್ಡ್‌ಗಳನ್ನು ಹಿಡಿದು ಘೋಷಣೆ ಕೂಗಿ ಆಗ್ರಹಿಸಿದರು.

ಈ ವೇಳೆ ಸಾಹಿತಿ ಬನ್ನೂರು ಕೆ.ರಾಜು ಮಾತನಾಡಿ, ಕನ್ನಡಿಗರ ಅತಿಯಾದ ಔದಾರ್ಯದಿಂದ ಕನ್ನಡ ಇಂದು ಅನಾಥ ಸ್ಥಿತಿಗೆ ತಲುಪಿದೆ. ನಮ್ಮನ್ನು ಆಳುವ ರಾಜಕಾರಣಿಗಳು ಪಕ್ಷಾತೀತವಾಗಿ ಕನ್ನಡಕ್ಕೆ ದ್ರೋಹ ಬಗೆದಿದ್ದು, ತಮ್ಮ ಸ್ವಾರ್ಥಕ್ಕೆ ಕನ್ನಡ ಭಾಷೆ ಮತ್ತು ಕನ್ನಡಿಗರನ್ನು ದುರುಪಯೋಗ ಮಾಡಿಕೊಂಡಿದ್ದಾರೆ. ವಿಧಾನಸೌಧದಲ್ಲಿ ಕನ್ನಡದ ಪರ ದನಿ ಎತ್ತಲು ಒಂದು ಪ್ರಾಣಿ ಇಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಪ್ರಾಮಾಣಿಕವಾಗಿ ಹೋರಾಟ ಮಾಡುವವರು ಇಂದು ಬೀದಿಯಲ್ಲಿ ನಿಂತಿದ್ದಾರೆ. ದೂರದ ಜೆಎನ್‌ಯುನಲ್ಲಿ ಲಕ್ಷಾಂತರ ರೂಪಾಯಿ ಸಂಬಳ ಪಡೆಯುತ್ತಿದ್ದ ಪುರುಷೋತ್ತಮ್ ಬಿಳಿಮಲೆ ಎಂಬುವರನ್ನು ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ ಅಧ್ಯಕ್ಷರಾಗಿ ಆಯ್ಕೆ ಮಾಡಿದ್ದಾರೆ. ಆದರೆ, ಅವರು ಕನ್ನಡ ಭಾಷೆ ಉಳಿವಿಗಾಗಿ ಯಾವ ಹೋರಾಟ ಮಾಡಿದ್ದಾರೆ ಅಥವಾ ಅವರಿಗೆ ಕನ್ನಡದ ಬಗ್ಗೆ ಕಾಳಜಿ ಎಷ್ಟಿದೆ ಎಂಬುದೇ ಗೊತ್ತಿಲ್ಲ ಅಂತಹವರನ್ನು ಅಧ್ಯಕ್ಷರಾಗಿ ಆಯ್ಕೆ ಮಾಡಿದ್ದಾರೆ. ಆದರೆ ಪುರುಷೋತ್ತಮ್ ಬಿಳಿಮಲೆ ತಮ್ಮನ್ನು ಅಧ್ಯಕ್ಷರಾಗಿ ಆಯ್ಕೆ ಮಾಡಿದವರ ಅಭಿವೃದ್ಧಿ ಮಾಡಲು ಮುಂದಾಗಿದ್ದಾರೆ ಎಂದು ಕಿಡಿಕಾರಿದರು.

ಈ ರೀತಿ ಲಕ್ಷ ಲಕ್ಷ ಸಂಬಳ ಪಡೆದವರನ್ನು ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ ಆಯ್ಕೆ ಮಾಡುವ ಬದಲು ಕನ್ನಡಪರ ಹೋರಾಟಗಾರರನ್ನು ಆಯ್ಕೆ ಮಾಡಬೇಕು. ಹೋರಾಟಗಾರರನ್ನು ನಾವು ನಿರ್ದೇಶನ ಮಾಡಿ ವಿಧಾನಪರಿಷತ್ತಿಗೆ ಕಳುಹಿಸಲು ಸಾಧ್ಯವಾಗುತ್ತಿಲ್ಲ. ಆದ್ದರಿಂದ ಕನ್ನಡ ಪರ ಹೋರಾಟಗಾರರು ಬೆರಳು ಆಗಬಾರದು ಮುಷ್ಟಿಯಾಗಿ ಕನ್ನಡ ಪರ ಹೋರಾಟಕ್ಕೆ ಕೈಜೋಡಿಸಬೇಕು ಎಂದರು.

ನಂತರ ಕನ್ನಡಾಂಭೆ ರಕ್ಷಣಾ ವೇದಿಕೆ ರಾಜ್ಯಾಧ್ಯಕ್ಷ ರಾಜಶೇಖರ್ ಮಾತನಾಡಿ, ಇತ್ತೀಚೆಗೆ ಮೈಸೂರು ಸೇರಿದಂತೆ ರಾಜ್ಯದಲ್ಲಿ ಅನ್ಯಭಾಷಿಗ ಉದ್ಯಮಿ, ವ್ಯಾಪಾರಿಗಳು ಕನ್ನಡವನ್ನು ಉದ್ದೇಶಪೂರ್ವಕವಾಗಿ ನಿರ್ಲಕ್ಷಿಸುತ್ತಿದ್ದಾರೆ. ಕರ್ನಾಟಕದಲ್ಲಿ ಕನ್ನಡಕ್ಕೆ ಸಾರ್ವಭೌಮ ಸ್ಥಾನ ನೀಡಬೇಕಾಗಿದ್ದರೂ, ಕನ್ನಡ ಭಾಷೆಯನ್ನು ತಾತ್ಸಾರ ಮನೋಭಾವದಿಂದ ನೋಡುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಕನ್ನಡವನ್ನು ನಿರ್ಲಕ್ಷಿಸುವವರಿಗೆ ಎಚ್ಚರಿಕೆ ಸಂದೇಶ ನೀಡುವುದಕ್ಕಾಗಿ ವಿವಿಧ ಸಂಘಟನೆಗಳ ಬೆಂಬಲದೊಂದಿಗೆ ಮೈಸೂರಲ್ಲಿ ಮೆರವಣಿಗೆ ನಡೆಸಲಾಗುತ್ತಿದೆ ಎಂದರು.

ಖಾಸಗಿ ಕಾರ್ಖಾನೆ, ಕಂಪನಿಗಳಲ್ಲಿ ಕನ್ನಡಿಗೆ ಉದ್ಯೋಗ ನೀಡಬೇಕು. ಜಾಹೀರಾತು ಹಾಗೂ ನಾಮಫಲಕಗಳಲ್ಲಿ ಕನ್ನಡ ಬಳಸಬೇಕು. ಹೋರ್ಡಿಂಗ್ಸ್‌ಗಳಲ್ಲಿ ಕನ್ನಡ ನಿರ್ಲಕ್ಷಿಸಬಾರದು. ಸರ್ಕಾರಿ ಕಚೇರಿ ಹಾಗೂ ಕಾರ್ಖಾನೆಗಳಲ್ಲಿಯೂ ಕನ್ನಡ ಬಳಕೆ ಮಾಡಬೇಕು ಎಂದು ಆಗ್ರಹಿಸಿದರು. ಕೋಟೆ ಆಂಜನೇಯಸ್ವಾಮಿ ದೇವಸ್ಥಾನದ ಮುಂಭಾಗದಿಂದ ಆರಂಭವಾದ ಮೆರವಣಿಗೆ ದೊಡ್ಡ ಗಡಿಯಾರ, ಇರ್ವಿನ್ ರಸ್ತೆ, ನೆಹರು ವೃತ್ತ, ತಾಲೂಕು ಕಚೇರಿ ರಸ್ತೆ ಮೂಲಕ ಹೊಸ ಡಿಸಿ ಕಚೇರಿ ತಲುಪಿ ಮನವಿ ಪತ್ರ ಸಲ್ಲಿಸಲಾಯಿತು. ಪ್ರತಿಭಟನೆಯಲ್ಲಿ ಮೈಸೂರು ಹೃದಯವಂತರ ಬಳಗದ ಅಧ್ಯಕ್ಷ ಡಿ.ಪಿ.ಕೆ.ಪರಮೇಶ್, ನಂಜುಂಡ, ಮಹದೇವಸ್ವಾಮಿ, ಕಿರಣ್, ಸಂತೋಷ್ ಸೇರಿದಂತೆ ಮತ್ತಿತರರು ಪಾಲ್ಗೊಂಡಿದ್ದರು.

ಇಂದಿನಿಂದ ನೆಕ್ಸಸ್ ಸೆಂಟರ್ ಸಿಟಿಯಲ್ಲಿ ಟಿಬೆಟಿಯನ್ ವೈಶಿಷ್ಟ್ಯ ಅನಾವರಣ

ಐದು ದಿನದ ವಸ್ತು ಪ್ರದರ್ಶನದಲ್ಲಿ ಟಿಬೆಟಿಯನ್ ಸಂಸ್ಕೃತಿ ಸಿಂಚನ

ಮೈಸೂರು, ಫೆ.18(ಪಿಎಂ)– ಮೈಸೂರಿನ ನೆಕ್ಸಸ್ ಸೆಂಟರ್ ಸಿಟಿಯಲ್ಲಿ 'ಲೋಸರ್' ಶೀರ್ಷಿಕೆಯಡಿ ಫೆ.19 ರಿಂದ 23ರವರೆಗೆ ಟಿಬೆಟಿಯನ್ ಸಾಂಸ್ಕೃತಿಕ ಪ್ರದರ್ಶನ ಹಮ್ಮಿಕೊಳ್ಳಲಾಗಿದೆ.

ಆ ಮೂಲಕ ಟಿಬೆಟಿಯನ್ ಹೊಸ ವರ್ಷಾಚರಣೆಯ ವೈಶಿಷ್ಟ್ಯ ಇಲ್ಲಿ ಅನಾವರಣಗೊಳ್ಳಲಿದೆ. ಈ ಐದು ದಿನಗಳ ಉತ್ಸವದಲ್ಲಿ ಟಿಬೆಟಿಯನ್ ಸಂಸ್ಕೃತಿ ಅನಾವರಣಗೊಳ್ಳಲಿದೆ. ವಸ್ತು ಪ್ರದರ್ಶನ, ಪುಸ್ತಕ ಮಳಿಗೆ, ಲೋಸರ್ ಡೆಕೋರ್, ಆಹಾರ ಮಳಿಗೆಗಳು ಇರಲಿವೆ. ಆ ಮೂಲಕ ಗ್ರಾಹಕರಿಗೆ ಸಂತೋಷದಾಯಕ ಕ್ಷಣಗಳು ದೊರೆಯಲಿವೆ.

ಟಿಬೆಟಿಯನ್ ಪಾಕಪದ್ಧತಿಯಾದ ಮೊಮೊಸ್ ಸುವಾಸನೆ ಸೂಸಲಿದ್ದು, ಇದರೊಂದಿಗೆ ಸಾಂಪ್ರದಾಯಿಕ ಟಿಬೆಟಿಯನ್ ಸಂಗೀತದ ಸುನಾದ ಸೂಸಲಿದೆ. ವಿಶೇಷವಾಗಿ ಫೆ.22ರಂದು ಸಂಜೆ 6ರಿಂದ ರಾತ್ರಿ 8ರವರೆಗೆ ಟಿಬೆಟಿಯನ್ ಸಾಂಸ್ಕೃತಿಕ ಪ್ರದರ್ಶನಗಳು ನಡೆಯಲಿವೆ. ಸ್ನೇಹಿತರು ಮತ್ತು ಕುಟುಂಬದೊಂದಿಗೆ ಇಲ್ಲಿಗೆ ಭೇಟಿ ನೀಡಿ ಟಿಬೆಟಿಯನ್ ಉಡುಗೊರೆ ಮಳಿಗೆಗಳಿಗೆ ಭೇಟಿ ನೀಡಬಹುದು.

ಬೆಣ್ಣೆ ಚಹಾ ಸವಿಯುತ್ತಾ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ವೀಕ್ಷಿಸಬಹುದು. ಅಲ್ಲದೆ, ಟಿಬೆಟಿಯನ್ ವೈಭವದ ಇತಿಹಾಸ ಅನಾವರಣಗಳಿಸುವ ಪುಸ್ತಕಗಳು ಇಲ್ಲಿ ಲಭ್ಯವಾಗಲಿವೆ. ಮರೆಯಲಾಗದ ರೋಮಾಂಚನ ಅನುಭವ ಈ ಆಚರಣೆಯಿಂದ ದೊರೆಯಲಿದೆ ಎಂದು ಪ್ರಕಟಣೆ ತಿಳಿಸಿದೆ.

ಕಾವೇರಿ ಹಾರ್ಟ್–ಮಲ್ಟಿಸ್ಪೆಷಾಲಿಟಿ ಆಸ್ಪತ್ರೆಯ ವಾರ್ಷಿಕೋತ್ಸವ; ಸೇವಾ ಕಾರ್ಯದೊಂದಿಗೆ ಅರ್ಥಪೂರ್ಣ ಆಚರಣೆ



ಕಾವೇರಿ ಹಾರ್ಟ್ ಮತ್ತು ಮಲ್ಟಿಸ್ಪೆಷಾಲಿಟಿ ಆಸ್ಪತ್ರೆಯ ವಾರ್ಷಿಕೋತ್ಸವ ಇತ್ತೀಚೆಗೆ ನಡೆಯಿತು.

ಮೈಸೂರು,ಫೆ.18(ಪಿಎಂ)– ಕಾವೇರಿ ಹಾರ್ಟ್ ಮತ್ತು ಮಲ್ಟಿಸ್ಪೆಷಾಲಿಟಿ ಆಸ್ಪತ್ರೆಯ 16ನೇ ವಾರ್ಷಿಕೋತ್ಸವ ವಿವಿಧ ಸೇವಾ ಕಾರ್ಯಕ್ರಮಗಳೊಂದಿಗೆ ಅರ್ಥಪೂರ್ಣವಾಗಿ ನಡೆಯಿತು.

ಆಸ್ಪತ್ರೆಯಲ್ಲಿ ನಡೆದ ಕಾರ್ಯಕ್ರಮವನ್ನು ಶಾಸಕ ಟಿ.ಎಸ್.ಶ್ರೀವತ್ಸ ಉದ್ಘಾಟಿಸಿದರು. ಬಳಿಕ ಮಾತನಾಡಿದ ಶಾಸಕರು, ಆಸ್ಪತ್ರೆಯ ಸೇವಾ ಕಾರ್ಯಗಳನ್ನು ಪ್ರಸ್ತಾಪಿಸಿ ಮೆಚ್ಚುಗೆ ವ್ಯಕ್ತಪಡಿಸಿದರು. ಜನರ ಆರೋಗ್ಯ ಕಾಪಾಡುವ ನಿಟ್ಟಿನಲ್ಲಿ ಬದ್ಧತೆಯಿಂದ ಆಸ್ಪತ್ರೆ ಕಾರ್ಯ ನಿರ್ವಹಿಸುತ್ತಿದೆ ಎಂದು ಶ್ಲಾಘಿಸಿದರು. ಇದೇ ವೇಳೆ ಆಸ್ಪತ್ರೆಯ ರೋಗಿಗಳಿಗೆ ಹಣ್ಣುಗಳನ್ನು ವಿತರಣೆ ಮಾಡಲಾಯಿತು. ಅಲ್ಲದೆ, ಇದೇ ಸಂದರ್ಭದಲ್ಲಿ ಆಸ್ಪತ್ರೆಯಿಂದ ಇಬ್ಬರು ರೋಗಿಗಳಿಗೆ ಉಚಿತ ಆಂಜಿಯೋಗ್ರಾಮ್‌ಗಳನ್ನು ನಡೆಸುವುದಾಗಿ ಘೋಷಣೆ ಮಾಡಲಾಯಿತು. ಆಸ್ಪತ್ರೆಯ ವ್ಯವಸ್ಥಾಪಕ ನಿರ್ದೇಶಕರಾದ ಡಾ.ಜಿ.ಆರ್. ಚಂದ್ರಶೇಖರ್, ಡಾ.ಸರಳ ಚಂದ್ರಶೇಖರ್, ಆಸ್ಪತ್ರೆಯ ತಜ್ಞವೈದ್ಯ ಡಾ.ಎಸ್.ಸಿ. ಮಧುಪ್ರಕಾಶ್ ಮತ್ತಿತರರು ಹಾಜರಿದ್ದರು.

ವೀರಶೈವ ಲಿಂಗಾಯತ ವಧು–ವರರ ಸಮಾವೇಶ

ಮೈಸೂರು, ಫೆ.18– ಮೈಸೂರಿನ ಉತ್ತರಾದಿ ಮಠದ ರಸ್ತೆಯಲ್ಲಿರುವ ಶ್ರೀ ವಿದ್ಯಾಭಾರತಿ ಕಲ್ಯಾಣ ಮಂಟಪದಲ್ಲಿ ಫೆ.23ರಂದು ಮಧ್ಯಾಹ್ನ 3ರಿಂದ ಸಂಜೆ 6ರವರೆಗೆ ವೀರಶೈವ ಲಿಂಗಾಯತ ವಧು–ವರರ ಸಮಾವೇಶ ಹಮ್ಮಿಕೊಳ್ಳಲಾಗಿದೆ. ಆಸಕ್ತರು ಫೆ.22ರೊಳಗೆ ನೋಂದಣಿ ಮಾಡಿಕೊಳ್ಳಲು ಕೋರಲಾಗಿದೆ. ಹೆಚ್ಚಿನ ಮಾಹಿತಿಗೆ ಮೊ. 968 6205346 ಸಂಪರ್ಕಿಸಬಹುದು.

ಸುಸ್ಥಿರ ತಂತ್ರಜ್ಞಾನಗಳ ಕ್ಷೇತ್ರದಲ್ಲಿ ನಡೆಯುವ ಸಂಶೋಧನೆ ಕುರಿತಂತೆ ಇಂದು, ನಾಳೆ ಅಂತರರಾಷ್ಟ್ರೀಯ ಸಮ್ಮೇಳನ

ಮೈಸೂರು, ಫೆ.18 (ಎಂಟಿವೈ)– ಮೈಸೂರಿನ ಎನ್‌ಐಇ ಶಿಕ್ಷಣ ಸಂಸ್ಥೆ ಡೈಮಂಡ್ ಜ್ಯುಬಿಲಿ ಸ್ಪೋರ್ಟ್ಸ್ ಕಾಂಪ್ಲೆಕ್ಸ್ ಸಭಾಂಗಣದಲ್ಲಿ ಫೆ.19 ಮತ್ತು 20ರಂದು 'ಸುಸ್ಥಿರ ತಂತ್ರಜ್ಞಾನಗಳ ಕ್ಷೇತ್ರದಲ್ಲಿ ನಡೆದಿರುವ ಸಂಶೋಧನೆ' ಕುರಿತಂತೆ ಅಂತಾರಾಷ್ಟ್ರೀಯ ಸಮ್ಮೇಳನ ಹಾಗೂ ಸಮಾವೇಶ ಆಯೋಜಿಸಲಾಗಿದೆ ಎಂದು ಸಮ್ಮೇಳನದ ಸಂಚಾಲಕ ಪ್ರೊ.ಎಸ್. ಶ್ಯಾಮಸುಂದರ್ ತಿಳಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಎನ್‌ಐಇ, ಜರ್ಮನಿಯ ಫಾಚ್ ಹೊಕ್ಸ್‌ಶುಲ್ ಡಾರ್ಟ್‌ಮಂಡ್ ಯುನಿವರ್ಸಿಟಿ ಆಫ್ ಅಪ್ಲೈಡ್ ಸೈನ್ಸಸ್ ಅಂಡ್ ಆರ್ಟ್ಸ್ ಮತ್ತು ಇನ್‌ಸ್ಟಿಟ್ಯೂಷನ್ ಆಫ್ ಇಂಜಿನಿಯರ್ಸ್ ಸಹಯೋಗದಲ್ಲಿ ಎರಡು ದಿನಗಳ ಸಮ್ಮೇಳನ ನಡೆಯುತ್ತದೆ. ಸಮ್ಮೇಳನದ ಉದ್ಘಾಟನಾ ಸಮಾರಂಭದಲ್ಲಿ ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಎಸ್.ಇ. ಸುಧೀಂದ್ರ, ಜರ್ಮನಿ ಎಫ್‌ಹೆಚ್‌ಡಿ ವಿಶ್ವವಿದ್ಯಾನಿಲಯದ ಉಪಕುಲಪತಿ ಸ್ಟೀಫನ್ ವೇಯರ್ಸ್ ಹಾಗೂ ಇನ್ನಿತರರು ಪಾಲ್ಗೊಳ್ಳಲಿದ್ದಾರೆ ಎಂದರು.

ಈ ಸಮ್ಮೇಳನದಲ್ಲಿ ಒಟ್ಟು 100ಕ್ಕೂ ಹೆಚ್ಚು ಸಂಶೋಧನಾ ಪ್ರಬಂಧಗಳನ್ನು ಪ್ರಸ್ತುತಪಡಿಸಲಾಗುತ್ತದೆ. ಇದರಲ್ಲಿ ಭಾರತ ಮತ್ತು ವಿದೇಶಗಳ ವಿವಿಧ ಭಾಗಗಳಿಂದ ಆಗಮಿಸುವ ಸಂಶೋಧಕರು ಪಾಲ್ಗೊಳ್ಳಲಿದ್ದಾರೆ. ಈ ಸಮಾವೇಶ ಸಮಾನಾಂತರವಾಗಿ ನಡೆಯುತ್ತಿದ್ದು, ಸುಸ್ಥಿರ ತಂತ್ರಜ್ಞಾನಗಳ ನಾವೀನ್ಯ ಪ್ರಗತಿ ಮತ್ತು ಜಾಗತಿಕ ಪ್ರಚಾರಗಳಿಗೆ ಪ್ರಾಮುಖ್ಯ ನೀಡುವ ಒಂದು ಕ್ರಿಯಾತ್ಮಕ ವೇದಿಕೆ ಆಗಿದೆ. ಸಮ್ಮೇಳನದಲ್ಲಿ ಸುಸ್ಥಿರ ಇಂಧನ ವ್ಯವಸ್ಥೆ, ಇ–ಮೊಬಿಲಿಟಿ, ಸುಸ್ಥಿರತೆಗಾಗಿ ರೋಬೋ ಟಿಕ್ಸ್, ಸುಸ್ಥಿರತೆಗಾಗಿ ವಿನ್ಯಾಸ, ಪರಿಸರ ಸಂರಕ್ಷಣೆ, ಹಸಿರು ಕಟ್ಟಡ ತಂತ್ರಜ್ಞಾನ ಇನ್ನಿತರ ವಿಷಯಗಳ ಬಗ್ಗೆ ಚರ್ಚಿಸಲಾಗುತ್ತದೆ ಎಂದರು. ಗೋಷ್ಠಿಯಲ್ಲಿ ಎಸ್.ಆರ್.ಗಾಯಕ್ವಾಡ್, ಡಾ.ಇನಾಂದಾರ್, ಡಾ.ಪ್ರಕಾಶ್ ಇದ್ದರು.

ಬೆಂಗಳೂರಲ್ಲಿ ಕುಡಿದ ಮತ್ತಿನಲ್ಲಿ ಕಾರು ಚಾಲನೆ; ಮರಕ್ಕೆ ಡಿಕ್ಕಿ ಹೊಡೆದು ವಿದ್ಯಾರ್ಥಿಗಳು ಸಾವು

ಬೆಂಗಳೂರು, ಫೆ.18– ಮರಕ್ಕೆ ಕಾರು ಡಿಕ್ಕಿಯಾಗಿ ಸ್ಥಳದಲ್ಲೇ ಇಬ್ಬರು ವಿದ್ಯಾರ್ಥಿಗಳು ದುರ್ಮರಣಕ್ಕೀಡಾದ ಘಟನೆ ಬೆಂಗಳೂರಿನ ಬನ್ನೇರುಘಟ್ಟ ಬಳಿ ರಾಗಿಹಳ್ಳಿಯಲ್ಲಿ ನಡೆದಿದೆ.

ಕುಡಿದ ಮತ್ತಿನಲ್ಲಿ ವೇಗವಾಗಿ ಕಾರು ಚಲಾಯಿಸಿ ಮರಕ್ಕೆ ಡಿಕ್ಕಿ ಹೊಡೆಯಲಾಗಿದ್ದು, ಸ್ಥಳದಲ್ಲೇ ಇಬ್ಬರು ಮೃತಪಟ್ಟಿದ್ದಾರೆ. ಗಾಯಗೊಂಡ ಮತ್ತಿಬ್ಬರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ.


ಮೃತರನ್ನು ಕೇರಳ ಮೂಲದ ಸಾಹಹುಕ್ (28) ಅರ್ಷ (23) ಎಂದು ಗುರುತಿಸಲಾಗಿದೆ. ಮೃತರು ಗೊಟ್ಟಿಗೆರೆಯ ಟಿ.ಜಾನ್ ಕಾಲೇಜು ವಿದ್ಯಾರ್ಥಿಗಳು ಎಂದು ತಿಳಿದುಬಂದಿದೆ.

ಗಂಭೀರವಾಗಿ ಗಾಯಗೊಂಡವರನ್ನು ದೇವ ನಾರಾಯಣ (23) ಮತ್ತು ಸಾಹಿಲ್ (23) ಎಂದು ಗುರುತಿಸಲಾಗಿದೆ. ನಾಲ್ವರು ಗೊಟ್ಟಿಗೆರೆಯ ಕಾಲೇಜೊಂದರ ವಿದ್ಯಾರ್ಥಿಗಳು ಎಂದು ತಿಳಿದು ಬಂದಿದೆ.

ಅತಿವೇಗವಾಗಿ ಬಂದ Swift ಕಾರು ಚಾಲಕನ ನಿಯಂತ್ರಣ ತಪ್ಪಿ ಮರಕ್ಕೆ ಡಿಕ್ಕಿಯಾಗಿದೆ. ಅಪಘಾತದ ರಭಸಕ್ಕೆ ಕಾರು ಸಂಪೂರ್ಣ ಛಿದ್ರ ಛಿದ್ರವಾಗಿದೆ. ನಾಲ್ವರು ಕಳೆದ ರಾತ್ರಿ ಪಾರ್ಟಿ ಮಾಡಿ ಕಂಠಪೂರ್ತಿ ಮದ್ಯ ಸೇವನೆ ಮಾಡಿದ್ದರು ಎಂದು ತಿಳಿದು ಬಂದಿದೆ.ಘಟನೆ ನಡೆದ ಸ್ಥಳಕ್ಕೆ ಬನ್ನೇರುಘಟ್ಟ ಠಾಣೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ನಿಧನ

ನರಸಿಂಹಮೂರ್ತಿ



ಮೈಸೂರು, ಫೆ.18– ಮೈಸೂರಿನ ಗಂಗೋತ್ರಿ ಲೇಔಟ್ ನಿವಾಸಿಯಾದ ನಿವೃತ್ತ ಇಂಜಿನಿಯರ್ ಎಂ.ಎಸ್.ನರಸಿಂಹಮೂರ್ತಿ (83) ಅವರು ತಮ್ಮ ನಿವಾಸದಲ್ಲಿ ನಿಧನರಾದರು. ದಿವಂಗತರು ಪತ್ನಿ ಎಂ.ಎಸ್. ಉಮಾಮೂರ್ತಿ, ಪುತ್ರಿ, ಅಳಿಯ, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಚಾಮುಂಡಿ ಬೆಟ್ಟದ ತಪ್ಪಲಿನಲ್ಲಿರುವ ರುದ್ರಭೂಮಿಯಲ್ಲಿ ದಿವಂಗತರ ಅಂತ್ಯಕ್ರಿಯೆ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಇಂದು 'ಭಾವತರಂಗ' ಚಿತ್ರಗೀತೆ, ಭಾವಗೀತೆಗಳ ಸಂಗಮ

ಮೈಸೂರು,ಫೆ.18(ಎಂಟಿವೈ)– ಮೈಸೂರಿನ ನಾದಬ್ರಹ್ಮ ಸಂಗೀತ ಸಭಾದಲ್ಲಿ ಫೆ.19 ರಂದು ಸಂಜೆ 4.30ಕ್ಕೆ 'ಭಾವತರಂಗ' ಪ್ರಸಿದ್ಧ ಕವಿಗಳು ರಚಿಸಿದ ಚಲನಚಿತ್ರ ಭಾವಗೀತೆಗಳ ಸಂಗಮ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಕರ್ನಾಟಕ ಸುಗಮ ಸಂಗೀತ ಪರಿಷತ್ ಜಿಲ್ಲಾ ಘಟಕದ ಅಧ್ಯಕ್ಷ ನಾಗರಾಜ ವಿ.ಬೈರಿ ತಿಳಿಸಿದ್ದಾರೆ. ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕರ್ನಾಟಕ ಸುಗಮ ಸಂಗೀತ ಪರಿಷತ್ ಮೈಸೂರು ಘಟಕ ಹಾಗೂ ಜನಚೈತನ್ಯ ಫೌಂಡೇಷನ್‌ಗಳ ಸಂಯುಕ್ತಾಶ್ರಯದಲ್ಲಿ ಭಾವತರಂಗ ಗಾಯನ ಕಾರ್ಯಕ್ರಮ ಆಯೋಜಿಸಲಾಗಿದೆ. ಮೈಸೂರಿನ ಗಾಯಕರಾದ ಎ.ಡಿ.ಶ್ರೀನಿವಾಸ್, ರಾಜೇಶ್ ಪಡಿಯಾರ್, ಎಸ್.ಅಮರ್, ಅಶ್ವಿನ್ ಅತ್ರಿ, ಎನ್.ಬೆಟ್ಟೇಗೌಡ, ಶ್ರೀಧರ್, ಜಾಯ್ಸ್ ವೈಶಾಕ್, ಡಾ.ಪೂರ್ಣಿಮಾ, ಡಾ.ಸುಮಾ, ಪುಷ್ಪಲತಾ, ಶುಭಪಲ್ಲವಿ ಹಾಗೂ ವೇದಶ್ರೀ ಹಾಗೂ ಇನ್ನಿತರರು ಸುಪ್ರಸಿದ್ಧ ಗೀತೆಗಳನ್ನು ಪ್ರಸ್ತುತಪಡಿಸಲಿದ್ದಾರೆ ಎಂದರು. ಸುದ್ದಿಗೋಷ್ಠಿಯಲ್ಲಿ ಜನಚೈತನ್ಯ ಫೌಂಡೇಷನ್ ಅಧ್ಯಕ್ಷ ಆರ್.ಲಕ್ಷ್ಮಣ್, ಜಾಯ್ಸ್ ವೈಶಾಕ್ ಇನ್ನಿತರರು ಇದ್ದರು.

ಇಂದು ವಿವಿಧೆಡೆ ವಿದ್ಯುತ್ ವ್ಯತ್ಯಯ

ಮೈಸೂರು,ಫೆ.18–ಕುವೆಂಪುನಗರ ಉಪವಿಭಾಗ ವ್ಯಾಪ್ತಿಯಲ್ಲಿ ತುರ್ತು ನಿರ್ವಹಣಾ ಕಾಮಗಾರಿ ನಿಮಿತ್ತ ಫೆ.19ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಮಹದೇವಪುರ, ಶಿವಪುರ, ರಮಾಬಾಯಿನಗರ, ಪರಸಯ್ಯನಹುಂಡಿ, ಶ್ರೀರಾಂಪುರ 2ನೇ ಹಂತ, ಗೊರೂರು, ಮುನಿಸ್ವಾಮಿನಗರ, ಹಳ್ಳಿ ಶ್ರೀರಾಂಪುರ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಸೆಸ್ಕ್ ಪ್ರಕಟಣೆ ತಿಳಿಸಿದೆ.

ಇಂದು ನಿದ್ರೆಯ ಮನೋವಿಜ್ಞಾನ–ನಿದ್ರಾ ರಹಸ್ಯಗಳ ಅನಾವರಣ ಕುರಿತು ರಾಷ್ಟ್ರಮಟ್ಟದ ಕಾರ್ಯಾಗಾರ


ಮೈಸೂರು, ಫೆ.18–ಕ್ರೈಸ್ಟ್ ಕಾಲೇಜು ವತಿಯಿಂದ ನಾಳೆ(ಫೆ.19) ಬೆಳಗ್ಗೆ 9.30ಕ್ಕೆ ಕಾಲೇಜಿನ ಸಭಾಂಗಣದಲ್ಲಿ ನಿದ್ರೆಯ ಮನೋವಿಜ್ಞಾನ–ನಿದ್ರಾ ರಹಸ್ಯಗಳ ಅನಾವರಣ ಕುರಿತು ರಾಷ್ಟ್ರ ಮಟ್ಟದ ಕಾರ್ಯಾಗಾರವನ್ನು ಏರ್ಪಡಿಸಲಾಗಿದೆ.

ನಿದ್ರೆಯ ಮನೋರೋಗಶಾಸ್ತ್ರ: ನಿದ್ರೆ–ಮಾನಸಿಕ ಆರೋಗ್ಯ ಕುರಿತು ಅಧಿವೇಶನ ನಡೆಯಲಿದೆ. ನಿಮ್ಹಾನ್ಸ್‌ನ ನರವಿಜ್ಞಾನ ಪ್ರಾಧ್ಯಾಪಕ ಡಾ.ರವಿ ಯಾದವ್ ಭಾಗವಹಿಸಲಿದ್ದಾರೆ. ಸೇಂಟ್ ಪೌಲ್ಸ್ ಪ್ರಾಂತ್ಯದ ಪ್ರಾಂತೀಯ ಅಧ್ಯಕ್ಷ ರೆ.ಫಾ.ಆಗಸ್ಟೀನ್ ಪೈಂಪಲ್ಲಿಲ್ ಅಧ್ಯಕ್ಷತೆ ವಹಿಸಲಿದ್ದು, ಪ್ರಾಂಶುಪಾಲ ರೆ.ಫಾ.ಜಿಂಟೋ ಜೋಸ್ ಉಪಸ್ಥಿತರಿರುವರು.

ನಾಳೆ ಕ್ಯಾನ್ಸರ್ ಉಚಿತ ತಪಾಸಣಾ ಶಿಬಿರ

ಮೈಸೂರು, ಫೆ.18–ಮೈಸೂರಿನ ಪ್ರೀತಿ ಕ್ಯಾನ್ಸರ್ ಸೆಂಟರ್‌ನಲ್ಲಿ ಫೆ.20ರಂದು ಬೆಳಗ್ಗೆ 10ರಿಂದ ರಾತ್ರಿ 8 ಗಂಟೆಯವರೆಗೆ ಕ್ಯಾನ್ಸರ್ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ. ಹೆಚ್ಚಿನ ವಿವರಗಳಿಗೆ ದೂ.0821–4259259 ಸಂಪರ್ಕಿಸಬಹುದು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

19.02.2025 ಬುಧವಾರ, ಮಳೆ ನಕ್ಷತ್ರ: ಶತಭಿಷ, 19.02.2025 ರಿಂದ 03.03.2025 ಕ್ರೋಧಿನಾಮ ಸಂವತ್ಸರ, ಉತ್ತರಾಯಣ, ಶಿಶಿರ ಋತು, ಮಾಘ ಮಾಸ, ಕೃಷ್ಣ ಪಕ್ಷ, ತಿಥಿ: ಸಪ್ತಮಿ, ನಕ್ಷತ್ರ: ಸ್ವಾತಿ, ರಾಹುಕಾಲ: ಮಧ್ಯಾಹ್ನ 12 ರಿಂದ 1.30 ರವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಬೆಳಗ್ಗೆ 6.30ರಿಂದ ಯೋಗ ಮಾಡಿ ಆರೋಗ್ಯವಾಗಿರಿ, ದೇಹ ಮನಸ್ಸುಗಳ ಆರೋಗ್ಯಕ್ಕಾಗಿ ಯೋಗಾಭ್ಯಾಸ ತರಗತಿ, ಥೈರಾಯಿಡ್ ಸಮಸ್ಯೆ, ಗ್ಯಾಸ್ಟ್ರೈಟಿಸ್ (ಆಮ್ಲಪಿತ್ತ) ಚಿಕಿತ್ಸಾ ಶಿಬಿರ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ, ಲಲಿತಾದ್ರಿಪುರ ರಸ್ತೆ, ಆಲನಹಳ್ಳಿ.

■ **ಮೈಸೂರು ಜಿಲ್ಲಾ ಕುಂಬಾರರ ಜಾಗೃತಿ ವೇದಿಕೆ :** ಸಂತಕವಿ ಸರ್ವಜ್ಞರ ಭಾವಚಿತ್ರಕ್ಕೆ ಪುಷ್ಪಾರ್ಚನೆ, ಸಿಹಿ ವಿತರಣೆ, ಸಾಧಕರಿಗೆ ಸರ್ವಜ್ಞ ರತ್ನ ಪ್ರಶಸ್ತಿ ಪ್ರದಾನ, ಸ್ಥಳ: ಅಗ್ರಹಾರ ವೃತ್ತ, ಬೆಳಗ್ಗೆ 9ಕ್ಕೆ.

■ **ಛತ್ರಪತಿ ಶ್ರೀ ಶಿವಾಜಿ ಮಹಾರಾಜರ 398ನೇ ಜಯಂತ್ಯುತ್ಸವ ಸಮಿತಿ, ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ :** ಛತ್ರಪತಿ ಶ್ರೀ ಶಿವಾಜಿ ಮಹಾರಾಜರ ಜಯಂತ್ಯುತ್ಸವ, ಬೆಳಗ್ಗೆ 9.30ಕ್ಕೆ ಅರಮನೆ ಕೋಟೆ ಆಂಜನೇಯಸ್ವಾಮಿ ದೇವಸ್ಥಾನದಿಂದ ಮೆರವಣಿಗೆ, ಕಲಾಮಂದಿರದಲ್ಲಿ ಸಭಾ ಕಾರ್ಯಕ್ರಮ, ಸುಗಮ ಸಂಗೀತ ಬಿ. ಶ್ರೀಕಂಠರಾವ್ ಕಾಟ್ಕರ್ ಅವರಿಂದ, ಸಾನ್ನಿಧ್ಯ : ಶ್ರೀ ಪ್ರಭಾನಂದ ಪವಾರ್ ಸ್ವಾಮೀಜಿ, ಉದ್ಘಾಟನೆ : ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ. ಮಹದೇವಪ್ಪ, ಅತಿಥಿಗಳು : ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಶಾಸಕರಾದ ಕೆ. ಹರೀಶ್‌ಗೌಡ, ತನ್ವೀರ್ ಸೇಠ್, ಟಿ.ಎಸ್. ಶ್ರೀವತ್ಸ ಜಿ.ಟಿ. ದೇವೇಗೌಡ, ಮುಖ್ಯ ಭಾಷಣಕಾರರು : ಕರಾಮುವಿವಿಯ ಶ್ರೀಮತಿ ಪ್ರೊ ಕವಿತಾ ರೈ, ಸ್ಥಳ: ಕಲಾಮಂದಿರ.

■ **ಕ್ರೈಸ್ಟ್ ಕಾಲೇಜು :** ನಿದ್ರೆಯ ಮನೋವಿಜ್ಞಾನ–ನಿದ್ರಾ ರಹಸ್ಯಗಳ ಅನಾವರಣ ಕುರಿತು ರಾಷ್ಟ್ರ ಮಟ್ಟದ ಕಾರ್ಯಾಗಾರ, ಮುಖ್ಯ ಅತಿಥಿಗಳು : ನಿಮ್ಹಾನ್ಸ್‌ನ ನರವಿಜ್ಞಾನ ಪ್ರಾಧ್ಯಾಪಕ ಡಾ. ರವಿ ಯಾದವ್, ಅಧ್ಯಕ್ಷತೆ: ಸೇಂಟ್ ಪೌಲ್ಸ್ ಪ್ರಾಂತ್ಯದ ಪ್ರಾಂತೀಯ ಅಧ್ಯಕ್ಷ ರೆ. ಫಾ. ಆಗಸ್ಟೀನ್ ಪೈಂಪಲ್ಲಿಲ್ ಸಿಎಂಐ, ಉಪಸ್ಥಿತರು : ಪ್ರಾಂಶುಪಾಲ ರೆ. ಫಾ. ಜಿಂಟೋ ಜೋಸ್, ಸ್ಥಳ: ಕಾಲೇಜು ಸಭಾಂಗಣ, ಬೆಳಗ್ಗೆ 9.30ಕ್ಕೆ.

■ **ರಾಮ್‌ಸನ್ಸ್ ಪ್ರತಿಷ್ಠಾನ :** ಬೊಂಬೆ ಮನೆ ದಸರೆ ಬೊಂಬೆ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ 91, ಆಮ್ರಪಾಲಿ ಸೀರೆ ಮಳಿಗೆ ಮೇಲೆ, ನಜರ್‌ಬಾದ್ ಮುಖ್ಯರಸ್ತೆ, ಬೆಳಗ್ಗೆ 10ಕ್ಕೆ.

■ **ಅಭಿವೃದ್ಧಿ ಆಯುಕ್ತರು (ಕರಕುಶಲ), ಜವಳಿ ಮಂತ್ರಾಲಯ :** ಗಾಂಧಿ ಶಿಲ್ಪ ಬಜಾರ್, ಕರಕುಶಲ, ಕೈಮಗ್ಗ ಉತ್ಪನ್ನಗಳ ಬೃಹತ್ ಪ್ರದರ್ಶನ ಮತ್ತು ಮಾರಾಟ, ಸ್ಥಳ: ಜೆಎಸ್‌ಎಸ್ ಮೈಸೂರು ಅರ್ಬನ್ ಹಾತ್, ಹೆಬ್ಬಾಳು ಕೈಗಾರಿಕಾ ವಲಯ, ರಿಂಗ್ ರಸ್ತೆ, ಬೆಳಗ್ಗೆ 10 ರಿಂದ.

■ **ಅಭಿವೃದ್ಧಿ :** ಸಿಲ್ಕ್ ಇಂಡಿಯಾ–2025, ಸಿಲ್ಕ್, ಕಾಟನ್ ಮತ್ತು ಇತರೆ ಸೀರೆಗಳ ಮಾರಾಟ ಮತ್ತು ಪ್ರದರ್ಶನ, ಸ್ಥಳ: ಹೋಟೆಲ್ ಸದರನ್ ಸ್ಟಾರ್, ವಿನೋಬಾ ರಸ್ತೆ, ಬೆಳಗ್ಗೆ 10 ರಿಂದ.

■ **ಎನ್‌ಐಇ, ಜರ್ಮನಿಯ ಫಾಚ್‌ಹೊಕ್ಸ್‌ಶುಲ್ ಡಾರ್ಟ್‌ಮಂಡ್ ಯುನಿವರ್ಸಿಟಿ ಆಫ್ ಅಪ್ಲೈಡ್ ಸೈನ್ಸಸ್ ಅಂಡ್ ಆರ್ಟ್ಸ್ ಮತ್ತು ಇನ್‌ಸ್ಟಿಟ್ಯೂಷನ್ ಆಫ್ ಇಂಜಿನಿಯರ್ಸ್ :** 'ಸುಸ್ಥಿರ ತಂತ್ರಜ್ಞಾನಗಳ ಕ್ಷೇತ್ರದಲ್ಲಿ ನಡೆದಿರುವ ಸಂಶೋಧನೆ' ಕುರಿತಂತೆ ಅಂತಾರಾಷ್ಟ್ರೀಯ ಸಮ್ಮೇಳನ ಹಾಗೂ ಸಮಾವೇಶ, ಉದ್ಘಾಟನೆ : ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಎಸ್.ಇ.ಸುಧೀಂದ್ರ, ಜರ್ಮನಿ ಎಫ್‌ಹೆಚ್‌ಡಿ ವಿಶ್ವವಿದ್ಯಾನಿಲಯದ ಉಪಕುಲಪತಿ ಸ್ಟೀಫನ್ ವೇಯರ್ಸ್, ಸ್ಥಳ: ಎನ್‌ಐಇ ಶಿಕ್ಷಣ ಸಂಸ್ಥೆ ಡೈಮಂಡ್ ಜ್ಯುಬಿಲಿ ಸ್ಪೋರ್ಟ್ಸ್ ಕಾಂಪ್ಲೆಕ್ಸ್ ಸಭಾಂಗಣ, ಬೆಳಗ್ಗೆ 10ಕ್ಕೆ.

■ **ರುತು ಹಿಯರಿಂಗ್ ಕೇರ್ ಕ್ಲಿನಿಕ್ :** 4ನೇ ವಾರ್ಷಿಕೋತ್ಸವದ ಅಂಗವಾಗಿ ಉಚಿತ ಮಾತು ಮತ್ತು ಶ್ರವಣ ಸ್ಕ್ರೀನಿಂಗ್ ಶಿಬಿರ, ಸ್ಥಳ: ರುತು ಹಿಯರಿಂಗ್ ಕೇರ್ ಸ್ಪೀಚ್ ಥೆರಪಿ ಸೆಂಟರ್, ಕುವೆಂಪುನಗರ, ಬೆಳಗ್ಗೆ 11 ರಿಂದ.

■ **ಶ್ರೀ ನಟರಾಜ ವಸತಿ ಪ್ರಥಮ ದರ್ಜೆ ಮಹಿಳಾ ಕಾಲೇಜು, ಯೂತ್ ರೆಡ್ ಕ್ರಾಸ್ ಜೋನ್ :** ಘನತ್ಯಾಜ್ಯ ನಿರ್ವಹಣೆ ಮತ್ತು ಸುಸ್ಥಿರ ಮುಟ್ಟಿನ ನೈರ್ಮಲ್ಯ ಕುರಿತು ಕಾರ್ಯಾಗಾರ, ಸಾನ್ನಿಧ್ಯ : ಶ್ರೀ ನಟರಾಜ ಪ್ರತಿಷ್ಠಾನ ಅಧ್ಯಕ್ಷ ಶ್ರೀ ಚಿದಾನಂದ ಸ್ವಾಮೀಜಿ, ಅಧ್ಯಕ್ಷತೆ : ವಿಶೇಷಾಧಿಕಾರಿ ಪ್ರೊ. ಎಸ್. ಶಿವರಾಜಪ್ಪ, ಸಂಪನ್ಮೂಲ ವ್ಯಕ್ತಿ : ಡಾ. ಸೌಮ್ಯ, ಉಪಸ್ಥಿತರು : ಕಾಲೇಜು ಪ್ರಿನ್ಸಿಪಾಲ್ ಡಾ. ಎಂ. ಶಾರದಾ, ಪಿ. ಶ್ರೀದೇವಿ, ಎಸ್. ಕುಮುದಾ, ಶ್ರೀಮತಿ ಎಸ್. ಲತಾ, ಸ್ಥಳ: ನಟರಾಜ ಸಭಾ ಭವನ, ಬೆಳಗ್ಗೆ 11ಕ್ಕೆ.

■ **ಕೃಷ್ಣರಾಜ ಯುವ ಬಳಗ :** ಛತ್ರಪತಿ ಶಿವಾಜಿ ಮಹಾರಾಜರ 395ನೇ ಜಯಂತ್ಯುತ್ಸವ ಕಾರ್ಯಕ್ರಮ, ಮುಖ್ಯ ಅತಿಥಿಗಳು : ಮುಡಾ ಮಾಜಿ ಅಧ್ಯಕ್ಷ ಎಚ್ ವಿ ರಾಜೀವ್, ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡಿಕೆರೆ ಗೋಪಾಲ್, ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ಸಿ. ನಾರಾಯಣಗೌಡ, ಕಾಂಗ್ರೆಸ್ ಮುಖಂಡ ಎನ್.ಎಂ.ನವೀನ್ ಕುಮಾರ್, ನಗರಪಾಲಿಕಾ ಮಾಜಿ ಸದಸ್ಯರಾದ ಮಾ.ವಿ. ರಾಮಪ್ರಸಾದ್, ಶೋಭಾ ಸುನೀಲ್, ಕೆ ಆರ್ ಬ್ಯಾಂಕ್ ಅಧ್ಯಕ್ಷ ಬಸವರಾಜ್ ಬಸಪ್ಪ, ಜೀವಧಾರ ರಕ್ತ ನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ಕೆಎಂಪಿಕೆ ಟ್ರಸ್ಟ್ ಅಧ್ಯಕ್ಷ ವಿಕ್ರಮ ಅಯ್ಯಂಗಾರ್, ನಿರೂಪಕ ಅಜಯ್ ಶಾಸ್ತ್ರಿ, ಸ್ಥಳ: ಚಾಮುಂಡಿಪುರಂನಲ್ಲಿರುವ ತಗಡೂರು ರಾಮಚಂದ್ರರಾವ್ ಉದ್ಯಾನವನ, ಬೆಳಗ್ಗೆ 11.30ಕ್ಕೆ.

■ **ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು :** ಪ್ರೊ. ಚಂದ್ರಶೇಖರ ಪಾಟೀಲ ದತ್ತಿ ಉಪನ್ಯಾಸ ಕಾರ್ಯಕ್ರಮ, ಉದ್ಘಾಟನೆ : ಜಿಲ್ಲಾ ಕಸಾಪ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಅಧ್ಯಕ್ಷತೆ : ಮುಖ್ಯೋಪಾಧ್ಯಾಯಿನಿ ಶ್ರೀಮತಿ ಸುಮಾ ಪಂಚವಳ್ಳಿ, ಸನ್ಮಾನಿತರು : ಹಿರಿಯ ಸಾಹಿತಿ ಎನ್.ವಿ. ರಮೇಶ್, ಮುಖ್ಯ ಅತಿಥಿಗಳು : ಕಾಸರಗೋಡು ಕನ್ನಡ ಭವನ ಜಿಲ್ಲಾಧ್ಯಕ್ಷ ಡಾ. ಅಮೀನಾ ಬೇಗಂ ಕಾಲೇಖಾನ್, ಸ್ಥಳ: 17/11, ಆಶಿಯಾನ, ವಾಗ್ದೇವಿನಗರ, ತರಗಬಾಳು ಹಾಸ್ಟೆಲ್ ಮುಂಭಾಗ, ಬೋಗಾದಿ ರಸ್ತೆ, ಮಧ್ಯಾಹ್ನ 2.30ಕ್ಕೆ.

■ **ಮಹಾರಾಣಿ ಮಹಿಳಾ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜು :** ವಾರ್ಷಿಕ ವಿಶೇಷ ಶಿಬಿರ, ಬೆಳಗ್ಗೆ 6.30ಕ್ಕೆ ಧ್ವಜಾರೋಹಣ : ನಾಗವಾಲ ಗ್ರಾಪಂ ಮಾಜಿ ಉಪಾಧ್ಯಕ್ಷ ಎಚ್.ಜೆ. ರಾಘವೇಂದ್ರ, ಬೆಳಗ್ಗೆ 9 ರಿಂದ ಸ್ವಚ್ಛತಾ ಕಾರ್ಯಕ್ರಮ, ಸಂಜೆ 5ಕ್ಕೆ ವಿಶೇಷ ಉಪನ್ಯಾಸ ಕಾರ್ಯಕ್ರಮ, ಸಂಪನ್ಮೂಲ ವ್ಯಕ್ತಿಗಳು : ಸಹಾಯಕ ಪ್ರಾಧ್ಯಾಪಕರಾದ ವಿ. ಗಿರೀಶ್, ಪ್ರಿಯಾಂಕ ಆರ್. ರಾವ್, ಅಧ್ಯಕ್ಷತೆ : ಸಹಾಯಕ ಪ್ರಾಧ್ಯಾಪಕ ಪ್ರೊ. ಶಿವಕುಮಾರ, ಸ್ಥಳ : ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಹುಯಿಲಾಳು.

■ **ಕರ್ನಾಟಕ ಸುಗಮ ಸಂಗೀತ ಪರಿಷತ್ತು, ಮೈಸೂರು ಜಿಲ್ಲಾ ಘಟಕ, ಜನಚೈತನ್ಯ ಫೌಂಡೇಷನ್ :** ಭಾವತರಂಗ, ಚಿತ್ರಗೀತೆ, ಭಾವಗೀತೆಗಳ ಸಂಗಮ, ಮುಖ್ಯ ಅತಿಥಿಗಳು : ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ಮಲ್ಲಿಕಾರ್ಜುನಸ್ವಾಮಿ, ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಅಧ್ಯಕ್ಷತೆ : ಕರ್ನಾಟಕ ಸುಗಮ ಸಂಗೀತ ಪರಿಷತ್ ಅಧ್ಯಕ್ಷ ಡಾ. ನಾಗರಾಜ ವಿ. ಬೈರಿ, ಸ್ಥಳ: ನಾದ ಬ್ರಹ್ಮ ಸಂಗೀತ ಸಭಾ, ಜೆಎಲ್‌ಬಿ ರಸ್ತೆ, ಸಂಜೆ 4.30ಕ್ಕೆ.

■ **ಹರಿದಾಸ ಸಂಗೀತ ಸಾಹಿತ್ಯೋತ್ಸವ ಸಮಿತಿ (ಮೈಸೂರು):** ಗಾನ ಸಿರಿ–ವೇದಾಂತ ಲಹರಿ ಭಾಗ–12, ಶ್ರೀ ವಾದಿರಾಜ ಗುರುಸಾರ್ವಭೌಮ ವಿರಚಿತ ರುಗ್ಮಿಣೀಶ ವಿಜಯ ಸಪ್ತಾಹ, ಕಲ್ಬುರ್ಗಿ ವಿದ್ವಾನ್ ರಮೇಶ್ ಕುಲಕರ್ಣಿ ಅವರಿಂದ ಗಾಯನ, ಸ್ಥಳ: ಶಾರದಾ ವಿಲಾಸ ಶತಮಾನೋತ್ಸವ ಭವನ, ಸಂಜೆ 5ರಿಂದ ರಾತ್ರಿ 8.30ರವರೆಗೆ

ತಲಕಾಡಿನಲ್ಲಿಂದು, ತಿ. ನರಸೀಪುರ ತಾ.

■ **ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಗೌತಮ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಟ್ರಸ್ಟ್ :** ನಮ್ಮ ಸಂಸ್ಕೃತಿ – ನಮ್ಮ ಹೆಮ್ಮೆ ಜಾನಪದ ಉತ್ಸವ, ರಂಗಭೂಮಿ ಮತ್ತು ಜನಪದ ಕಲಾಪ್ರಕಾರಗಳ ತರಬೇತಿ ಶಿಬಿರ, ಉದ್ಘಾಟನೆ: ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ವಿ.ಎನ್. ಮಲ್ಲಿಕಾರ್ಜುನಸ್ವಾಮಿ, ಮುಖ್ಯ ಅತಿಥಿಗಳು : ತಲಕಾಡು ಗ್ರಾಪಂ ಅಧ್ಯಕ್ಷೆ ಶ್ರೀಮತಿ ಶೋಭಾ ಮಲ್ಲಣಿ, ಪಿಡಿಓ ಟಿ.ಎಂ. ಮಹೇಶ್, ಪ್ರಾಸ್ತಾವಿಕ ನುಡಿ : ಗೌತಮ ಟ್ರಸ್ಟ್ ಅಧ್ಯಕ್ಷ ಕೃಷ್ಣಮೂರ್ತಿ ತಲಕಾಡು, ಅಧ್ಯಕ್ಷತೆ : ಕಾಲೇಜು ಪ್ರಿನ್ಸಿಪಾಲ್ ಡಾ.ಎನ್. ವಸಂತರಾಜು, ಸ್ಥಳ: ಕಾಲೇಜು ಸಭಾಂಗಣ, ಬೆಳಗ್ಗೆ 11ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ರಂಗ ದಿಗ್ಗಜರು, ಮೈಸೂರು, ಮಂಡ್ಯ, ಚಾಮರಾಜನಗರ ಜಿಲ್ಲೆಯ ಮರೆಯಬಾರದ ಮಹನೀಯರು, ಲೇಖನ ಹಾಗೂ ನಿರೂಪಣೆ– ಎಸ್.ರಾಮನಾಥ್, ನಿರ್ಮಾಣ–ಪ್ರಭುಸ್ವಾಮಿ ಮಳಿಮಠ್, 6.40 ಅರಿವಿನ ಶಿಖರ : ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ಅಮೃತಾ ನಿತಿನ್ ಶಾಸ್ತ್ರಿ, ಎನ್. ಹೇಮಾ, ವ್ಯಾಖ್ಯಾನ –ಡಾ. ಕಬ್ಬಿನಾಲೆ ವಸಂತ ಭಾರದ್ವಾಜ್, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು, 8.30 ಚಿತ್ರಗೀತೆಗಳು, 9.05 ಸಾಮಾನ್ಯ ಕ್ಯಾನ್ಸರ್ ಕುರಿತ ಜಾಗೃತಿ ಕಾರ್ಯಕ್ರಮ, ಪ್ರಾಯೋಜಕರು Indian Cancer Society, Karnataka Chapter, 9.10 ವೃತ್ತಿ ಮಾರ್ಗದರ್ಶನ–ಆರ್ಕಿಟೆಕ್ಚರ್ ಅಂಡ್ ಪ್ಲಾನಿಂಗ್ ವಿಷಯದಲ್ಲಿ ಇರುವ ಅಧ್ಯಯನ ಹಾಗೂ ವೃತ್ತಿಪರ ಅವಕಾಶಗಳು ಕುರಿತು ಮೈಸೂರು ವಿಶ್ವವಿದ್ಯಾಲಯದ ಸ್ಕೂಲ್ ಆಫ್ ಆರ್ಕಿಟೆಕ್ಚರ್ ಅಂಡ್ ಪ್ಲಾನಿಂಗ್‌ನ ಫ್ಯಾಕಲ್ಟಿ ಡಾ. ಗೌತಮ್ ಕೊನಿಕರ್ ಮತ್ತು ಪ್ರಥಮ ರ್‍ಯಾಂಕ್‌ನೊಂದಿಗೆ 16 ಚಿನ್ನದ ಪದಕ ಗಳಿಸಿದ ಕಾವ್ಯಶ್ರೀ. ಯು. ಎ ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ –ಬೇದ್ರೆ ಮಂಜುನಾಥ್, 10.00 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ: ಹರಿಪ್ರಸಾದ್ ಚೌರಾಸಿಯಾ–ಕೊಳಲು ವಾದನ, 10.30 ಹಿಂದಿ ಚಿತ್ರಗೀತೆಗಳು, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ಹಾಗೂ ಪತ್ರೋತ್ತರ

ಮಧ್ಯಾಹ್ನ: 12.35 ಆಯುಷ್ ವಾಣಿ–ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು : ಆಯುಷ್ ಇಲಾಖೆ, ಕರ್ನಾಟಕ ಸರ್ಕಾರ, 12.40 ದೇವರನಾಮ, 12.45 ಜನಪದ ಸಂಗೀತ, 1.00 ಪ್ರಗತಿ ಪಥ – ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳಕುರಿತು ಸರಣಿ, 1.20 ಸಾಮಾನ್ಯ ಕ್ಯಾನ್ಸರ್ ಕುರಿತ ಜಾಗೃತಿ ಕಾರ್ಯಕ್ರಮ, ಪ್ರಾಯೋಜಕರು–Indian Cancer Society, Karnataka Chapter, 1.25 ಭಾವಗೀತೆಗಳು, 2.40 ಚಿತ್ರಗೀತೆಗಳು, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ ನಿಲಯದ ಕಲಾವಿದರಿಂದ – ವಾದ್ಯವೃಂದ, 4.00 ಮಹಿಳಾರಂಗ, 4.45 ಹಿಂದಿ ಪಾಠ, ಪ್ರಸ್ತುತಿ : ಅನುರಾಧಾ, 6.50 ಕೃಷಿರಂಗ : ಮೇವು ಮೆಲುಕು–ಮೇವಿನ ಬೆಳೆಗಳ ಬೇಸಾಯ ತಾಂತ್ರಿಕತೆಗಳನ್ನು ಕುರಿತ ಬಾನುಲಿ ಸರಣಿ. ಹಸಿರು ಮೇವಿಗಾಗಿ ಬೆಳೆಯಬಹುದಾದ ಗಿಡಮರಗಳು. ಈ ಕುರಿತು ಮಂಡ್ಯದ ವಿ.ಸಿ. ಫಾರಂ ವಲಯ ಕೃಷಿ ಸಂಶೋಧನಾ ಕೇಂದ್ರದ ಮೇವು ಅಭಿವೃದ್ಧಿ ವಿಭಾಗದ ತಾಂತ್ರಿಕ ಸಹಾಯಕರಾದ ಡಾ. ಎನ್. ರಾಣಿ ಅವರೊಂದಿಗೆ ಸಂದರ್ಶನ, ಸಂದರ್ಶಕರು : ಎನ್. ಕೇಶವಮೂರ್ತಿ, 7.45 ಕನ್ನಡ ಚಿತ್ರಗೀತೆಗಳು, 8.00 ಕರ್ನಾಟಕ ಶಾಸ್ತ್ರೀಯ ಸಂಗೀತ : ಆರ್. ಕೆ.ಶ್ರೀಕಂಠನ್ – ಹಾಡುಗಾರಿಕೆ, 9.30 ಕ್ರೀಡಾಲೋಕ, 10.00 ಜನಪದ ಸಂಗೀತ, 10.30 ಸವಿನೆನಪು

ಚುನಾವಣೆ ಪ್ರಕಟಣೆ

ಕೊಡಗು ಸಹಕಾರ ಸಂಘ ನಿಯಮಿತ,

ನಂ.71, ಆಸ್ಪತ್ರೆ ರಸ್ತೆ, ಜಯಲಕ್ಷ್ಮಿಪುರಂ, ಮೈಸೂರು.

ಈ ಸಂಘದ ಮುಂದಿನ 5 ವರ್ಷದ ಆಡಳಿತ ಮಂಡಳಿ ಚುನಾವಣೆಯು ದಿನಾಂಕ 22.02.2025 ರಂದು ಶನಿವಾರ ಬೆಳಿಗ್ಗೆ 9 ಗಂಟೆಯಿಂದ ಸಂಜೆ 4 ಗಂಟೆಯವರೆಗೆ ಸಂಘದ ಕಛೇರಿಯಲ್ಲಿ ನಡೆಯಲಿದೆ. ಮಾನ್ಯ ಅರ್ಹ ಮತದಾರ ಸದಸ್ಯರು ಮತಚಲಾವಣೆಗೆ ಬರುವಾಗ ಕಡ್ಡಾಯವಾಗಿ ಒಂದು ಭಾವ ಚಿತ್ರವನ್ನು (ಫೋಟೊ) ತಂದು ಕಛೇರಿಯಿಂದ ಗುರುತಿನ ಚೀಟಿ (ಐ ಡಿ ಕಾರ್ಡ್) ಪಡೆದುಕೊಳ್ಳಬೇಕೆಂದು ಈ ಮೂಲಕ ಕೋರಲಾಗಿದೆ.

ಸಹಿ/- ಕಾರ್ಯದರ್ಶಿ,

ದಿನಾಂಕ: 18.02.2025, ಸ್ಥಳ : ಮೈಸೂರು. ಕೊಡಗು ಸಹಕಾರ ಸಂಘ ನಿ.

ಉತ್ತರ ಕ್ರಿಯಾದಿ ಭೂಶಾಂತಿ ಆಹ್ವಾನ ಪತ್ರಿಕೆ



ಎಸ್.ರಮೇಶ
(ಶಂಕರಲಿಂಗೇಶ್ವರ ಟ್ರೇಡರ್ಸ್, ಹೊಸಪೈರಗಳ್ಳಿ)

ಇವರು ದಿನಾಂಕ 11-2-2025ನೇ ಮಂಗಳವಾರದಂದು ದೈವಾಧೀನರಾದರೆಂದು ತಿಳಿಸಲು ವಿಷಾದಿಸುತ್ತೇವೆ. ತತ್ಸಂಬಂಧವಾಗಿ ಉತ್ತರ ಕ್ರಿಯಾದಿ ಭೂ ಶಾಂತಿ ಕಾರ್ಯವನ್ನು ದಿನಾಂಕ 21.2.2025ನೇ ಶುಕ್ರವಾರ ಮಧ್ಯಾಹ್ನ 12 ಗಂಟೆಗೆ ಶಿವಗಣಾರಾಧನೆಯನ್ನು ನಮ್ಮ ಸ್ವಗ್ರಾಮವಾದ ಛತ್ರ ಹೋಬಳಿಯ ಅಹಲ್ಯ ಗ್ರಾಮದಲ್ಲಿ ಏರ್ಪಡಿಸಲಾಗಿದೆ. ತಾವುಗಳು ಸಕಾಲಕ್ಕೆ ಆಗಮಿಸಿ ಲಿಂಗೈಕ್ಯರ ಆತ್ಮಕ್ಕೆ ಚಿರಶಾಂತಿಯನ್ನು ಕೋರಬೇಕಾಗಿ ವಿನಂತಿ.

ದುಃಖತಪ್ತರು ಶ್ರೀಮತಿ ರತ್ನಮ್ಮ ಮತ್ತು ಮಕ್ಕಳು ಹಾಗೂ ಕುಟುಂಬ ವರ್ಗದವರು ಅಹಲ್ಯ ಗ್ರಾಮಸ್ಥರು.

ಪುರಸಭಾ ಕಾರ್ಯಾಲಯ, ಮಳವಳ್ಳಿ

ವೆಬ್‌ಸೈಟ್ : www.malavallitown.mrc.gov.in
ಈಮೇಲ್ :ka.malavalli.tmc@gmail.com | ಫೋನ್:-08231-242073
ಮೈಸೂರು-ಕೊಳ್ಳೇಗಾಲ ರಸ್ತೆ, ಮಳವಳ್ಳಿ-571430, ಮಳವಳ್ಳಿ ತಾ., ಮಂಡ್ಯ ಜಿಲ್ಲೆ

ಸಂಖ್ಯೆ:ಮ.ಮ.:ಕಂ.ಶಾ.ಸಿ.ಆರ್/01/2024-25 ದಿ:17-02-2025

ಸಾರ್ವಜನಿಕ ಪ್ರಕಟಣೆ

ಈ ಮೂಲಕ ಮಳವಳ್ಳಿ ಪುರಸಭಾ ವ್ಯಾಪ್ತಿಯಲ್ಲಿ ಕಟ್ಟಡಗಳು/ನಿವೇಶನಗಳನ್ನು ಹೊಂದಿರುವ ಆಸ್ತಿ ಮಾಲೀಕರಿಗೆ/ಅನುಭೋಗದಾರರಿಗೆ ತಿಳಿಯಪಡಿಸುವುದೇನೆಂದರೆ, ಮಾನ್ಯ ಸರ್ಕಾರದ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಬೆಂಗಳೂರುರವರ ಅಂತಿಮ ಅಧಿಸೂಚನೆ ನಂ: UDD 126 GEL 2023(e) ದಿ: 11-02-2025 ರನ್ವಯ ಪುರಸಭಾ ವ್ಯಾಪ್ತಿಯೊಳಗೆ ಬರುವ ಎಲ್ಲಾ ರೀತಿಯ ಕಟ್ಟಡ/ನಿವೇಶನಗಳಿಗೆ ಆಸ್ತಿ ತೆರಿಗೆ ನಿರ್ಧರಿಸಿಕೊಳ್ಳಲು ಆಸ್ತಿ ತೆರಿಗೆಯನ್ನು 2024-25ನೇ ಸಾಲಿನ ಅಂತ್ಯದವರೆಗೆ ಪೂರ್ಣ ಪ್ರಮಾಣದಲ್ಲಿ ಪಾವತಿಸಿಕೊಂಡು ಸಂಬಂಧಪಟ್ಟ ಆಸ್ತಿ ಮಾಲೀಕರಿಂದ ಅವಶ್ಯಕ ದಾಖಲಾತಿಗಳನ್ನು ಪಡೆದು, ಕರ್ನಾಟಕ ಪೌರಸಭೆಗಳ ಅಧಿನಿಯಮದ 1964ರ ಸೆಕ್ಷನ್ 106(19)(ii) ಅನ್ವಯ Register-A ರಲ್ಲಿ (ನಮೂನೆ-3) ಅಧಿಕೃತ ಸ್ವತ್ತುಗಳು ಹಾಗೂ Register-B ರಲ್ಲಿ (ನಮೂನೆ-3ಎ) ಅನಧಿಕೃತ ಸ್ವತ್ತುಗಳ ಮಾಹಿತಿಯುಳ್ಳ ವಹಿಯನ್ನು ನಿರ್ವಹಿಸಬೇಕಾಗುತ್ತದೆ.

ಆದ್ದರಿಂದ ಪುರಸಭಾ ವ್ಯಾಪ್ತಿಯೊಳಗೆ ಬರುವ ಸರ್ಕಾರಿ ಜಾಗ/ಅರೆ ಸರ್ಕಾರಿ/ ಸ್ಥಳೀಯ ಸಂಸ್ಥೆಗಳ ಒಡೆತನದಲ್ಲಿರುವ ಸ್ವತ್ತುಗಳನ್ನು ಹೊರತುಪಡಿಸಿ ಇನ್ನುಳಿದ ಕಟ್ಟಡಗಳ/ನಿವೇಶನಗಳ ಮಾಲೀಕರು ನಿಮ್ಮ ನಿಮ್ಮ ಆಸ್ತಿಗಳಿಗೆ ಸಂಬಂಧಿಸಿದ ಪೂರಕ ನೋಂದಾಯಿತ ದಾಖಲೆ ಪತ್ರಗಳು/ಸ್ವತ್ತಿನ ಭಾವಚಿತ್ರ/ಮಾಲೀಕರ ಫೋಟೋ /ನಮೂನೆ-15 (EC)/ಕೆ.ಇ.ಬಿ ಬಿಲ್/ಕುಡಿಯುವ ನೀರಿನ ಬಿಲ್/ಕಟ್ಟಡ ಪರವಾನಗಿ ಮತ್ತು ಅನುಮೋದಿತ ನಕ್ಷೆ /ಏಕ ನಿವೇಶನ ವಿನ್ಯಾಸ ಅನುಮೋದನೆ ಅಥವಾ ಅನುಮೋದಿತ ಬಡಾವಣೆಯ ನಕ್ಷೆ/ಆಲಿನೇಷನ್ ನಕಲು ಪ್ರತಿ/RT-C/ಮ್ಯೂಟೇಶನ್ ನಕಲು ಪ್ರತಿ/ಮಾಲೀಕರ ಆಧಾರ್ ಕಾರ್ಡ್ ಪ್ರತಿ/ಮಾಲೀಕರ ಪಾನ್ ಕಾರ್ಡ್ ಪ್ರತಿ ಅಥವಾ ಚುನಾವಣಾ ಗುರುತಿನ ಚೀಟಿ ಹಾಗೂ ಇತರೆ ಅವಶ್ಯಕ ದಾಖಲಾತಿಗಳನ್ನು ಪುರಸಭಾ ಕಛೇರಿಗೆ ಸಲ್ಲಿಸಿ ಸ್ವತ್ತಿಗೆ ಸಂಬಂಧಪಟ್ಟ ಆಸ್ತಿ ತೆರಿಗೆಯನ್ನು ಪಾವತಿಸಿ. ಆಸ್ತಿಯನ್ನು ಗಣಕೀಕರಿಸಿಕೊಂಡು ನಮೂನೆ-3/ನಮೂನೆ-3ಎಗಳನ್ನು ಪಡೆದುಕೊಂಡು ನೋಂದಾಯಿತ ಕಛೇರಿಯಲ್ಲಿ ಕ್ರಯ ಪತ್ರ/ ದಾನ ಪತ್ರ/ ವಿಭಾಗ ಪತ್ರ/ಹಕ್ಕು ಖುಲಾಸೆ ಹಾಗೂ ಇತರೆ ದಾಖಲೆ ಪತ್ರಗಳನ್ನು ನೋಂದಣಿ ಮಾಡಿಸಿಕೊಂಡು ಸದುಪಯೋಗ ಮಾಡಿಕೊಳ್ಳುವ ಅವಕಾಶ ಪಡೆಯಬಹುದಾಗಿರುತ್ತದೆ. ಪ್ರಯುಕ್ತ ಈ ಮೇಲ್ಕಂಡ ಸರ್ಕಾರದ ಅಧಿಸೂಚನೆಯಂತೆ ಗಣಕೀಕೃತ ನಮೂನೆ-3 ಮತ್ತು /ನಮೂನೆ-3ಎ ರನ್ನು ಪಡೆದುಕೊಳ್ಳುವುದು. ತಪ್ಪಿದಲ್ಲಿ ಸಂಬಂಧಪಟ್ಟ ಆಸ್ತಿ ಮಾಲೀಕರುಗಳಿಗೆ ನಿಯಮ 10ಎ ರಂತೆ ನಿಯಮಾನುಸಾರ ಸೂಕ್ತ ಕಾನೂನು ಕ್ರಮ ಜರುಗಿಸಲಾಗುವುದು ಎಂದು ತಿಳಿಯಪಡಿಸಿದೆ.

ಹೆಚ್ಚಿನ ಮಾಹಿತಿಗಾಗಿ ಪುರಸಭೆಯ ಮುಖ್ಯಾಧಿಕಾರಿಗಳು/ ಕಂದಾಯಾಧಿಕಾರಿ/ ಕಂದಾಯ ಶಾಖೆಯ ಸಿಬ್ಬಂದಿರವರನ್ನು ಸಂಪರ್ಕಿಸಲು ತಿಳಿಯಪಡಿಸಿದೆ.

ಸಹಿ/-ಅಧ್ಯಕ್ಷರು ಪುರಸಭೆ, ಮಳವಳ್ಳಿ. ಸಹಿ/-ಉಪಾಧ್ಯಕ್ಷರು ಪುರಸಭೆ, ಮಳವಳ್ಳಿ. ಸಹಿ/-ಸ್ಥಾಯಿ ಸಮಿತಿ ಅಧ್ಯಕ್ಷರು, ಪುರಸಭೆ, ಮಳವಳ್ಳಿ. ಸಹಿ/-ಮುಖ್ಯಾಧಿಕಾರಿ ಪುರಸಭೆ, ಮಳವಳ್ಳಿ.

ಕರ್ನಾಟಕ ಸರ್ಕಾರ

(ಆಯುಷ್ ಇಲಾಖೆ)

ಸರ್ಕಾರಿ ಪ್ರಕೃತಿ ಚಿಕಿತ್ಸೆ ಮತ್ತು ಯೋಗ ವೈದ್ಯಕೀಯ ಮಹಾವಿದ್ಯಾಲಯ,

ಬೃಂದಾವನ ಬಡಾವಣೆ, ಕೆ.ಆರ್.ಎಸ್.ರಸ್ತೆ, ಮೈಸೂರು–570 020.

Email ID:gncycm@gmail.com Ph. No.0821-2410120

ಸಂಖ್ಯೆ:ಜಿಎನ್‌ಸಿ/27/ಲೆಕ್ಕ/2024–25 ದಿನಾಂಕ: 15.02.2025

ದರಪಟ್ಟಿ ಆಹ್ವಾನ ಪ್ರಕಟಣೆ

ಸರ್ಕಾರಿ ಪ್ರಕೃತಿ ಚಿಕಿತ್ಸೆ ಮತ್ತು ಯೋಗ ವೈದ್ಯಕೀಯ ಮಹಾವಿದ್ಯಾಲಯ ಮೈಸೂರು. ಇಲ್ಲಿನ ಕಛೇರಿ ಉಪಯೋಗಕ್ಕಾಗಿ ಜೆರಾಕ್ಸ್ ಯಂತ್ರ (Xerox Machine) ವನ್ನು ದರಪಟ್ಟಿ ಮೂಲಕ ಖರೀದಿಸಲು ದರಪಟ್ಟಿಯನ್ನು ಆಹ್ವಾನಿಸಲಾಗಿದೆ. ಆಸಕ್ತಿಯುಳ್ಳವರು ನಿಗದಿತ ದಿ: 15.02.2025 ರಿಂದ 24.02.2025ರ ಸಂಜೆ 4 ಗಂಟೆಯವರೆಗೆ ಸಲ್ಲಿಸುವುದು ದರಪಟ್ಟಿ ಅಂದಾಜು ಮೊತ್ತ ರೂ.2.00 ಲಕ್ಷಗಳು ದರಪಟ್ಟಿ ಆಹ್ವಾನ ಪತ್ರ ಹಾಗೂ ಹೆಚ್ಚಿನ ಮಾಹಿತಿಗಾಗಿ ಕಛೇರಿ ವೇಳೆಯಲ್ಲಿ ಸಂಪರ್ಕಿಸುವುದು.

ಸಹಿ/– ಪ್ರಾಚಾರ್ಯರು, ಸರ್ಕಾರಿ ಪ್ರಕೃತಿ ಚಿಕಿತ್ಸೆ ಮತ್ತು ಯೋಗ , ವೈದ್ಯಕೀಯ ಮಹಾವಿದ್ಯಾಲಯ, ಮೈಸೂರು – 570 020

DIPR/DDMYS/1306/KSMCA/935/2024-25

ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ

CHAMUNDESHWARI ELECTRICITY SUPPLY CORPORATION LIMITED

(ಕರ್ನಾಟಕ ಸರ್ಕಾರದ ಸ್ವಾಮ್ಯಕ್ಕೆ ಒಳಪಟ್ಟಿದೆ) (A Government of Karnataka Undertaking)

ನಿಗಮ ಕಾರ್ಯಾಲಯ, ಚಾವಿಸನಿನಿ, ಮೈಸೂರು–570017 Corporate Office, CESC, Mysuru-570017

Website: www.https://cescmysore.karnataka.gov.in/

E-mail ID:gmcommcesc@@gmail.com

Company Identity Number[CIN]:- U40109KA2004SGC035177

ಕ್ರಸಂ: ಚಾವಿಸನಿನಿ/ಪ್ರವ್ಯ(ವಾ)/ಉಪ್ರವ್ಯ(ನಿವ್ಯ–1)/ಸಪ್ರವ್ಯ(ನಿವ್ಯ–1)/2024–25/29070 ದಿನಾಂಕ: 12.02.2025

ವಿಷಯ : ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತದ ಆರ್ಥಿಕ ವರ್ಷ–26, 27 & 28ರ ವಿದ್ಯುತ್ ದರ ಪರಿಷ್ಕರಣೆ ಅರ್ಜಿಯ ಸಾರ್ವಜನಿಕ ವಿಚಾರಣೆಯ ಪ್ರಕಟಣೆ ಬಗ್ಗೆ

ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತವು ಗೌರವಾನ್ವಿತ ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗದ (ಕೆ.ಇ.ಆರ್.ಸಿ) ಮುಂದೆ ಅನುಮೋದನೆಗಾಗಿ "ಆರ್ಥಿಕ ವರ್ಷ 2023–24 ನೇ ಸಾಲಿನ ವಾರ್ಷಿಕ ಕಾರ್ಯಕ್ಷಮತೆ ವಿಮರ್ಶೆ ವರದಿ ಹಾಗೂ ಆರ್ಥಿಕ ವರ್ಷ 2025–26, 2026–27 ಹಾಗೂ 2027–28 ನೇ ವಾರ್ಷಿಕ ಕಂದಾಯ ಅಗತ್ಯತೆ(ಎ.ಆರ್.ಆರ್)/ ಶುಲ್ಕಗಳಿಂದ ಬರಬಹುದಾದ ನಿರೀಕ್ಷಿತ ಆದಾಯ(ಇ.ಆರ್.ಸಿ) ಹಾಗೂ ವಿದ್ಯುತ್ ದರ ಪರಿಷ್ಕರಣೆ ಅರ್ಜಿಯನ್ನು ಸಲ್ಲಿಸಿದೆ."

ಈ ಬಗ್ಗೆ ಆಸಕ್ತಿಯುಳ್ಳವರ ಸಲಹೆ/ಪ್ರತಿಕ್ರಿಯೆಗಳನ್ನು ಆಲಿಸಲು ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗವು ಕೆಳಗೆ ಸೂಚಿಸಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಸಾರ್ವಜನಿಕ ವಿಚಾರಣೆಯನ್ನು ಏರ್ಪಡಿಸಿದೆ. ಈ ಪ್ರಸ್ತಾವನೆಯ ಸಂಕ್ಷಿಪ್ತ ವರದಿಯನ್ನು ದಿನಪತ್ರಿಕೆಗಳಲ್ಲಿ ಈಗಾಗಲೇ ಪ್ರಕಟಿಸಿದ್ದು, ವಿವರಗಳು ನಿಗಮದ ಅಂತರ್ಜಾಲ https://cescmysore.karnataka.gov.in ನಲ್ಲಿ ಲಭ್ಯವಿದೆ.

ಸಾರ್ವಜನಿಕ ವಿಚಾರಣೆ ದಿನಾಂಕ ಮತ್ತು ಸಮಯ	ಸ್ಥಳ
ದಿ:19.02.2025 ರಂದು ಬುಧವಾರ ಬೆಳಿಗ್ಗೆ 11:00 ಗಂಟೆಗೆ	ಜಿಲ್ಲಾ ಪಂಚಾಯತ್ ಸಭಾಂಗಣ, ಮೈಸೂರು–570002

ಆಸಕ್ತ ವ್ಯಕ್ತಿಗಳು "ಸಾರ್ವಜನಿಕ ವಿಚಾರಣೆ"ಯಲ್ಲಿ ಭಾಗವಹಿಸಿ, ತಮ್ಮ ಸಲಹೆಗಳನ್ನು ಮೌಖಿಕ/ಲಿಖಿತರೂಪದಲ್ಲಿ ಸಾರ್ವಜನಿಕ ವಿಚಾರಣೆಯ ದಿನಾಂಕದಂದು ಕೆ.ಇ.ಆರ್.ಸಿಗೆ ಸಲ್ಲಿಸುವಂತೆ ಕೋರಲಾಗಿದೆ.

ಸಹಿ/– ಪ್ರಧಾನ ವ್ಯವಸ್ಥಾಪಕರು (ವಾಣಿಜ್ಯ), ನಿಗಮ ಕಛೇರಿ, ಚಾವಿಸನಿನಿ, ಮೈಸೂರು.

DIPR/DDMYS/12/KSMCA/934/2024-25

11ನೇ ವರ್ಷದ ಪುಣ್ಯಸ್ಮರಣೆ



ಶ್ರೀ.ಬಿ.ಕೆ.ವಿಷಕಂಠು
M.N.P.M

ನೀವು ನಮ್ಮನಗಲಿ ಇಂದಿಗೆ 11 ವರ್ಷ ಕಳೆದರೂ ಸದಾ ನಿಮ್ಮ ನೆನಪಿನಲ್ಲಿರುವ
ದುಃಖತಪ್ತರು
ಪತ್ನಿ: ಎನ್ ಜಯಶ್ರೀ, ಮಕ್ಕಳು, ಸೊಸೆಯಂದಿರು, ಮೊಮ್ಮಕ್ಕಳಾದ ಎಸ್.ರುಚಿತಾ ಪ್ರೇಮ್, ಎಸ್.ಭುವನ ಪ್ರೇಮ್ ಮತ್ತು ಕುಟುಂಬ ವರ್ಗದವರು
ಕೆ.ಆರ್ ಸಾಗರ
9880661172
9945154090

17ನೇ ವರ್ಷದ ಪುಣ್ಯಸ್ಮರಣೆ



ಶ್ರೀಮತಿ ಜಯಮ್ಮ
ನಿಧನ :19.2.2008

ನೀವು ನಮ್ಮನಗಲಿ ಇಂದಿಗೆ 17 ವರ್ಷಗಳು ಕಳೆದರೂ ಸದಾ ನಿಮ್ಮ ನೆನಪಿನಲ್ಲೇ ಇರುವ
ದುಃಖತಪ್ತರು:
ಎಂ.ಪಿ. ಕೃಷ್ಣ , ಬೀನಾ ಅಕ್ಷಯ್ ಮತ್ತು ಆಶಿಕಾ

11ನೇ ವರ್ಷದ ಸವಿನೆನಪು



ಮಂಜುನಾಥ್.ಎಲ್
S/o ಟಿ. ಲಕ್ಷ್ಮಣ್

ನೀವು ನಮ್ಮನ್ನಗಲಿ ಇಂದಿಗೆ 11 ವರ್ಷ ಕಳೆದರೂ ಸದಾ ನಿಮ್ಮ ನೆನಪಿನಲ್ಲಿರುವ ದುಃಖಿತಪ್ತರು: ಪತ್ನಿ ಬೃಂದಾಮಣಿ, ಮಕ್ಕಳು ಎಂ. ಅಖಿಲೇಶ್, ಎಂ. ನಿಖಿಲೇಶ್, ನಿಖಿತಗೌಡ.ಎಂ. ಮತ್ತು ಕುಟುಂಬವರ್ಗ

ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ,

ಕಾರ್ಯದರ್ಶಿಗಳ ಕಾರ್ಯಾಲಯ, ಚಾಮುಂಡಿಬೆಟ್ಟ, ಮೈಸೂರು–570010

ದೂರವಾಣಿ ಸಂಖ್ಯೆ :0821–2590027 ಇ–ಮೇಲ್: eochamunditemple@gmail.com

ಪತ್ರ ಸಂಖ್ಯೆ:ಎಸ್‌ಸಿಟಿ(5)ಸಿಆರ್:/2024–25 ದಿನಾಂಕ:14.02.2025

ಅಲ್ಪಾವಧಿ ಇ–ಟೆಂಡರ್ ಪ್ರಕಟಣೆ (ದ್ವಿ ಲಕೋಟೆ)

ಕರ್ನಾಟಕ ಸರ್ಕಾರದ ಇ–ಪ್ರಕ್ಯೂರ್‌ಮೆಂಟ್ ಪೋರ್ಟಲ್ ಮುಖಾಂತರ ಮಾತ್ರ

ಮೈಸೂರು ಚಾಮುಂಡಿಬೆಟ್ಟ ಶ್ರೀ ಚಾಮುಂಡೇಶ್ವರಿ ದೇವಸ್ಥಾನದಲ್ಲಿ ಕಛೇರಿಯಿಂದ ಸೂಚಿತ ಅವಧಿಗೆ ಈ ಕೆಳಕಂಡ ವಿವಿಧ ಬಾಬ್ತುಗಳಿಗೆ ಟೆಂಡರ್ ಕರೆಯಲಾಗಿದೆ. ಆಸಕ್ತರು ಟೆಂಡರ್ ನಮೂನೆಗಳನ್ನು ಇ–ಪ್ರೋಕ್ಯೂರ್‌ಮೆಂಟ್ (https://kppp.karnataka.gov.in) ಮೂಲಕ ಸಲ್ಲಿಸಬಹುದಾಗಿದೆ. ಟೆಂಡರ್‌ದಾಖಲೆಯಲ್ಲಿ ತಿಳಿಸಿರುವಂತೆ (Technical qualification criteria)ದ ಎಲ್ಲಾ ಅಗತ್ಯ ದಾಖಲೆಗಳನ್ನು ಸಲ್ಲಿಸುವುದು. ಈ ಕೆಳಕಂಡಂತೆ ನಿಗದಿಪಡಿಸಿದ ಇ.ಎಂ.ಡಿ.ಯನ್ನು ಇ–ಪ್ರಕ್ಯೂರ್‌ಮೆಂಟ್ ಪೋರ್ಟಲ್‌ನಲ್ಲಿ ನಮೂದಿಸಿದ ಯಾವುದಾದರು ಒಂದು ರೀತಿಯಲ್ಲಿ ಸಲ್ಲಿಸತಕ್ಕದ್ದು. ಇ.ಎಂ.ಡಿ.ಯು ಟೆಂಡರಿನ ನ್ಯಾಯ ಸಮ್ಮತಾ ಮಾನ್ಯತಾ ಅವಧಿಗಿಂತ (Validity period) 45 ದಿನಗಳ ನಂತರದ ವರೆಗೆ ಮಾನ್ಯತೆ ಇರತಕ್ಕದ್ದು. ಹೆಚ್ಚಿನ ಮಾಹಿತಿಗಳನ್ನು ಕಛೇರಿ ವೇಳೆಯಲ್ಲಿ ಪಡೆಯಬಹುದು.

ಕ್ರ ಸಂ.	ಟೆಂಡರ್ ಹೆಸರು	ಅಂದಾಜು ಮೊತ್ತ (ರೂಗಳಲ್ಲಿ)	ಇಎಂಡಿ ಮೊತ್ತ (ರೂ.ಗಳಲ್ಲಿ)
1	ಶ್ರೀ ಚಾಮುಂಡೇಶ್ವರಿ ಹಾಗೂ ಸಮೂಹ ದೇವಸ್ಥಾನಗಳಿಗೆ ಲಾಡು ಪ್ರಸಾದ, ತಯಾರಿಸಿ ಪ್ಯಾಕ್ ಮಾಡಿಕೊಡಲು ಒಂದು ಲಾಡು ಪ್ರಸಾದ ತಯಾರಿಕೆಗೆ ಮಜೂರಿಯ ಗುತ್ತಿಗೆ (ಒಂದು ವರ್ಷದಅವಧಿಗೆ)	50,00,000	1,00,000–00
2	ಲಾಡು ಪ್ರಸಾದ ಪ್ಯಾಕ್ ಮಾಡಲು ಆಯಿಲ್ ಪ್ರೂಫ್ ಪೇಪರ್ ಕವರ್‌ಗಳನ್ನು ಸರಬರಾಜು ಮಾಡುವ ಗುತ್ತಿಗೆ (ಒಂದು ವರ್ಷದ ಅವಧಿಗೆ)	20,00,000	40,000–00

ಇ–ಪ್ರೊಕ್ಯೂರ್‌ಮೆಂಟ್ ವ್ಯವಸ್ಥೆಯಡಿ ಟೆಂಡರ್ ಶೆಡ್ಯೂಲ್ ದಿನಾಂಕಗಳು ಈ ಕೆಳಕಂಡಂತಿದೆ.

1) ಇ–ಪೋರ್ಟಲ್‌ನಲ್ಲಿ ಟೆಂಡರ್ ದಾಖಲೆಗಳು ಚಾಲ್ತಿಗೆ ಬರುವುದು: 14.02.2025ರ ಸಂಜೆ 5.00 ಗಂಟೆಯ ನಂತರ. 2) ಟೆಂಡರ್ ಡೌನ್‌ಲೋಡ್ ಮಾಡಲು ಮತ್ತು ಟೆಂಡರ್ ಸಲ್ಲಿಸಲು ಕೊನೆ ದಿನಾಂಕ ಮತ್ತು ಸಮಯ: 01.03.2025ರ ಸಂಜೆ 5.00 ಗಂಟೆ ವರೆಗೆ. 2) ತಾಂತ್ರಿಕ ಟೆಂಡರ್‌ಗಳನ್ನು ತೆರೆಯುವ ದಿ: 03.03.2025ರ ಬೆಳಿಗ್ಗೆ 11.00 ಗಂಟೆ ನಂತರ. 3) ಹಣಕಾಸಿನ ಟೆಂಡರ್‌ನ್ನು ತೆರೆಯುವ ದಿ: 07.03.2025 ರ ಬೆಳಿಗ್ಗೆ 11.00 ಗಂಟೆ ನಂತರ.

ಸಹಿ/– ಕಾರ್ಯದರ್ಶಿ, ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ, ಚಾಮುಂಡಿಬೆಟ್ಟ

DIPR/DDMYS/13/KSMCA/939/2024-25

ನಕ್ಕರೆ ಅದೇ ಸ್ವರ್ಗ

ಜೈಲರ್ : ಏನಪ್ಪಾ ನಿನ್ನನ್ನು ನೋಡೋಕೆ ಯಾರೂ ಬರ್ತಾ ಇಲ್ವಲ್ಲಾ ಯಾಕೆ??

ಕೈದಿ : ಹೇಗೆ ಬರ್ತಾರೆ ಸಾರ್ ನನ್ನ ಇಡೀ ಫ್ಯಾಮಿಲಿ ಇಲ್ಲೇ ಇದೆ.

ಮೈಸೂರು ಮಿತ್ರ

ಬುಧವಾರ, 19 ಫೆಬ್ರವರಿ 2025

ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತ ವಾಹಿನಿ.........

ಎದುರಾಳಿಗಳು ಕೆಟ್ಟ ಪದಗಳ ಬಳಕೆ ಶುರು ಮಾಡಿದರೆಂದರೆ ನೀವು ವಾದದಲ್ಲಿ ಜಯಗಳಿಸಿದರೆಂದೇ ಅರ್ಥ. – ನುಡಿಮುತ್ತು

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಮನಸ್ಸು ಇಲ್ಲದಿದ್ದರೆ ಗಟ್ಟಿ, ಎಲ್ಲವೂ ಮೂರಾಬಟ್ಟೆ

ನಿಮ್ಮ ಪತ್ರಗಳು

ಒಳಚರಂಡಿ ಸಂಸ್ಕರಣಾ ಘಟಕ ದುರಸ್ತಿಗೊಳಿಸಿ




ಮಾನ್ಯರೆ,

ಮೈಸೂರಿನ ಹೂಟಗಳ್ಳಿಯ ಹೌಸಿಂಗ್ ಬೋರ್ಡ್ 4ನೇ ಘಟ್ಟದಲ್ಲಿರುವ ವಿನಾಯಕ ಎನ್‌ಕ್ಲೇವ್ ಬಡಾವಣೆಯ ಉದ್ಯಾನವನದಲ್ಲಿ ಒಳಚರಂಡಿ ಸಂಸ್ಕರಣಾ ಘಟಕದ ಸಂಪರ್ಕ ಕಲ್ಪಿಸಲಾಗಿದೆ. ಆದರೆ, ಅದು ಬಹಳ ದಿನಗಳಿಂದ ತೆರೆದುಕೊಂಡು ಕೊಳಚೆ ನೀರೆಲ್ಲ ಉಕ್ಕಿ ಹರಿದು ಅಲ್ಲಿನ ವಾತಾವರಣವೇ ಗಬ್ಬೆದ್ದು ನಾರುತ್ತಿದೆ. ಇದರಿಂದಾಗಿ ಈ ಬಡಾವಣೆಯಲ್ಲಿರುವ ಸುಮಾರು 45 ಮನೆಗಳ ನಿವಾಸಿಗಳಿಗೆ ತುಂಬಾ ತೊಂದರೆಯಾಗುತ್ತಿದೆ.

ದಿನದಿಂದ ದಿನಕ್ಕೆ ಈ ನೀರಿನಲ್ಲಿ ಸೊಳ್ಳೆಗಳು ಹೆಚ್ಚಾಗುತ್ತಿದ್ದು, ಸಾಂಕ್ರಾಮಿಕ ರೋಗದ ಭೀತಿಯೂ ಶುರುವಾಗಿದೆ. ಜೊತೆಗೆ, ಈ ಉದ್ಯಾನವನ ಸರಿಯಾದ ನಿರ್ವಹಣೆ ಇಲ್ಲದೆ ಅಶುಚಿತ್ವ ತಾಂಡವವಾಡುತ್ತಿದೆ. ಹೀಗಾಗಿ, ಸಂಬಂಧಪಟ್ಟವರು ಇನ್ನಾದರೂ ಎಚ್ಚೆತ್ತು ಅಲ್ಲಿನ ಒಳಚರಂಡಿ ಸಂಸ್ಕರಣಾ ಘಟಕವನ್ನು ತುರ್ತಾಗಿ ದುರಸ್ತಿಗೊಳಿಸಿ, ಉದ್ಯಾನವನದ ಹೊರಗಡೆ ವ್ಯವಸ್ಥಿತವಾಗಿ ಈ ಘಟಕದ ಸಂಪರ್ಕ ಕಲ್ಪಿಸಿ, ಇಲ್ಲಿನ ನಿವಾಸಿಗಳಿಗೆ ಆಗುತ್ತಿರುವ ತೊಂದರೆಯನ್ನು ತಪ್ಪಿಸಬೇಕಿದೆ.

– ಬಿ.ಗಣೇಶ್, ಕೆ.ಜಿ.ಕೊಪ್ಪಲು, ಮೈಸೂರು.

ಗ್ರಂಥಾಲಯದ ಶೌಚಾಲಯ ಸ್ವಚ್ಛಗೊಳಿಸಿ



ಮಾನ್ಯರೆ,

ಮೈಸೂರಿನ ಸರಸ್ವತಿಪುರಂನಲ್ಲಿರುವ ಸಾರ್ವಜನಿಕ ಗ್ರಂಥಾಲಯದ ಶೌಚಾಲಯದ ಪರಿಸ್ಥಿತಿ ಇದು. ಈ ಶೌಚಾಲಯವನ್ನು ಸ್ವಚ್ಛಗೊಳಿಸಿ ತುಂಬಾ ವರ್ಷಗಳೇ ಕಳೆದಂತೆ ಕಾಣುತ್ತಿದೆ. ಶೌಚಾಲಯವನ್ನು ಸ್ವಚ್ಛಗೊಳಿಸಿ ಎಂದು ಗ್ರಂಥಾಲಯದವರನ್ನು ಕೇಳಿದರೂ ಇದಕ್ಕೆ ಸ್ಪಂದಿಸುತ್ತಿಲ್ಲ. ಈ ಗ್ರಂಥಾಲಯ ಸರಸ್ವತಿಪುರಂ ಪಾರ್ಕಿನಲ್ಲಿದ್ದು, ಪಾರ್ಕಿಗೆ ಬೆಳಗಿನ ಜಾವ ಹಿರಿಯರು, ಯುವಕರು ಹಾಗೂ ಜೆಎಸ್‌ಎಸ್ ಕಾಲೇಜಿನ ವಿದ್ಯಾರ್ಥಿಗಳು ಬಂದು ಕುಳಿತುಕೊಳ್ಳುತ್ತಾರೆ. ಅಲ್ಲದೆ ಗ್ರಂಥಾಲಯಕ್ಕೆ ನೂರಾರು ಓದುಗರು ಬರುತ್ತಾರೆ. ಈ ಶೌಚಾಲಯದಿಂದ ದುರ್ವಾಸನೆ ಬರುತ್ತಿದ್ದು, ಓದುಗರು ಈ ವಾಸನೆಯಿಂದಲೇ ಓದುವಂತಹ ಪರಿಸ್ಥಿತಿ ಇದೆ. ಅಲ್ಲದೆ ಸಾಂಕ್ರಾಮಿಕ ರೋಗಗಳು ಹರಡುವ ಭಯದಲ್ಲಿ ಗ್ರಂಥಾಲಯಕ್ಕೆ ಬರಬೇಕಾಗಿದೆ. ಈ ಸಂಬಂಧ ಅಧಿಕಾರಿಗಳಿಗೆ ಹೇಳಿದರೂ ಯಾರೂ ಕ್ರಮ ತೆಗೆದುಕೊಂಡಿರುವುದಿಲ್ಲ. ದಯವಿಟ್ಟು ಸಂಬಂಧಪಟ್ಟ ಅಧಿಕಾರಿಗಳು ಇತ್ತ ಗಮನಹರಿಸಿ ಶೌಚಾಲಯವನ್ನು ದುರಸ್ತಿಗೊಳಿಸಿ ಸಾರ್ವಜನಿಕರು ಮತ್ತು ಓದುಗರಿಗೆ ಅನುಕೂಲ ಮಾಡಿಕೊಡಬೇಕೆಂದು ಈ ಮೂಲಕ ಮನವಿ.

– ನೊಂದ ಓದುಗರು, ಸರಸ್ವತಿಪುರಂ, ಮೈಸೂರು.

ಪ್ರಯಾಣಿಕರ ಜೇಬಿಗೆ ಕತ್ತರಿ ಹಾಕುವುದನ್ನು ತಪ್ಪಿಸಲಿ

ಮಾನ್ಯರೆ,

ದಿ.17.02.25 ರಂದು ಬೆಳಿಗ್ಗೆ ಹತ್ತು ಗಂಟೆಯ ಸುಮಾರಿಗೆ ಹೆಚ್.ಡಿ. ಕೋಟೆಯಿಂದ ಗುಂಡ್ಲುಪೇಟೆ ಕಡೆಗೆ ಹೊರಡುವ ಕೆಎಸ್‌ಆರ್‌ಟಿಸಿ ಬಸ್‌ನಲ್ಲಿ ಕೋಟೆ ಪಕ್ಕದ ಹ್ಯಾಂಡ್‌ಪೋಸ್ಟ್‌ಗೆ ಪ್ರಯಾಣ ಬೆಳೆಸಿದಾಗ ಹನ್ನೆರಡು ರೂಪಾಯಿ ಟಿಕೆಟ್ ನೀಡಲಾಯಿತು. ಆ ಬಸ್ ಗುಂಡ್ಲುಪೇಟೆ ಡಿಪೋಗೆ ಸೇರಿದ ಬಸ್ಸಂತೆ. ಅದೇ ಕೆಎಸ್‌ಆರ್‌ಟಿಸಿಯ ಬೇರೆ ಬಸ್‌ಗಳಲ್ಲಿ ಆರು ರೂಪಾಯಿಗಳು. ಕಂಡಕ್ಟರ್ ಕೇಳಿದರೆ, ಅದು ಅಷ್ಟೇ ಫೀಡ್ ಆಗಿರೋದು ಎಂಬ ಉತ್ತರ. ಹಾಗಾದರೆ ಈ ರೀತಿ 'ಫೀಡ್' ಆಗೋಕೆ ಕಾರಣ ಯಾರು? ಈ ಅಧ್ವಾನಕ್ಕೆ ಕಾರಣರಾಗಿರುವ ಅಧಿಕಾರಿಗಳು ಯಾರೆಂದು ಕಂಡುಹಿಡಿದು ಸಂಬಂಧಪಟ್ಟವರು ಸೂಕ್ತ ಶಿಸ್ತುಕ್ರಮ ಜರುಗಿಸಿ ಬಡ ಪ್ರಯಾಣಿಕರ ಜೇಬಿಗೆ ಕತ್ತರಿ ಹಾಕುವುದನ್ನು ತಪ್ಪಿಸಲಿ.

–ರಾಜಶೇಖರ ಮೂರ್ತಿ, ಬೆಳಗನಹಳ್ಳಿ, ಹೆಚ್ ಡಿ ಕೋಟೆ ತಾ.

ವಿಶ್ವವಿದ್ಯಾಲಯಗಳ ಮುಚ್ಚುವ ನಿರ್ಧಾರ ಸೂಕ್ತ

ಮಾನ್ಯರೆ,

ರಾಜ್ಯದಲ್ಲಿ ಬಿಜೆಪಿ ಸರ್ಕಾರದ ಅವಧಿಯಲ್ಲಿ ಆರಂಭಿಸಿದ್ದ 10 ಹೊಸ ವಿಶ್ವವಿದ್ಯಾಲಯಗಳ ಪೈಕಿ ಬೀದರ್ ಹೊರತುಪಡಿಸಿ ಉಳಿದ 9 ವಿಶ್ವ ವಿದ್ಯಾಲಯಗಳನ್ನು ಮುಚ್ಚಲು ರಾಜ್ಯ ಸಚಿವ ಸಂಪುಟ ಉಪ ಸಮಿತಿ ತೀರ್ಮಾನಿಸಿದೆ ಎಂಬ ನಿರ್ಧಾರ ಸರಿಯಾಗಿಯೇ ಇದೆ. ವಿಶ್ವವಿದ್ಯಾಲಯಗಳಿಗೆ ಹೋಲಿಸಿದರೆ, ಬೀದರ್ ವಿಶ್ವವಿದ್ಯಾಲಯ 150 ಸಂಯೋಜಿತ ಕಾಲೇಜುಗಳನ್ನು ಹೊಂದಿದ್ದು, ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿದೆ.

ಇನ್ನುಳಿದಂತೆ ಹಾಸನ ಚಾಮರಾಜನಗರ, ಹಾವೇರಿ, ಕೊಡಗು, ಕೊಪ್ಪಳ, ಬಾಗಲಕೋಟೆ, ಮಹಾರಾಣಿ ಕ್ಲಸ್ಟರ್, ಮಂಡ್ಯ ಹಾಗೂ ನೃಪತುಂಗ ವಿಶ್ವವಿದ್ಯಾಲಯದ ವಿದ್ಯಾಲಯಗಳು ಸುಗಮವಾಗಿ ನಡೆಯಲು ಸಂಯೋಜಿತ ಕಾಲೇಜುಗಳ ಶುಲ್ಕ ಮುಖ್ಯ. ಬಹುತೇಕ ವಿಶ್ವವಿದ್ಯಾಲಯಗಳ ಕುಲಪತಿಗಳಿಗೆ ವಾಹನ ಖರೀದಿಸಲು ಸಾಧ್ಯವಾಗದ ಅಸಹಾಯಕ ಸ್ಥಿತಿಯೂ ನಿರ್ಮಾಣವಾಗಿದೆ ಎಂಬ ವಿಚಾರವಿದೆ. ಅಲ್ಲದೇ ಹೊಸ ವಿಶ್ವವಿದ್ಯಾಲಯಗಳನ್ನು ನಡೆಸಲು ಅಗತ್ಯವಿರುವ ಹಣಕಾಸಿನ ಮೊತ್ತ ಮತ್ತು ವಿಶ್ವವಿದ್ಯಾಲಯಗಳ ಸ್ಥಾಪನೆಗೆ ಬೇಕಾಗಿರುವ ಜಮೀನು, ಬೋಧಕ ಮತ್ತು ಬೋಧಕೇತರ ಸಿಬ್ಬಂದಿಯ ವೇತನ, ಮೂಲಸೌಕರ್ಯ, ಸಲಕರಣೆಗಳು, ವಾಹನಗಳು, ಪೀಠೋಪಕರಣ ಮತ್ತು ಇತರೆ ವಸ್ತುಗಳನ್ನು ಖರೀದಿಸಲು ಅಗತ್ಯವಾದ ಸಿದ್ಧತೆಯಿಲ್ಲದೇ ಪ್ರಾರಂಭವಾದ ಈ ವಿಶ್ವವಿದ್ಯಾಲಯಗಳು ಇಂದು ಮುಚ್ಚುವ ಸ್ಥಿತಿಗೆ ಬಂದು ನಿಂತಿವೆ.

ಸೂಕ್ತ ವಿದ್ಯಾರ್ಥಿಗಳು ಹಾಗೂ ಮೂಲಸೌಕರ್ಯಗಳ ಕೊರತೆಯಿಂದ ಬಳಲುತ್ತಿರುವ ನೂತನ ವಿಶ್ವವಿದ್ಯಾಲಯಗಳನ್ನು ನಡೆಸಿ ಮಕ್ಕಳ ಶೈಕ್ಷಣಿಕ ಬದುಕಿಗೆ ಧಕ್ಕೆ ತರುವುದಕ್ಕಿಂತ ಸಮೀಪದ ವಿಶ್ವವಿದ್ಯಾಲಯಗಳಿಗೆ ವಿಲೀನಗೊಳಿಸುವ ಸರ್ಕಾರದ ನಿರ್ಧಾರ ಹೆಚ್ಚು ಸೂಕ್ತವಾಗಿದೆ.

–ಹರಳಹಳ್ಳಿ ಪುಟ್ಟರಾಜು, ಪಾಂಡವಪುರ.



ಡಾ. ಹೆಚ್.ವಿ. ನಾಗರಾಜ ರಾವ್
ಮೈಸೂರು.

ಸಂಸ್ಕೃತಿ ಚಿಂತನಾ

ಕಗ್ಗದಲ್ಲಿ ಶಿವತತ್ತ್ವ

ವೇದಗಳಲ್ಲಿ ಶಿವನ ವರ್ಣನೆ ಮತ್ತು ಸ್ತುತಿಯೂ ಕಂಡು ಬರುತ್ತದೆ. ಒಂದೇ ದೈವದ ಸೌಮ್ಯ ರೂಪವನ್ನೂ ಉಗ್ರ ರೂಪವನ್ನೂ ಅಲ್ಲಿ ಋಷಿಗಳು ಕಂಡು ಬೆರಗನ್ನು ಸೂಚಿಸಿದ್ದಾರೆ. ಸೌಮ್ಯ ರೂಪದಲ್ಲಿ ಆ ದೈವವೇ ಶಿವ, ಉಗ್ರರೂಪದಲ್ಲಿ ಅವನೇ ರುದ್ರ.

ನಮಸ್ತೇ ರುದ್ರ ಮನ್ಯವ ಉತೋತ ಇಷವೇ ನಮಃ।
ನಮಸ್ತೇ ಅಸ್ತು ಧನ್ವನೇ ಬಾಹುಭ್ಯಾಮುತ ತೇ ನಮಃ॥

(ರುದ್ರನೇ, ನಿನ್ನ ಕೋಪಕ್ಕೆ ನಮಸ್ಕಾರ, ಮತ್ತೆ ನಿನ್ನ ಬಾಣಕ್ಕೆ, ನಿನ್ನ ಧನುಸ್ಸಿಗೆ, ನಿನ್ನ ಎರಡು ಬಾಹುಗಳಿಗೆ ನಮ್ಮ ಮನಸ್ಕಾರ) ಎಂದು ಹೇಳುವಂತೆಯೇ–

'ನಮಃ ಶಿವಾಯ ಚ ಶಿವತರಾಯ ಚ' ಎಂದು ಆ ಭಗವಂತನ ಶಾಂತಿಮಯ ಮಂಗಳ ರೂಪಕ್ಕೂ ಆ ಋಷಿಗಳು ನಮಸ್ಕಾರವನ್ನು ಸಲ್ಲಿಸಿದ್ದಾರೆ. ಆ ಶಿವನು ವೃಷಭವಾಹನ–ವೃಷಭ ಧರ್ಮದ ಸಂಕೇತ. ಜಗತ್ತನ್ನು ಸುಸ್ಥಿತಿಯಲ್ಲಿ ಕೊಂಡೊಯ್ಯಲು ಬೇಕಾದ ಧರ್ಮವೇ ಭಗವಂತನನ್ನು ಭಕ್ತರ ಬಳಿಗೆ ತರುವ ವಾಹನವೆಂಬುದು ಸಂಕೇತಾರ್ಥ. ಆ ಶಿವನೇ ಮಹೇಶ್ವರ, ಪರಮೇಶ್ವರ. ಅವನೇ ಜಗತ್ ಸೃಷ್ಟಿಕಾಲದಲ್ಲಿ ಚತುರ್ಮುಖ ಬ್ರಹ್ಮ, ಪಾಲನಕಾಲದಲ್ಲಿ ಮಹಾವಿಷ್ಣು, ಪ್ರಳಯ ಕಾಲದಲ್ಲಿ ಉಗ್ರರೂಪದ ರುದ್ರ. ಸೌಮ್ಯರೂಪದ ಶಿವ ಅನುರಾಗಪ್ರಧಾನನಾಗಿ ಶಿವೆಯೊಡನೆ ಅವಿನಾಭಾವವನ್ನು ಹೊಂದಲು ಅರ್ಧ ನಾರೀಶ್ವರನಾಗಿರುವುದೂ ನಿಜ, ತಪೋನಿರತನಾಗಿದ್ದಾಗ ತಪೋಭಂಗವನ್ನು ಮಾಡಲು ಬಂದ ಕಾಮನನ್ನು ಮೂರನೆಯ ಕಣ್ಣಿನಿಂದ ಭಸ್ಮ ಮಾಡಿದುದೂ ನಿಜ. ಶಿವನ ಎರಡು ಕಣ್ಣುಗಳು ಸೂರ್ಯ ಚಂದ್ರರು. ಅವರಿಂದ ಜಗತ್ತನ್ನು ಪಾಲಿಸಿ ಪೋಷಿಸುವವನೂ ಶಿವನೇ. ಇದನ್ನೆಲ್ಲ ಗಮನಿಸಿ ಡಿವಿಜಿ ಬರೆಯುತ್ತಾರೆ –

ನಯನಯುಗದಿಂ ಜಗವ ಪೊರೆದು, ನಿಟಲಾಕ್ಷಿಯಿಂ
ಲಯವಡಿಸುವುದದೇನು ಶಿವಯೋಗಲೀಲೆ?
ಜಯಿಸಿ ಮದನನ ಬಳಿಕ ತನ್ನೊಡಲೊಳ ಉಮೆಯನ
ನ್ವಯಿಸಿಕೊಂಡಿಹುದೇನು? ಮಂಕುತಿಮ್ಮ ॥

ನಯನಯುಗಲ ಎಂದರೆ ಎರಡು ಕಣ್ಣುಗಳು. ಅಂದರೆ ಸೂರ್ಯ ಮತ್ತು ಚಂದ್ರ. ಅವರಿಂದ ಪ್ರಪಂಚವನ್ನು ಕಾಪಾಡಿದ್ದಾನೆ ಶಿವ. ಆಮೇಲೆ ನಿಟಿಲ ಎಂದರೆ ಹಣೆ. ಅಲ್ಲಿರುವ ಅಕ್ಷಿಯಿಂದ, ಹಣೆಗಣ್ಣಿನಿಂದ ಲಯವನ್ನು – ಅಗ್ನಿಪ್ರಳಯವನ್ನು ಅಳವಡಿಸುವುದು ಶಿವನ ಯೋಗಲೀಲೆ. ಹಳೆಯದನ್ನು ಕೆಡವದೆ ಹೊಸದನ್ನು ಸೃಷ್ಟಿಸಲಾಗದು.

ಸೃಷ್ಟಿ ಪ್ರಳಯಗಳು ಭಗವಂತನ ಯೋಗ ಲೀಲೆ. ಆ ಶಿವನು ಕಾಮನನ್ನು ಸುಟ್ಟು ಬೂದಿ ಮಾಡಿದ ಮೇಲೆ ಪಾರ್ವತಿಯನ್ನು ತನ್ನ ಒಡಲಿನಲ್ಲಿ ಅನ್ವಯಿಸಿಕೊಂಡು, ಅರ್ಧನಾರೀಶ್ವರನಾದ. ವಿರುದ್ಧವಾದುವೂ ಭಗವಂತನಲ್ಲಿ ಅವಿರುದ್ಧವಾಗುತ್ತವೆ. ಇದನ್ನೇ ಕಾಳಿದಾಸನು ತನ್ನ ಮಾಲವಿಕಾಗ್ನಿಮಿತ್ರದ ಮೊದಲನೆಯ ನಾಂದೀಪದ್ಯದಲ್ಲಿ ಹೇಳಿದ್ದಾನೆ–

ಏಕೈಶ್ವರ್ಯೇ ಸ್ಥಿತೋಽಪಿ ಪ್ರಣತ್‌ಬಹುಫಲೇ ಯಃ ಸ್ವಯಂ ಕೃತ್ತಿವಾಸಾಃ
ಕಾಂತಾಸಂಮಿಶ್ರದೇಹೋಽಪ್ಯ ವಿಷಯಮನಸಾಂ ಯಃ
ಪರಸ್ತಾದ್ ಯತೀನಾಮ್ ।
ಅಷ್ಟಾಭಿರ್ಯಸ್ಯ ಕೃತ್ಸ್ನಂ ಜಗದಪಿ ತನುಭಿರ್ಬಿಭ್ರತೋ ನಾಭಿಮಾನಃ
ಸನ್ಮಾರ್ಗಾಲೋಕನಾಯ ವ್ಯಪನಯತು ಸವಸ್ತಾಮಸೀಂ ವೃತ್ತಿಮೀಶಃ॥

ಶಿವನು ಭಕ್ತರಿಗೆ ಬೇಕಾದ ಫಲಗಳನ್ನು ಕೊಡುವುದರಲ್ಲಿ ಸ್ವತಂತ್ರ. ಅವರು ಕೇಳಿದುದನ್ನೆಲ್ಲ ಉದಾರವಾಗಿ ಕೊಡುತ್ತಾನೆ. ಆದರೆ ತಾನು ಮಾತ್ರ ಚರ್ಮಾಂಬರ. ಕಾಂತೆಯನ್ನು ಬಿಟ್ಟಿರಲಾರದೆ ದೇಹದಲ್ಲೇ ಅವಳನ್ನು ಸೇರಿಸಿಕೊಂಡಿರುವ ಪ್ರೇಮಿ ಶಿವ. ಆದರೂ ಜಿತೇಂದ್ರಿಯರಾದ ಯತಿಗಳಿಗೂ ಶಿವನೇ ಪರದೈವ. ಪೃಥ್ವೀ, ಜಲ, ಅಗ್ನಿ, ವಾಯು, ಆಕಾಶ, ಸೂರ್ಯ, ಚಂದ್ರ, ಜೀವಾತ್ಮ ಎಂಬ ಎಂಟು ಮೂರ್ತಿಗಳಿಂದ ಶಿವನೇ ಸಕಲ ಜಗತ್ತನ್ನು ಭರಿಸಿದ್ದಾನೆ. ಆದರೂ ಅವನಿಗೆ ದುರಭಿಮಾನವಿಲ್ಲ. ಇಂತಹ ಸರ್ವವ್ಯಾಪಿ ಶಿವನು ಸನ್ಮಾರ್ಗವನ್ನು ನಾವು ನೋಡುವಂತೆ ಆಗಲು ನಮ್ಮ ತಾಮಸವೃತ್ತಿಯನ್ನು ತೊಲಗಿಸಲಿ ಎಂದು ಈ ಪದ್ಯದ ಅಭಿಪ್ರಾಯ. ಇದು ಕಗ್ಗದ ಪದ್ಯದಲ್ಲಿ ಪ್ರತಿಬಿಂಬಿತ.

ಶಿವನ ಮಹಿಮೆಯನ್ನು ಕಾಮದಹನ ಪ್ರಕರಣದಿಂದಲೇ ವರ್ಣಿಸುವ ಇನ್ನೊಂದು ಪದ್ಯ ಕಗ್ಗದಲ್ಲಿದೆ–

ಮಾರನಂ ದಂಡಿಸಿರೆ ಗೌರಿಯಿಂದ ಭಯವೇನು?
ಚಾರು ಸಹಕಾರಿಯವಳೆಂದು ಶಿವನೊಲಿದನ್ ।
ಮೀರೆ ಮೋಹವನು ಸಂಸಾರದಿಂದ ಭಯವೇನು?
ದಾರಿ ಕೆಳೆಯದು ನಿನಗೆ ಮಂಕುತಿಮ್ಮ॥

ಮಾರ ಎಂದರೆ ಮನ್ಮಥ. ಅವನನ್ನು ದಂಡಿಸಿ ಸುಟ್ಟು ಹಾಕಿದ ಶಿವನಿಗೆ ಗೌರಿಯಿಂದ ಭಯ ಏಕೆ? ಭಯಕ್ಕೆ ಕಾರಣವೇ ಇಲ್ಲ. ಅವಳು ತ್ರಿಲೋಕ ಸುಂದರಿಯಾದರೂ ಅವನು ವಿಚಲಿತನಾಗುವ ಸಂಭವವೇ ಇಲ್ಲ. ಹಾಗಾದರೆ ಅವನು ಅವಳನ್ನು ವರಿಸಿದ್ದೇಕೆ? ಅವಳ ತಪಸ್ಸನ್ನೂ ಭಕ್ತಿಯನ್ನೂ ಮೆಚ್ಚಿ ಅವನು ಒಲಿದನು. ಆ ಒಲವು ಮೋಹದಿಂದ ಹುಟ್ಟಿದುದಲ್ಲ. ಭಕ್ತಿ ಪರವಶತೆಯಿಂದ ಹುಟ್ಟಿದುದು. ಮೋಹವನ್ನು ಮೀರಿದವನಿಗೆ ಸಂಸಾರದಿಂದ ಭಯವಿಲ್ಲ. ಆ ಸಂಸಾರ ಮುಕ್ತಿಗೆ ಗೆಳೆಯನಾಗುತ್ತದೆ. ಮೋಹಕ್ಕೆ ಭಯಪಡಬೇಕೇ ವಿನಾ ಸಂಸ್ಕಾರಕ್ಕಲ್ಲ.

ರೌದ್ರ ಗುಣವನ್ನುಳ್ಳ ರುದ್ರನೂ ಶಾಂತಿಸ್ವರೂಪನಾದ ಶಿವನೂ ಒಬ್ಬನೇ ಆಗಿರುವುದು ಹೇಗೆ? ವೇದಗಳೂ ಹೇಳುತ್ತಿವೆ–

ಅಘೋರೇಭ್ಯೋಽಥ ಘೋರೇಭ್ಯೋ ಘೋರ ಘೋರತರೇಭ್ಯಃ।
ಸರ್ವೇಭ್ಯಃ ಸರ್ವಸರ್ವೇಭ್ಯೋ ನಮಸ್ತೇಽಸ್ತು ರುದ್ರರೂಪೇಭ್ಯಃ॥

"ಘೋರವಲ್ಲದ (ಎಂದರೆ ಶಾಂತವಾದ), ಘೋರವಾದ, ಘೋರಕ್ಕಿಂತಲೂ ಘೋರವಾದ, ಎಲ್ಲವೂ ಆಗಿರುವ, ಎಲ್ಲಕ್ಕೂ ಭಿನ್ನವಾಗಿದ್ದೂ ಸಮಸ್ತವಾಗಿರುವ ರುದ್ರನ ರೂಪಗಳಿಗೆ ನಮಸ್ಕಾರ"

ಸಕಲ ಜಗತ್ತೂ ರುದ್ರನ ರೂಪಗಳೇ. ಅಲ್ಲಿ ಹುಲಿಯೂ ಇದೆ. ಹುಲ್ಲೆಯೂ ಇದೆ. ಆನೆಯೂ ಇದೆ. ಸಿಂಹವೂ ಇದೆ. ಜಿಂಕೆಗಳಿಗೆ ರುದ್ರರೂಪಿಯಾಗಿರುವ ಹುಲಿ ತನ್ನ ಮರಿಗಳಿಗೆ ಶಾಂತರೂಪದಲ್ಲಿದೆ. ಒಬ್ಬನೇ ದೇವನು ನಾನಾ ರೂಪಗಳಲ್ಲಿ, ಅವು ಪರಸ್ಪರ ವಿರೋಧಿಗಳು ಆಗಿದ್ದರೂ, ಇರಬಲ್ಲನಲ್ಲವೆ? ಇದನ್ನು ಡಿವಿಜಿ ಹೇಳುತ್ತಾರೆ –

ಶ್ಯಾಮಸುಂದರನವನೆ ಚಕ್ರಿನರಹರಿಯಂತೆ
ಸೋಮಶೇಖರನೆ ಭೈರವರುದ್ರನಂತೆ
ಹೈಮಾವತಿ ಶಿವತಾನೆ ಕಾಳಿಚಂಡಿಕೆಯಂತೆ
ಪ್ರೇಮಘೋರಗಳೊಂದೆ ಮಂಕುತಿಮ್ಮ ।

ಶ್ರೀ ಕೃಷ್ಣನು ಶ್ಯಾಮಸುಂದರ. ಅತ್ಯಂತ ಮನೋಹರ, ಗೋಪಿಕೆಯರ ಜೊತೆಯಲ್ಲಿ ರಾಸನೃತ್ಯದಲ್ಲಿ ಲಾಸ್ಯವಾಡುತ್ತಾನೆ. ವೇಣುಗಾನವನ್ನು ಮಾಡುತ್ತಾನೆ. ಕರ್ಣಾನಂದಕರವಾಗಿ ಹಾಡುತ್ತಾನೆ. ಪ್ರೇಮದಿಂದ ನೋಡುತ್ತಾನೆ. ಆ ಕೃಷ್ಣನೇ ಶಿಶುಪಾಲನನ್ನು ಕೊಲ್ಲುವಾಗ ಚಕ್ರಧಾರಿಯಾಗುತ್ತಾನೆ. ಹಿರಣ್ಯ ಕಶಿಪುವನ್ನು ಕೊಲ್ಲುವಾಗ ನರಸಿಂಹನಾಗಿ ಗರ್ಜಿಸುತ್ತಾನೆ. ಹಾಗೆ ಶಿವನು ಚಂದ್ರನನ್ನು ಧರಿಸಿ ತಂಪಾಗಿ ಜಗತ್ತನ್ನು ಕಾಪಾಡುತ್ತಾನೆ. ಅವನೇ ಪ್ರಳಯ ಕಾಲದಲ್ಲಿ ಭೈರವರುದ್ರನಾಗಿ ತಾಂಡವವನ್ನು ಆರಂಭಿಸುತ್ತಾನೆ. ಹಿಮಾದ್ರಿಸುತೆ ಪಾರ್ವತಿಯೇ ಕಾಳಿಯೂ ಚಂಡಿಯೂ ಆಗಿ ಮಹಿಷಾಸುರಮರ್ದಿನಿ ಯಾಗುತ್ತಾಳೆ. ಆದ್ದರಿಂದ ಡಿವಿಜಿ ಅವರ ನಿರ್ಣಯ 'ಪ್ರೇಮ ಘೋರಗಳೊಂದೇ' ಶಾಂತವೂ ಘೋರವೂ ಒಟ್ಟಿಗಿರಬಹುದು, ಶಿವನೇ ರುದ್ರನೂ ಆಗಬಹುದು. ಇದನ್ನೇ ಕಗ್ಗದ ಇನ್ನೊಂದು ಪದ್ಯ ವಿವರಿಸಿದೆ–

ಗಗನ ತಲೆನವಿರಾಗೆ ಪೆರೆತಾರೆ ಹೂವಾಗೆ
ಜಗವೆಲ್ಲ ವಪುವಾಗೆ ಮಾಯೆ ಸತಿಯಾಗೆ
ನಗುನಗುವ ಬೊಬ್ಬಿಡುವ ಜೀವತಾಂಡವರಸಿಕ
ಭಗವಂತ ಶಿವರುದ್ರ ಮಂಕುತಿಮ್ಮ ॥

ಗಗನ ಎಂದರೆ ಆಕಾಶ. ಅದು ತಲೆಯ ನವಿರು ಎಂದರೆ ಕೂದಲು. ಆಕಾಶವನ್ನೇ ತಲೆಗೂದಲನ್ನಾಗಿ ಮಾಡಿಕೊಂಡವನು ಶಿವ. ಆದ್ದರಿಂದಲೇ ಅವನಿಗೆ ವ್ಯೋಮಕೇಶ ಎಂಬ ಹೆಸರು (ವ್ಯೋಮ=ಗಗನ) ಪೆರೆ ಎಂದರೆ ಚಂದ್ರ–ಚಂದ್ರನೂ ನಕ್ಷತ್ರಗಳೂ ಶಿವನು ಮುಡಿದಿರುವ ಹೂಗಳು. ಜಗತ್ತೆಲ್ಲ ಶಿವನ ದೇಹ. ಮಾಯೆಯೇ ಅವನ ಸತಿ. ಅಂತಹ ಶಿವನ ಅಟ್ಟಹಾಸ ಜಗದಲ್ಲಿ ತುಂಬಿದೆ. ಶಿವನೂ ರುದ್ರನೂ ಆಗಿರುವ ಭಗವಂತ ಜೀವತಾಂಡವದ ರಸಿಕ. ಇದೊಂದು ಪೂರ್ಣ ಅಥವಾ ಸಾವಯವ ರೂಪಕ.

ಭಗವದ್ಗೀತೆಯಲ್ಲಿ ಭಗವಾನ್ ಕೃಷ್ಣನು ಹೇಳಿದ್ದಾನೆ – 'ಮತ್ತಃ ಸ್ಮೃತಿಜ್ಞಾನಮಪೋಹನಂಚ' ಎಂದು, ನೆನಪು, ಮರೆವು ಉಂಟಾಗುವುದು. ನನ್ನ ಮಹಿಮೆಯಿಂದಲೇ ಎಂದು ಆ ಮಾತಿನ ಅರ್ಥ. ಆ ನೆನಪಿನಂತೆ ಮರೆವೂ ಒಂದು ವರ. ಅದನ್ನು ದಾರ್ಶನಿಕ ಕವಿ ಡಿವಿಜಿ ಹೀಗೆಂದಿದ್ದಾರೆ –

ರವಿ ನಿಲದೆ ಸುತ್ತುತ್ತಿರೆ ಕೊರಗು ಕಳವಳವೇಕೊ?
ಸವೆಯಿಸುತಲೆಲ್ಲವನು ಕಡೆಗೊಯ್ವನವನು।
ಕವಳಿಸುವುದೆಲ್ಲವನು ಮರೆವು ಬಾಳಲದೊಂದು
ಶಿವಕೃಪೆಯ ಲಕ್ಷಣವೊ ಮಂಕುತಿಮ್ಮ ॥

ಸೂರ್ಯನು ಒಂದು ಕ್ಷಣದ ವಿರಾಮವೂ ಇಲ್ಲದೆ ಸುತ್ತಬೇಕು. ಅಯ್ಯೋ ಪಾಪ ಎಂದು ನಾವು ಕೊರಗುವುದು ಬೇಡ. ಆ ಬಗೆಗೆ ಕಳವಳ ಅನವಶ್ಯಕ. ಜಗತ್ತಿನ ಪ್ರತಿಯೊಂದು ವಸ್ತುವನ್ನೂ ಸವೆಯಿಸುತ್ತಾ ಸೂರ್ಯನು ಕಡೆಗೊಯ್ವನು. ಎಲ್ಲ ಚಿಂತೆಗಳನ್ನೂ ನೋವುಗಳನ್ನೂ ನಮ್ಮ ಮರೆವು ಕವಳಿಸುತ್ತದೆ, ನುಂಗಿ ಹಾಕುತ್ತದೆ. ಮಾನವ ಜೀವನದಲ್ಲಿ ಮರೆವು ಶಿವನ ಕೃಪೆಯ ಲಕ್ಷಣ. ಅದು ನಮಗೆ ಒಂದು ವರ. ಅದಿಲ್ಲದಿದ್ದರೆ ಜೀವನ ಯಾತನಾಮಯವಾಗಿರುತ್ತಿತ್ತು. ಶಿವನು ನಮಗೆ ಮರೆವಿನ ವರವನ್ನು ಕೊಟ್ಟು ಬದುಕು ಸಹ್ಯವಾಗುವಂತೆ ಮಾಡಿದ್ದಾನೆ.

ಇದು ಡಿವಿಜಿ ಕಂಡ ಶಿವನ ಮಹಿಮೆಯ ರೂಪ. ಶಿವರಾತ್ರಿಯ ಸಂದರ್ಭದಲ್ಲಿ ಶಿವನ ಇತರ ವರ್ಣನೆಗಳನ್ನು ಮುಂದೆ ನೋಡೋಣ.

ಶಿವರಾತ್ರಿ ನಮಗೆಲ್ಲ ಶುಭವನ್ನು ತರಲಿ
ಶಿವನ ರೂಪಗಳೆಲ್ಲ ಕಣ್ಣ ಮುಂದಿರಲಿ ।
ಅವನ ಮಹಿಮೆಯ ಲೇಶ ನಾವರಿತುಕೊಂಡರೆ
ಶ್ರವಣಸುಧೆ ತಾನಾಗಿ ನಮ್ಮ ಪೊರೆಯುವುದು॥

ವಿಕೆ ಪಬ್ಲಿಕ್ ಸ್ಕೂಲ್ ವಾರ್ಷಿಕೋತ್ಸವ



ಮೈಸೂರಿನ ವಿಜಯನಗರ 3ನೇ ಹಂತದಲ್ಲಿರುವ ವಿಕೆ ಪಬ್ಲಿಕ್ ಸ್ಕೂಲ್ ವಾರ್ಷಿಕೋತ್ಸವ ಸಮಾರಂಭದಲ್ಲಿ ಶಾಸಕ ಜಿ.ಟಿ.ದೇವೇಗೌಡ ಅವರನ್ನು ಆತ್ಮೀಯವಾಗಿ ಅಭಿನಂದಿಸಲಾಯಿತು.

ಮೈಸೂರು,ಫೆ.18–ಮೈಸೂರಿನ ವಿಜಯನಗರ 3ನೇ ಹಂತದಲ್ಲಿರುವ ವಿಕೆ ಪಬ್ಲಿಕ್ ಸ್ಕೂಲ್ ವಾರ್ಷಿಕೋತ್ಸವವನ್ನು ಶಾಲಾ ಆವರಣದಲ್ಲಿ ಆಚರಿಸಲಾಯಿತು.

ಮುಖ್ಯ ಅತಿಥಿಗಳಾಗಿದ್ದ ಶಾಸಕ ಜಿ.ಟಿ.ದೇವೇಗೌಡ ಮಾತನಾಡಿ, ಮಕ್ಕಳ ಸರ್ವಾಂಗೀಣ ಬೆಳವಣಿಗೆಗೆ ಶಾಲಾ ವಾರ್ಷಿಕೋತ್ಸವ ಮುಖ್ಯ ಪಾತ್ರ ವಹಿಸುತ್ತದೆ. ಪೋಷಕರು, ಶಿಕ್ಷಕರು ಮಕ್ಕಳಲ್ಲಿರುವ ಕಲೆಯನ್ನು ಗುರುತಿಸಿ ಹೊರತರಲು ಉತ್ತೇಜನ ನೀಡುವಂತೆ ಪ್ರೇರೇಪಿಸುತ್ತದೆ ಎಂದರು.

ಶಾಸಕ ಕೆ.ಹರೀಶ್‌ಗೌಡ ಮಾತನಾಡಿ, ಕೇವಲ 2 ವರ್ಷಗಳಲ್ಲಿ ಶಾಲೆ ನಡೆದು ಬಂದಂತಹ ಹಾದಿ ಅತ್ಯದ್ಭುತವಾಗಿದ್ದು, ಇದಕ್ಕಾಗಿ ಶ್ರಮಿಸಿದ ಎಲ್ಲರನ್ನೂ ಅಭಿನಂದಿಸಿದರು. ಮಾಜಿ ಸಚಿವ ಎಂ.ಶಿವಣ್ಣ, ವಿದ್ಯಾ ವಿಕಾಸ್ ಇಂಜಿನಿಯರಿಂಗ್ ಕಾಲೇಜು ಕಾರ್ಯದರ್ಶಿ ಕವೀಶ್‌ಗೌಡ, ಸಂಸ್ಥೆಯ ಕಾರ್ಯದರ್ಶಿ ರವಿಕುಮಾರ್, ಅಧ್ಯಕ್ಷ ಮಂಜುನಾಥ್, ಸದಸ್ಯರಾದ ಸುರೇಶ್‌ಬಾಬು, ಗೋವಿಂದರಾಜು, ಪ್ರೊ.ಮಹದೇವಪ್ಪ, ರಾಮನಾಯಕ್, ಲೋಬೋ ಇದ್ದರು.

ಮಕ್ಕಳಿಗೆ ನೀಡುತ್ತಿದ್ದ ಆಹಾರ ಪದಾರ್ಥ ಕದ್ದು ಮಾರಾಟ

ಹುಬ್ಬಳ್ಳಿಯಲ್ಲಿ 18 ಅಂಗನವಾಡಿ ಕಾರ್ಯಕರ್ತೆಯರ ಬಂಧನ

ಹುಬ್ಬಳ್ಳಿ,ಫೆ.18–ಅಂಗನವಾಡಿ ಮಕ್ಕಳಿಗೆ ವಿತರಿಸುವ ಪೌಷ್ಟಿಕ ಆಹಾರ ಪದಾರ್ಥಗಳನ್ನು ಅಕ್ರಮವಾಗಿ ಸಂಗ್ರಹಿಸಿ ಅವುಗಳನ್ನು ಸಾಗಾಟ ಮಾಡುತ್ತಿದ್ದ ಆರೋಪ ಸಂಬಂಧ 18 ಅಂಗನವಾಡಿ ಕಾರ್ಯಕರ್ತರು ಸೇರಿದಂತೆ ಒಟ್ಟು 26 ಜನರನ್ನು ಬಂಧಿಸಲಾಗಿದೆ. ಇನ್ನು ಇಬ್ಬರು ಪ್ರಮುಖ ಆರೋಪಿಗಳು ತಲೆಮರೆಸಿಕೊಂಡಿದ್ದಾರೆ ಎಂದು ಹುಬ್ಬಳ್ಳಿ–ಧಾರವಾಡ ಪೊಲೀಸ್ ಕಮಿಷನರ್ ಎನ್. ಶಶಿಕುಮಾರ್ ಮಾಹಿತಿ ನೀಡಿದ್ದಾರೆ.

4 ಲಕ್ಷ ಮೌಲ್ಯದ ಪೌಷ್ಟಿಕ ಆಹಾರ ಪದಾರ್ಥಗಳನ್ನು ಸಾಗಿಸುತ್ತಿದ್ದ ವಾಹನವನ್ನು ವಶಪಡಿಸಿಕೊಳ್ಳಲಾಗಿದೆ. ಗೋಧಿ ರವಾ, ಮಿಲೇಟ್ ಲಡ್ಡು, ಅಕ್ಕಿ, ಹಾಲಿನ ಪುಡಿ, ಸಾಂಬಾರ್ ಮಸಾಲಾ ಪುಡಿ, ಬೆಲ್ಲ, ಉಪ್ಪಿಟ್ಟು ಮಸಾಲಾ, ಸಕ್ಕರೆ, ಕಡಲೆಕಾಳು ಸೇರಿದಂತೆ ಇದರಲ್ಲಿ ಒಟ್ಟು 329 ಚೀಲಗಳಲ್ಲಿದ್ದ 8 ಟನ್ ಆಹಾರ ಪದಾರ್ಥಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದರು.

ಬಂಧಿತರನ್ನು, ಧಾರವಾಡದ ನರೇಂದ್ರ ಗ್ರಾಮದ ಬೊಲೆರೋ ವಾಹನ ಮಾಲೀಕ ಮಂಜುನಾಥ ದೇಸಾಯಿ, ಚಾಲಕ ಬಸವರಾಜ ಭದ್ರಶೆಟ್ಟಿ, ಗೋದಾಮು ಮಾಲೀಕ ಮೊಹ್ಮದ ಗೌಸ್ ಖಲೀಫಾ, ಗೌತಮಸಿಂಗ ಠಾಕೂರ್, ಮಂಜುನಾಥ ಮಾದರ, ಯರಗುಪ್ಪಿಯ ಫಕ್ಕಿರೇಶ ಹಲಗಿ, ಕೃಷ್ಣಾ ಮಾದರ, ರವಿ ಹರಿಜನ ಸೇರಿದಂತೆ 18 ಅಂಗನವಾಡಿ ಕಾರ್ಯಕರ್ತೆಯರನ್ನು ಬಂಧಿಸಲಾಗಿದೆ ಎಂದು ಶಶಿಕುಮಾರ್ ತಿಳಿಸಿದ್ದಾರೆ. ಆಹಾರ ಪದಾರ್ಥಗಳ ಅಕ್ರಮ ಸಂಗ್ರಹ ಹಾಗೂ ಮಾರಾಟ ಕುರಿತಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ನಿರೂಪಣಾ ಅಧಿಕಾರಿ ಕಸಬಾಪೇಟೆ ಠಾಣೆಯಲ್ಲಿ ದೂರು ದಾಖಲಿಸಿದ್ದರು.

ಹೀಗಾಗಿ ಖಚಿತ ಮಾಹಿತಿ ಆಧರಿಸಿ ಆಹಾರ ಪದಾರ್ಥಗಳನ್ನು ಸಾಗಿಸುತ್ತಿದ್ದಾಗ ದಾಳಿ ಮಾಡಿ ವಶಕ್ಕೆ ಪಡೆಯಲಾಗಿದೆ ಎಂದರು.

ಪೊಲೀಸರೇ ಅಪರಾಧ ಕೃತ್ಯಗಳಲ್ಲಿ ಭಾಗವಹಿಸುವುದನ್ನು ತಡೆಯಲು ತರಬೇತಿ ಹಂತದಲ್ಲೇ ಉತ್ತಮ ಪಾಠ

46ನೇ ತಂಡದ ಪೊಲೀಸ್ ಸಬ್‌ಇನ್‌ಸ್ಪೆಕ್ಟರ್ ಪ್ರಶಿಕ್ಷಣಾರ್ಥಿಗಳ ಬುನಾದಿ ತರಬೇತಿ ಉದ್ಘಾಟಿಸಿದ ಪೊಲೀಸ್ ತರಬೇತಿ ಕೇಂದ್ರದ ಎಡಿಜಿಪಿ ಅಲೋಕ್‌ಕುಮಾರ್

ಮೈಸೂರು, ಫೆ.18(ಜಿಎ)–ಕಳೆದ ನಾಲ್ಕೈದು ವರ್ಷದಿಂದ ಪೊಲೀಸರೇ ಅಪರಾಧ ಕೃತ್ಯಗಳಲ್ಲಿ ಭಾಗವಹಿಸಿ, ಬೇರೆಯವರ ಮುಂದೆ ಕೈಯೊಡ್ಡುವ ಪ್ರವೃತ್ತಿ ರೂಢಿಸಿಕೊಂಡಿರುವುದು ಕಂಡು ಬಂದಿರುವ ಹಿನ್ನೆಲೆಯಲ್ಲಿ ಅದನ್ನು ತಡೆಯಲು ತರಬೇತಿ ಹಂತದಲ್ಲೇ ಉತ್ತಮ ಪಠ್ಯಕ್ರಮವನ್ನು ಅಳವಡಿಸಲಾಗಿದೆ ಎಂದು ಪೊಲೀಸ್ ತರಬೇತಿ ಕೇಂದ್ರದ ಎಡಿಜಿಪಿ ಅಲೋಕ್ ಕುಮಾರ್ ತಿಳಿಸಿದರು.

ಮೈಸೂರಿನ ಕರ್ನಾಟಕ ಪೊಲೀಸ್ ಅಕಾಡೆಮಿಯಲ್ಲಿ ಮಂಗಳವಾರ ಆಯೋಜಿಸಿದ್ದ 46ನೇ ತಂಡದ ಪೊಲೀಸ್ ಸಬ್ ಇನ್‌ಸ್ಪೆಕ್ಟರ್ ಪ್ರಶಿಕ್ಷಣಾರ್ಥಿಗಳ ಬುನಾದಿ ತರಬೇತಿ ಉದ್ಘಾಟಿಸಿ ಮಾತನಾಡಿದ ಅವರು, ಪೊಲೀಸ್ ತರಬೇತಿ ನಂತರ ಉತ್ತಮ ಪೊಲೀಸ್ ಆಗುವ ಬದಲು ಹಣ ಮಾಡಬೇಕು ಎಂಬ ಆಸೆಯಿಂದ ಇತ್ತೀಚೆಗೆ ಪೊಲೀಸರೇ ಅಪರಾಧ ಕೃತ್ಯಗಳಲ್ಲಿ ಭಾಗವಹಿಸಿದ ಘಟನೆಗಳು ನಡೆಯುತ್ತಿವೆ. ಅವನ್ನು ತಡೆಯಲು ಹಳೆಯ ಕಥೆಗಳನ್ನು ತಿಳಿಸದೆ, ಪ್ರಸ್ತುತ ನಡೆಯುತ್ತಿರುವ ವಿದ್ಯಮಾನಗಳ ಬಗ್ಗೆ ಪ್ರಶಿಕ್ಷಣಾರ್ಥಿಗಳಿಗೆ ಬೋಧಿಸಲು ಉದ್ದೇಶಿಸಲಾಗಿದೆ ಎಂದರು.



ಮೈಸೂರಿನ ಕರ್ನಾಟಕ ಪೊಲೀಸ್ ಅಕಾಡೆಮಿಯಲ್ಲಿ ಆಯೋಜಿಸಿದ್ದ 46ನೇ ತಂಡದ ಪೊಲೀಸ್ ಸಬ್‌ಇನ್‌ಸ್ಪೆಕ್ಟರ್ ಪ್ರಶಿಕ್ಷಣಾರ್ಥಿಗಳ ಬುನಾದಿ ತರಬೇತಿಯನ್ನು ಪೊಲೀಸ್ ತರಬೇತಿ ಕೇಂದ್ರದ ಎಡಿಜಿಪಿ ಅಲೋಕ್‌ಕುಮಾರ್ ಉದ್ಘಾಟಿಸಿದರು.

ಒಳಾಂಗಣ ಹಾಗೂ ಹೊರಾಂಗಣದಲ್ಲಿ ನಡೆಯುವ ಪ್ರಕರಣಗಳನ್ನು ಸಮೀಕರಿಸಿ ತರಬೇತಿ ನೀಡಲಾಗುತ್ತದೆ. ವಿಐಪಿ ಭದ್ರತೆ, ಜನರ ನಿಯಂತ್ರಣದಂತಹ ಕಾನೂನು ಮತ್ತು ಸುವ್ಯವಸ್ಥೆ ಬಗ್ಗೆಯೂ ತಿಳಿಸಲಿದ್ದೇವೆ ಎಂದು ಹೇಳಿದರು.

ಡಿಐಜಿ ಬೋರಲಿಂಗಯ್ಯ ಮಾತನಾಡಿ, ಈ ತಂಡವು ಅನೇಕ ಸವಾಲು, ಕಾನೂನಾತ್ಮಕ ಹೋರಾಟ ಎದುರಿಸಿ ಇಲಾಖೆಗೆ ಸೇರಿಸಿಕೊಂಡಿದೆ. ಮುಂದೆ ಇಲಾಖೆಯಲ್ಲಿ ಉತ್ತಮ ಹೆಸರು ಮಾಡಲಿ. ಶಿಸ್ತು, ಆರೋಗ್ಯ ಕಾಪಾಡಿಕೊಳ್ಳುವುದು ಹಾಗೂ ಜ್ಞಾನ ಸಂಪಾದನೆಗೆ ತರಬೇತಿಯಲ್ಲಿ ಆದ್ಯತೆ ನೀಡಬೇಕು ಎಂದು ಹೇಳಿದರು.

ನಗರ ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್ ಮಾತನಾಡಿ, ಪೊಲೀಸ್ ಸಮವಸ್ತ್ರ ಧರಿಸಿದ ಬಳಿಕ ನಮಗೆ ಕೆಲಸ ಮಾತ್ರ ಇರುವುದಿಲ್ಲ. ಸಮಾಜದ ಜವಾಬ್ದಾರಿಯೂ ಇದೆ ಎಂಬುದನ್ನು ಅರಿಯಿರಿ. ಈ ವೃತ್ತಿಯಲ್ಲಿ ಕ್ಷಮೆ ಇರುವುದಿಲ್ಲ. ಹೀಗಾಗಿ ವೃತ್ತಿಗೆ ಗೌರವ ನೀಡಿ ಸೇವೆ ಸಲ್ಲಿಸಿ ಎಂದರು.

335 ಪ್ರಶಿಕ್ಷಣಾರ್ಥಿಗಳಿಗೆ ತರಬೇತಿ: 46ನೇ ತಂಡದ ಪ್ರೊಬೆಷನರಿ ಪಿಎಸ್‌ಐ ತರಬೇತಿಯಲ್ಲಿ 335 ಪ್ರಶಿಕ್ಷಣಾರ್ಥಿಗಳು ಭಾಗವಹಿಸುತ್ತಿದ್ದು, 239 ಪುರುಷ ಹಾಗೂ 96 ಮಹಿಳಾ ಪ್ರಶಿಕ್ಷಣಾರ್ಥಿಗಳಿದ್ದಾರೆ. ಇವರಲ್ಲಿ 50 ಮಂದಿ ಸ್ನಾತಕೋತ್ತರ ಪದವೀಧರರಾಗಿದ್ದು, 129 ಮಂದಿ ಎಂಜಿನಿಯರಿಂಗ್, 147 ಪದವಿ, ಒಬ್ಬರು ಬಿಡಿಸಿ ಪದವಿ ಪೂರೈಸಿದ್ದಾರೆ. ಪೊಲೀಸ್ ಕರ್ತವ್ಯದಲ್ಲೇ ಇದ್ದು ತೇರ್ಗಡೆಯಾದ 79 ಮಂದಿ, ಸರ್ಕಾರಿ ಕರ್ತವ್ಯದಲ್ಲಿದ್ದ 33, ಸೇನೆಯಿಂದ ನಿವೃತ್ತರಾದ 13 ಜನ ಪ್ರಶಿಕ್ಷಣಾರ್ಥಿಗಳಾಗಿ ಭಾಗವಹಿಸಿದ್ದಾರೆ.

ಕಾರ್ಯಕ್ರಮದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎನ್.ವಿಷ್ಣುವರ್ಧನ್, ಡಿಸಿಪಿ ಎಂ.ಮುತ್ತುರಾಜ್, ಪೊಲೀಸ್ ಅಕಾಡೆಮಿ ನಿರ್ದೇಶಕ ಎಸ್.ಎಲ್.ಚೆನ್ನಬಸವಣ್ಣ, ಗೀತಾ ಪ್ರಸನ್ನ ಉಪಸ್ಥಿತರಿದ್ದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: mysoorumithra@gmail.com For advertisements: mysoorumithra@gmail.com

ಅನಧಿಕೃತ ತಂಬಾಕು ಖರೀದಿ ನಿರ್ಧಾರ: ಕೇಂದ್ರಕ್ಕೆ ನಿಖಿಲ್ ಧನ್ಯವಾದ



ಯುವ ಜನತಾದಳದ ರಾಜ್ಯಾಧ್ಯಕ್ಷರಾದ ನಿಖಿಲ್ ಕುಮಾರಸ್ವಾಮಿ ನೇತೃತ್ವದ ನಿಯೋಗ ಕೇಂದ್ರ ವಾಣಿಜ್ಯ-ಕೈಗಾರಿಕೆ ಖಾತೆ ಸಚಿವರಾದ ಪಿಯೂಷ್ ಗೋಯಲ್‌ರನ್ನು ಇತ್ತೀಚೆಗೆ ಭೇಟಿ ಮಾಡಿ ಅಭಿನಂದಿಸಿ, ತಂಬಾಕು ಖರೀದಿಗೆ ಮನವಿ ಮಾಡಿತ್ತು.

ಮೈಸೂರು, ಫೆ.18(ಜಿಎ)–ರಾಜ್ಯದ ತಂಬಾಕು ಬೆಳೆಗಾರರ ಸಂಕಷ್ಟಕ್ಕೆ ಸ್ಪಂದಿಸಬೇಕು ಎಂದು ಯುವ ಜನತಾದಳ ರಾಜ್ಯಾಧ್ಯಕ್ಷರಾದ ನಿಖಿಲ್ ಕುಮಾರಸ್ವಾಮಿ ಅವರ ನೇತೃತ್ವದ ನಿಯೋಗ ಮಾಡಿದ್ದ ಮನವಿಗೆ ಕೇಂದ್ರ ಸರಕಾರ ಸ್ಪಂದಿಸಿದೆ.

ಈ ಬಗ್ಗೆ ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿರುವ ನಿಖಿಲ್ ಕುಮಾರ ಸ್ವಾಮಿ, ಹುಣಸೂರು, ಪಿರಿಯಾಪಟ್ಟಣ, ಹೆಚ್.ಡಿ. ಕೋಟೆ ಸೇರಿದಂತೆ ರಾಜ್ಯದ ವಿವಿಧ ಭಾಗಗಳಲ್ಲಿ ಬೆಳೆಯಲಾಗುವ ಪರವಾನಗಿ ರಹಿತ ತಂಬಾಕು ಬೆಳೆಗಾರರಿಗೂ ಮಾರಾಟಕ್ಕೆ ಅವಕಾಶ ನೀಡಿಕೆ, ಇಂತಹ ಬೆಳೆಗಾರರಿಗೆ ವಿಧಿಸಲಾಗುತ್ತಿದ್ದ ದಂಡ ಮನ್ನಾ ಮಾಡುವ ನಿರ್ಧಾರ ಕೈಗೊಂಡಿರುವ ಕೇಂದ್ರದ ವಾಣಿಜ್ಯ ಮತ್ತು ಕೈಗಾರಿಕೆ ಖಾತೆ ಸಚಿವರಾದ ಪಿಯೂಷ್ ಗೋಯಲ್ ಅವರಿಗೆ ಧನ್ಯವಾದ ಹೇಳಿದ್ದಾರೆ.

ಕೇಂದ್ರದ ಆದೇಶದ ಬಗ್ಗೆ ಹರ್ಷ ವ್ಯಕ್ತಪಡಿಸಿರುವ ಅವರು; ಕಳೆದ 2024ರ ಡಿಸೆಂಬರ್ 2ರಂದು ನವದೆಹಲಿಯಲ್ಲಿ ಕೇಂದ್ರ ಸಚಿವರಾದ ಹೆಚ್.ಡಿ.ಕುಮಾರಸ್ವಾಮಿ ನೇತೃತ್ವದಲ್ಲಿ ಕೇಂದ್ರದ ವಾಣಿಜ್ಯ ಮತ್ತು ಕೈಗಾರಿಕೆ ಸಚಿವರಾದ ಪಿಯೂಷ್ ಗೋಯಲ್ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಲಾಗಿತ್ತು. ಡಿಸೆಂಬರ್ 21ರಂದು ವಾಣಿಜ್ಯ ಇಲಾಖೆಯ ಉನ್ನತ ಅಧಿಕಾರಿಗಳ ಜತೆ ಮಹತ್ವದ ಸಭೆಯನ್ನು ನಡೆಸಲಾಗಿತ್ತು ಎಂದು ತಿಳಿಸಿದ್ದಾರೆ.

ಅಲ್ಲದೆ, ರಾಜ್ಯದ ತಂಬಾಕು ಬೆಳೆಗಾರ ರೈತರು ಕಳೆದ ವರ್ಷ ಮೇ, ಜುಲೈ ತಿಂಗಳಲ್ಲಿ ವಿಪರೀತ ಮಳೆಯಿಂದಾಗಿ ಸಂಕಷ್ಟಕ್ಕೆ ಸಿಲುಕಿದ್ದರು. ರಾಜ್ಯದಲ್ಲಿ ಬೆಳೆಯಲಾಗುವ ಎಫ್‌ಸಿವಿ (flue-cured Virginia-FCV) ತಂಬಾಕು ಬೆಳೆಯ ಇಳುವರಿ ಗಣನೀಯವಾಗಿ ಕಡಿಮೆಯಾಗಿತ್ತು. ತಂಬಾಕು ಎಲೆಗಳ ಗುಣಮಟ್ಟಕ್ಕೆ ದೊಡ್ಡ ಮಟ್ಟದಲ್ಲಿ ಹಾನಿಯಾಗಿತ್ತು. ಇದರಿಂದಾಗಿ ಬೆಳೆಗಾರರು ಭಾರಿ ನಷ್ಟಕ್ಕೆ ತುತ್ತಾಗಿದ್ದರು. ಕೇಂದ್ರ ಸರಕಾರ ಇದೀಗ ನೆರವಿಗೆ ಧಾವಿಸಿರುವ ಪರಿಣಾಮ ಸಾವಿರಾರು ಬೆಳೆಗಾರರಿಗೆ ಅನುಕೂಲವಾಗಲಿದೆ ಎಂದು ನಿಖಿಲ್ ಕುಮಾರಸ್ವಾಮಿ ಅವರು ಹೇಳಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಅವರ ಸರಕಾರ ರೈತಪರವಾದ ಅನೇಕ ಐತಿಹಾಸಿಕ ನಿರ್ಧಾರಗಳನ್ನು ಕೈಗೊಂಡಿದ್ದು, ಅದರಲ್ಲಿ ರಾಜ್ಯದ ತಂಬಾಕು ಬೆಳೆಗಾರರ ಸಂಕಷ್ಟಕ್ಕೆ ಸ್ಪಂದಿಸಿರುವುದು ಕೂಡ ಒಂದಾಗಿದೆ. ಕೇಂದ್ರ ಸರಕಾರದ ಈ ನಿರ್ಧಾರದ ಮೂಲಕ ತಂಬಾಕು ಮಂಡಳಿಯ ಹರಾಜು ಕೇಂದ್ರಗಳಲ್ಲಿ ನೋಂದಾಯಿತ ಬೆಳೆಗಾರರಿಂದ ಹೆಚ್ಚುವರಿ ತಂಬಾಕು ಮತ್ತು ನೋಂದಾಯಿಸದಿರುವ ಬೆಳೆಗಾರರಿಂದ ಅನಧಿಕೃತ ತಂಬಾಕು ಮಾರಾಟಕ್ಕೆ ಅನುಮತಿ ನೀಡಲಿದೆ. ಜತೆಗೆ, ಯಾವುದೇ ಹೆಚ್ಚುವರಿ ಸೇವಾ ಶುಲ್ಕಗಳಿಲ್ಲದೆ ಬೆಳೆಗಾರರು ನ್ಯಾಯಯುತವಾಗಿ ಮಾರುಕಟ್ಟೆ ಬೆಲೆಯನ್ನು ಪಾರದರ್ಶಕವಾಗಿ ಪಡೆಯಬಹುದಾಗಿದೆ ಎಂದು ನಿಖಿಲ್ ಮಾಹಿತಿ ನೀಡಿದ್ದಾರೆ.

ಎಫ್‌ಸಿವಿ ತಂಬಾಕನ್ನು 53,325 ಹೆಕ್ಟೇರ್ ಪ್ರದೇಶದಲ್ಲಿ ಬೆಳೆಯಲಾಗುತ್ತಿದೆ. 40,487 ನೋಂದಾಯಿತ ಹಾಗೂ 12,838 ಪರವಾನಗಿ ರಹಿತ ಬೆಳೆಗಾರರು ಬೆಳೆಯುತ್ತಿದ್ದಾರೆ. ಕೇಂದ್ರದ ನಿರ್ಧಾರದಿಂದಾಗಿ ಪ್ರಮುಖವಾಗಿ 12,838 ತಂಬಾಕು ಬೆಳೆಗಾರರಿಗೆ ಅನುಕೂಲವಾಗಲಿದೆ. ಕರ್ನಾಟಕದ ತಂಬಾಕು ಬೆಳೆಗಾರರ ಸಂಕಷ್ಟ ನಿವಾರಿಸಲು ಕೇಂದ್ರದ ಮೋದಿ ಅವರ ಸರಕಾರ ಐತಿಹಾಸಿಕ ನಿರ್ಧಾರ ಕೈಗೊಂಡಿದೆ ಎಂದು ತಿಳಿಸಿದ್ದಾರೆ.

ಅಂದು ಸಚಿವರನ್ನು ಭೇಟಿ ಮಾಡಿದ ನಿಯೋಗದಲ್ಲಿ ಮೈಸೂರು-ಕೊಡಗು ಲೋಕಸಭೆ ಕ್ಷೇತ್ರದ ಸಂಸದರಾದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಮಾಜಿ ಸಚಿವರಾದ ಸಾ.ರಾ.ಮಹೇಶ್, ಹುಣಸೂರು ಶಾಸಕ ಜಿ.ಡಿ.ಹರೀಶ್‌ಗೌಡ, ತಂಬಾಕು ಬೆಳೆಗಾರರು ಜತೆಯಲ್ಲಿದ್ದರು ಎಂದು ನಿಖಿಲ್ ಕುಮಾರಸ್ವಾಮಿ ತಿಳಿಸಿದ್ದಾರೆ.

ಹಾಸನ ಮಿತ್ರ

ಹಾಸನ ವಿಶ್ವವಿದ್ಯಾಲಯ ಮುಚ್ಚಬೇಡಿ: ವಿದ್ಯಾರ್ಥಿಗಳು, ಬೋಧಕರಿಂದ ಪ್ರತಿಭಟನೆ



ಹಾಸನ ವಿಶ್ವವಿದ್ಯಾಲಯವನ್ನು ಮುಚ್ಚದೆ ಜಿಲ್ಲೆಯಲ್ಲೇ ಮುಂದುವರಿಸಬೇಕು ಎಂದು ಆಗ್ರಹಿಸಿ ವಿದ್ಯಾರ್ಥಿಗಳು, ಬೋಧಕರು, ಬೋಧಕೇತರ ಸಿಬ್ಬಂದಿ, ಜಿಲ್ಲಾಧಿಕಾರಿ ಕಚೇರಿ ಎದುರು ಮಂಗಳವಾರ ಪ್ರತಿಭಟನೆ ನಡೆಸಿದರು.

ಹಾಸನ: ಹಾಸನ ವಿಶ್ವವಿದ್ಯಾಲಯವನ್ನು ಮುಚ್ಚಬಾರದು. ಇಲ್ಲೇ ಮುಂದುವರಿಸಬೇಕು ಎಂದು ಆಗ್ರಹಿಸಿ ವಿದ್ಯಾರ್ಥಿಗಳು, ಬೋಧಕರು, ಬೋಧಕೇತರ ಸಿಬ್ಬಂದಿ, ಜಿಲ್ಲಾಧಿಕಾರಿ ಕಚೇರಿ ಎದುರು ಮಂಗಳವಾರ ಪ್ರತಿಭಟನೆ ನಡೆಸಿದರು.

ನಗರದ ಹೇಮಾವತಿ ಪ್ರತಿಮೆ ಎದುರು ಜಮಾಯಿಸಿದ ಪ್ರತಿಭಟನಕಾರರು ಎನ್.ಆರ್. ವೃತ್ತದಿಂದ ಮೆರವಣಿಗೆ ಮೂಲಕ ಸಾಗಿ ಜಿಲ್ಲಾಧಿಕಾರಿ ಕಚೇರಿ ಎದುರು ಕೆಲಕಾಲ ಧರಣಿ ನಡೆಸಿ, ನಮ್ಮ ವಿವಿ ನಮ್ಮ ಹಕ್ಕು, ಹಾಸನ ವಿವಿ ಉಳಿವಿಗಾಗಿ ನಮ್ಮ ಹೋರಾಟ ಎಂದು ಘೋಷಣೆಗಳನ್ನು ಕೂಗಿದರು.

ವಿದ್ಯಾರ್ಥಿಗಳು ಮಾತನಾಡಿ, ಹಾಸನ ವಿಶ್ವವಿದ್ಯಾಲಯವನ್ನು ಮುಚ್ಚಲು ಹೊರಟಿರುವ ಸರ್ಕಾರದ ಕ್ರಮವನ್ನು ಬಲವಾಗಿ ಖಂಡಿಸುತ್ತೇವೆ. ಜಿಲ್ಲೆಯ ಗ್ರಾಮೀಣ ಮತ್ತು ನಗರ ಪ್ರದೇಶದ ವಿದ್ಯಾರ್ಥಿಗಳ ಉನ್ನತ ಶಿಕ್ಷಣದ ಹಿತದೃಷ್ಟಿಯಿಂದ ಸರ್ಕಾರ ಹಾಸನ ವಿವಿಯನ್ನು ಮುಚ್ಚದೆ ಮುಂದುವರಿಸಬೇಕು. ವಿಶ್ವವಿದ್ಯಾಲಯದ ನಿರ್ವಹಣೆಗೆ ಮೂಲ ಸೌಕರ್ಯ ಒದಗಿಸಬೇಕು ಎಂದು ಒತ್ತಾಯಿಸಿದರು. ವಿಶ್ವವಿದ್ಯಾಲಯವನ್ನು ಹಾಸನದಲ್ಲಿಯೇ ಉಳಿಸದಿದ್ದರೆ ಮುಂದಿನ ದಿನಗಳಲ್ಲಿ ಪ್ರತಿಭಟನೆ ತೀವ್ರಗೊಳಿಸಲಾಗುವುದು ಎಂದು ಎಚ್ಚರಿಸಿದರು.

ಉಪನ್ಯಾಸಕ ಷಣ್ಮುಖ ಮಾತನಾಡಿ, ಹಾಸನ ವಿವಿ ಮುಚ್ಚಲು ಸರ್ಕಾರ ತೀರ್ಮಾನ ಕೈಗೊಂಡಿರುವುದು ಸರಿಯಲ್ಲ. ಜಿಲ್ಲೆಯಲ್ಲಿ ವಿಶ್ವವಿದ್ಯಾಲಯ ಸ್ಥಾಪನೆಯಿಂದ ಗ್ರಾಮೀಣ ಭಾಗದ ಹೆಣ್ಣು ಮಕ್ಕಳಿಗೆ ಹೆಚ್ಚು ಅನುಕೂಲವಾಗಿದೆ. ಇತರೆ ವಿವಿಗಳೊಂದಿಗೆ ವಿಲೀನ ಮಾಡುವುದರಿಂದ ತೊಂದರೆ ಆಗಲಿದ್ದು, ಹಾಸನ ವಿಶ್ವವಿದ್ಯಾಲಯವನ್ನು ಇಲ್ಲಿಯೇ ಉಳಿಸಬೇಕು ಎಂದು ಆಗ್ರಹಿಸಿದರು. ಜಿಲ್ಲಾಧಿಕಾರಿ ಸಿ.ಸತ್ಯಭಾಮ ಅವರಿಗೆ ಮನವಿ ಪತ್ರ ಸಲ್ಲಿಸಿದರು.

ಪ್ರತಿಭಟನೆಯಲ್ಲಿ ಉಪನ್ಯಾಸಕರಾದ ಅಶೋಕ್, ಪುಷ್ಪಾವತಿ, ಮಹೇಶ್, ಪುಟ್ಟರಾಜಪ್ಪ, ನಟರಾಜ್, ಸೌಮ್ಯ, ಲಕ್ಷ್ಮೀಕಾಂತ್, ಲೋಕೇಶ್, ವಿದ್ಯಾರ್ಥಿಗಳಾದ ಚಂದ್ರಕಲಾ, ನಿಖಿಲ್, ಸುಪ್ರಿಯಾ, ಮನು, ಈಶ್ವರ್, ಸುಷ್ಮಿತ್, ಅಭಿಷೇಕ್, ಬಸವರಾಜ್ ಸೇರಿದಂತೆ ನೂರಾರು ವಿದ್ಯಾರ್ಥಿಗಳು ಭಾಗವಹಿಸಿದ್ದರು.

38 ಎಕರೆ ಅಕ್ರಮ ಮಂಜೂರು: ಕ್ರಮಕ್ಕೆ ಶಾಸಕ ಎ.ಮಂಜು ಒತ್ತಾಯ



ಕೊಣನೂರು: ಅರಣ್ಯ ಇಲಾಖೆಯ ಹೆಸರಿನಲ್ಲಿರುವ 38 ಎಕರೆ ಜಮೀನನ್ನು ಅಕ್ರಮವಾಗಿ ಮಂಜೂರು ಮಾಡಿರುವ ಅಧಿಕಾರಿಗಳು ಮತ್ತು ಮಧ್ಯವರ್ತಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಶಾಸಕ ಎ.ಮಂಜು ಒತ್ತಾಯಿಸಿದರು.

ಪಟ್ಟಣದ ಬಿ.ಎಂ.ಶೆಟ್ಟಿ ಸರ್ಕಾರಿ ಕಾಲೇಜಿನಲ್ಲಿ ಮಂಗಳವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ತಾಲೂಕಿನ ಯಗಟಿ ಗ್ರಾಮದ ಸರ್ವೆ ನಂಬರ್ 34, 35 ಮತ್ತು 154ರ 38 ಎಕರೆ ಜಮೀನು ಪಹಣಿಯಲ್ಲಿ ಡೀಮ್ಡ್ ಅರಣ್ಯಕ್ಕೆ ಸೇರಿರುವ ಸ್ಥಳ ಎಂದು ನಮೂದಾಗಿದ್ದರೂ ಐವರಿಗೆ ತಲಾ 3 ಎಕರೆ 20 ಗುಂಟೆಯಂತೆ ಮಂಜೂರು ಮಾಡಲಾಗಿದೆ. ದಾಖಲೆಯಲ್ಲಿ ಬಗರ್‌ಹುಕುಂ ಕಮಿಟಿಯಲ್ಲಿ ಒಪ್ಪಿಗೆ ಪಡೆದು ಮಂಜೂರು ಮಾಡಲಾಗಿದೆ ಎಂದು ದಾಖಲೆಗಳನ್ನು ಸೃಷ್ಟಿಸಿದ್ದು, ಈ ವಿಷಯವು ಗಮನಕ್ಕೆ ಬಂದು 15 ದಿನಗಳಾದರೂ ಇದುವರೆಗೂ ಜಿಲ್ಲಾಧಿಕಾರಿಯಾಗಲಿ ಅಥವಾ ತಹಶೀಲ್ದಾರ್ ಆಗಲಿ ಕ್ರಮಕ್ಕೆ ಮುಂದಾಗದಿರುವುದು ಅನುಮಾನ ಮೂಡಿಸುವಂತಿದೆ ಎಂದು ದೂರಿದರು.

ಈ ಹಿಂದೆ ಇದ್ದ ಬಗರ್‌ಹುಕುಂ ಕಮಿಟಿಯಲ್ಲಿ ಆಗದಿರುವ ನಿರ್ಣಯವನ್ನು ಆಗಿದೆ ಎಂದು ದಾಖಲೆ ಸೃಷ್ಟಿಸಲು ದಾಖಲೆಯನ್ನು ತಿದ್ದಿ ಖಾಲಿಯಿರುವ ಜಾಗದಲ್ಲಿ ಹೊಸದಾಗಿ ಹೆಸರುಗಳನ್ನು ಬರೆದು ಜಮೀನನ್ನು ಐವರ ಹೆಸರಿಗೆ ಮಾಡಿಕೊಡಲಾಗಿದೆ. ಇದರಲ್ಲಿ ಎಷ್ಟು ಅವ್ಯವಹಾರ ನಡೆದಿದೆ, ರೈತರ ಬಳಿ ಎಷ್ಟು ಲಂಚ ಪಡೆದಿದ್ದಾರೆ, ಯಾವ್ಯಾವ ಅಧಿಕಾರಿಗಳು ಮತ್ತು ಮಧ್ಯವರ್ತಿಗಳು ಶಾಮೀಲಾಗಿದ್ದಾರೆ ಎಂಬುದನ್ನು ತಿಳಿದು ಜಿಲ್ಲಾಧಿಕಾರಿ ಕ್ರಮಕೈಗೊಳ್ಳಬೇಕಿತ್ತು. ಅಕ್ರಮವಾಗಿ ಮಂಜೂರು ಮಾಡಿರುವ ಜಮೀನನ್ನು ಕೂಡಲೇ ಅರಣ್ಯ ಇಲಾಖೆಯವರು ತಮ್ಮ ಸ್ವಾಧೀನಕ್ಕೆ ತೆಗೆದುಕೊಳ್ಳಬೇಕು. ಕಂದಾಯ ಮಂತ್ರಿಗಳು, ಸರ್ಕಾರವು ಅವ್ಯವಹಾರ ಮಾಡಿರುವ ಅಧಿಕಾರಿಗಳು ಮತ್ತು ಮಧ್ಯವರ್ತಿಗಳ ವಿರುದ್ಧ ಕ್ರಮಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ಈ ಪ್ರದೇಶವು ಡೀಮ್ಡ್ ಅರಣ್ಯ ಪ್ರದೇಶವೆಂದು ಮೊದಲೇ ದಾಖಲೆಗಳಿದ್ದು, ಈ ಪ್ರದೇಶದಲ್ಲಿ ಅರಣ್ಯ ಇಲಾಖೆಯವರು 12 ಸಾವಿರ ಗಿಡಗಳನ್ನು ನೆಟ್ಟಿದ್ದಾರೆ. ಬಗರ್‌ಹುಕುಂ ಮೂಲಕ ಹಕ್ಕು ಪಡೆದ ಐವರು ಖಾತೆ ಮಾಡಿಸಿಕೊಳ್ಳಲು ಮುಂದಾದಾಗ ವಿಷಯ ಬೆಳಕಿಗೆ ಬಂದಿದೆ. ಅರಕಲಗೂಡು ತಹಶೀಲ್ದಾರ್ ಆದೇಶದ ಸಂಖ್ಯೆಯೊಂದಿಗೆ ಐವರಿಗೆ ಮಂಜೂರು ಮಾಡಲಾಗಿದೆ ಎಂದರು.

ಫೆ.24ಕ್ಕೆ ಬಸವೇಶ್ವರ ದೇಗುಲ ಲೋಕಾರ್ಪಣೆ



ಹೊಳೆನರಸೀಪುರ: ತಾಲೂಕಿನ ಹಳ್ಳಿಮೈಸೂರು ಹೋಬಳಿ ನಿಡುವಣಿ ಗ್ರಾಮದ ಬಸವೇಶ್ವರ ದೇವಾಲಯ ಜೀರ್ಣೋದ್ಧಾರಗೊಂಡಿದ್ದು, ಫೆ.24ರಂದು ಲೋಕಾರ್ಪಣೆಗೊಳ್ಳಲಿದೆ.

ಗಂಗಾಧರ ಶಿವಾಚಾರ್ಯ ಸ್ವಾಮೀಜಿ, ತೇಜೂರು ಸಿದ್ದರಾಮೇಶ್ವರ ಮಠದ ಕಲ್ಯಾಣ ಸ್ವಾಮೀಜಿ ಉಪಸ್ಥಿತಿಯಲ್ಲಿ ಫೆ.21ರಂದು ಸಂಜೆ 4.30ರಿಂದ ಗಂಗಾಪೂಜೆ, ಬಸವೇಶ್ವರ ಶಿಲಾಮೂರ್ತಿ ಮೆರವಣಿಗೆ ಮೂಲಕ ದೇವಾಲಯ ಪ್ರವೇಶ, ನಂತರ ಪೂಜಾ ವಿಧಿ ವಿಧಾನಗಳು ನಡೆಯಲಿವೆ. 22ರಂದು ಬೆಳಿಗ್ಗೆ 7ಕ್ಕೆ ಬಾಳೆಹೊನ್ನೂರು ತೆಂಡೇಕೆರೆ ಶಾಖಾ ಮಠದ ಗಂಗಾಧರ ಶಿವಾಚಾರ್ಯ ಸ್ವಾಮೀಜಿ ಸಾನ್ನಿಧ್ಯದಲ್ಲಿ ರಕ್ಷಾಬಂಧನ, ಧ್ವಜಾರೋಹಣ, ಮತ್ಸಂಗ್ರಹಣ, ಅಂಕುರಾರೋಪಣ, ಪಂಚಗವ್ಯ ಅಭಿಷೇಕ, ಗಣಪತಿ ಹೋಮ, ಮಹಾಮಂಗಳಾರತಿ, ತೀರ್ಥಪ್ರಸಾದ ವಿನಿಯೋಗ ನಡೆಯಲಿದೆ.

23ರಂದು ಬೆಳಿಗ್ಗೆ 6ಕ್ಕೆ ಶಿವಯಾಗ ಮಂಟಪ ಪ್ರತಿಷ್ಠೆ, ನವಗ್ರಹ, ಮೃತ್ಯುಂಜಯ ಏಕಾದಶರುದ್ರ, ದ್ವಾದಶದಿತ್ಯಾ ಸ್ಕಂದ, ಅಷ್ಟಲಕ್ಷ್ಮೀ ಸಮೇತ ಲಕ್ಷ್ಮೀ ನಾರಾಯಣ ಉಮಾ ಮಹೇಶ್ವರ ಪ್ರಧಾನ, ಬಸವೇಶ್ವರರ ಕಲಶಾರಾಧನೆ, 10.30ರಿಂದ ವಿವಿಧ ಬಗೆಯ ಹೋಮ, ಮಂಗಳಾರತಿ ತೀರ್ಥ ಪ್ರಸಾದ ವಿನಿಯೋಗ ನಡೆಯಲಿದೆ. 24ರಂದು ಬೆಳಿಗ್ಗೆ 4.30ರ ಬ್ರಾಹ್ಮೀ ಮುಹೂರ್ತದಲ್ಲಿ ಪ್ರಾಣ ಪ್ರತಿಷ್ಠಾಪನೆ, 6.30ರಿಂದ ರುದ್ರಾಭಿಷೇಕ, ಕಲಾಹೋಮ, ಗ್ರಾಮದೇವತಾ, ಇಷ್ಟದೇವತಾ, ಜಯಾದಿ ಪ್ರಾಯಶ್ಚಿತ್ತ ಹೋಮ, ಶಿಖರ ಕಲಶಾರೋಹಣ, ಪೂರ್ಣಾಹುತಿ, ದೃಷ್ಟಿಪೂಜೆ, ಮಂತ್ರೋಪದೇಶಗಳು ನಡೆಯಲಿವೆ. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ, ಶಾಸಕರಾದ ಎ.ಮಂಜು, ಎಚ್.ಡಿ.ರೇವಣ್ಣ, ಸಂಸದ ಶ್ರೇಯಶ್ ಪಟೇಲ್, ಮಾಜಿ ಶಾಸಕ ಎ.ಟಿ.ರಾಮಸ್ವಾಮಿ ಭಾಗವಹಿಸಲಿದ್ದಾರೆ. ರಾತ್ರಿ 8.30ಕ್ಕೆ ಕೃಷ್ಣ ಸಂಧಾನ ಪೌರಾಣಿಕ ನಾಟಕ ಏರ್ಪಡಿಸಲಾಗಿದೆ.

ಫೆ.21, ವಿಭಾಗೀಯ ಮಟ್ಟದ ತರಬೇತಿ ಕಾರ್ಯಾಗಾರ

ಮೈಸೂರು,ಫೆ.18–ಜಿಲ್ಲಾ ಮಕ್ಕಳ ರಕ್ಷಣಾ ಘಟಕ ವತಿಯಿಂದ ಮೈಸೂರು ವಿಭಾಗೀಯ ಮಟ್ಟದಲ್ಲಿ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳಿಗೆ ಶಿಕ್ಷಣ ಹಕ್ಕು ಕಾಯ್ದೆ, ಬಾಲ್ಯವಿವಾಹ, ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ಮತ್ತು ಮಕ್ಕಳ ಭಿಕ್ಷಾಟನೆ ಕುರಿತು ಫೆ.21ರಂದು ಒಂದು ದಿನದ ತರಬೇತಿ ಕಾರ್ಯಾಗಾರವನ್ನು ಕಾವೇರಿ ಸಭಾಂಗಣ, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ತಿಳಿಸಿದ್ದಾರೆ.

ಒಳ ಮೀಸಲಾತಿಗೆ ಆಗ್ರಹಿಸಿ ಫೆ.21ರಂದು ಮೈಸೂರು ಡಿಸಿ ಕಚೇರಿ ಮುಂದೆ ಧರಣಿ



ಕರ್ನಾಟಕ ಸಾಮಾಜಿಕ ನ್ಯಾಯಪರ ವಕೀಲರ ವೇದಿಕೆ ಅಧ್ಯಕ್ಷ ಎಸ್.ಅರುಣ್‌ಕುಮಾರ್ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.

ಮೈಸೂರು, ಫೆ.18(ಎಂಟಿವೈ)–ಪರಿಶಿಷ್ಟ ಜಾತಿಯಲ್ಲಿ ಒಳ ಮೀಸಲಾತಿ ಜಾರಿಗೊಳಿಸುವಂತೆ ಒತ್ತಾಯಿಸಿ, ಮೈಸೂರಿನ ಸಿದ್ಧಾರ್ಥನಗರದಲ್ಲಿರುವ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಫೆ.21ರಂದು ಬೆಳಗ್ಗೆ 11ರಿಂದ ಸಂಜೆ 5ರವರೆಗೆ ಧರಣಿ ಹಮ್ಮಿಕೊಳ್ಳಲಾಗಿದೆ ಎಂದು ಕರ್ನಾಟಕ ಸಾಮಾಜಿಕ ನ್ಯಾಯಪರ ವಕೀಲರ ವೇದಿಕೆ ಅಧ್ಯಕ್ಷ ಎಸ್.ಅರುಣ್‌ಕುಮಾರ್ ತಿಳಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶೋಷಿತ ಸಮುದಾಯಗಳಿಗೆ ಒಳ ಮೀಸಲಾತಿ ಕಲ್ಪಿಸುವಂತೆ ಸುಪ್ರೀಂಕೋರ್ಟ್ ಆದೇಶಿಸಿದ್ದರೂ ರಾಜ್ಯಸರ್ಕಾರ ಇದುವರೆಗೆ ಸಾಮಾಜಿಕ ನ್ಯಾಯ ಒದಗಿಸುವುದಕ್ಕೆ ಮುಂದಾಗಿಲ್ಲ. ಒಳಮೀಸಲಾತಿ ವಿಚಾರದಲ್ಲಿ ರಾಜ್ಯ ಸರ್ಕಾರ ದ್ವಂದ್ವ ನೀತಿ ಅನುಸರಿಸುತ್ತಿದೆ. ಒಳ ಮೀಸಲಾತಿ ಜಾರಿಯಾಗುವವರೆಗೂ ಯಾವುದೇ ಹುದ್ದೆಗಳ ನೇಮಕಾತಿ ಮತ್ತು ಬ್ಯಾಕ್‌ಲಾಗ್ ಹುದ್ದೆಗಳ ನೇಮಕಾತಿ ಮಾಡುವುದಿಲ್ಲ ಎಂದು 2024ರ ಅ.28ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನ ತೆಗೆದುಕೊಳ್ಳಲಾಗಿತ್ತು.

ಆದರೆ ರಾಜ್ಯ ಸರ್ಕಾರ ಇದೀಗ ತರಾತುರಿಯಲ್ಲಿ ನೇಮಕಾತಿಗಾಗಿ ಒಳಮೀಸಲಾತಿಯ ಸುಪ್ರೀಂಕೋರ್ಟ್ ತೀರ್ಪಿನ ನಂತರ ನಡೆದ ಸಚಿವ ಸಂಪುಟದ ದಿನಾಂಕದ ಹಿಂದೆಯೇ ಅಧಿಸೂಚನೆ ಹೊರಡಿಸಿರುವಂತೆ ತೋರಿದೆ ಎಂದು ಆರೋಪಿಸಿದರು.

ಈ ಮೂಲಕ ಬ್ಯಾಕ್‌ಲಾಗ್ ಹುದ್ದೆಗಳ ನೇಮಕಾತಿ ಪ್ರಕ್ರಿಯೆ ನಡೆಸಲು ಹೊರಟಿರುವುದು ಖಂಡನೀಯ. ಒಳಮೀಸಲಾತಿ ಜಾರಿಗಾಗಿ ಕರ್ನಾಟಕ ಸಾಮಾಜಿಕ ನ್ಯಾಯಪರ ವಕೀಲರ ವೇದಿಕೆ ವತಿಯಿಂದ ಕಳೆದ ಒಂದು ವರ್ಷದಿಂದ ನಿರಂತರವಾಗಿ ಹೋರಾಟ ನಡೆಸುತ್ತಾ ಬಂದಿದೆ. ಇದೀಗ ವಿವಿಧ ಹಂತದಲ್ಲಿ ಹೋರಾಟ ಮುಂದುವರೆಸಲು ತೀರ್ಮಾನಿಸಲಾಗಿದೆ. ಫೆ.21ರಂದು ರಾಜ್ಯ ಸರ್ಕಾರದ ಈ ದ್ವಂದ್ವ ನೀತಿಯನ್ನು ವಿರೋಧಿಸಿ ವೇದಿಕೆ ಆಶ್ರಯದಲ್ಲಿ ಮೈಸೂರು, ಮಂಡ್ಯ, ಚಾಮರಾಜನಗರ ಮತ್ತು ಕೊಡಗು ಜಿಲ್ಲೆಗಳ ವಕೀಲರು ಅಂದಿನ ಧರಣಿಯಲ್ಲಿ ಭಾಗವಹಿಸಲಿದ್ದಾರೆ ಎಂದರು.

ಸುದ್ದಿಗೋಷ್ಠಿಯಲ್ಲಿ ವೇದಿಕೆ ಪದಾಧಿಕಾರಿಗಳಾದ ಎಂ.ದಾಸಯ್ಯ, ಶಿವಕುಮಾರ್ ಎಂ.ಬೆಳ್ತೂರು, ಬೂದಿತಿಟ್ಟು ಎಲ್.ರಾಜೇಂದ್ರ, ಮಾಳಪ್ಪ ಕುರ್ಕಿ, ಎಂ.ಆರ್.ಸುರೇಂದ್ರಕುಮಾರ್ ಇದ್ದರು.


ಉದಯಗಿರಿ ಗಲಾಟೆ ಖಂಡಿಸಿ ಫೆ.24ಕ್ಕೆ ಅರಮನೆ ಮುಂಭಾಗ ಮೈಸೂರು ಚಲೋ ಜನ ಜಾಗೃತಿ ಸಭೆ

ಮೈಸೂರು, ಫೆ.18(ಎಂಟಿವೈ)–ಮೈಸೂರಿನ ಉದಯಗಿರಿ ಪೊಲೀಸ್ ಠಾಣೆ ಮುಂದೆ ನಡೆದ ಗಲಾಟೆಯು ದೇಶದ ಆಂತರಿಕ ಸುರಕ್ಷತೆಗೆ ಸವಾಲೊಡ್ಡುವ ಕೃತ್ಯವಾಗಿದ್ದು, ಈ ಕೃತ್ಯ ಖಂಡಿಸಿ ಫೆ.24ರಂದು ಬೆಳಗ್ಗೆ 11ಕ್ಕೆ ಅರಮನೆ ಮುಂಭಾಗದ ಕೋಟೆ ಆಂಜನೇಯಸ್ವಾಮಿ ದೇವಾಲಯದ ಆವರಣದಲ್ಲಿ ಮೈಸೂರು ಚಲೋ ಜನಜಾಗೃತಿ ಸಭೆ ಆಯೋಜಿಸಲಾಗಿದೆ ಎಂದು ರಾಷ್ಟ್ರ ಸುರಕ್ಷಾ ಜನಾಂದೋಲನ ಸಮಿತಿ ಸಂಚಾಲಕ ಮಹೇಶ್ ಕಡಗದಾಳ್ ತಿಳಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಉದಯಗಿರಿ ಗಲಾಟೆ ಪ್ರಕರಣ ಕಾನೂನು ಸುವ್ಯವಸ್ಥೆಗೆ ಆತಂಕಕಾರಿ ಬೆಳವಣಿಗೆಯಾಗಿದೆ. ದೇಶದ ಆಂತರಿಕ ಸುರಕ್ಷತೆ, ಅಖಂಡತೆ, ಏಕತೆಗೆ ಸವಾಲಾಗಿರುವ ರಾಷ್ಟ್ರ ವಿರೋಧಿ ಶಕ್ತಿಗಳ ವಿರುದ್ಧ ಸಮಾಜದ ಜಾಗೃತಿಗಾಗಿ ಮೈಸೂರು ಚಲೋ ಜನ ಜಾಗೃತಿ ಸಭೆ ಆಯೋಜಿಸಲಾಗಿದೆ. ಅಂದು ಬೆಳಿಗ್ಗೆ 11 ಗಂಟೆಗೆ ರಾಜ್ಯದ ಮೂಲೆ ಮೂಲೆಗಳಿಂದ ಸಾವಿರಾರು ಕಾರ್ಯಕರ್ತರು ಮೈಸೂರಿಗೆ ಬಂದು ಗನ್‌ಹೌಸ್ ವೃತ್ತದಿಂದ ಮೆರವಣಿಗೆ ಮೂಲಕ ಅರಮನೆ ಕೋಟೆ ಆಂಜನೇಯ ಸ್ವಾಮಿ ದೇವಸ್ಥಾನ ಮುಂಭಾಗ ಸಮಾವೇಶಗೊಳ್ಳಲಿದ್ದಾರೆ.

ಬಳಿಕ ಜನ ಜಾಗೃತಿ ಸಭೆ ನಡೆಯಲಿದೆ. ಉದಯಗಿರಿ ಗಲಾಟೆ ಪ್ರಕರಣದ ಬಂಧಿತ ಆರೋಪಿಗಳ ವಿರುದ್ಧ ಯುಎಪಿಎ ಕಾಯ್ದೆಯಡಿ ಕೇಸು ದಾಖಲಿಸಿ, ತನಿಖೆಯನ್ನು ಎನ್‌ಐಎಗೆ ವಹಿಸಬೇಕು ಎಂದು ಒತ್ತಾಯಿಸಲಾಗುವುದು ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ರಾಷ್ಟ್ರ ಸುರಕ್ಷಾ ಜನಾಂದೋಲನ ಸಮಿತಿ ಸಹ ಸಂಚಾಲಕರಾದ ಪ್ರಜ್ವಲ್, ಬಸವರಾಜು, ಚೇತನ್ ಉಪಸ್ಥಿತರಿದ್ದರು.

ಮೈಸೂರು ವಿವಿ ಕಾಲೇಜು ಅಭಿವೃದ್ಧಿ ಮಂಡಳಿ ನಿರ್ದೇಶಕರಾಗಿ ಡಾ.ಮಂಟೇಲಿಂಗು ನೇಮಕ



ಮೈಸೂರು,ಫೆ.18–ಮೈಸೂರು ವಿಶ್ವವಿದ್ಯಾನಿಲಯದ ಕಾಲೇಜು ಅಭಿವೃದ್ಧಿ ಮಂಡಳಿ ನಿರ್ದೇಶಕರಾಗಿ ರಸಾಯನಶಾಸ್ತ್ರ ಅಧ್ಯಯನ ವಿಭಾಗದ ಪ್ರಾಧ್ಯಾಪಕ ಡಾ.ಕೆ.ಮಂಟೇಲಿಂಗು ಅವರನ್ನು ನೇಮಕ ಮಾಡಲಾಗಿದೆ. ಇವರು ಟಿ.ನರಸೀಪುರ ತಾಲೂಕಿನ ಮಾಕನಹಳ್ಳಿ ಗ್ರಾಮದ ರೈತ ಕುಟುಂಬದಿಂದ ಬಂದವರು.

ತಂದೆ ಕೆಂಪೇಗೌಡ, ತಾಯಿ ದೇವಮ್ಮ. ಮೈಸೂರು ವಿವಿಯಿಂದ ಎಂ.ಎಸ್ಸಿ, ಪಿಹೆಚ್.ಡಿ ಪಡೆದಿದ್ದಾರೆ. ಜೆಎನ್‌ಸಿಎಎಸ್‌ಆರ್‌ನಲ್ಲಿ ಪೋಸ್ಟ್ ಡಾಕ್ಟರೋಲ್ ನಡೆಸಿದ ಅನುಭವ ಹೊಂದಿರುವ ಇವರು, ಇಟಲಿಯ ಡೆಲ್ಲಿಮಾಚೆ ವಿವಿಯಲ್ಲಿ ಪೋಸ್ಟ್ ಡಾಕ್ಟರಲ್ ಸಹವರ್ತಿಯಾಗಿಯೂ ಸಂಶೋಧನೆ ನಡೆಸಿದ್ದಾರೆ. ನ್ಯೂಜೆರ್ಸಿಯಲ್ಲೂ ವಿಜ್ಞಾನಿಯಾಗಿ ಕಾರ್ಯನಿರ್ವಹಿಸಿದ್ದರು.

ಅರ್ಜಿ ಸಲ್ಲಿಸುವ ಅವಧಿ ವಿಸ್ತರಣೆ

ಮೈಸೂರು, ಫೆ.18–ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಮೆಟ್ರಿಕ್ ನಂತರದ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿರುವ 'ಶುಲ್ಕ ಮರುಪಾವತಿ' ಕಾರ್ಯಕ್ರಮದ ಸೌಲಭ್ಯಕ್ಕೆ ಅರ್ಜಿ ಆಹ್ವಾನಿಸಿದ್ದು, ಮಾರ್ಚ್ 10ರವರೆಗೆ ಅರ್ಜಿ ಸಲ್ಲಿಕೆ ಅವಧಿ ವಿಸ್ತರಿಸಲಾಗಿದೆ. ಅಭ್ಯರ್ಥಿಗಳು www. https: ssp.postmatric.karnataka. gov.in ಮೂಲಕ ಅರ್ಜಿ ಸಲ್ಲಿಸಬಹುದು. ಕಾರ್ಯಕ್ರಮಗಳ ವಿವರ, ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿ ವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿಗಾಗಿ ವಿಳಾಸ https: bcwd.karnataka.gov.in ಅನ್ನು ಸಂಪರ್ಕಿಸಬಹುದು. ಮಾಹಿತಿಗೆ ಸಹಾಯವಾಣಿ ದೂ.ಸಂ.805077 0005, ಇ–ಮೇಲ್ bcwd helpline @gmail.com, post matriche lp@ karanataka. gov.in ದೂ.ಸಂ: 1902 ಅನ್ನು ಸಂಪರ್ಕಿಸಬಹುದು.

ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗೆ ತರಬೇತಿ

ಮೈಸೂರು, ಫೆ.18–ಮೈಸೂರಿನ ಕೃಷಿಕ್ ಸರ್ವೋದಯ ಫೌಂಡೇಷನ್ ರೈಲ್ವೆ ಗ್ರೂಪ್ ಡಿ, ಕೃಷಿ ಅಧಿಕಾರಿ, ಸಹಾಯಕ ಕೃಷಿ ಅಧಿಕಾರಿ, ಅಬಕಾರಿ ಇಲಾಖೆ ಪಿಸಿ, ಪಿಎಸ್‌ಐ ಸ್ಪರ್ಧಾತ್ಮಕ ಪರೀಕ್ಷೆಗೆ ತರಬೇತಿ ಹಮ್ಮಿಕೊಂಡಿದೆ. ವಿಜಯನಗರ 2ನೇ ಹಂತದಲ್ಲಿನ ಫೌಂಡೇಷನ್‌ನಲ್ಲಿ ತರಬೇತಿ ನೀಡಲಾಗುವುದು. ಮಾಹಿತಿಗೆ ಮೊ. 8296031570 ಸಂಪರ್ಕಿಸಬಹುದು.

ಕಾರ್ಯತಂತ್ರದ ಪಾಲುದಾರಿಕೆ ವೃದ್ಧಿಸುವ ಒಪ್ಪಂದಕ್ಕೆ ಭಾರತ–ಕತಾರ್ ಸಹಿ



ಪ್ರಧಾನಿ ನರೇಂದ್ರ ಮೋದಿ ಅವರು ಭಾರತಕ್ಕೆ ಭೇಟಿ ನೀಡಿರುವ ಕತಾರ್ ಅಮೀರ್ ತಮೀಮ್ ಬಿನ್ ಹಮದ್ ಅಲ್ ಥಾನಿ ಅವರೊಂದಿಗೆ ದೆಹಲಿಯ ಹೈದರಾಬಾದ್ ಹೌಸ್‌ನಲ್ಲಿ ದ್ವಿಪಕ್ಷೀಯ ಮಾತುಕತೆ ನಡೆಸಿದರು. ಈ ವೇಳೆ ಭಾರತ ಮತ್ತು ಕತಾರ್ ಉಭಯ ದೇಶಗಳ ನಡುವೆ ಕಾರ್ಯತಂತ್ರದ ಪಾಲುದಾರಿಕೆ ವೃದ್ಧಿಸುವ ಒಪ್ಪಂದಕ್ಕೆ ಸಹಿ ಹಾಕಿವೆ.

ನವದೆಹಲಿ, ಫೆ.18– ಭಾರತ ಮತ್ತು ಕತಾರ್ ಮಂಗಳವಾರ ಉಭಯ ದೇಶಗಳ ನಡುವೆ ಕಾರ್ಯತಂತ್ರದ ಪಾಲುದಾರಿಕೆ ವೃದ್ಧಿಸುವ ಒಪ್ಪಂದಕ್ಕೆ ಸಹಿ ಹಾಕಿವೆ.

ಪ್ರಧಾನಿ ನರೇಂದ್ರ ಮೋದಿ ಅವರು ಭಾರತಕ್ಕೆ ಭೇಟಿ ನೀಡಿರುವ ಕತಾರ್ ಅಮೀರ್ ತಮೀಮ್ ಬಿನ್ ಹಮದ್ ಅಲ್ ಥಾನಿ ಅವರೊಂದಿಗೆ ದೆಹಲಿಯ ಹೈದರಾಬಾದ್ ಹೌಸ್‌ನಲ್ಲಿ ದ್ವಿಪಕ್ಷೀಯ ಮಾತುಕತೆ ನಡೆಸಿದರು. ಬಳಿಕ ಉಭಯ ನಾಯಕರ ಸಮ್ಮುಖದಲ್ಲಿ ಕಾರ್ಯತಂತ್ರದ ಪಾಲುದಾರಿಕೆ ವೃದ್ಧಿಸುವ ಒಪ್ಪಂದ ದಾಖಲೆಗಳನ್ನು ವಿನಿಮಯ ಮಾಡಿಕೊಳ್ಳಲಾಯಿತು.

ಕತಾರ್ ಅಮೀರ್ ಭೇಟಿ ನಮ್ಮ ಬೆಳೆಯುತ್ತಿರುವ ಬಹುಮುಖ ಪಾಲುದಾರಿಕೆಗೆ ಮತ್ತಷ್ಟು ವೇಗ ನೀಡುತ್ತದೆ ಎಂದು ವಿದೇಶಾಂಗ ಸಚಿವಾಲಯ ಹೇಳಿದೆ.

ಪ್ರಧಾನಿ ಮೋದಿ ಮತ್ತು ಕತಾರ್ ಅಮೀರ್ ಹೈದರಾಬಾದ್ ಹೌಸ್‌ನಲ್ಲಿ ಹಲವಾರು ದ್ವಿಪಕ್ಷೀಯ ವಿಷಯಗಳನ್ನು ಒಳಗೊಂಡ ಮಾತುಕತೆ ನಡೆಸಿದರು.

ಭಾರತ ಮತ್ತು ಕತಾರ್ ನಡುವೆ ದ್ವಿಮುಖ ತೆರಿಗೆಯನ್ನು ತಪ್ಪಿಸುವ ಮತ್ತು ಆದಾಯದ ಮೇಲಿನ ತೆರಿಗೆಗೆ ಸಂಬಂಧಿಸಿದಂತೆ ಆರ್ಥಿಕ ವಂಚನೆಯನ್ನು ತಡೆಗಟ್ಟುವ ಪರಿಷ್ಕೃತ ಒಪ್ಪಂದವನ್ನು ಸಹ ಈ ವೇಳೆ ವಿನಿಮಯ ಮಾಡಿಕೊಳ್ಳಲಾಯಿತು. ಪ್ರಧಾನಿ ಮೋದಿ ಅವರು ಸೋಮವಾರ ಖುದ್ದು ದೆಹಲಿಯ ಪಾಲಂ ವಿಮಾನ ನಿಲ್ದಾಣಕ್ಕೆ ತೆರಳಿ ಕತಾರ್‌ನ ಅಮೀರ್ ಶೇಖ್ ತಮೀಮ್ ಬಿನ್ ಹಮದ್ ಅಲ್ ಥಾನಿ ಅವರನ್ನು ಬರಮಾಡಿಕೊಂಡಿದ್ದರು.

ಮೈಸೂರು ಮಿತ್ರ

ಮೈಕ್ರೋ ಫೈನಾನ್ಸ್‌ಗಳಿಂದ ಕಿರುಕುಳ ಮುಂದುವರೆದರೆ ನಿರ್ದಾಕ್ಷಿಣ್ಯ ಕ್ರಮ

ಪ್ರಗತಿ ಪರಿಶೀಲನಾ ಸಭೆಯಲ್ಲಿ ಅಧಿಕಾರಿಗಳಿಗೆ ಸಚಿವ ಚಲುವರಾಯಸ್ವಾಮಿ ತಾಕೀತು

● ಜೂನ್‌ವರೆಗೂ ಕುಡಿಯುವ, ಬೆಳೆಗಳಿಗೆ ನೀರು ● ಸಾರ್ವಜನಿಕ ಸಮಸ್ಯೆಗಳಿಗೆ ಸ್ಪಂದಿಸದ ಅಧಿಕಾರಿಗಳ ವಿರುದ್ಧ ಕ್ರಮ

ಮಂಡ್ಯ,ಫೆ.18– ಮೈಕ್ರೋ ಫೈನಾನ್ಸ್ ಕಂಪನಿಗಳ ಹಾವಳಿ ತಡೆಯುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಸುಗ್ರೀವಾಜ್ಞೆ ಹೊರಡಿಸಿದ್ದು, ಇನ್ನು ಮುಂದೆ ಜಿಲ್ಲೆಯಲ್ಲಿ ಸಾರ್ವಜನಿಕರಿಗೆ ಕಿರುಕುಳ ನೀಡುವುದು ಕಂಡು ಬಂದರೆ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಸೂಚಿಸಿದರು.

ನಗರದ ಜಿಪಂ ಸಭಾಂಗಣದಲ್ಲಿ ಮಂಗಳವಾರ ನಡೆದ ಕೆಡಿಪಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಮೈಕ್ರೋ ಫೈನಾನ್ಸ್‌ಗಳಿಂದ ಸಾರ್ವಜನಿಕರಿಗೆ ಆಗುತ್ತಿರುವ ಸಮಸ್ಯೆಗಳನ್ನು ತಡೆಯುವ ನಿಟ್ಟಿನಲ್ಲಿ ಸರ್ಕಾರ ಅನೇಕ ಕ್ರಮಗಳನ್ನು ತೆಗೆದುಕೊಳ್ಳುತ್ತಿದ್ದು, ಕೆಲವೊಂದಕ್ಕೆ ರಾಜ್ಯಪಾಲರ ಅನುಮತಿ ಸಿಕ್ಕಿಲ್ಲ. ಆದರೆ ಮುಂದಿನ ಅಧಿವೇಶನದಲ್ಲಿ ಈ ಬಗ್ಗೆ ಸರ್ಕಾರ ಸೂಕ್ತ ಕ್ರಮ ಕೈಗೊಳ್ಳಲಿದೆ ಎಂದು ತಿಳಿಸಿದರು.

ಜಿಲ್ಲಾಧಿಕಾರಿ ಡಾ.ಕುಮಾರ ಸಭೆಗೆ ಮಾಹಿತಿ ನೀಡಿ, ಮೈಕ್ರೋ ಫೈನಾನ್ಸ್‌ಗಳ ಹಾವಳಿಯಿಂದ ಜಿಲ್ಲೆಯಲ್ಲಿ ಇದುವರೆಗೂ ಮೂವರು ಆತ್ಮಹತ್ಯೆ ಮಾಡಿಕೊಂಡಿದ್ದು, ಎಲ್ಲರೂ ಸಹ ಮಳವಳ್ಳಿಯವರೇ ಆಗಿದ್ದಾರೆ. ಮಹಾಲಕ್ಷ್ಮಿ, ಪ್ರೇಮ ಸೇರಿದಂತೆ ಒಟ್ಟು ಮೂವರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಈ ಹಿನ್ನೆಲೆಯಲ್ಲಿ ಪ್ರಕರಣ ದಾಖಲಿಸಿಕೊಂಡು ಜಿಲ್ಲಾಡಳಿತದಿಂದ ಪರಿಹಾರ ನೀಡಲಾಗಿದೆ ಎಂದು ವಿವರಿಸಿದರು.

ಮೈಕ್ರೋ ಫೈನಾನ್ಸ್‌ಗಳ ಹಾವಳಿ ತಡೆಯಲು ಆರ್‌ಬಿಐ ಅಧಿನಿಯಮಡಡಿ ಬರುವ ಜಿಲ್ಲೆಯ 28 ಸಂಸ್ಥೆಗಳೊಂದಿಗೆ ನಾನು, ಜಿಪಂ ಸಿಇಒ ಹಾಗೂ ಎಸ್ಪಿ ಮೂರು ಬಾರಿ ಸಭೆ ನಡೆಸಿದ್ದೇವೆ. ಕಾನೂನು ವ್ಯಾಪ್ತಿಯಲ್ಲಿ ಸಾಲ ವಸೂಲಿಗೆ ಸೂಚನೆ ನೀಡಿದ್ದೇವೆ. ಅದಲ್ಲದೆ, ಹೆಲ್ಪ್‌ಲೈನ್‌ಗಳನ್ನು ಸಹ ತೆರೆಯಲಾಗಿದೆ. ಆರ್‌ಬಿಐ ಅನುಮತಿ ಇಲ್ಲದ ಕೆಲವು ಮೈಕ್ರೋ ಫೈನಾನ್ಸ್ ಸಂಸ್ಥೆಗಳ ಮೇಲೆ ನಿಗಾ ಇಡಲಾಗಿದೆ. ಹೆಲ್ಪ್‌ಲೈನ್‌ನಿಂದ ಬಂದ ದೂರುಗಳನ್ನು ಪೊಲೀಸ್ ಇಲಾಖೆಗೆ ಹಸ್ತಾಂತರಿಸಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮಧ್ಯೆ ಪ್ರವೇಶಿಸಿದ ಶಾಸಕ ರಮೇಶ್‌ಬಂಡಿಸಿದ್ದೇಗೌಡ, ಏನೇ ನಿಯಮ ಜಾರಿಗೆ ಬಂದರೂ ಹಳ್ಳಿಗಳಲ್ಲಿ ಮನೆ ಬಾಗಿಲಿಗೆ ಬಂದು ಗ್ರಾಮೀಣ ಜನರಿಗೆ ಕೆಲ ಫೈನಾನ್ಸ್ ಕಂಪನಿಗಳು ಸಾಲ ಕೊಡುತ್ತಿರುವುದು ನಡೆಯುತ್ತಲೇ ಇದೆ. ಆದರೆ ಇದನ್ನು ತಡೆಗಟ್ಟಲು ಸ್ಥಳೀಯ



ಮಂಡ್ಯದ ಜಿಪಂ ಸಭಾಂಗಣದಲ್ಲಿ ಉಸ್ತುವಾರಿ ಸಚಿವ ಚಲುವರಾಯಸ್ವಾಮಿ ಅಧ್ಯಕ್ಷತೆಯಲ್ಲಿ ಕೆಡಿಪಿ ಸಭೆ ನಡೆಯಿತು.

ತಹಸೀಲ್ದಾರ್, ಇಒ, ಡಿವೈಎಸ್ಪಿ ನೇತೃತ್ವದಲ್ಲಿ ಆಯಾ ಫೈನಾನ್ಸ್ ಕಂಪನಿಗಳು ಹಾಗೂ ಸಾರ್ವಜನಿಕರಿಗೆ ತಿಳಿ ಹೇಳುವ ಕೆಲಸ ನಡೆಯಲಿ ಎಂದು ಒತ್ತಾಯಿಸಿದ ಸಂದರ್ಭದಲ್ಲಿ ಶಾಸಕರ ಸಲಹೆಯನ್ನು ಗಂಭೀರವಾಗಿ ಪರಿಗಣಿಸುವಂತೆ ಸಚಿವ ಚಲುವರಾಯಸ್ವಾಮಿ ಜಿಲ್ಲಾಧಿಕಾರಿಗೆ ಸೂಚಿಸಿದರು.

ಜಿಲ್ಲಾಡಳಿತದ ಅಂಕಿ ಅಂಶಗಳ ಪ್ರಕಾರ ಈ ವರ್ಷ ಅಧಿಕಾರಿಗಳು ಸೂಕ್ತವಾಗಿ ಕಾರ್ಯನಿರ್ವಹಿಸಿರುವುದು ಗಮನಕ್ಕೆ ಬಂದಿದೆ. ಇದು ಒಳ್ಳೆಯ ವಿಚಾರವಾದರೂ ಸಾರ್ವಜನಿಕ ವಲಯದಲ್ಲಿ ಅಧಿಕಾರಿಗಳ ಬಗ್ಗೆ ಪ್ರಶಂಸೆ ವ್ಯಕ್ತವಾಗಬೇಕು. ಅಂಕಿ ಅಂಶ ಅಧಿಕಾರಿಗಳ ಸಾಧನೆ ನನಗೆ ಅವಶ್ಯಕತೆ ಇಲ್ಲ. ಸಾರ್ವಜನಿಕರಿಂದ ಅಧಿಕಾರಿಗಳ ನಿರ್ಲಕ್ಷ್ಯತೆ ಬಗ್ಗೆ ಈಗಲೂ ಹಲವು ದೂರುಗಳು ಬರುತ್ತಿವೆ. ಸಾರ್ವಜನಿಕರಿಗೆ ಸ್ಪಂದಿಸದ ಅಧಿಕಾರಿಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕಾಗುತ್ತದೆ ಎಂದು ಎಚ್ಚರಿಸಿದರು.

ಸಭೆಯಲ್ಲಿ ಕೆಆರ್‌ಎಸ್ ಅಣೆಕಟ್ಟೆಯ ನೀರಿನ ವಿಚಾರದ ಬಗ್ಗೆ ಗಮನಕ್ಕೆ ತಂದ ಜಿಲ್ಲಾಧಿಕಾರಿ ಡಾ.ಕುಮಾರ, ಪ್ರಸ್ತುತ ಜಲಾಶಯದಲ್ಲಿ ಸಮರ್ಪಕವಾಗಿ ನೀರಿದ್ದು, ಮುಂದಿನ ಜೂನ್‌ವರೆಗೂ ಸಮಸ್ಯೆಯಾಗುವುದಿಲ್ಲ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ನೀರಾವರಿ ಇಲಾಖೆ ಅಧಿಕಾರಿಗಳ ಪ್ರಶ್ನಿಸಿದ ಸಚಿವ ಚಲುವರಾಯಸ್ವಾಮಿ, ನಾಲೆಗಳಿಗೆ ಸಮರ್ಪಕವಾಗಿ ನೀರು ತಲುಪುತ್ತಿದೆಯೇ? ಹಾಗೂ ಕಡೇ ಭಾಗಕ್ಕೆ ಸಮಸ್ಯೆ ಇಲ್ಲದಂತೆ ನೀರು ಹೋಗುತ್ತಿದೆಯೇ ಎಂದು ಪ್ರಶ್ನಿಸಿದರು. ಇದಕ್ಕೆ ಉತ್ತರಿಸಿದ ನೀರಾವರಿ ಇಲಾಖೆ ಅಧಿಕಾರಿಗಳು, ಈಗಾಗಲೇ ರೈತರು ಬೆಳೆಗಳನ್ನು ಬೆಳೆಯಲು ಮುಂದಾಗಿದ್ದು, ಸೂಕ್ತ ನೀರು ಒದಗಿಸಲಾಗಿದೆ. ಕಟ್ಟು ಪದ್ಧತಿಯಲ್ಲಿ ಹಂತ ಹಂತವಾಗಿ ರೈತರ ಬೆಳೆಗಳಿಗೆ ನೀರು ಕೊಡಲಾಗುತ್ತಿದೆ. ನಾಲೆಗಳ ಬಳಿ ಅಪಘಾತ ಸಂಭವಿಸಿದಾಗ ನೀರು ನಿಲ್ಲಿಸಿದ್ದೇವೆ. ಗಿಡಗಂಟಿಗಳು ಬೆಳೆದಾಗ ಕಡೇ ಭಾಗಕ್ಕೆ ನೀರು ತಲುಪುವುದು ತಡವಾಗಿದೆ ಎಂದು ಸಭೆಗೆ ಮಾಹಿತಿ ನೀಡಿದರು.

ಈ ಬಗ್ಗೆ ಸ್ಪಷ್ಟನೆ ನೀಡಿದ ಜಿಲ್ಲಾಧಿಕಾರಿ ಡಾ.ಕುಮಾರ, ವಿ.ಸಿ.ನಾಲಾ ವ್ಯಾಪ್ತಿಯಲ್ಲಿ ಮೂರ್‍ನಾಲ್ಕು ಅಪಘಾತ ಪ್ರಕರಣಗಳು ನಡೆದಿದ್ದು, ಆಗ ಅನಿವಾರ್ಯವಾಗಿ ನೀರು ನಿಲ್ಲಿಸಿದ್ದೇವೆ. ವಿ.ಸಿ.ನಾಲಾ ವ್ಯಾಪ್ತಿಯಲ್ಲಿ ಗಿಡಗಂಟಿಗಳು ವ್ಯಾಪಕವಾಗಿ ಬೆಳೆದಿದ್ದ ಪರಿಣಾಮ ಕಡೇ ಭಾಗಕ್ಕೆ ನೀರು ತಲುಪುವುದು ವಿಳಂಬವಾಗಿದೆ. ಇದೀಗ ಎಲ್ಲ ಸಮಸ್ಯೆಗಳನ್ನು ಬಗೆಹರಿಸಿದ್ದೇವೆ. ಅಂಥ ಸಮಸ್ಯೆ ಕಂಡು ಬಂದರೆ ಸಂಬಂಧಿಸಿದ ಅಧಿಕಾರಿಗಳು ಸ್ಥಳ ಪರಿಶೀಲಿಸಿ ಸೂಕ್ತ ಕ್ರಮ ವಹಿಸುವಂತೆ ಸೂಚಿಸಿದರು.

ಸಚಿವ ಚಲುವರಾಯಸ್ವಾಮಿ ಮಾತನಾಡಿ, ನಾಲೆಗಳಿಗೆ ನೀರು ಬಿಡುವ ಮುನ್ನ ಸಂಬಂಧಿಸಿದ ಅಧಿಕಾರಿಗಳು ಪರಿಶೀಲಿಸಿ ಸವಡೆಗಳ ಮುಖಾಂತರ ಗಿಡಗಂಟಿಗಳನ್ನು ತೆರವುಗೊಳಿಸುವ ಕೆಲಸಕ್ಕೆ ಮುಂದಾಗಬೇಕು. ಸವಡೆಗಳಿಗೆ ಯಾವುದೇ ಸಮಸ್ಯೆಯಾಗದಂತೆ ವೇತನ ನೀಡುತ್ತಿದ್ದು, ನಾಲೆ ಕೆರೆಕಟ್ಟೆಗಳ ಅಭಿವೃದ್ಧಿಗೆ ಮುಖ್ಯಮಂತ್ರಿಗಳೊಂದಿಗೆ ಮಾತನಾಡಿ ತಾಲೂಕುವಾರು ಹಣವನ್ನು ಕೊಡಿಸುವ ಜವಾಬ್ದಾರಿ ನನ್ನದು ಎಂದು ಸಭೆಯಲ್ಲಿದ್ದ ಶಾಸಕರಿಗೆ ಭರವಸೆ ನೀಡಿದರು.

ಸಭೆಯಲ್ಲಿ ಶಾಸಕರಾದ ಪಿ.ಎಂ.ನರೇಂದ್ರಸ್ವಾಮಿ, ಎ.ಬಿ.ರಮೇಶ್‌ಬಂಡಿಸಿದ್ದೇಗೌಡ, ಪಿ.ರವಿಕುಮಾರ್‌ಗೌಡ ಗಣಿಗ, ವಿಧಾನ ಪರಿಷತ್ ಸದಸ್ಯರಾದ ಕೆ.ವಿವೇಕಾನಂದ, ದಿನೇಶ್‌ಗೂಳಿಗೌಡ, ಮಧು ಜಿ.ಮಾದೇಗೌಡ, ಜಿಪಂ ಸಿಇಒ ಕೆ.ಆರ್.ನಂದಿನಿ, ಎಸ್ಪಿ ಮಲ್ಲಿಕಾರ್ಜುನ ಬಾಲದಂಡಿ, ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಅಧ್ಯಕ್ಷ ಚಿಕ್ಕಲಿಂಗಯ್ಯ, ಡಿಸಿಸಿ ಬ್ಯಾಂಕ್ ಅಧ್ಯಕ್ಷ ಜೋಗಿಗೌಡ ಸೇರಿದಂತೆ ಮತ್ತಿತರರಿದ್ದರು.

ಮನೆಯಿಂದ ಹೊರ ಹಾಕಿರುವ ಮಗ–ಸೊಸೆ ಮೇಲೆ ಕ್ರಮ ಜರುಗಿಸದಿದ್ದರೆ ದಯಾಮರಣ ಕೊಡಿ

ಶ್ರೀರಂಗಪಟ್ಟಣ: ಮನೆ ಬೀಗ ಮುರಿದು ಮಗ ಮತ್ತು ಸೊಸೆ ನನ್ನ ಮನೆಯಲ್ಲಿ ಚಿನ್ನಾಭರಣ ದೋಚಿ ಹಲ್ಲೆ ನಡೆಸಿ ಮನೆಯಿಂದ ಹೊರಹಾಕಿದ್ದು, ಪೊಲೀಸರು ಕ್ರಮ ಜರುಗಿಸದೆ ನಿರ್ಲಕ್ಷ್ಯ ತೋರುತ್ತಿರುವುದರಿಂದ ತಾವು ದಯಾಮರಣ ಕೋರಿ ಅರ್ಜಿ ಸಲ್ಲಿಸಲಾಗುವುದು ಎಂದು ಬೆಳಗೊಳ ಗ್ರಾಮದ ಶಿವರಾಮು ತಿಳಿಸಿದ್ದಾರೆ.

ಪಟ್ಟಣದ ಪತ್ರಿಕಾ ಭವನದಲ್ಲಿ ತಾಲೂಕಿನ ಬೆಳಗೊಳ ಗ್ರಾಮದ 70ವರ್ಷ ವಯಸ್ಸಿನ ವಯೋವೃದ್ಧ ಶಿವರಾಮು ತಮ್ಮ ಪುತ್ರಿಯೊಂದಿಗೆ ಸುದ್ದಿಗೋಷ್ಠಿ ನಡೆಸಿ ಈ ವಿಷಯ ತಿಳಿಸಿದ್ದಾರೆ.



ಸುದ್ದಿಗೋಷ್ಠಿಯಲ್ಲಿ ತಮ್ಮ ಪುತ್ರಿಯೊಂದಿಗೆ ಮಾತನಾಡುತ್ತಿರುವ ಶಿವರಾಮು.

ತಮಗೆ ಓರ್ವ ಪುತ್ರ ಹಾಗೂ ಇಬ್ಬರು ಪುತ್ರಿಯರು ಸೇರಿದಂತೆ ಒಟ್ಟು ಮೂವರು ಮಕ್ಕಳಿದ್ದಾರೆ. ನನ್ನ ಮಗ, ಸೊಸೆ ಹಾಗೂ ನಾನು ಕಳೆದ 5–6 ವರ್ಷಗಳಿಂದ ಒಂದೇ ಮನೆಯ ಮುಂದಿನ ಭಾಗದಲ್ಲಿ ನಾನು, ಹಿಂದಿನ ಭಾಗದಲ್ಲಿ ಮಗ ಸೊಸೆ ವಾಸವಾಗಿದ್ದಾರೆ. ನಾನು ಮನೆಯಲ್ಲಿ ಇಲ್ಲದಿದ್ದಾಗ ಮನೆ ಬೀಗ ಹೊಡೆದು ಮಗ, ಸೊಸೆ ಮನೆಗೆ ನುಗ್ಗಿ ಚಿನ್ನ ಹಾಗೂ ಹಣ ಕಳ್ಳತನ ಮಾಡಿದ್ದಾರೆ. ವಿಚಾರಿಸಿದ ನನ್ನ ಮೇಲೆ ಹಲ್ಲೆ ಮಾಡಿ, ಮನೆಯಿಂದ ಹೊರಹಾಕಿದ್ದಾರೆ. ಆಸ್ತಿ ವಿಚಾರವಾಗಿ ನಿರಂತರವಾಗಿ ನನ್ನ ಮೇಲೆ ಹಲ್ಲೆ ನಡೆಸುತ್ತಿದ್ದು, ಈ ಸಂಬಂಧ ಕೆಆರ್‌ಎಸ್ ಪೊಲೀಸ್ ಠಾಣೆಯಲ್ಲಿ 5–6 ಬಾರಿ ದೂರು ನೀಡಿದ್ದೇನೆ ಎಂದರು.

ಪ್ರತಿಯಾಗಿ ನನ್ನ ಮಗನಿಂದ ಮುಚ್ಚಳಿಕೆ ಬರೆಸಿಕೊಂಡು ಕಳುಹಿಸಿದ್ದಾರೇ ವಿನಃ ಯಾವುದೇ ಪ್ರಯೋಜನವಾಗಿಲ್ಲ ಈಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಹಾಗೂ ಹಿರಿಯ ನಾಗರಿಕ ವೇದಿಕೆಗೂ ಸಹ ದೂರು ನೀಡಿದ್ದೇನೆ. ಇಲ್ಲೂ ನಮಗೆ ನ್ಯಾಯ ಸಿಗದಿದ್ದಲ್ಲಿ ಜಿಲ್ಲಾಧಿಕಾರಿಗಳಿಂದ ದಯಾಮರಣ ಕೋರಿ ಅರ್ಜಿ ಸಲ್ಲಿಸಲಿದ್ದೇನೆ ಎಂದು ತಿಳಿಸಿದರು.

ಬೆಳೆ ವಿಮೆ ನೋಂದಣಿಯಾದ ರೈತರು ರೈತ ಸಂಪರ್ಕ ಕೇಂದ್ರ ಸಂಪರ್ಕಿಸಿ

ನಾಗಮಂಗಲ: 2023–2024ನೇ ಸಾಲಿನ ಪ್ರಧಾನ ಮಂತ್ರಿ ಫಸಲ್ ಬೀಮಾ ಯೋಜನೆ ಅಡಿ ಮುಂಗಾರು ಮತ್ತು ಹಿಂಗಾರು ಹಂಗಾಮಿನಲ್ಲಿ ಬೆಳೆ ವಿಮೆಗೆ ನೋಂದಣಿಯಾಗಿರುವ ರೈತರ ಪೈಕಿ 2648 ಪ್ರಸ್ತಾವನೆಗಳು ಬೆಳೆ ಸಂರಕ್ಷಣೆಯಲ್ಲಿ ದಾಖಲಾಗಿರುವ ದತ್ತಾಂಶ ಮತ್ತು ಬೆಳೆ ಸಮೀಕ್ಷೆಯಲ್ಲಿನ ದತ್ತಾಂಶಕ್ಕೂ ತಾಳೆ ಬಾರದ ಕಾರಣ ವಿಮಾ ಸಂಸ್ಥೆಯಿಂದ ತಿರಸ್ಕೃತಗೊಂಡಿದೆ.

ಸದರಿ ಪ್ರಸ್ತಾವನೆಗಳನ್ನು ಸಹಾಯಕ ಕೃಷಿ ನಿರ್ದೇಶಕರ ಕಚೇರಿ ರೈತ ಸಂಪರ್ಕ ಕೇಂದ್ರ ಆಯಾ ಗ್ರಾಮ ಪಂಚಾಯಿತಿಗಳ ಸೂಚನಾ ಫಲಕಗಳಲ್ಲಿ ಪ್ರಕಟಣೆ ಮಾಡಿದ್ದು ರೈತರು ಆಕ್ಷೇಪಣೆ ಸಲ್ಲಿಸಲು 15 ದಿವಸಗಳ ಕಾಲಾವಕಾಶವಿರುತ್ತದೆ.ರೈತರು ಸೂಕ್ತ ದಾಖಲಾತಿಗಳೊಂದಿಗೆ ರೈತ ಸಂಪರ್ಕ ಕೇಂದ್ರ ಕೃಷಿ ಅಧಿಕಾರಿಗಳನ್ನು ಸಂಪರ್ಕಿಸಲು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ರೋಟರಿ ನಡೆ ಹಳ್ಳಿ ಕಡೆ ಕಾರ್ಯಕ್ರಮ



ಭಾರತೀನಗರ, ಫೆ.18– ಇಲ್ಲಿಗೆ ಸಮೀಪದ ಮಡೇನಹಳ್ಳಿ ಸರ್ಕಾರಿ ಪ್ರೌಢಶಾಲೆಯಲ್ಲಿ ರೋಟರಿ ಸಂಸ್ಥೆಯಿಂದ ರೋಟರಿ ನಡೆ ಹಳ್ಳಿ ಕಡೆ ಕಾರ್ಯಕ್ರಮ ನಡೆಸಲಾಯಿತು. ಅಧ್ಯಕ್ಷತೆಯನ್ನು ಭಾರತೀನಗರ ರೋಟರಿ ಅಧ್ಯಕ್ಷ ಎಸ್.ಕೆ.ಶಶಿಕುಮಾರ್ ವಹಿಸಿದ್ದರು.

ಕ್ರೀಡಾಸಾಮಗ್ರಿ ವಿತರಣೆ: ಕಾಡುಕೊತ್ತನಹಳ್ಳಿ ಅಂಬೇಡ್ಕರ್ ಶಾಲೆ, ಮಾದರಹಳ್ಳಿ, ಭಾರತೀನಗರ, ಚಿಕ್ಕರಸಿನಕೆರೆ, ಕ್ಯಾತಘಟ್ಟ ಈ 5 ಪ್ರೌಢಶಾಲೆಗಳಿಗೆ 20 ಸಾವಿರ ಬೆಲೆಬಾಳುವ ಕ್ರೀಡಾ ಸಾಮಗ್ರಿಗಳನ್ನು ಕಿಟ್‌ಗಳೊಂದಿಗೆ ವಿತರಿಸಲಾಯಿತು. ಮಣಿಗೆರೆ ಸರ್ಕಾರಿ ಐಟಿಐ ಕಾಲೇಜುಗಳಿಗೆ ಹಣಕಾಸು ನಿರ್ವಹಣೆ ಬಗ್ಗೆ ಉಪನ್ಯಾಸ ನೀಡಲಾಯಿತು.

ರೈತರಿಗೆ ಸನ್ಮಾನ: ಕ್ಯಾತಘಟ್ಟ ಸರ್ಕಾರಿ ಶಾಲಾ ಆವರಣದಲ್ಲಿ ರಂಗೋಲಿ ಸ್ಪರ್ಧೆ, ಚಿತ್ರಕಲಾ ಸ್ಪರ್ಧೆ, ಪೂಜಾಕುಣಿತ, ಕೋಲಾಟ, ದೊಣ್ಣೆವರಸೆ, ಹಲವಾರು ಹಳ್ಳಿಸೊಗಡಿನ ಕಾರ್ಯಕ್ರಮಗಳನ್ನು ನಡೆಸುವುದರೊಂದಿಗೆ 3 ಮಂದಿ ಪ್ರಗತಿಪರ ಯುವ ರೈತರಿಗೆ ಸನ್ಮಾನಿಸಲಾಯಿತು.

ಬರಡುರಾಸು ತಪಾಸಣಾ ಶಿಬಿರ: ಹಾಗಲಹಳ್ಳಿ ಗ್ರಾಮದಲ್ಲಿ ಪಶುಸಂಗೋಪನಾ ಇಲಾಖೆ ಮತ್ತು ಮನ್ಮುಲ್ ಸಹಯೋಗದೊಂದಿಗೆ ಬರಡು ರಾಸು ತಪಾಸಣಾ ಶಿಬಿರವನ್ನು ಆಯೋಜಿಸಿ ಉತ್ತಮ ರಾಸುಗಳಿಗೆ ಬಹುಮಾನ ವಿತರಣೆ ಮಾಡಲಾಯಿತು. ನಂತರ ವಿವಿಧ ಶಾಲೆಯ ಮೂರು ಶಿಕ್ಷಕರನ್ನು ಸನ್ಮಾನಿಸಿ ಗೌರವಿಸಲಾಯಿತು.

ರೋಟರಿ ಸಂಸ್ಥೆಯ ಜಿಲ್ಲಾಪಾಲಕರಾದ ಸತೀಶ್‌ಮಾದವನ್, ಮಹದೇವ್‌ಪ್ರಸಾದ್, ಮರಿಸ್ವಾಮಿ, ವಿಕ್ರಮ್‌ರಾಜ್‌ಅರಸು, ರವಿಚಕ್ರವರ್ತಿ, ಕೆಆರ್.ಸುಂದ್ರೇಶ್, ಕಿಶೋರ್ ಇದ್ದರು.

ಕಿಡಿಗೇಡಿಗಳಿಂದ ಶಾಲೆಯ ಕೈತೋಟ ನಾಶ

ಕೆ.ಆರ್.ಪೇಟೆ,ಫೆ.18– ತಾಲೂಕಿನ ಅಕ್ಕಿಹೆಬ್ಬಾಳು ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿರುವ ಶಾಲಾ ಕೈತೋಟದಲ್ಲಿ ಬೆಳೆದಿದ್ದ ಔಷಧೀಯ ಸಸ್ಯಗಳು ಸೇರಿದಂತೆ, ಆಕರ್ಷಣೀಯ ಅಲಂಕಾರಿಕ ಗಿಡಗಳನ್ನು ಕಿಡಿಗೇಡಿಗಳು ಕಿತ್ತುಹಾಕಿ ನಾಶ ಮಾಡಿರುವ ಘಟನೆ ನಡೆದಿದೆ.

ಅಕ್ಕಿಹೆಬ್ಬಾಳು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ಶಾಲಾ ಅಭಿವೃದ್ಧಿ ಸಂಸ್ಥೆ, ಪೋಷಕರು, ಗ್ರಾಮದ ಮುಖಂಡರು, ಶಾಲಾ ಶಿಕ್ಷಕರು ಮತ್ತು ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳ ಸಹಕಾರದಿಂದ ಸುಂದರ ಕೈತೋಟವನ್ನು ನಿರ್ಮಾಣ ಮಾಡಲಾಗಿತ್ತು. ಹೂವಿನ ಗಿಡಗಳು, ಸಸಿಗಳು ಜೊತೆಯಲ್ಲಿ ಔಷಧೀಯ ಸಸಿಗಳನ್ನು ಸೇರಿದ ಹಾಗೆ ಅನೇಕ ರೀತಿಯ ಗಿಡಗಳನ್ನು ಹಾಕಲಾಗಿತ್ತು.

ಭಾನುವಾರ ರಾತ್ರಿ ಕೈ ತೋಟಕ್ಕೆ ನುಗ್ಗಿರುವ ಕಿಡಿಗೇಡಿಗಳು ಸುಂದರವಾಗಿ ಬೆಳೆದಿದ್ದ ಬಣ್ಣ ಬಣ್ಣದ ಅಲಂಕಾರಿಕ ಗಿಡಗಳನ್ನು ಬುಡ ಸಮೇತ ಕಿತ್ತು ಹಾಳು ಮಾಡಿದ್ದಾರೆ. ಶಾಲೆ ಮುಗಿದ ನಂತರ ಶಾಲಾ ಆವರಣದಲ್ಲಿ ಕೆಲ ಕಿಡಿಗೇಡಿಗಳು



ವಾಲಿಬಾಲ್ ಮತ್ತು ಇತರೆ ಕ್ರೀಡೆಗಳನ್ನು ಆಡಲು ಆಟದ ಮೈದಾನಕ್ಕೆ ಬರುತ್ತಾರೆ. ಶಾಲಾ ರಜೆಯ ದಿನವಂತೂ ಶಾಲಾ ಮೈದಾನ ಅವರದ್ದೇ ಆಗಿರುತ್ತದೆ.

ಶಾಲಾ ರಜೆಯ ದಿನಗಳಲ್ಲಿ ನೀರಿನ ನಲ್ಲಿಗಳನ್ನು ಆಫ್ ಮಾಡಿ ಹೋಗಿರುತ್ತೇವೆ. ಆಟ ಆಡಲು ಬಂದಿರುವ ಕಿಡಿಗೇಡಿಗಳು ನೀರು ಸಿಗದೇ ಇರುವ ಸಂದರ್ಭದಲ್ಲಿ ನಲ್ಲಿಗಳನ್ನು ಮುರಿದು ಹಾಕುವುದರೊಂದಿಗೆ ಶಾಲೆಯ ಸುಂದರ ಪರಿಸರವನ್ನು ಕೂಡ ಹಾಳು ಮಾಡಿ ಹೋಗಿದ್ದಾರೆ ಎಂದು ಶಾಲೆಯ ಮುಖ್ಯ ಶಿಕ್ಷಕ ರವಿ ತಿಳಿಸಿದ್ದಾರೆ.

ಒಂದನೇ ಪುಟದಿಂದ

ಏರಿಯಲ್ ಸರ್ವೆ 'ನಕ್ಷಾ' ಯೋಜನೆ

ಇಲಾಖೆ ಸಮನ್ವಯತೆಯಿಂದ ಈ ಕೆಲಸ ಮಾಡಬೇಕು. ಈ ಮೂಲಕ ಜನರ ಸಮಸ್ಯೆ ಪರಿಹಾರವಾಗಬೇಕು ಎಂದು ಸೂಚಿಸಿದರು. ಬೋಗಾದಿ ಸುತ್ತಮುತ್ತಲಿನ ಹೊಲಗಳೆಲ್ಲಾ ಬಡಾವಣೆಗಳಾಗಿವೆ. ಇದರಿಂದ ಕೃಷಿ ಮರೆಯಾಗಿದೆ. ಇನ್ನು ಮುಂದಾದರೂ ಭೂಮಿ ಮಾರಾಟ ಮಾಡದೆ ಉಳಿಸಿಕೊಳ್ಳಿ ಎಂದು ಜಿ.ಟಿ. ದೇವೇಗೌಡರು ಸಲಹೆ ನೀಡಿದರು. ವಿಧಾನ ಪರಿಷತ್ ಸದಸ್ಯರಾದ ಸಿ.ಎನ್.ಮಂಜೇಗೌಡ, ವಿವೇಕಾನಂದ, ಭೂಮಾಪನ ಇಲಾಖೆಯ ಉಪ ನಿರ್ದೇಶಕಿ ಸೀಮಾತಿನಿ, ಡಿಡಿಆರ್ ಎಲ್ ಇಲಾಖೆಯ ರಮ್ಯಾ, ಭೂ ದಾಖಲೆ ಇಲಾಖೆಯ ಸಹಾಯಕ ನಿರ್ದೇಶಕ ಚಿಕ್ಕಣ್ಣ, ತಹಶೀಲ್ದಾರ್ ಮಹೇಶ್ ಕುಮಾರ್ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ನಕ್ಷಾ ಯೋಜನೆಯ ಪಿಆರ್ ಕಾರ್ಡ್ ಇದ್ದರೆ ಅಕ್ರಮ ಮಾರಾಟ ಸಾಧ್ಯವಿಲ್ಲ

ನಕ್ಷಾ ಯೋಜನೆಯಲ್ಲಿ ಪಿಆರ್ ಕಾರ್ಡ್ ಇದ್ದರೆ ಮನೆ ಹಾಗೂ ನಿವೇಶನವನ್ನು ಅಕ್ರಮವಾಗಿ ಮಾರಾಟ ಮಾಡಲು ಸಾಧ್ಯವಾಗುವುದಿಲ್ಲ. ಇದರಿಂದ ಮನೆ ಹಾಗೂ ನಿವೇಶನದ ಮಾಲೀಕರು ಮೋಸ ಹೋಗುವುದಿಲ್ಲ ಎಂದು ಮೈಸೂರು ಪ್ರಾದೇಶಿಕ ಭೂ ದಾಖಲೆಗಳ ನಿರ್ದೇಶಕ ಇ.ಪ್ರಕಾಶ್ ತಿಳಿಸಿದರು.

ನಕ್ಷಾ ಯೋಜನೆಗೆ ಕೇಂದ್ರ ಸರ್ಕಾರ 194 ಕೋಟಿ ವೆಚ್ಚ ಮಾಡುತ್ತಿದೆ. ದೇಶದ 152 ನಗರಗಳನ್ನು ಇದಕ್ಕೆ ಆಯ್ಕೆ ಮಾಡಿಕೊಂಡಿದ್ದು, ಕರ್ನಾಟಕದ 10 ನಗರಗಳಲ್ಲಿ ಮೈಸೂರಿನ ಬೋಗಾದಿ ಪಟ್ಟಣ ಪಂಚಾಯಿ ಕೂಡ ಒಂದಾಗಿದೆ ಎಂದು ಹೇಳಿದರು. ಡ್ರೋನ್ ಮೂಲಕ ಏರಿಯಲ್ ಸರ್ವೆ ಮಾಡಲಾಗುವುದು. ಹಕ್ಕು ದಾಖಲೆಗಳ ಕುರಿತು ವಿಚಾರಣೆ ನಡೆಸಿ ಆಸ್ತಿದಾರರಿಗೆ ಅಂತಿಮವಾಗಿ ಪ್ರಾಪರ್ಟಿ ಕಾರ್ಡ್ ನೀಡಲಾಗುವುದು. ಈ ಯೋಜನೆಯನ್ನು ಸರ್ವೆ ಆಫ್ ಇಂಡಿಯಾ, ಕಂದಾಯ ಇಲಾಖೆ ಹಾಗೂ ಭೂಮಾಪನ ಇಲಾಖೆ ಹಾಗೂ ಪೌರಾಡಳಿತ ಇಲಾಖೆ ಜೊತೆಗೂಡಿ ಮಾಡುತ್ತವೆ ಎಂದರು. ಪಿಆರ್ ಕಾರ್ಡ್ ಅಧಿಕೃತವಾಗಿದ್ದು, ಇದರಲ್ಲಿ ಅಕ್ರಮ ಎಸಗಿ ಯಾರೂ ಮಾರಾಟ ಮಾಡಲು ಸಾಧ್ಯವಿಲ್ಲ. ಈ ಹಿನ್ನೆಲೆಯಲ್ಲಿ ಬೋಗಾದಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಪ್ರಾಯೋಗಿಕವಾಗಿ ನಕ್ಷಾ ಯೋಜನೆ ಕೈಗೆತ್ತಿಕೊಳ್ಳಲಾಗಿದೆ ಎಂದು ಪ್ರಕಾಶ್ ತಿಳಿಸಿದರು.

ಯೋಜನಾ ಅಧಿಕಾರಿಗಳೇ ಹೊಣೆ

ನಿವೇಶನಗಳಿಗೆ ಬಿ–ಖಾತಾ ನೀಡಿ, ಕಂದಾಯ ವಸೂಲಿ ಮಾಡಿ, ಅವರುಗಳನ್ನು ತೆರಿಗೆ ವ್ಯಾಪ್ತಿಗೆ ತನ್ನಿ ಎಂದು ಅಧಿಕಾರಿಗಳಿಗೆ ಆದೇಶ ಮಾಡಿದ್ದಾರೆ.

ಯಾವುದೇ ಸ್ವರೂಪದ ಮನೆ, ನಿವೇಶನಗಳಾಗಲೀ ಬಿ–ಖಾತಾ ನೀಡುವ ಮೂಲಕ ತೆರಿಗೆ ವ್ಯಾಪ್ತಿಗೆ ತನ್ನಿ, ಈ ಕಾರ್ಯ ಇಂದಿನಿಂದಲೇ ಆರಂಭಿಸಿ ಎಂದು ಕಟ್ಟಾದೇಶ ಮಾಡಿದರು. ಈ ಅಕ್ರಮ–ಸಕ್ರಮದಿಂದ ಸರ್ಕಾರ ಮತ್ತು ಸ್ಥಳೀಯ ಸಂಸ್ಥೆಗಳಿಗೆ ದೊಡ್ಡ ಪ್ರಮಾಣದಲ್ಲಿ ಆದಾಯ ಬರಲಿದೆ, ಈ ಆದಾಯವನ್ನು ಸ್ಥಳೀಯ ಅಭಿವೃದ್ಧಿಗೆ ಬಳಸಿ. ಇದರಿಂದ ಆರ್ಥಿಕ ಹೊರೆ ಕಡಿಮೆಯಾಗುತ್ತದೆ.

ಮೂರು ತಿಂಗಳೊಳಗೆ ಎಲ್ಲರಿಗೂ ಬಿ–ಖಾತಾ ನೀಡಿ ಕಾರ್ಯ ಮುಗಿಸಬೇಕು, ಇದರಲ್ಲಿ ಮಧ್ಯವರ್ತಿಗಳು ಹಾಗೂ ಬ್ರೋಕರ್‌ಗಳು ತಲೆ ಹಾಕದಂತೆ ಕ್ರಮ ವಹಿಸಿ, ಅವರಿಗೆ ತಕ್ಷಣ ಗೇಟ್‌ಪಾಸ್ ಕೊಡಿ. ಕಾಯ್ದೆ ಮೂಲಕ ಅನಧಿಕೃತ ಬಡಾವಣೆಗಳಿಗೆ ಅಂತ್ಯ ಹಾಡಲಾಗಿದೆ ಎಂಬುದನ್ನು ಅಧಿಕಾರಿಗಳು ಸ್ಪಷ್ಟವಾಗಿ ಅರ್ಥ ಮಾಡಿಕೊಂಡು ಕೆಲಸ ಮಾಡಬೇಕು, ನಿಮಗೆ 3 ತಿಂಗಳು ಮಾತ್ರ ಕಾಲಾವಕಾಶ ಕೊಟ್ಟಿದ್ದು, ಅಷ್ಟರೊಳಗೆ ಅಭಿಯಾನ ಪೂರ್ಣಗೊಳಿಸಬೇಕು, ಇದರಲ್ಲಿ ಯಾವುದೇ ರಾಜೀ ಇಲ್ಲ, ಅಧಿಕಾರಿಗಳು ರಾಜೀ ಮಾಡಿಕೊಂಡರೆ ಸಹಿಸುವುದಿಲ್ಲ. ಅಧಿಕಾರಿಗಳು ಕಾಯ್ದೆಯ ದೂರದೃಷ್ಟಿಯನ್ನು ಸ್ಪಷ್ಟ ಮತ್ತು ಖಚಿತವಾಗಿ ಅರ್ಥ ಮಾಡಿಕೊಳ್ಳಬೇಕು, ರಾಜ್ಯದಲ್ಲಿ ಇನ್ನೆಲ್ಲೂ ಅನಧಿಕೃತ ಬಡಾವಣೆಗಳು, ರೆವಿನ್ಯೂ ಬಡಾವಣೆಗಳು ತಲೆ ಎತ್ತಬಾರದು. ಅನಧಿಕೃತ ರೆವಿನ್ಯೂ ಬಡಾವಣೆಗಳಲ್ಲಿ ನಿವೇಶನ ಹೊಂದಿರುವವರಿಗೆ, ಮನೆ ಕಟ್ಟಿರುವವರಿಗೆ ತೊಂದರೆ ನೀಡಬಾರದು, ಬಡವರು, ಮಧ್ಯಮ ವರ್ಗದವರಿಗೆ ಅನುಕೂಲ ಮಾಡಿಕೊಡಲು ಒಂದು ಬಾರಿಯ ಪರಿಹಾರಕ್ಕೆ ಮುಂದಾಗಿದ್ದೇವೆ. ಸಂಬಂಧಪಟ್ಟ ಎಲ್ಲಾ ಸಚಿವರೂ ಈ ಕುರಿತು ಸ್ಪಷ್ಟಪಡಿಸಿದ್ದು, ಹೊಸ ಗೊಂದಲಗಳಿಗೆ ಅವಕಾಶ ಮಾಡಿಕೊಡಬಾರದು ಎಂದು ಎಚ್ಚರಿಸಿದರು.

ಅವಳಿ ಸಹೋದರರು, ಓರ್ವನ ಪತ್ನಿ

ಸೇರಿ ಬೆಟ್ಟಿಂಗ್‌ಗಾಗಿ ಸುಮಾರು 80 ಲಕ್ಷದವರೆಗೆ ಸಾಲ ಮಾಡಿದ್ದರು ಎಂದು ಹೇಳಲಾಗಿದೆ. ವಿಪರೀತ ಸಾಲದ ಜೊತೆಗೆ ಸಾಲ ಕೊಟ್ಟವರು ವಸೂಲಿಗೆ ಮುಂದಾದರು. ಸಾಲದ ಅಸಲು ನೀಡುವಂತೆ ಪೀಡಿಸುತ್ತಿದ್ದರು. ಕೆಲ ದಿನಗಳ ಕಾಲ ಸಬೂಬು ಹೇಳಿದರಾದರೂ ನಂತರ ಮೊಬೈಲ್ ಅಂಗಡಿ ಹಾಗೂ ಮನೆ ಬಳಿ ಹೋಗಿ ಗಲಾಟೆ ಮಾಡುತ್ತಿದ್ದರು. ಆದರೆ ಇವರಿಗೆ ಸಾಲ ತೀರಿಸುವ ಮಾರ್ಗಗಳೇ ಇರಲಿಲ್ಲ. ಅಲ್ಲದೆ ಜೋಬಿ ಆಂಟೋನಿ ತನ್ನ ಸಹೋದರಿ ಹೆಸರಿನಲ್ಲೂ ಲಕ್ಷಾಂತರ ರೂ. ಸಾಲ ಮಾಡಿದ್ದ. ಈ ವಿಚಾರದಲ್ಲಿ ಸಹೋದರರ ನಡುವೆ ವಿವಾದವೂ ಉಂಟಾಗಿತ್ತು. ಇದೆಲ್ಲದರಿಂದ ಜೋಶಿ ಆಂಟೋನಿ ಮನನೊಂದು ಸೋಮವಾರ ಸಂಜೆ ಹಂಚ್ಯಾ–ಸಾತಗಳ್ಳಿ ಸಮೀಪವಿರುವ ತಂದೆ–ತಾಯಿ ಸಮಾಧಿ ಬಳಿ ಮರಕ್ಕೆ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡರು. ಅದಕ್ಕೂ ಮುನ್ನ ತಾನು ಆತ್ಮಹತ್ಯೆ ಮಾಡಿಕೊಳ್ಳುವುದಾಗಿ ಸೆಲ್ಫೀ ವಿಡಿಯೋ ಮಾಡಿ, ಸಹೋದರಿ ಶರ್ಲೈನ್, ಸಹೋದರ ಜೋಬಿ ಹಾಗೂ ಅತ್ತಿಗೆ ಶರ್ಮಿಳಾಗೆ ಪೋಸ್ಟ್ ಮಾಡಿದ್ದ. ಅದರಲ್ಲಿ ಸಹೋದರ ಹಾಗೂ ಆತನ ಪತ್ನಿ ವಿರುದ್ಧವೂ ಆರೋಪ ಮಾಡಿದ್ದರು ಎನ್ನಲಾಗಿದೆ. ವಿಡಿಯೋ ನೋಡಿದ ಶರ್ಲೈನ್ ಪೊಲೀಸರಿಗೆ ವಿಷಯ ತಿಳಿಸಿ, ಅವರೊಂದಿಗೆ ಸ್ಮಶಾನದ ಬಳಿ ಹೋಗುವಷ್ಟರಲ್ಲಿ ಜೋಶಿ ಸಾವನ್ನಪ್ಪಿದ್ದರು. ಬಳಿಕ ದೇಹವನ್ನು ಶವಾಗಾರಕ್ಕೆ ಸಾಗಿಸಿದ ಮೈಸೂರು ದಕ್ಷಿಣ ಠಾಣೆ ಪೊಲೀಸರು, ಈ ಸಂಬಂಧ ಪ್ರಕರಣ ದಾಖಲಿಸಿಕೊಂಡಿದ್ದರು.

ಜೋಶಿ ಆಂಟೋನಿ ಸೆಲ್ಫೀ ವಿಡಿಯೋ ಮಾಡಿ ಆತ್ಮಹತ್ಯೆ ಮಾಡಿಕೊಂಡಿದ್ದರಿಂದ ಜೋಬಿ ದಂಪತಿಗೆ ಆಘಾತವಾಗಿತ್ತು. ಮಂಗಳವಾರ ಬೆಳಗ್ಗೆ ವಿಜಯನಗರ 2ನೇ ಹಂತದ ಮುಡಾ ಕ್ರೀಡಾಂಗಣದಲ್ಲಿನ ನೀರಿನ ಟ್ಯಾಂಕ್‌ಗೆ ಅಳವಡಿಸಿರುವ ಕಬ್ಬಿಣದ ಏಣಿಗೆ ನೇಣು ಹಾಕಿಕೊಂಡಿರುವ ಸ್ಥಿತಿಯಲ್ಲಿ ಜೋಬಿ ಹಾಗೂ ಶರ್ಮಿಳಾ ಶವಗಳು ದೊರೆತಿವೆ. ಸ್ಥಳದಲ್ಲಿ ಯಾವುದೇ ಡೆತ್ ನೋಟ್ ಪತ್ತೆಯಾಗಿಲ್ಲ. ಇಲ್ಲವೇ ಯಾರಿಗೂ ಸೆಲ್ಫಿ ವಿಡಿಯೋ ಕಳುಹಿಸಿರುವ ಬಗ್ಗೆ ಯಾವುದೇ ಮಾಹಿತಿ ಲಭ್ಯವಾಗಿಲ್ಲ.

ನಿನ್ನೆಯಿಂದ ನಾಪತ್ತೆ: ಸಹೋದರರು ಹಾಗೂ ಅತ್ತಿಗೆ ದುರಂತ ಸಾವಿನಿಂದ ಕಂಗಾಲಾಗಿರುವ ಶರ್ಲೈನ್, ಮೂವರೂ ನಿನ್ನೆಯಿಂದಲೇ ನಾಪತ್ತೆಯಾಗಿದ್ದರು. ಜೋಶಿ ಆಂಟೋನಿ ಆತ್ಮಹತ್ಯೆಯ ವಿಡಿಯೋ ನೋಡಿ ಜೋಬಿ ಹಾಗೂ ಶರ್ಮಿಳಾ ನಿನ್ನೆ ರಾತ್ರಿಯೇ ಆತ್ಮಹತ್ಯೆ ಮಾಡಿಕೊಂಡಿರಬೇಕು. ನನ್ನ ಅಣ್ಣಂದಿರು ಹಾಗೂ ಅತ್ತಿಗೆ ಮಾಡಿರುವ ಸಾಲಕ್ಕೆ ನಾನು ಹೊಣೆಗಾರಳಾಗುವುದಿಲ್ಲ. ಅವರ ಸಾಲವನ್ನು ತೀರಿಸುವಷ್ಟು ಶಕ್ತಿಯೂ ನನಗಿಲ್ಲ. ಅಣ್ಣಂದಿರಿಗೆ ಸಾಲ ಕೊಟ್ಟವರು ನನಗೆ ಕಿರುಕುಳ ನೀಡದಂತೆ ಭದ್ರತೆ ನೀಡಬೇಕು ಎಂದು ಪೊಲೀಸರಲ್ಲಿ ಮನವಿ ಮಾಡಿದ್ದಾರೆ. ಜೋಬಿ ಆಂಟೋನಿ ಹಾಗೂ ಶರ್ಮಿಳಾ ಸಾವನ್ನಪ್ಪಿರುವ ಸಂಬಂಧ ವಿಜಯನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಂಡಿದ್ದು, ಜೋಶಿ ಆತ್ಮಹತ್ಯೆ ಪ್ರಕರಣ ನಿನ್ನೆಯೇ ದಕ್ಷಿಣ ಪೊಲೀಸ್ ಠಾಣೆಯಲ್ಲಿ ಕೇಸ್ ದಾಖಲಾಗಿದೆ. ಮೈಸೂರಿನ ವಿಶ್ವೇಶ್ವರಯ್ಯ ಕೈಗಾರಿಕಾ ಪ್ರದೇಶದಲ್ಲಿನ ಪ್ರತಿಷ್ಠಿತ ಅಪಾರ್ಟ್‌ಮೆಂಟ್‌ನಲ್ಲಿ ವಾಸವಿದ್ದ ಚೇತನ್, ತನ್ನ ತಾಯಿ ಪ್ರಿಯಂವಧ, ಪತ್ನಿ ರೂಪಾಲಿ ಹಾಗೂ ಪುತ್ರ ಕುಶಾಲ್‌ನನ್ನು ಹತ್ಯೆ ಮಾಡಿ, ತಾನೂ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡ ಘಟನೆ ಬೆನ್ನಲ್ಲೇ ಬೆಟ್ಟಿಂಗ್ ದಂಧೆಗೆ ಸಿಲುಕಿ ಒಂದೇ ಕುಟುಂಬದ ಮೂವರು ಆತ್ಮಹತ್ಯೆಗೆ ಮಾಡಿಕೊಂಡಿರುವುದು ದುರಂತವೇ ಸರಿ.

ಜಾತಿ ಗಣತಿ ವೈಜ್ಞಾನಿಕವಾಗಿದೆ; ಖಂಡಿತ ಜಾರಿಗೊಳಿಸುತ್ತೇವೆ



ಬೆಂಗಳೂರು: ಜಾತಿ ಗಣತಿ ವರದಿಯು ವೈಜ್ಞಾನಿಕವಾಗಿಯೇ ನಡೆದಿದ್ದು ಅದನ್ನು ನಮ್ಮ ಸರ್ಕಾರ ಖಂಡಿತವಾಗಿಯೂ ಜಾರಿಗೊಳಿಸುತ್ತದೆ. ಇದರಲ್ಲಿ ಯಾವುದೇ ಸಂಶಯ ಬೇಡ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಗಳವಾರ ಹೇಳಿದ್ದಾರೆ. ಇಂದು ವಿಧಾನಸೌಧದಲ್ಲಿ ಹಿಂದುಳಿದ ವರ್ಗಗಳ ಮುಖಂಡರು ಹಾಗೂ ಹಿಂದುಳಿದ ವರ್ಗಗಳ ಸಂಘ ಸಂಸ್ಥೆಗಳ ಪ್ರತಿನಿಧಿಗಳೊಂದಿಗೆ ನಡೆದ ಬಜೆಟ್ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಸಿಎಂ, ಜಾತಿ ಗಣತಿಯ ವರದಿ ವೈಜ್ಞಾನಿಕವಾಗಿ ತಯಾರಾಗಿದ್ದು ಸಮಾಜದ ಎಲ್ಲಾ ವರ್ಗಗಳ ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಸ್ಥಿತಿಗತಿ ತಿಳಿಯಲು ಅನುಕೂಲವಾಗಿದೆ. ಆ ಪ್ರಕಾರ ಸರ್ಕಾರದ ಕಾರ್ಯಕ್ರಮಗಳನ್ನು ರೂಪಿಸಲು ಸಹಕಾರಿಯಾಗುತ್ತದೆ ಎಂದರು. ತಮಿಳುನಾಡು ಮಾದರಿಯಲ್ಲಿ ಮೀಸಲಾತಿ ಹೆಚ್ಚಳಕ್ಕೆ ಸಭೆಯಲ್ಲಿ ಒತ್ತಾಯ ಬಂದಿದೆ. 1992ರ ಇಂದಿರಾ ಸಹಾನಿ ಪ್ರಕರಣದಲ್ಲಿ ಮೀಸಲಾತಿ ಶೇಕಡಾ 50ರಷ್ಟು ಮೀರಬಾರದು ಎಂದು ಸುಪ್ರೀಂ ಕೋರ್ಟ್ ಹೇಳಿದೆ. ಕಳೆದ ಸರ್ಕಾರದಲ್ಲಿ ಆರ್ಥಿಕವಾಗಿ ಹಿಂದುಳಿದವರಿಗೆ ಎಂದು ಮೀಸಲಾತಿ ಕಲ್ಪಿಸಿದ್ದು ಸಂವಿಧಾನದ ಆಶಯಗಳಿಗೆ ವಿರುದ್ಧವಾಗಿದೆ. ಸಂವಿಧಾನದ ಆರ್ಟಿಕಲ್ (15) ಮತ್ತು(16)ರ ಪ್ರಕಾರ ಮೀಸಲಾತಿ ನೀಡಬೇಕಾಗಿರುವುದು ಸಾಮಾಜಿಕವಾಗಿ, ಶೈಕ್ಷಣಿಕವಾಗಿ ಹಿಂದುಳಿದವರಿಗೆ ಮಾತ್ರ.

ಅಸಮಾನತೆ ಹೋಗಬೇಕು, ಜಾತಿ ವ್ಯವಸ್ಥೆಯಿಂದ ನಿರ್ಮಾಣವಾಗಿರುವ ಅಸಮಾನತೆಯಿಂದ ಬಹುಸಂಖ್ಯಾತ ಜನ ಅವಕಾಶ ವಂಚಿತರಾಗಿದ್ದಾರೆ. ಎಲ್ಲರಿಗೂ ಸಮಾನ ಅವಕಾಶ ನೀಡಬೇಕಿದೆ. ತಳ ಸಮುದಾಯವಿರಲಿ, ಮೇಲ್ವರ್ಗವಿರಲಿ ಎಲ್ಲರಿಗೂ ಸಮಾನತೆ ಇರಬೇಕು ಎಂಬ ಅಂಶವನ್ನು ಬಾಬಾ ಸಾಹೇಬ್ ಅಂಬೇಡ್ಕರ್ ಹೇಳಿದ್ದಾರೆ. ಹಿಂದುಳಿದ ಜಾತಿಗಳಲ್ಲೂ ತಾರತಮ್ಯ – ಅಸಮಾನತೆ ಇದೆ. ಇದನ್ನು ಒಂದೇ ಬಾರಿಗೆ ಹೋಗಲಾಡಿಸಲು ಸಾಧ್ಯವಿಲ್ಲ ಎಂದರು.

ಅಲೆಮಾರಿ ಜನಾಂಗಕ್ಕೆ ಉಚಿತ ಶಿಕ್ಷಣದ ಹಕ್ಕೊತ್ತಾಯ ಸಮಂಜಸವಾಗಿದೆ. ಸರ್ಕಾರ ಸರ್ವರಿಗೂ ಶಿಕ್ಷಣದ ಹಕ್ಕನ್ನು ನೀಡಿದೆ. ಅದರ ಪ್ರಕಾರ ಸರ್ಕಾರಿ ಶಾಲೆಗಳಲ್ಲಿ ಉಚಿತ ಶಿಕ್ಷಣ ಹಾಗೂ ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿಯೂ ಅವಕಾಶ ಸಿಗಲು ಸರ್ಕಾರ ಅವಕಾಶ ಮಾಡಿಕೊಟ್ಟಿದೆ. ಈ ಬಾರಿಯ ಆಯವ್ಯಯದಲ್ಲಿ ಅಲೆಮಾರಿ ಜನಾಂಗಕ್ಕೆ ವಿಶೇಷ ಗಮನ ಹರಿಸಲಾಗುವುದು. ಇಷ್ಟು ಮಾತ್ರವಲ್ಲ ಅತಿ ಹಿಂದುಳಿದ ವರ್ಗದವರಿಗೂ ಕಾರ್ಯಕ್ರಮಗಳನ್ನು ಈ ಬಾರಿಯ ಆಯವ್ಯಯದಲ್ಲಿ ಅನುಷ್ಠಾನಗೊಳಿಸಲು ಪ್ರಯತ್ನಿಸುತ್ತೇನೆ. ಜೊತೆಗೆ ಹಣಕಾಸಿನ ಲಭ್ಯತೆಗೆ ಅನುಗುಣವಾಗಿ ಹಿಂದುಳಿದ ವರ್ಗಗಳಿಗೆ ಕಾರ್ಯಕ್ರಮಗಳನ್ನು ರೂಪಿಸಲಾಗುವುದು ಎಂದರು.

ರಾಜ್ಯದಲ್ಲಿ ಹೆಚ್ಚಿದ ತಾಪಮಾನ; ಕೆಲವೆಡೆ 36 ಡಿಗ್ರಿ ಸೆಲ್ಸಿಯಸ್ ದಾಟಿದ ಉಷ್ಣಾಂಶ

ಬೆಂಗಳೂರು: ರಾಜ್ಯದಲ್ಲಿ ಬಿಸಿಲ ಧಗೆ ದಿನದಿಂದ ದಿನಕ್ಕೆ ಹೆಚ್ಚಲಾರಂಭಿಸಿದ್ದು, ಕೆಲವು ಜಿಲ್ಲೆಗಳಲ್ಲಿ ಈಗಾಗಲೇ ತಾಪಮಾನವು 36 ಡಿಗ್ರಿ ಸೆಲ್ಸಿಯಸ್ ದಾಟುತ್ತಿದೆ. ವಾತಾವರಣದಲ್ಲಿನ ಉಷ್ಣಾಂಶವು ವಾಡಿಕೆಗಿಂತ 4 ಡಿಗ್ರಿ ಸೆಲ್ಸಿಯಸ್‌ವರೆಗೆ ಹೆಚ್ಚಿದೆ. ಇದರಿಂದಾಗಿ ಫೆಬ್ರವರಿ ತಿಂಗಳಲ್ಲಿಯೇ ಉಷ್ಣಾಂಶವು ಗಣನೀಯ ಏರಿಕೆ ಕಾಣುತ್ತಿದೆ. ಪರಿಣಾಮ, ಮಕ್ಕಳು, ವೃದ್ಧರು ಹಾಗೂ ಮಹಿಳೆಯರು ಬಸವಳಿಯುತ್ತಿದ್ದಾರೆ. ಬಿಸಿಲಿನಿಂದ ರಕ್ಷಣೆ ಪಡೆಯಲು ಹರಸಾಹಸಪಡುತ್ತಿದ್ದಾರೆ.

ಹವಾಮಾನ ಇಲಾಖೆಯ ಪ್ರಕಾರ, ರಾಜ್ಯದಲ್ಲಿ ಒಣಹವೆ ಮುಂದುವರಿಯಲಿದ್ದು, ಮುಂದಿನ ಐದು ದಿನಗಳಲ್ಲಿ ಗರಿಷ್ಠ ತಾಪಮಾನವು 2ರಿಂದ 3 ಡಿಗ್ರಿ ಸೆಲ್ಸಿಯಸ್ ಹೆಚ್ಚಳವಾಗುವ ಸಾಧ್ಯತೆಯಿದೆ. ಮಂಗಳವಾರ ಬೆಳಿಗ್ಗೆ 8.30ಕ್ಕೆ ಕೊನೆಗೊಂಡಂತೆ ಹಿಂದಿನ 24 ಗಂಟೆಗಳ ಅವಧಿಯಲ್ಲಿ ರಾಜ್ಯದ 19 ಜಿಲ್ಲೆಗಳಲ್ಲಿ ಗರಿಷ್ಠ ಉಷ್ಣಾಂಶ 35 ಡಿಗ್ರಿ ಸೆಲ್ಸಿಯಸ್ ದಾಟಿದೆ. ರಾಯಚೂರಿನಲ್ಲಿ 37.2 ಡಿಗ್ರಿ ಸೆಲ್ಸಿಯಸ್ ಗರಿಷ್ಠ ತಾಪಮಾನ ದಾಖಲಾಗಿದೆ. ಕಲಬುರಗಿಯಲ್ಲಿ 37 ಡಿಗ್ರಿ ಸೆಲ್ಸಿಯಸ್ ವರದಿಯಾಗಿದೆ. ಬಳ್ಳಾರಿ, ಬೆಳಗಾವಿ, ದಕ್ಷಿಣ ಕನ್ನಡ, ದಾವಣಗೆರೆ, ಹಾವೇರಿ, ಯಾದಗಿರಿ, ವಿಜಯಪುರ, ಉತ್ತರ ಕನ್ನಡ



ಹಾಗೂ ಶಿವಮೊಗ್ಗ ಜಿಲ್ಲೆಯಲ್ಲೂ ಗರಿಷ್ಠ ಉಷ್ಣಾಂಶ 36 ಡಿಗ್ರಿ ಸೆಲ್ಸಿಯಸ್ ದಾಟಿದೆ.

ಬೆಂಗಳೂರಿನಲ್ಲಿಯೂ ತಾಪಮಾನ ಏರಿಕೆ ಕಂಡಿದ್ದು, 34.1 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ ದಾಖಲಾಗಿದೆ. ಮುಂದಿನ ಎರಡು ದಿನಗಳು ಕೆಲವು ಪ್ರದೇಶಗಳಲ್ಲಿ ಮುಂಜಾನೆ ದಟ್ಟ ಮಂಜು ಬೀಳುವ ಸಾಧ್ಯತೆಯಿದ್ದು, ಗರಿಷ್ಠ ಉಷ್ಣಾಂಶ 34 ಡಿಗ್ರಿ ಸೆಲ್ಸಿಯಸ್ ಹಾಗೂ ಕನಿಷ್ಠ ಉಷ್ಣಾಂಶ 18 ಡಿಗ್ರಿ ಸೆಲ್ಸಿಯಸ್ ಇರುವ ಸಂಭವವಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಇದೇ 24ರಿಂದ ಶುಶ್ರೂಷಾಧಿಕಾರಿಗಳ ಅಹೋರಾತ್ರಿ ಧರಣಿ

ಬೆಂಗಳೂರು: ಆರೋಗ್ಯ ಇಲಾಖೆಯಲ್ಲಿ ಗುತ್ತಿಗೆ ಪದ್ಧತಿ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಶುಶ್ರೂಷಾಧಿಕಾರಿಗಳ ಸೇವೆಯನ್ನು ಕಾಯಂಗೊಳಿಸುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಫೆಬ್ರವರಿ 24ರಂದು ಸ್ವಾತಂತ್ರ್ಯ ಉದ್ಯಾನದಲ್ಲಿ ಅಹೋರಾತ್ರಿ ಧರಣಿ ನಡೆಸಲಾಗುವುದು ಎಂದು ಕರ್ನಾಟಕ ರಾಜ್ಯ ಗುತ್ತಿಗೆ ಶುಶ್ರೂಷಾಧಿಕಾರಿಗಳ ನೌಕರರ ಕ್ಷೇಮಾಭಿವೃದ್ಧಿ ಸಂಘ ತಿಳಿಸಿದೆ. ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಂಘದ ರಾಜ್ಯ ಘಟಕದ ಅಧ್ಯಕ್ಷೆ ರಾಧಾ ಸುರೇಶ್ ಪಿ.ಎನ್, ಸುಪ್ರೀಂಕೋರ್ಟ್ ಆದೇಶದಂತೆ ಸಮಾನ ಕೆಲಸಕ್ಕೆ ಸಮಾನ ವೇತನ ನಿಗದಿಪಡಿಸಬೇಕು. ಈಗ ನಮಗೆ 15 ಸಾವಿರ ವೇತನ ನಿಗದಿಪಡಿಸಲಾಗಿದೆ. ಇಂದಿನ ಬೆಲೆ ಏರಿಕೆ ಪರಿಸ್ಥಿತಿಯಲ್ಲಿ ಈ ಹಣದಲ್ಲಿ ಜೀವನ ನಿರ್ವಹಣೆ ಕಷ್ಟವಾಗಿದೆ. ವೈದ್ಯಕೀಯ ಶಿಕ್ಷಣ ಇಲಾಖೆಯಲ್ಲಿ ಗುತ್ತಿಗೆ ಆಧಾರದಲ್ಲಿ ಕೆಲಸ ಮಾಡುತ್ತಿರುವ ಶುಶ್ರೂಷಾಧಿಕಾರಿಗಳಿಗೆ ನಿಗದಿಪಡಿಸಿರುವ ವೇತನವನ್ನು ನಮಗೂ ನೀಡಬೇಕು ಎಂದು ಆಗ್ರಹಿಸಿದರು.

ನೇರ ನೇಮಕಾತಿಯ ಸಂದರ್ಭದಲ್ಲಿ ಜ್ಯೇಷ್ಠತೆಯ ಆಧಾರದ ಮೇಲೆ ಕೃಪಾಂಕ ಮತ್ತು ವಯೋಮಿತಿ ಸಡಿಲಿಕೆ ನೀಡಬೇಕು. ಒಂದು ಜಿಲ್ಲೆಯಿಂದ ಮತ್ತೊಂದು ಜಿಲ್ಲೆಗೆ ವರ್ಗಾವಣೆ ಸೌಲಭ್ಯ ಕಲ್ಪಿಸಬೇಕು ಎಂದು ಒತ್ತಾಯಿಸಿದರು. ಸಂಘದ ಉಪಾಧ್ಯಕ್ಷ ಸಂಗನ ಬಸವ, ಪ್ರಧಾನ ಕಾರ್ಯದರ್ಶಿ ಸೌಮ್ಯಶ್ರೀ ಕೆ. ಸುದ್ದಿಗೋಷ್ಠಿಯಲ್ಲಿದ್ದರು.

ಅನ್ನಭಾಗ್ಯ, ಗೃಹಲಕ್ಷ್ಮಿ ಬಾಕಿ ಮಾಸಾಂತ್ಯಕ್ಕೆ ಬಿಡುಗಡೆ

ಬೆಂಗಳೂರು, ಫೆ.18(ಕೆಎಂಶಿ)–ಅನ್ನಭಾಗ್ಯ ಹಾಗೂ ಗೃಹಲಕ್ಷ್ಮಿ ಫಲಾನುಭವಿಗಳಿಗೆ ನೀಡಲು ಹಣದ ಕೊರತೆ ಇಲ್ಲ. ಎರಡು, ಮೂರು ತಿಂಗಳ ಬಾಕಿ ಫೆಬ್ರವರಿಯಲ್ಲಿ ಬಿಡುಗಡೆಯಾಗಲಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇಂದಿಲ್ಲಿ ತಿಳಿಸಿದ್ದಾರೆ. ಅನ್ನಭಾಗ್ಯ ಹಾಗೂ ಗೃಹಲಕ್ಷ್ಮಿ ಫಲಾನುಭವಿಗಳಿಗೆ ನೀಡಲು ಸರ್ಕಾರದ ಬಳಿ ಹಣವಿಲ್ಲ, ಬೊಕ್ಕಸ ಖಾಲಿಯಾಗಿದೆ ಎಂಬ ವಿರೋಧ ಪಕ್ಷಗಳ ಆರೋಪ ಸುಳ್ಳು. ಸರ್ಕಾರದ ಸಂಪನ್ಮೂಲ ಒಂದೇ ದಿನಕ್ಕೆ ಕ್ರೋಢೀಕರಣ ಆಗುವುದಿಲ್ಲ, ಹಂತ ಹಂತವಾಗಿ ಸಂಗ್ರಹವಾಗುತ್ತದೆ, ಆರ್ಥಿಕ ವರ್ಷಾಂತ್ಯದ ವೇಳೆಗೆ ಎಲ್ಲವೂ ಸರಿಯಾಗಲಿದೆ ಎಂದರು. ರಾಜಸ್ಥಾನ ಪ್ರವಾಸಕ್ಕೆ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸರ್ಕಾರಕ್ಕೆ ಹಣದ ಸಮಸ್ಯೆ ಇಲ್ಲ, ಆರ್ಥಿಕವಾಗಿ ನಾವು ಬಲಿಷ್ಠವಾಗಿದ್ದೇವೆ. ಅನ್ನಭಾಗ್ಯ ಯೋಜನೆಯಡಿ ಜನರಿಗೆ ತಲುಪಬೇಕಾದ ಅಕ್ಕಿ ತಲುಪುತ್ತಿದೆ. ಈ ವಿಚಾರದಲ್ಲಿ ಜನಸಾಮಾನ್ಯರಿಗೆ ಅಸಮಾಧಾನ ಇಲ್ಲ. ಜನರು ಸಂತೋಷವಾಗಿದ್ದಾರೆ. ನಮ್ಮ ಮೇಲೆ ನಂಬಿಕೆ ಇದೆ, ವಿರೋಧ ಪಕ್ಷಗಳು ಮಾತ್ರ ಆರೋಪ ಮಾಡುತ್ತಿವೆ. ಮಾಧ್ಯಮಗಳು ಅದನ್ನು ಬಿತ್ತರಿಸುತ್ತಿವೆ ಎಂದರು.

ಫೆ.22ರಿಂದ ಮಹಿಳಾ ಉದ್ಯಮಿಗಳು ತಯಾರಿಸಿದ ಉತ್ಪನ್ನಗಳ ಪ್ರದರ್ಶನ, ಮಾರಾಟ ಮೇಳ



ಮೈಸೂರಿನ ಖಾಸಗಿ ಹೋಟೆಲ್‌ನಲ್ಲಿ ಸುದ್ದಿಗೋಷ್ಠಿಯಲ್ಲಿ ಕಾಸಿಯಾ ಅಧ್ಯಕ್ಷ ಎಂ.ಜಿ.ರಾಜಗೋಪಾಲ್ ಮಾತನಾಡಿದರು.

- ಮುಖ್ಯಮಂತ್ರಿ ಸಿದ್ದರಾಮಯ್ಯರಿಂದ ಉದ್ಘಾಟನೆ
- ಮಹಿಳಾ ಉದ್ಯಮಿಗಳಿಗಾಗಿ 100 ಮಳಿಗೆಗಳು ಸಿದ್ಧ
- ಮಹಿಳಾ ಉದ್ಯಮವನ್ನು ಉತ್ತೇಜಿಸಲು ಈ ಮೇಳ
- ಅತ್ಯುತ್ತಮ ಮೂರು ಮಳಿಗೆಗಳಿಗೆ ಬಹುಮಾನ

ಮೈಸೂರು, ಫೆ.18(ಜಿಎ)–ಕರ್ನಾಟಕ ಸಣ್ಣ ಕೈಗಾರಿಕೆಗಳ ಸಂಘ (ಕಾಸಿಯಾ), ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಕೈಗಾರಿಕಾ ಕೇಂದ್ರದ ಸಹಯೋಗದಲ್ಲಿ ಫೆ.22 ಮತ್ತು 23ರಂದು ನಗರದ ನಜರ್‌ಬಾದ್‌ನಲ್ಲಿರುವ ಚಾಮುಂಡಿ ವಿಹಾರ ಕ್ರೀಡಾಂಗಣದಲ್ಲಿ 'ಮಹಿಳಾ ಉದ್ಯಮಿಗಳು ತಯಾರಿಸಿದ ಉತ್ಪನ್ನಗಳ ಪ್ರದರ್ಶನ ಮತ್ತು ಮಾರಾಟ ಮೇಳ' ಆಯೋಜಿಸಲಾಗಿದೆ ಎಂದು ಕಾಸಿಯಾ ಅಧ್ಯಕ್ಷ ಎಂ.ಜಿ.ರಾಜಗೋಪಾಲ್ ತಿಳಿಸಿದರು.

ಮೈಸೂರಿನ ಖಾಸಗಿ ಹೋಟೆಲ್‌ನಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 22ರಂದು ಬೆಳಿಗ್ಗೆ 10.30ಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮೇಳವನ್ನು ಉದ್ಘಾಟಿಸುವರು. ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಶಾಸಕ ತನ್ವೀರ್ ಸೇಠ್ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ನಿರ್ದೇಶಕರು ಹಾಗೂ ಕೈಗಾರಿಕಾ ಅಭಿವೃದ್ಧಿ ಆಯುಕ್ತೆ ಗುಂಜನ್ ಕೃಷ್ಣ, ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ, ಜಿಲ್ಲಾ ಪಂಚಾಯಿತಿ ಸಿಇಒ ಕೆ.ಎಂ.ಗಾಯಿತ್ರಿ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷೆ ಪುಷ್ಪಾ ಅಮರನಾಥ್ ಭಾಗವಹಿಸುವರು ಎಂದರು.

ಮೇಳದಲ್ಲಿ ಮೈಸೂರು, ಮಂಡ್ಯ, ಚಾಮರಾಜನಗರ ಸೇರಿದಂತೆ ವಿವಿಧ ಜಿಲ್ಲೆಗಳಿಂದ ಮಹಿಳಾ ಉದ್ಯಮಿಗಳು ಭಾಗವಹಿಸುತ್ತಿದ್ದಾರೆ. 100 ಮಳಿಗೆಗಳಲ್ಲಿ ತಾವು ತಯಾರಿಸಿದ ಉತ್ಪನ್ನಗಳ ಪ್ರದರ್ಶನ ಮತ್ತು ಮಾರಾಟ ಮಾಡಲಿದ್ದಾರೆ. ಈಗಾಗಲೇ 75 ಉದ್ಯಮಿಗಳು ನೋಂದಣಿ ಮಾಡಿಕೊಂಡಿದ್ದಾರೆ. ಪ್ರಮುಖವಾಗಿ ಮಹಿಳಾ ಉದ್ಯಮಿಗಳನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಈ ಮೇಳ ಹಮ್ಮಿಕೊಳ್ಳಲಾಗಿದೆ ಎಂದು ವಿವರಿಸಿದರು.

ಮಹಿಳಾ ಉದ್ಯಮಶೀಲತೆ ಉತ್ತೇಜಿಸಲು ಮತ್ತು ಯಶಸ್ವಿ ಉದ್ಯಮಿಗಳಾಗಲು ವೇದಿಕೆ ಒದಗಿಸುವ ದೃಷ್ಟಿಯಿಂದ ಕಾಸಿಯಾ ಮಹಿಳಾ ಸಬಲೀಕರಣ ಸಮಿತಿಯ ಮೂಲಕ ಮೇಳ ನಡೆಸಲಾಗುತ್ತಿದೆ. ವ್ಯಾಪಾರ ಅಭಿವೃದ್ಧಿ ಮತ್ತು ಮಾರುಕಟ್ಟೆ ಸಂಪರ್ಕಗಳನ್ನು ಕಂಡುಕೊಳ್ಳಲು ಇದು ಸಹಕಾರಿಯಾಗಲಿದೆ. ಫೆ.23ರಂದು ನಡೆಯಲಿರುವ ಸಮಾರೋಪ ಸಮಾರಂಭದಲ್ಲಿ ಮೂರು ಅತ್ಯುತ್ತಮ ಮಳಿಗೆಗಳಿಗೆ ಪ್ರಶಸ್ತಿ ನೀಡಲಾಗುವುದು ಎಂದರು.

ಇತ್ತೀಚೆಗೆ ರಾಜ್ಯ ಸರ್ಕಾರ ಆಸ್ತಿ ನೋಂದಣಿಗೆ ಇ–ಖಾತಾ ಕಡ್ಡಾಯಗೊಳಿಸಿದೆ. ಇ–ಖಾತಾ ಪಡೆಯಲು ಡಿಜಿಟಲ್ ಇಂಟಿಗ್ರೇಶನ್ ಖಾತಾ ನಿಯಮ ಪಾಲನೆ ಕಡ್ಡಾಯಗೊಳಿಸಲಾಗಿದೆ. ಬಿಬಿಎಂಪಿ, ನಗರಪಾಲಿಕೆ, ಪುರಸಭೆ, ಗ್ರಾಮ ಪಂಚಾಯಿತಿಗಳು ಸೇರಿದಂತೆ ರಾಜ್ಯಾದ್ಯಂತ ಬಿ–ಖಾತಾ ಮತ್ತು ಕಂದಾಯ ನಿವೇಶನಗಳಿಗೆ ಇ–ಖಾತಾ ಇಲ್ಲ. ವಿಶೇಷವಾಗಿ ಗ್ರಾಮೀಣ ಪ್ರದೇಶಗಳಲ್ಲಿ ಶೇ.90ರಷ್ಟು ಆಸ್ತಿಗಳಿಗೆ ನಿಯಮಗಳ ಅನ್ವಯ ಇ–ಖಾತಾ ನೀಡುತ್ತಿಲ್ಲ ಹಾಗೂ ನೀಡಲಾಗುವುದಿಲ್ಲ. ಪೂರ್ವ ತಯಾರಿ ಇಲ್ಲದೆ ಅನುಷ್ಠಾನಗೊಳಿಸಿರುವ ಇಂತಹ ನಿಯಮದಿಂದಾಗಿ ರಾಜ್ಯದಲ್ಲಿನ ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕೆಗಳು ತೀವ್ರ ಸಂಕಷ್ಟಕ್ಕೀಡಾಗಿವೆ ಎಂದು ತಿಳಿಸಿದರು.

ತಂತ್ರಾಂಶದಲ್ಲಿನ ದೋಷದಿಂದಾಗಿ ಇ–ಖಾತಾದಲ್ಲಿನ ಲೋಪದೋಷಗಳನ್ನು ಸರಿಪಡಿಸಲು ಬಹಳ ತಡವಾಗುತ್ತಿದೆ. ಕೆಲವು ಬಾರಿ ವರ್ಷಗಳೇ ಕಳೆದಿವೆ. ಅವಲ್ಲದೆ ಈ ಹಿಂದೆ ಸಿದ್ಧಪಡಿಸಲಾದ ಇ–ಖಾತಾ ತಂತ್ರಾಂಶ ಕಾಲಕಾಲಕ್ಕೆ ಅಪ್‌ಡೇಟ್ ಆಗದ ಕಾರಣ ಹಾಗೂ ಕೆಲವು ವಿವರಗಳನ್ನು ಅಪ್‌ಡೇಟ್ ಮಾಡಲು ಅಧಿಕಾರಿಗೆ ಅಧಿಕಾರ ಇಲ್ಲ. ಕೇವಲ ಎನ್.ಐ.ಸಿ.ಗೆ ಮಾತ್ರ ಅಧಿಕಾರ ಇದೆ. ಇದರಿಂದ ಪರಿಷ್ಕೃತ ಅಥವಾ ಸರಿಪಡಿಸಿದ ಇ–ಖಾತಾ ಪಡೆಯಲು ಅನಗತ್ಯ ವಿಳಂಬವಾಗುತ್ತಿದೆ ಎಂದರು. ಸುದ್ದಿಗೋಷ್ಠಿಯಲ್ಲಿ ಪದಾಧಿಕಾರಿಗಳಾದ ಎಸ್.ಸುರೇಶ್, ಸಾಗರ್, ಸುಬ್ರಹ್ಮಣ್ಯಂ, ಹೆಚ್.ಮಂಜುನಾಥ್, ಬಿ.ಆರ್.ಗಣೇಶ್ ರಾವ್, ಎನ್.ಸತೀಶ್, ಎಸ್.ಲತಾ ಇದ್ದರು.

> "ಇ–ಖಾತಾ ಇಲ್ಲದೆ ಉದ್ದಿಮೆದಾರರು ಅಡಮಾನ ಸಾಲ ಮತ್ತು ಇತರ ಹಣಕಾಸಿನ ಸೌಲಭ್ಯಕ್ಕಾಗಿ ತಮ್ಮ ಸ್ವತ್ತುಗಳನ್ನು ನೋಂದಾಯಿಸಲು ಸಾಧ್ಯವಾಗುತ್ತಿಲ್ಲ. ಇದರಿಂದ, ಉದ್ದಿಮೆದಾರರು ನೋಂದಾಯಿತ ಕ್ರಯ ಪತ್ರ ಮತ್ತು ಇ–ಖಾತಾ ಸಲ್ಲಿಸಲು ಸಾಧ್ಯವಾಗದ ಕಾರಣ ಬ್ಯಾಂಕ್ ಮತ್ತು ಇತರ ಹಣಕಾಸು ಸಂಸ್ಥೆಗಳು ಇಂತಹ ಸ್ವತ್ತುಗಳ ಮೇಲೆ ಸಾಲ ನೀಡಲು ನಿರಾಕರಿಸುತ್ತಿವೆ. ಇದರಿಂದ ಬಹಳ ತೊಂದರೆ ಆಗುತ್ತಿದೆ.
> –ಎಂ.ಜಿ.ರಾಜಗೋಪಾಲ್

ಗೃಹರಕ್ಷಕ ಸ್ವಯಂ ಸೇವಕರ ನೋಂದಣಿಗೆ ಅರ್ಜಿ ಆಹ್ವಾನ

ಮೈಸೂರು, ಫೆ. 18 – ಮೈಸೂರು ಜಿಲ್ಲಾ ಗೃಹ ರಕ್ಷಕ ದಳದ ಕಚೇರಿಯ ವ್ಯಾಪ್ತಿಯಲ್ಲಿನ ನಗರ, ತಾಲೂಕು ಘಟಕಗಳಾದ ಮೈಸೂರು, ನಂಜನಗೂಡು, ದೊಡ್ಡಕವಲಂದೆ, ಟಿ.ನರಸೀಪುರ, ಹೆಚ್.ಡಿ.ಕೋಟೆ, ಹ್ಯಾಂಡ್‌ಪೋಸ್ಟ್, ಸರಗೂರು, ಕೆ.ಆರ್.ನಗರ, ಹುಣಸೂರು, ಪಿರಿಯಾಪಟ್ಟಣ ಘಟಕಗಳಲ್ಲಿ ಖಾಲಿ ಇರುವ 220 ಸ್ಥಾನಗಳಿಗೆ ಗೃಹ ರಕ್ಷಕ ಸ್ವಯಂ ಸೇವಕರನ್ನು ಭರ್ತಿ ಮಾಡಲು ಅರ್ಹ ನಾಗರಿಕರಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು ಫೆ.18ರಿಂದ ಮಾ.5ರವರೆಗೆ ವಿತರಿಸಲಾಗುತ್ತಿದ್ದು, ಭರ್ತಿ ಮಾಡಿದ ಅರ್ಜಿಗಳನ್ನು ಹಿಂದಿರುಗಿಸಲು ಮಾ.5 (ಸಂಜೆ 5.30 ರೊಳಗೆ) ಕೊನೆ ದಿನವಾಗಿರುತ್ತದೆ. ಮಾ.7ರಂದು ಮೈಸೂರಿನ ಡಿಎಆರ್ ಮೈದಾನದಲ್ಲಿ ಆಯ್ಕೆ ಪ್ರಕ್ರಿಯೆಯನ್ನು ಸಂದರ್ಶನ ಒಳಗೊಂಡಂತೆ ಬೆಳಗ್ಗೆ 10 ಗಂಟೆಗೆ ಪ್ರಾರಂಭಿಸಲಾಗುವುದು.

ಉದ್ಯೋಗ ಮೇಳ

ಮೈಸೂರು,ಫೆ.18–ಮೈಸೂರಿನ ಎನ್.ಎಸ್.ಸೇವಾ ಟ್ರಸ್ಟ್ ವತಿಯಿಂದ ಫೆ.21ರಂದು ಬೆಳಗ್ಗೆ 9.30ರಿಂದ ಮಧ್ಯಾಹ್ನ 2ರವರೆಗೆ ನಟರಾಜ ಕಲ್ಯಾಣ ಮಂಟಪದಲ್ಲಿ ಉದ್ಯೋಗ ಮೇಳ ಹಮ್ಮಿಕೊಳ್ಳಲಾಗಿದೆ. ಸುಮಾರು 80ಕ್ಕೂ ಹೆಚ್ಚು ಕಂಪನಿಗಳು ಭಾಗವಹಿಸಲಿದ್ದು, ಎಸ್‌ಎಸ್‌ಎಲ್‌ಸಿಯಿಂದ ಡಿಗ್ರಿ, ಮಾಸ್ಟರ್ಸ್ ಡಿಗ್ರಿ, ಐಟಿಐ, ಡಿಪ್ಲೊಮಾ ನಿರುದ್ಯೋಗಿಗಳು ಇದರ ಸದುಪಯೋಗ ಪಡೆದುಕೊಳ್ಳಲು ಕೋರಲಾಗಿದೆ. ಹೆಚ್ಚಿನ ವಿವರಗಳಿಗೆ ಮೊ. 7337888 444, 99809 59598 ಸಂಪರ್ಕಿಸಬಹುದು.

ಆಯುರ್ವೇದ ಉಚಿತ ತಪಾಸಣಾ ಶಿಬಿರ

ಮೈಸೂರು, ಫೆ. 18– ಮೈಸೂರಿನ ವೇದಾಂತ ಆಯುರ್ವೇದಿಕ್ ಸೆಂಟರ್‌ನಲ್ಲಿ ಫೆ.20ರಂದು ಮೂತ್ರಪಿಂಡದ ಕಲ್ಲು ಮತ್ತು ಇತರೆ ಸಮಸ್ಯೆಗಳಿಗೆ ಉಚಿತ ವೈದ್ಯಕೀಯ ತಪಾಸಣಾ ಹಾಗೂ ಚಿಕಿತ್ಸಾ ಶಿಬಿರ ಹಮ್ಮಿಕೊಳ್ಳಲಾಗಿದೆ. ಹೆಚ್ಚಿನ ವಿವರಗಳಿಗೆ ಮೊ. 90361–23425 ಸಂಪರ್ಕಿಸಬಹುದು.

ಉಚಿತ ಪರೀಕ್ಷಾ ಶಿಬಿರ

ಮೈಸೂರು: ಮೈಸೂರಿನ ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆಯಲ್ಲಿ ಫೆ.20ರಂದು ಬೆಳಗ್ಗೆ 9.30ರಿಂದ ಮಧ್ಯಾಹ್ನ 1ರವರೆಗೆ ಮೂಳೆ ಖನಿಜ ಸಾಂದ್ರತಾ ಉಚಿತ ಪರೀಕ್ಷಾ ಶಿಬಿರ ಹಮ್ಮಿಕೊಳ್ಳಲಾಗಿದೆ. ಹೆಚ್ಚಿನ ಮಾಹಿತಿಗೆ ಮೊ. 9538367282, 9886485005.

ತಾರಕಕ್ಕೇರಿದ ಕಾಂಗ್ರೆಸ್ ಅಂತರ್ಯುದ್ಧ; ಮಾತಿಗೆ ಮಾತು!

ಮೈಸೂರು, ಫೆ.18–ರಾಜ್ಯ ಕಾಂಗ್ರೆಸ್‌ನಲ್ಲಿ ಅಂತರ್ಯುದ್ಧ ದಿನಗಳೆದಂತೆ ತಾರಕಕ್ಕೇರುತ್ತಿದೆ. ಏಟಿಗೆ ಎದಿರೇಟು ಎಂಬಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಆಪ್ತರು ಮತ್ತು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬೆಂಬಲಿತರು ಮಾತಿನ ಸಮರ ಮುಂದುವರೆಸಿದ್ದಾರೆ.

ಡಿಕೆಸು–ಖರ್ಗೆ ಭೇಟಿ: ಇಂದು ಎಐಸಿಸಿ ಅಧ್ಯಕ್ಷ ಎಂ.ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿಯಾದ ಮಾಜಿ ಸಂಸದ ಡಿ.ಕೆ.ಸುರೇಶ್ ನಂತರ ಸುದ್ದಿಗಾರರೊಂದಿಗೆ ಮಾತನಾಡಿ, ಇದು ರಾಜಕೀಯ ಭೇಟಿ ಅಲ್ಲ, ಸೌಹಾರ್ದಯುತ ಭೇಟಿ. ಖರ್ಗೆ ಅವರೊಂದಿಗೆ ರಾಜಕೀಯ ವಿಚಾರ ಪ್ರಸ್ತಾಪಿಸಿಲ್ಲ ಎಂದರು.

ತುಟ್ಟುತ್ತಲೇ ಇರಲಿ: ಸಚಿವ ರಾಜಣ್ಣ ಅವರ ಆರ್ಭಟಕ್ಕೆ ಪ್ರತಿಕ್ರಿಯಿಸಿದ ಸುರೇಶ್, ಡಿ.ಕೆ.ಶಿವಕುಮಾರ್ ಅವರಿಗೆ ಒಳ್ಳೆಯದಾಗಲಿ ಎಂಬ ಭಾವನೆ ಎಲ್ಲರಲ್ಲಿದೆ ಹಾಗಾಗಿ ಹೀಗೆಲ್ಲಾ ಮಾತನಾಡುತ್ತಾರೆ. ಬಂಡೆಗೆ ಪೆಟ್ಟು ಬಿದ್ದಾಗ ಅದು ಶಿಲ್ಪವಾಗಿ ಪರಿವರ್ತನೆಯಾಗುತ್ತದೆ ಎಂದು ಎಲ್ಲರೂ ಹೇಳುತ್ತಾರೆ. ಹಾಗೆಯೇ ತಟ್ಟುತ್ತಲೇ ಇರಲಿ ಬಿಡಿ ಎಂದು ಪ್ರತಿಕ್ರಿಯಿಸಿದರು.

ಸಿಎಂ ಭೇಟಿಯಾದ ರಾಜಣ್ಣ: ಇತ್ತ ಎಐಸಿಸಿ ಅಧ್ಯಕ್ಷ ಎಂ.ಮಲ್ಲಿಕಾರ್ಜುನ ಖರ್ಗೆ ದೆಹಲಿಗೆ ಪ್ರಯಾಣ ಬೆಳೆಸಿದರೆ, ಅತ್ತ ಸಚಿವ ರಾಜಣ್ಣ ಕಾವೇರಿ ನಿವಾಸಕ್ಕೆ ಭೇಟಿ ನೀಡಿ ಮುಖ್ಯಮಂತ್ರಿಗಳೊಂದಿಗೆ ಕೆಲ ಕಾಲ ಮಾತುಕತೆ ನಡೆಸಿದರು. ಡಿ.ಕೆ.ಶಿವಕುಮಾರ್ ಸಂಬಂಧ ತಾವು ನೀಡಿದ ಹೇಳಿಕೆಗೆ ಅವರ ಬೆಂಬಲಿಗರು ಖಾರವಾಗಿ ಪ್ರತಿಕ್ರಿಯಿಸುತ್ತಿರುವ ವಿಚಾರವನ್ನು ಮುಖ್ಯಮಂತ್ರಿಗಳ ಮುಂದೆ ಪ್ರಸ್ತಾಪಿಸಿದ್ದಾರೆ ಎಂದು ಹೇಳಲಾಗಿದೆ.

ಹಾದಿ–ಬೀದಿಯಲ್ಲಿ ಮಾತಾಡಬಾರದು: ರಾಜಣ್ಣ ಅವರ ಹೇಳಿಕೆಗೆ ಮಾರ್ಮಿಕವಾಗಿ ಪ್ರತಿಕ್ರಿಯಿಸಿರುವ ಮಾಗಡಿ ಶಾಸಕ ಬಾಲಕೃಷ್ಣ ಮುಖ್ಯಮಂತ್ರಿ ಯಾರಾಗಬೇಕೆಂದು ಹೈಕಮಾಂಡ್ ನಿರ್ಧರಿಸಿ ಮಾಡುತ್ತಾರೆ. ಅದು ಬಿಟ್ಟು ಹಾದಿ–ಬೀದಿಯಲ್ಲಿ ನಿಂತುಕೊಂಡು ಮಾತನಾಡಬಾರದು ಎಂದು ಹೇಳಿದರು.

ಹಾಗೆಯೇ ತಮ್ಮ ವಿರುದ್ಧ ಲಘುವಾಗಿ ಟೀಕೆ ಮಾಡಿರುವ ರಾಜಣ್ಣನವರ ವಿಚಾರವಾಗಿ ರಾಜ್ಯಸಭಾ ಸದಸ್ಯ ಜಿ.ಸಿ. ಚಂದ್ರಶೇಖರ್, ಅವರು ಹಿರಿಯರಿದ್ದಾರೆ. ಅವರ ಹಿರಿಯತನಕ್ಕೆ ಬೆಲೆ ಕೊಡುತ್ತೇನೆ ಎಂದು ಪ್ರತಿಕ್ರಿಯಿಸಿದ್ದಾರೆ.

ದೂರು ಕೊಡಲಿ ಮಾರಾಯ: ಈ ಮಧ್ಯೆ ನಿಮ್ಮ ವಿರುದ್ಧ ಹೈಕಮಾಂಡ್‌ಗೆ ದೂರು ಕೊಡಲು ಡಿ.ಕೆ.ಶಿವಕುಮಾರ್ ಬೆಂಬಲಿಗರು ನಿರ್ಧರಿಸಿದ್ದಾರೆ ಎಂಬ ಸುದ್ದಿಗಾರರ ಪ್ರಶ್ನೆಗೆ ಪ್ರತಿಕ್ರಿಯಿಸಿರುವ ರಾಜಣ್ಣ, ಅಯ್ಯೋ ಮಾರಾಯ, ದೂರು ಕೊಟ್ಟರೆ ಕೊಡಲಿ, ಅದನ್ನ ನೋಡೋಣ ಎಂದು ಖಾರವಾಗಿಯೇ ನುಡಿದಿದ್ದಾರೆ.

ಕುಣಿಗಲ್ ಶಾಸಕ ಡಾ. ರಂಗಸ್ವಾಮಿ ಸಹ ರಾಜಣ್ಣ ಅವರ ಹೇಳಿಕೆಗೆ ಬೇಸರ ವ್ಯಕ್ತಪಡಿಸಿದ್ದು, ಈ ರೀತಿ ಬಾಯಿಗೆ ಬಂದಂತೆ ಹೇಳಿಕೆಗಳನ್ನು ನೀಡುವುದರಿಂದ ಕಾರ್ಯಕರ್ತರಿಗೆ ನೋವಾಗುತ್ತದೆ ಎಂಬುದನ್ನು ಗಮನದಲ್ಲಿಟ್ಟುಕೊಳ್ಳಬೇಕು ಎಂದು ಪ್ರತಿಕ್ರಿಯಿಸಿದ್ದಾರೆ.

ಬಿಜೆಪಿ ಸರ್ಕಾರದಿಂದ ಅನಗತ್ಯವಾಗಿ ಒಂಭತ್ತು ವಿಶ್ವವಿದ್ಯಾಲಯ ಸ್ಥಾಪನೆ

- ಕೆಪಿಸಿಸಿ ವಕ್ತಾರ ಹೆಚ್.ಎ.ವೆಂಕಟೇಶ್ ವಾಗ್ದಾಳಿ
- ಹಣಕ್ಕೆ ಕುಲಪತಿಗಳ ಹುದ್ದೆ ಹರಾಜು ಹಾಕಿದರು



ಕೆಪಿಸಿಸಿ ವಕ್ತಾರ ಹೆಚ್.ಎ.ವೆಂಕಟೇಶ್ ಮಾತನಾಡಿದರು.

ಮೈಸೂರು, ಫೆ.18(ಎಂಟಿವೈ)– ಕುಲಪತಿ ಹುದ್ದೆಗಳ ಹರಾಜು ಹಾಕಿ ಹಣ ಲೂಟಿ ಮಾಡುವುದಕ್ಕಾಗಿ ಕಳೆದ ಬಿಜೆಪಿ ಸರ್ಕಾರ ತರಾತುರಿಯಲ್ಲಿ ಯಾವುದೇ ಮೂಲ ಸೌಕರ್ಯವಿಲ್ಲದೆ ಸ್ಥಾಪಿಸಿದ್ದ 9 ವಿಶ್ವವಿದ್ಯಾನಿಲಯಗಳನ್ನು ಮುಚ್ಚಿ, ವಿದ್ಯಾರ್ಥಿಗಳ ಹಿತ ಕಾಯಲು ಕ್ರಮ ಕೈಗೊಳ್ಳಬೇಕು ಎಂದು ಕೆಪಿಸಿಸಿ ವಕ್ತಾರ ಹೆಚ್.ಎ. ವೆಂಕಟೇಶ್ ಒತ್ತಾಯಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಹಿಂದೆ ಅಸ್ತಿತ್ವದಲ್ಲಿದ್ದ ಬಿಜೆಪಿ ಸರ್ಕಾರ ಹಣ ಲೂಟಿ ಮಾಡುವುದಕ್ಕಾಗಿ ಕುಲಪತಿ ಹುದ್ದೆಗಳನ್ನು ಹರಾಜು ಹಾಕಿತು. ಆ ಕಾರಣದಿಂದಾಗಿ ವಿವಿಧ ವಿಶ್ವವಿದ್ಯಾನಿಲಯಗಳ ಸ್ನಾತಕೋತ್ತರ ಕೇಂದ್ರಗಳನ್ನು ನಿಯಮ ಗಾಳಿಗೆ ತೂರಿ ವಿಶ್ವವಿದ್ಯಾನಿಲಯಗಳಾಗಿ ಘೋಷಣೆ ಮಾಡಿತು. ಇದರಿಂದ ವಿದ್ಯಾರ್ಥಿಗಳ ಹಿತ ಕಾಯದೆ ತರಾತುರಿಯಲ್ಲಿ ಸ್ಥಾಪಿತವಾದ ವಿಶ್ವವಿದ್ಯಾನಿಲಯಗಳಲ್ಲಿ ಬೋಧಕ ಸಿಬ್ಬಂದಿ, ಮೂಲ ಸೌಲಭ್ಯ, ಆರ್ಥಿಕ ಸಂಪನ್ಮೂಲವಿಲ್ಲದೆ ಹೊಸ ವಿವಿಗಳು ಪರಿತಪಿಸಿದವು ಎಂದು ಆರೋಪಿಸಿದರು.

ವಿದ್ಯಾರ್ಥಿಗಳ ಭವಿಷ್ಯದ ಹಿತದೃಷ್ಟಿಯಿಂದ ಚಾಮರಾಜನಗರ, ಮಂಡ್ಯ, ಹಾಸನದ ವಿಶ್ವವಿದ್ಯಾನಿಲಯದ ಸೇರಿದಂತೆ ರಾಜ್ಯದ 9 ಹೊಸ ವಿಶ್ವವಿದ್ಯಾನಿಲಯಗಳನ್ನು ಮುಚ್ಚುವುದು ಒಳಿತು. 2022ರಲ್ಲಿ ಬಿಜೆಪಿ ಸರ್ಕಾರ ವಿಶ್ವವಿವಿಗಳ ಕಾಯ್ದೆಗೆ ತಿದ್ದುಪಡಿ ತಂದು ಯಾವುದೇ ಮೂಲ ಸೌಕರ್ಯ ಕಲ್ಪಿಸದೆ ಜಿಲ್ಲೆಗಳಲ್ಲಿ ಇದ್ದ ಸ್ನಾತಕೋತ್ತರ ಕೇಂದ್ರಗಳನ್ನೇ ವಿಶ್ವವಿದ್ಯಾನಿಲಯಗಳೆಂದು ಘೋಷಿಸಿರುವುದು ಸರಿಯಲ್ಲ. ಕುಲಪತಿಗಳು, ಕುಲಸಚಿವರನ್ನು ನೇಮಕ ಮಾಡಿ ಹಣ ಲೂಟಿ ಹೊಡೆಯಲು ಬಿಜೆಪಿ ಸರ್ಕಾರ ಈ ಕಾಯ್ದೆಗೆ ತಿದ್ದುಪಡಿ ತಂದಂತಿದೆ ಎಂದು ದೂರಿದರು.

ವಿಶ್ರಾಂತ ಕುಲಪತಿ ಪಠಾಣ್ ವರದಿ ಪ್ರಕಾರ ಒಂದು ವಿಶ್ವವಿದ್ಯಾನಿಲಯದ ಐದು ವರ್ಷಗಳ ನಿರ್ವಹಣೆಗೆ 340 ಕೋಟಿ ರೂ. ಹಣ ಬೇಕಾಗುತ್ತದೆ. ಹೀಗಾಗಿ ಬಿಜೆಪಿ ಸರ್ಕಾರ ಮಾಡಿರುವ ಹೊಸ ವಿವಿಗಳ ನಿರ್ವಹಣೆಗೆ ರಾಜ್ಯ ಸರ್ಕಾರಕ್ಕೆ 3400 ಕೋಟಿ ರೂ. ಬೇಕಾಗುತ್ತದೆ. ಇದು ದುಂದುವೆಚ್ಚ, ಹೀಗಾಗಿ ಈ ವಿವಿಗಳನ್ನು ಮುಚ್ಚುವುದು ಒಳಿತು ಎಂದು ಹೇಳಿದರು.

ಯುಜಿಸಿ ನಿಯಮಾವಳಿ ಪ್ರಕಾರ ಒಂದು ವಿಶ್ವವಿದ್ಯಾನಿಲಯ ಸ್ಥಾಪನೆಗೆ 100 ಎಕರೆ ಭೂಮಿ ಇರಬೇಕು. ಆದರೆ, ಈ ನಿಯಮಾವಳಿಯನ್ನೇ ಪಾಲಿಸಿಲ್ಲ. ಬದಲಿಗೆ ಈ ವಿಶ್ವವಿದ್ಯಾನಿಲಯಗಳ ಸ್ಥಾಪನೆಗಾಗಿ ಯಾವುದೇ ಭೂಮಿಯನ್ನಾಗಲೀ, ವಾಹನವನ್ನಾಗಲೀ ಖರೀದಿಸುವಂತಿಲ್ಲ ಹಾಗೂ ಹೊಸ ಕಟ್ಟಡಗಳನ್ನು ನಿರ್ಮಿಸುವಂತಿಲ್ಲ. ಮಾತ್ರ ವಿಶ್ವವಿದ್ಯಾನಿಲಯಗಳಿಗೆ ಮಂಜೂರಾಗಿರುವ ಹುದ್ದೆಗಳನ್ನು ಭರ್ತಿ ಮಾಡಿಲ್ಲ. ಬದಲಾಗಿ ಇರುವ ಸಿಬ್ಬಂದಿಯಲ್ಲೇ ನಿರ್ವಹಿಸುವಂತೆ ಹೇಳಿತ್ತು. ಯಾವುದೇ ಹೊಸ ಹುದ್ದೆಗಳನ್ನು ಸೃಷ್ಟಿಸುವಂತಿಲ್ಲ ಎಂದು ಬಿಜೆಪಿ ಸರ್ಕಾರ ಹೇಳಿದೆ. ಇದು ಬಿಜೆಪಿಯವರಿಗೆ ಉನ್ನತ ಶಿಕ್ಷಣದ ಬಗೆಗೆ ಇರುವ ನಿರ್ಲಕ್ಷತೆಯನ್ನು ತೋರಿಸುತ್ತದೆ ಎಂದು ಹೇಳಿದರು.

ಬಿಜೆಪಿ ಸರ್ಕಾರದ ಅವಧಿಯಲ್ಲಿ ಉನ್ನತ ಶಿಕ್ಷಣ ಮಂತ್ರಿಗಳಾಗಿದ್ದ ಅರವಿಂದ ಲಿಂಬಾವಳಿ, ಸಿ.ಟಿ. ರವಿ. ಡಾ.ಅಶ್ವತ್ಥ ನಾರಾಯಣ ಅವರು ಉನ್ನತ ಶಿಕ್ಷಣವನ್ನು ಭ್ರಷ್ಟಾಚಾರದ ಕೂಪಕ್ಕೆ ತಳ್ಳಿದ್ದಾರೆ. ಚುನಾವಣೆ ಸಮೀಪದಲ್ಲಿದ್ದಾಗ ತರಾತುರಿಯಲ್ಲಿ ಯಾರೂ ಕೇಳದಿದ್ದರೂ ಹೊಸ ವಿವಿಗಳನ್ನು ಸ್ಥಾಪಿಸಿ, ಕುಲಪತಿ ಹುದ್ದೆಗಳನ್ನು ಹರಾಜು ಹಾಕಿದರು. ಇದನ್ನು ಸರಿಪಡಿಸಲು ಸಿದ್ದರಾಮಯ್ಯ ಸರ್ಕಾರ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದಲ್ಲಿ ಸಚಿವ ಸಂಪುಟ ಉಪ ಸಮಿತಿ ರಚಿಸಿದ ಕೂಡಲೇ ಬಿಜೆಪಿಯವರಿಗೆ ತಳಮಳ ಶುರುವಾಗಿದೆ ಎಂದು ಆರೋಪಿಸಿದರು.

ಸುದ್ದಿಗೋಷ್ಠಿಯಲ್ಲಿ ಕಾಂಗ್ರೆಸ್ ನಗರಾಧ್ಯಕ್ಷ ಆರ್. ಮೂರ್ತಿ, ಮೈಸೂರು ವಿವಿ ಸಿಂಡಿಕೇಟ್ ಮಾಜಿ ಸದಸ್ಯರಾದ ರಂಗಕರ್ಮಿ ಎನ್.ಎಸ್.ಗೋಪಿನಾಥ್, ಕಾಂಗ್ರೆಸ್ ಮುಖಂಡರಾದ ಭಾಸ್ಕರ್ ಎಲ್.ಗೌಡ, ರೇವಣ್ಣ ಇದ್ದರು.

ವಿಜಯೇಂದ್ರ ಬದಲಾವಣೆ; ಹೊಸಬರಿಗೆ ಅವಕಾಶ ಕೊಡಿ

ಬಿಜೆಪಿ ವರಿಷ್ಠರಲ್ಲಿ ಬಸನಗೌಡ ಪಾಟೀಲ್ ಯತ್ನಾಳ್ ಮನವಿ



ಬೆಂಗಳೂರು, ಫೆ.18(ಕೆಎಂಶಿ)–ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರನ್ನು ಬದಲಾವಣೆ ಮಾಡಿ ಹೊಸಬರಿಗೆ ಅವಕಾಶ ಮಾಡಿಕೊಡಿ ಎಂದು ಪಕ್ಷದ ಹಿರಿಯ ನಾಯಕ ಹಾಗೂ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಬಿಜೆಪಿ ವರಿಷ್ಠರಲ್ಲಿ ಮನವಿ ಮಾಡಿದ್ದಾರೆ.

ಕಾಂಗ್ರೆಸ್ ಆಡಳಿತ ತೊಲಗಿಸಿ ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ಪಕ್ಷವನ್ನು ಅಧಿಕಾರಕ್ಕೆ ತರಲು ತಕ್ಷಣವೇ ರಾಜ್ಯ ನಾಯಕತ್ವ ಬದಲಾವಣೆ ಮಾಡಿ ವಂಶಾಡಳಿತ ಕೊನೆಗೊಳಿಸಿ ಎಂದಿದ್ದಾರೆ.

ಪಕ್ಷದ ನಾಯಕತ್ವದ ವಿರುದ್ಧ ಹೇಳಿಕೆ ನೀಡಿದ ಸಂಬಂಧ ಬಿಜೆಪಿಯ ಕೇಂದ್ರ ಶಿಸ್ತು ಸಮಿತಿ ನೀಡಿದ ನೋಟಿಸ್‌ಗೆ ಐದು ಪುಟಗಳ ಉತ್ತರ ನೀಡಿ, ಅದರಲ್ಲಿ ನಾಯಕತ್ವ ಬದಲಿಸಿ, ಸಮರ್ಥ ನಾಯಕನನ್ನು ಅಧ್ಯಕ್ಷ ಸ್ಥಾನದಲ್ಲಿ ಕೂರಿಸಿ ಎಂದಿದ್ದಾರೆ. ನಾನು ಯಾವುದೇ ಬಣ ರಾಜಕೀಯ ಮಾಡಿಲ್ಲ, ಪಕ್ಷ ಚೌಕಟ್ಟಿನಲ್ಲಿ ಹೋರಾಟ ಮಾಡಿದ್ದೇನೆ, ಕಾಂಗ್ರೆಸ್ ಮುಖಂಡರ ಜೊತೆ ಕೈಜೋಡಿಸಿರುವ ಪಕ್ಷದ ನಾಯಕರ ಬಣ್ಣ ಬಯಲು ಮಾಡಿದ್ದೇನೆ, ಇದು ತಪ್ಪಾ ಎಂದು ಪ್ರಶ್ನಿಸಿದ್ದಾರೆ. ರಾಜ್ಯಾಧ್ಯಕ್ಷ ವಿಜಯೇಂದ್ರ ಅವರು ಸ್ವಜನಪಕ್ಷಪಾತ ಮಾಡುತ್ತಿದ್ದಾರೆ. ಹಿರಿಯರನ್ನು, ಕಾರ್ಯಕರ್ತರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳದ್ದರಿಂದ ಪಕ್ಷಕ್ಕೆ ವಿಧಾನಸಭಾ ಉಪ ಚುನಾವಣೆಯಲ್ಲಿ ಭಾರಿ ಹಿನ್ನಡೆಯಾಗಿದೆ. ಕರ್ನಾಟಕದಲ್ಲಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಭ್ರಷ್ಟಾಚಾರದಲ್ಲಿ ಮುಳುಗಿದೆ. ಅಭಿವೃದ್ಧಿ ಕೆಲಸಗಳನ್ನು ಮಾಡುತ್ತಿಲ್ಲ ಮುಖ್ಯಮಂತ್ರಿಯವರೇ ಹಲವು ಹಗರಣಗಳಲ್ಲಿ ಸಿಲುಕಿದ್ದಾರೆ. ರೈತರು, ಗುತ್ತಿಗೆದಾರರು, ಅಧಿಕಾರಿಗಳ ಸರಣಿ ಆತ್ಮಹತ್ಯೆ ನಡೆಯುತ್ತಿದೆ. ಇಷ್ಟಾದರೂ ವಿಜಯೇಂದ್ರ ಸರ್ಕಾರದ ವಿರುದ್ಧ ಹೋರಾಟ ನಡೆಸದೆ ತಮ್ಮ ಅಸಮರ್ಥತೆ ತೋರಿಸಿದ್ದಾರೆ. ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ಪಕ್ಷ ಅಧಿಕಾರಕ್ಕೆ ಬರಬೇಕೆಂದಿದ್ದರೆ, ತಕ್ಷಣವೇ ವಿಜಯೇಂದ್ರ ಅವರ ಸ್ಥಾನಕ್ಕೆ ಸಮರ್ಥರೊಬ್ಬರನ್ನು ನೇಮಕ ಮಾಡಿ ಎಂದು ತಮ್ಮ ಪತ್ರದಲ್ಲಿ ತಿಳಿಸಿದ್ದಾರೆ.

ನಾಗರಹೊಳೆಯಲ್ಲಿ ಅಪಾರ ವನ್ಯಜೀವಿಗಳ ದರ್ಶನ!







ಕಬಿನಿ ಹಿನ್ನೀರಿನ ಪ್ರದೇಶದಲ್ಲಿ ಸಫಾರಿ ನಡೆಸಿದ ಪ್ರವಾಸಿಗರಿಗೆ ಕಾಣಿಸಿಕೊಂಡ ವನ್ಯಜೀವಿಗಳು. ಚಿತ್ರಗಳು:ಲಕ್ಷ್ಮಿನಾರಾಯಣ ಯಾದವ್

ಮೈಸೂರು, ಫೆ.18(ಎಸ್‌ಬಿಡಿ)– ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶದಲ್ಲಿ ಸಫಾರಿಗೆ ತೆರಳಿದ್ದವರಿಗೆ ಹುಲಿ, ಆನೆ ಸೇರಿದಂತೆ ಹಲವು ವನ್ಯಜೀವಿಗಳು ದರ್ಶನ ನೀಡಿವೆ. ಹೆಚ್.ಡಿ.ಕೋಟೆ ತಾಲೂಕು ವ್ಯಾಪ್ತಿಯ ಕಾಕನಕೋಟೆ ಸಫಾರಿ ಕೇಂದ್ರದಿಂದ ಸಫಾರಿಗೆ ತೆರಳಿದ್ದ ಪ್ರವಾಸಿಗರು, ಹಚ್ಚಸಿರ ಅಭಯಾರಣ್ಯದ ಪ್ರತ್ಯೇಕ ಸ್ಥಳಗಳಲ್ಲಿ ಹುಲಿ, ಆನೆ, ಜಿಂಕೆಗಳ ಹಿಂಡು ಸೇರಿದಂತೆ ವಿವಿಧ ಪ್ರಾಣಿ–ಪಕ್ಷಿಗಳನ್ನು ಕಣ್ತುಂಬಿಕೊಂಡು ಪುಳಕಿತರಾಗಿದ್ದಾರೆ. ಕ್ಯಾಮರಾಗಳಲ್ಲಿ ವನ್ಯಜೀವಿಗಳ ಸೆರೆ ಹಿಡಿದು ಸಂಭ್ರಮಿಸಿದ್ದಾರೆ. ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶದ ಎಂಟು ವಲಯಗಳಿವೆ. ಆನೆ ಮತ್ತು ಹುಲಿಯ ಸಾಂದ್ರತೆ ಹೆಚ್ಚಾಗಿರುವ ಅಂತರಸಂತೆ ವಲಯದಲ್ಲಿ ಕಾಕನಕೋಟೆ ಸಫಾರಿ ಕೇಂದ್ರವಿದೆ. ಇಲ್ಲಿಂದ ಕಬಿನಿ ಹಿನ್ನೀರಿನ ಪ್ರದೇಶದಲ್ಲಿ ಪ್ರವಾಸಿಗರ ಸಫಾರಿಗೆ ಅವಕಾಶ ಮಾಡಿಕೊಡಲಾಗಿದೆ. ಈ ಭಾಗದಲ್ಲಿ ಇತ್ತೀಚೆಗೆ ಹುಲಿಗಳು ಹೆಚ್ಚಾಗಿ ಕಾಣಿಸಿಕೊಳ್ಳುತ್ತಿರುವುದು ವಿಶೇಷವಾಗಿದೆ. ಇದರಿಂದ ರಾಜ್ಯದ ವಿವಿಧೆಡೆ ಹಾಗೂ ಬೇರೆ ರಾಜ್ಯಗಳಿಂದ ಆಗಮಿಸುವ ಸಫಾರಿ ಪ್ರಿಯರ ಸಂತಸ ಇಮ್ಮಡಿಯಾಗಿದೆ. ಬೇಸಿಗೆ ಸಮೀಪಿಸುತ್ತಿರುವ ಕಾರಣ ಆನೆಗಳು ಸೇರಿದಂತೆ ಇತರೆ ಸಸ್ಯಹಾರಿ ಪ್ರಾಣಿಗಳು ಕಬಿನಿ ಹಿನ್ನೀರಿನ ಪ್ರದೇಶಕ್ಕೆ ವಲಸೆ ಬಂದಿವೆ. ಒಂದೇ ಜಾಗದಲ್ಲಿ ಆನೆ, ಜಿಂಕೆ, ಕಡವೆ ಇನ್ನಿತರ ಪ್ರಾಣಿಗಳು ಹಿಂಡು–ಹಿಂಡಾಗಿ ಕಾಣಿಸಿಕೊಳ್ಳುತ್ತಿವೆ. ವಿವಿಧ ಪ್ರಾಣಿ–ಪಕ್ಷಿಗಳು ದರ್ಶನ ನೀಡುತ್ತಿರುವುದರಿಂದ ಕಾಕನಕೋಟೆ ಸಫಾರಿ ಕೇಂದ್ರಕ್ಕೆ ಆಗಮಿಸುವ ಪ್ರವಾಸಿಗರ ಸಂಖ್ಯೆಯೂ ಹೆಚ್ಚುತ್ತಿದೆ.

ದೇಶ – ವಿದೇಶ

ಹಲ್ಲಿನಿಂದ 125 KG ಭಾರ ಎತ್ತಿ ಗಿನ್ನಿಸ್ ವಿಶ್ವ ದಾಖಲೆ ನಿರ್ಮಿಸಿದ ಯೋಗಪಟು



ಮೀರತ್: ಇಟಲಿಯ ಮಿಲಾನ್ ನಗರದಲ್ಲಿ ನಡೆದ ಸ್ಪರ್ಧೆಯೊಂದರಲ್ಲಿ ಬರೋಬ್ಬರಿ 125 ಕೆ.ಜಿ ತೂಕವನ್ನು ಹಲ್ಲಿನಿಂದ ಎತ್ತುವ ಮೂಲಕ ಮೀರತ್‌ನ ಯೋಗಪಟು ವಿಕಾಸ್ ಸ್ವಾಮಿ ಗಿನ್ನಿಸ್ ವಿಶ್ವ ದಾಖಲೆ ನಿರ್ಮಿಸಿದ್ದಾರೆ. ಫೆ.14ರಂದು ಈ ಸ್ಪರ್ಧೆ ನಡೆದಿದೆ. ಸ್ವಾಮಿ ಅವರು 35.57 ಸೆಕೆಂಡ್‌ಗಳಲ್ಲಿ ತಮ್ಮ ಹಲ್ಲಿನಿಂದ 125 ಕೆ.ಜಿ ಭಾರವನ್ನು ಎತ್ತಿ ಹಿಡಿದಿದ್ದಾರೆ. ಈ ಮೂಲಕ ಹೊಸ ದಾಖಲೆ ನಿರ್ಮಿಸಿದ್ದಾರೆ. 2023ರಲ್ಲಿ ಸ್ವಾಮಿ ಅವರು 'ಇಂಡಿಯಾಸ್ ಗಾಟ್ ಟ್ಯಾಲೆಂಟ್' ಕಾರ್ಯಕ್ರಮದಲ್ಲಿ ಭಾಗವಹಿಸಿ ಹಲ್ಲಿನ ಮೂಲಕ 80 ಕೆ.ಜಿ ತೂಕವನ್ನು ಎತ್ತಿದ್ದರು. 'ಸ್ಪರ್ಧೆ ಬಹಳ ಕಠಿಣವಾಗಿತ್ತು. ಮೊದಲ ಪ್ರಯತ್ನದಲ್ಲಿ 25 ಸೆಕೆಂಡ್‌ಗಳ ಕಾಲ ಮಾತ್ರ ಭಾರವನ್ನು ಎತ್ತಲು ಸಾಧ್ಯವಾಗಿತ್ತು, ಆದರೆ ಎರಡನೇ ಪ್ರಯತ್ನದಲ್ಲಿ 35.57 ಸೆಕೆಂಡ್‌ಗಳ ಕಾಲ ಎತ್ತಲು ಸಾಧ್ಯವಾಯಿತು' ಎಂದು ಸ್ವಾಮಿ ಹೇಳಿದ್ದಾರೆ. ಸ್ವಾಮಿ ಅವರು ದಾಖಲೆ ನಿರ್ಮಿಸುತ್ತಿದ್ದಂತೆ ಅವರ ಸ್ವಗ್ರಾಮದಲ್ಲಿ ಜನರು ಸಂಭ್ರಮಿಸಿದ್ದಾರೆ.

ಟೊರೆಂಟೊ: ರನ್‌ವೇನಲ್ಲಿ ಪಲ್ಟಿಯಾದ ವಿಮಾನ



ಟೊರೆಂಟೊ: ಕೆನಡಾದ ಡೆಲ್ಟಾ ಏರ್‌ಲೈನ್ಸ್‌ನ ವಿಮಾನವೊಂದು ಪಿಯರ್ಸನ್ ನಿಲ್ದಾಣದಲ್ಲಿ ಅಪಘಾತಕ್ಕೀಡಾಗಿದೆ. ರನ್‌ವೇನಲ್ಲಿ ವಿಮಾನ ಪಲ್ಟಿಯಾಗಿದ್ದು, ಘಟನೆಯಲ್ಲಿ 17ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ, ಅದೃಷ್ಟವಶಾತ್ ಯಾವುದೇ ಪ್ರಾಣ ಹಾನಿ ಸಂಭವಿಸಿಲ್ಲ ಎಂದು ಏರ್‌ಲೈನ್ಸ್ ಹೇಳಿದೆ. ಈ ಕುರಿತು ವಿಮಾನ ನಿಲ್ದಾಣದ ಅಧಿಕಾರಿಗಳು ಮಾಹಿತಿ ಹಂಚಿಕೊಂಡಿದ್ದು, 76 ಪ್ರಯಾಣಿಕರು ಮತ್ತು ನಾಲ್ವರು ಸಿಬ್ಬಂದಿ ವಿಮಾನದಲ್ಲಿದ್ದರು. ಗಾಯಾಳುಗಳನ್ನು ಹತ್ತಿರದ ಆಸ್ಪತ್ರೆಗೆ ದಾಖಲಿಸಲಾಗಿದೆ. ಈ ಸಂಬಂಧ ತನಿಖೆ ನಡೆಸಲಾಗುತ್ತಿದೆ. ಅಪಘಾತದಲ್ಲಿ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ. ಕೆಲವರಿಗೆ ಸಣ್ಣ ಗಾಯಗಳಾಗಿವೆ ಎಂದು ಗ್ರೇಟರ್ ವಿಮಾನ ನಿಲ್ದಾಣದ ಸಿಇಒ ಪ್ರತಿಕ್ರಿಯಿಸಿದ್ದಾರೆ. ಮಿತ್ಸುಬಿಶಿ ಸಿಆರ್‌ಜೆ–900 ಎಲ್‌ಆರ್ ಅಪಘಾತಕ್ಕೀಡಾದ ವಿಮಾನ. ಅಪಘಾತದ ದೃಶ್ಯಗಳು ಮತ್ತು ಪ್ರಯಾಣಿಕರನ್ನು ತುರ್ತು ನಿರ್ಗಮನದಿಂದ ಹೊರಕ್ಕೆ ಕಳುಹಿಸುತ್ತಿರುವ ವಿಡಿಯೊಗಳು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿವೆ.

ಹವಾಮಾನ ವೈಪರೀತ್ಯ; ಅಮೆರಿಕದಲ್ಲಿ ಭಾರಿ ಪ್ರವಾಹ: 10 ಮಂದಿ ಸಾವು

1000 ಮಂದಿ ರಕ್ಷಣೆ, ಸ್ಥಳಾಂತರ



ವಾಷಿಂಗ್ಟನ್: ಭಾರೀ ಹವಾಮಾನ ವೈಪರೀತ್ಯದಿಂದ ಅಮೆರಿಕ ತತ್ತರಿಸಿದೆ. ಅಮೆರಿಕ ಆಗ್ನೇಯ ಭಾಗದ ಕೆಂಟಕಿಯಲ್ಲಿ ಕುಂಭದ್ರೋಣ ಮಳೆಯಿಂದ ಹಠಾತ್ ಪ್ರವಾಹ ಉಂಟಾಗಿದೆ. 15 ಸೆಂಟಿ ಮೀಟರ್ ಮಳೆಯಿಂದ ರಸ್ತೆಗಳೆಲ್ಲಾ ಜಲಮಯವಾಗಿವೆ. ಪ್ರವಾಹದಲ್ಲಿ ಕನಿಷ್ಠ 10 ಮಂದಿ ಮೃತಪಟ್ಟಿದ್ದಾರೆ. ಹಲವರು ನಾಪತ್ತೆಯಾಗಿದ್ದಾರೆ. 1 ಸಾವಿರ ಮಂದಿಯನ್ನು ರಕ್ಷಿಸಲಾಗಿದೆ. ಬಲವಾದ ಗಾಳಿ ಬೀಸುತ್ತಿರುವ ಕಾರಣ 40 ಸಾವಿರ ಮನೆಗಳು ಕತ್ತಲಲ್ಲಿ ಮುಳುಗಿವೆ. ಅತ್ತ, ಅಮೆರಿಕದ ಉತ್ತರ ಪ್ರಾಂತ್ಯದ ಕೊರೆವ ಚಳಿಗೆ ತತ್ತರಿಸಿದೆ. ನಾರ್ತ್ ಡಕೋಟಾ, ಸೌತ್ ಡಕೋಟಾದ ಕೆಲವೆಡೆ ಉಷ್ಣಾಂಶ –45 ಡಿಗ್ರಿಗೆ ಕುಸಿದಿದೆ. ಜಾರ್ಜಿಯಾ, ಫ್ಲೋರಿಡಾದಲ್ಲಿ ಟೋರ್ನಡೋ ಎಚ್ಚರಿಕೆ ನೀಡಲಾಗಿದೆ. ಇಂಡಿಯಾನಾ ಪ್ರದೇಶದಲ್ಲಿ ಭಾರಿ ಹಿಮಪಾತವಾಗಿದೆ.

ಮಹಾಕುಂಭಕ್ಕೆ ಟಿಕೆಟ್ ಇಲ್ಲದೆ ಪ್ರಯಾಣಿಸಲು ಮೋದಿ ಜೀ ಹೇಳಿದ್ದಾರೆ ಎಂದ ಮಹಿಳೆಯರು!

ಪಾಟ್ನಾ: ಹಳ್ಳಿಗಾಡಿನ ಮಹಿಳೆಯರ ಗುಂಪೊಂದು ಪ್ರಧಾನಿ ಮೋದಿ ಅವರು ಟಿಕೆಟ್ ಇಲ್ಲದೆ ರೈಲಿನಲ್ಲಿ ಪ್ರಯಾಣಿಸಲು ಅನುಮತಿ ನೀಡಿದ್ದಾರೆ ಎಂದು ಹೇಳಿಕೊಂಡಿದ್ದು, ಕೇಳಿಸಿಕೊಂಡ ಬಿಹಾರದ ಹಿರಿಯ ರೈಲ್ವೆ ಅಧಿಕಾರಿ ದಿಗ್ಭ್ರಮೆಗೊಂಡಿದ್ದಾರೆ. ಉತ್ತರಪ್ರದೇಶದ ಗಡಿಯಲ್ಲಿರುವ ಬಕ್ಸಾರ್ ರೈಲು ನಿಲ್ದಾಣದಲ್ಲಿ ದಾನ್‌ಪುರ ವಿಭಾಗೀಯ ರೈಲ್ವೆ ವ್ಯವಸ್ಥಾಪಕ ಜಯಂತ್‌ಕುಮಾರ್ ಮತ್ತು ಪ್ರಯಾಗ್‌ರಾಜ್ ಮಹಾಕುಂಭಕ್ಕೆ ತೆರಳುವ ಯಾತ್ರಾರ್ಥಿಗಳ ನಡುವಿನ ಸಂಭಾಷಣೆಯ ವಿಡಿಯೋ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗುತ್ತಿದೆ. ಕಾಲ್ತುಳಿತದ ಬಳಿಕ ರೈಲು ನಿಲ್ದಾಣಕ್ಕೆ ಬಂದಿದ್ದ ಡಿಆರ್‌ಎಂ ನಿಲ್ದಾಣವನ್ನು ಪರಿಶೀಲಿಸುತ್ತಿದ್ದರು.

ಈ ವೇಳೆ ಮಹಿಳೆಯರ ಗುಂಪೊಂದು ರೈಲ್ವೆ ಹಳಿಗಳ ಬಳಿ ನಿಂತಿರುವುದನ್ನು ಗಮನಿಸಿದ ಅಧಿಕಾರಿ, ಅಲ್ಲಿ ಏನು ಮಾಡುತ್ತಿದ್ದಾರೆ ಎಂದು ಪ್ರಶ್ನಿಸಿದ್ದು, ಪ್ರಯಾಗ್‌ರಾಜ್ ರೈಲು ಹಿಡಿಯಲು ಕಾಯುತ್ತಿದ್ದೇವೆ ಎಂದು ಉತ್ತರಿಸಿದ್ದಾರೆ. ನಿಮ್ಮ ಬಳಿ ಟಿಕೆಟ್ ಇದೆಯೇ? ಎಂದು ಡಿಆರ್‌ಎಂ ಕೇಳಿದ್ದಾರೆ. ಅದಕ್ಕೆ ಮಹಿಳೆಯರು 'ನರೇಂದ್ರ ಮೋದಿಯೇ ನಮಗೆ ಹೇಳಿದ್ದಾರೆ' ಎಂಬ ಉತ್ತರಿಸಿದ್ದಾರೆ. ಸುತ್ತಲೂ ನೆರೆದಿದ್ದವರು ದಿಗ್ಭ್ರಮೆಗೊಂಡರು, ನಗುವಿನ ಅಲೆ ಎಬ್ಬಿಸಿದರು. ಆ ಬಳಿಕ ಈ ರೀತಿ ಟಿಕೆಟ್ ಇಲ್ಲದೆ ಪ್ರಯಾಣಿಸಬಾರದು ಎಂದು ಅಧಿಕಾರಿಗಳು ಬುದ್ಧಿಮಾತು ಹೇಳಿ, ಕಳುಹಿಸಿದರು.

ಮಹಾ ಕುಂಭಮೇಳವು 'ಮೃತ್ಯುಕುಂಭ'ವಾಗಿ ಮಾರ್ಪಟ್ಟಿದೆ



ಕೋಲ್ಕತ್ತ: ಉತ್ತರಪ್ರದೇಶದ ಪ್ರಯಾಗರಾಜ್‌ನಲ್ಲಿ ನಡೆಯುತ್ತಿರುವ ಮಹಾ ಕುಂಭಮೇಳವು 'ಮೃತ್ಯುಕುಂಭ'ವಾಗಿ ಮಾರ್ಪಟ್ಟಿದೆ ಎಂದು ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ವಾಗ್ದಾಳಿ ನಡೆಸಿದ್ದಾರೆ.

ಜ.29ರಂದು ಕುಂಭಮೇಳದಲ್ಲಿ ಸಂಭವಿಸಿದ್ದ ಕಾಲ್ತುಳಿತ ಕುರಿತು ವಿಧಾನಸಭೆಯಲ್ಲಿ ಮಾತನಾಡಿರುವ ಅವರು, ಇದು 'ಮೃತ್ಯುಕುಂಭ'... ನಾನು ಮಹಾಕುಂಭವನ್ನು ಗೌರವಿಸುತ್ತೇನೆ. ಹಾಗೆಯೇ ಪವಿತ್ರ ಗಂಗಾ ಮಾತೆಯನ್ನು ಆರಾಧಿಸುತ್ತೇನೆ. ಆದರೆ, ಈ ಬಾರಿ ಕುಂಭಮೇಳದಲ್ಲಿ ನಡೆದ ಕಾಲ್ತುಳಿತ ದುರಂತವನ್ನು ಮರೆಯುವುದಿಲ್ಲ. ಘಟನೆಯಲ್ಲಿ ಗಾಯಗೊಂಡಿದ್ದವರ ಪೈಕಿ ಎಷ್ಟು ಜನ ಚೇತರಿಸಿಕೊಂಡಿದ್ದಾರೆ ಎಂಬುದು ಯಾರಿಗೂ ತಿಳಿದಿಲ್ಲ. ಶ್ರೀಮಂತರಿಗೆ, ವಿಐಪಿಗಳಿಗೆ 1 ಲಕ್ಷದವರೆಗೆ ಕ್ಯಾಂಪ್ (ಟೆಂಟ್) ಪಡೆಯಲು ವ್ಯವಸ್ಥೆ ಇದೆ. ಆದರೆ, ಬಡವರಿಗೆ ಕುಂಭದಲ್ಲಿ ಯಾವುದೇ ವ್ಯವಸ್ಥೆಗಳನ್ನು ಮಾಡಿಲ್ಲ ಎಂದು ಬಿಜೆಪಿ ವಿರುದ್ಧ ಟೀಕಿಸಿದ್ದಾರೆ. ಟಿಎಂಸಿ ಸರ್ಕಾರ ತುಷ್ಟೀಕರಣ ರಾಜಕಾರಣ ಮಾಡುತ್ತಿದೆ ಎಂಬ ಸುವೇಂದು ಆರೋಪಕ್ಕೆ ತಿರುಗೇಟು ಕೊಟ್ಟಿರುವ ಮಮತಾ, ವಾಕ್ ಸ್ವಾತಂತ್ರ್ಯ ಇದೆ ಎಂದ ಮಾತ್ರಕ್ಕೆ ಬಿಜೆಪಿ ಶಾಸಕರಿಗೆ ದ್ವೇಷ ಹರಡಲು ಮತ್ತು ಜನರನ್ನು ವಿಭಜಿಸಲು ಅವಕಾಶ ನೀಡುವುದಿಲ್ಲ' ಎಂದಿದ್ದಾರೆ.

ಕೊಡಗು ವಿಶ್ವವಿದ್ಯಾನಿಲಯ ಮುಚ್ಚುವ ಆತಂಕ

• ನಮ್ಮ ಮುಂದಿನ ಭವಿಷ್ಯ ಏನು? • ಪದವಿ ವಿದ್ಯಾರ್ಥಿಗಳ ಚಿಂತನೆ • ಸರ್ಕಾರದ ನಿರ್ಧಾರಕ್ಕೆ ಕೊಡಗಿನ ಜನತೆ ವಿರೋಧ


ಕುಶಾಲನಗರ ತಾಲೂಕಿನ ಚಿಕ್ಕಳುವಾರದಲ್ಲಿರುವ ಕೊಡಗು ವಿವಿ.

ಮಡಿಕೇರಿ, ಫೆ.18–ಮೂರು ವರ್ಷಗಳ ಹಿಂದಷ್ಟೇ ಆರಂಭಗೊಂಡಿದ್ದ 'ಕೊಡಗು ವಿಶ್ವವಿದ್ಯಾನಿಲಯ' ಇದೀಗ ಮುಚ್ಚಲ್ಪಡುವ ಆತಂಕಕ್ಕೆ ಸಿಲುಕಿದೆ. ರಾಜ್ಯ ಸರ್ಕಾರ ಕೆಲ ದಿನಗಳ ಹಿಂದೆ ರಾಜ್ಯದಲ್ಲಿ ನೂತನವಾಗಿ ಆರಂಭಗೊಂಡ ವಿಶ್ವವಿದ್ಯಾನಿಲಯಗಳನ್ನು ಮುಚ್ಚುವ ಸಾಧ್ಯತೆಗಳತ್ತ ಬೊಟ್ಟು ಮಾಡಿದೆ.

ಕುಶಾಲನಗರ ತಾಲೂಕಿನ ಚಿಕ್ಕಳುವಾರದ ಜ್ಞಾನ ಕಾವೇರಿ ಸ್ನಾತಕೋತ್ತರ ಶಿಕ್ಷಣ ಕೇಂದ್ರವೇ ಕೊಡಗು ವಿವಿಯಾಗಿ ಪರಿವರ್ತನೆಯಾಗಿದ್ದು, ವಿವಿಯ ಉಪ ಕುಲಪತಿಯಾಗಿ ಪ್ರೊ.ಅಶೋಕ ಎಸ್. ಆಲೂರ ಅವರು ಕಾರ್ಯನಿರ್ವಹಿಸುತ್ತಿದ್ದಾರೆ. 2022ರ ಅ.10ರ ರಾಜ್ಯ ಸರ್ಕಾರದ ಆದೇಶದಂತೆ ರಾಜ್ಯ ಪತ್ರದ ಪ್ರಕಟಣೆಯೊಂದಿಗೆ 'ಕೊಡಗು ವಿಶ್ವವಿದ್ಯಾನಿಲಯ' ನೂತನ ಅಸ್ತಿತ್ವ ಕಂಡು ಕೊಂಡಿದೆ. ವಿವಿಧ ವಿಭಾಗಗಳಲ್ಲಿ ನೂರಾರು ವಿದ್ಯಾರ್ಥಿಗಳು ಉನ್ನತ ವ್ಯಾಸಂಗ ಮಾಡುತ್ತಿದ್ದು, ಇದೀಗ ನಮ್ಮ ಮುಂದಿನ ಭವಿಷ್ಯ ಏನು? ಎಂಬ ಚಿಂತೆಯಲ್ಲಿದ್ದಾರೆ.

ಬಿಜೆಪಿ ಸರ್ಕಾರದ ಘೋಷಣೆ: ಹಿಂದಿನ ಬಿಜೆಪಿ ಸರ್ಕಾರದ ಕೊನೆಯ ಅವಧಿಯಲ್ಲಿ ಕೊಡಗು ಸೇರಿದಂತೆ ರಾಜ್ಯದ ವಿವಿಧೆಡೆಗಳಲ್ಲಿ ನೂತನ 9 ವಿವಿಗಳ ಸ್ಥಾಪನೆಗೆ ಆದೇಶ ಮಾಡಲಾಗಿತ್ತು ಅದರಂತೆ ನೂತನ ವಿವಿಗಳಿಗೆ ವಾರ್ಷಿಕವಾಗಿ ತಲಾ 2 ಕೋಟಿ ರೂಗಳನ್ನು ಸರ್ಕಾರ ಭರಿಸುತ್ತಿದೆ. ವಿವಿಗಳ ಘೋಷಣೆ ಬಳಿಕ ಕೆಲವೇ ಸಮಯಗಳಲ್ಲಿ ವಿಧಾನಸಭಾ ಚುನಾವಣೆ ನಡೆದು ಹೊಸ ಕಾಂಗ್ರೆಸ್ ಸರ್ಕಾರ ರಚನೆಯಾಗಿದೆ. ಹಿಂದಿನ ಬಿಜೆಪಿ ಸರ್ಕಾರದ ನಿರ್ಧಾರದಂತೆ ರಚನೆಯಾದ ನೂತನ ವಿವಿಗಳನ್ನು ಕಾಂಗ್ರೆಸ್ ಸರ್ಕಾರ ಇದೀಗ ಮುಚ್ಚುವ ಪ್ರಯತ್ನಕ್ಕೆ ಮುಂದಾಗುವ ಮೂಲಕ ಕೊಡಗಿನ ಜನತೆಗೆ ಆಘಾತ ಉಂಟುಮಾಡಿದೆ.


> **ಬಡಮಕ್ಕಳ ವಿದ್ಯಾಭ್ಯಾಸಕ್ಕಾಗಿಯೇ ವಿಶ್ವವಿದ್ಯಾಲಯಗಳನ್ನು ತೆರೆಯಲಾಗಿದೆ. ಇಂತಹ ವಿವಿಗಳನ್ನು ಯಾವುದೇ ಕಾರಣಕ್ಕೂ ಮುಚ್ಚಬಾರದು. ಕೊಡಗು ವಿಶ್ವವಿದ್ಯಾಲಯ ಮಂಗಳೂರು ವಿವಿ ಜೊತೆಗೆ ಮತ್ತೆ ವಿಲೀನವಾಗುವ ಬಗ್ಗೆ ಯಾವುದೇ ಸ್ಪಷ್ಟ ಮಾಹಿತಿ ಇಲ್ಲ. ಈ ಬಗ್ಗೆ ಸರ್ಕಾರವೇ ನಿರ್ಧಾರ ಮಾಡಬೇಕಿದೆ.**
> –ಪ್ರೊ.ಅಶೋಕ ಎಸ್.ಆಲೂರ, ಉಪಕುಲಪತಿ, ಕೊಡಗು ವಿವಿ

ಮಾಜಿ ಶಾಸಕ ಎಂ.ಪಿ.ಅಪ್ಪಚ್ಚು ರಂಜನ್ ಈ ಹಿಂದಿನಿಂದಲೂ ಕೊಡಗಿಗೆ ಪ್ರತ್ಯೇಕ ವಿವಿಯ ಅಗತ್ಯತೆಯನ್ನು ಪ್ರತಿಪಾದಿಸುತ್ತಾ ಬಂದಿದ್ದರು. ಮಂಗಳೂರು ವಿವಿ ಅಡಿ ವ್ಯಾಸಂಗ ಮಾಡುವ ಸ್ಥಳೀಯ ಬಡವಿದ್ಯಾರ್ಥಿಗಳು ಉನ್ನತ ವ್ಯಾಸಂಗಕ್ಕೆ ದೂರದ ಮಂಗಳೂರು ಸೇರಿದಂತೆ ಹೊರ ಪ್ರದೇಶಕ್ಕೆ ತೆರಳುವುದು ಕಷ್ಟ ಸಾಧ್ಯ. ಇದರಿಂದ ಕೊಡಗು ವಿವಿ ರಚನೆಯಾದರೆ, ಸ್ಥಳೀಯ ಬಡ ವಿದ್ಯಾರ್ಥಿಗಳ ಶಿಕ್ಷಣಕ್ಕೆ ಹೆಚ್ಚಿನ ಅನುಕೂಲವಾಗುತ್ತದೆ ಎನ್ನುವುದು ಅವರ ಚಿಂತನೆಯಾಗಿತ್ತು. ಅದರಂತೆ ಅಂದಿನ ಬಿಜೆಪಿ ಸರ್ಕಾರ ಕೊಡಗು ವಿವಿ ರಚನೆಗೆ ಹಸಿರು ನಿಶಾನೆ ತೋರುವ ಮೂಲಕ ಬಹುಕಾಲದ ಕೊಡಗಿನ ಜನರ ಬೇಡಿಕೆ ಈಡೇರಿಸಿತ್ತು. ಆದರೆ, ಇದೀಗ ಕೊಡಗು ವಿವಿಯನ್ನು ಮುಚ್ಚುವ ಸರ್ಕಾರದ ಚಿಂತನೆ ಸ್ಥಳೀಯರ ತೀವ್ರ ಅಸಮಾಧಾನಕ್ಕೆ ಕಾರಣವಾಗಿದೆ.

ಕೊಡಗು ವಿವಿ ವ್ಯಾಪ್ತಿ ಕಾಲೇಜುಗಳು: ಕೊಡಗು ವಿವಿ ಆರಂಭವಾದ ಬಳಿಕ ಮಂಗಳೂರು ವಿವಿ ವ್ಯಾಪ್ತಿಗೆ ಒಳಪಟ್ಟಿದ್ದ ಸುಮಾರು 35 ಕಾಲೇಜುಗಳು ಕೊಡಗು ವಿವಿ ಅಧೀನಕ್ಕೆ ಬಂದಿವೆ. ಒಮ್ಮೆ ಮಂಗಳೂರು ವಿವಿಯಿಂದ ಬೇರ್ಪಟ್ಟು ಕೊಡಗು ವಿವಿ ರಚನೆಯಾದ ಬಳಿಕ ಅಲ್ಲಿಯವರೆಗೆ ಮಂಗಳೂರು ವಿವಿಯಿಂದ ದೊರಕುತ್ತಿದ್ದ ಆರ್ಥಿಕ ನೆರವು ಸ್ಥಗಿತವಾಗಿದ್ದು, ಕೊಡಗು ವಿವಿಯ ಸುಲಲಿತ ಚಾಲನೆಗೆ ತೊಡಕನ್ನುಂಟು ಮಾಡಿದೆ.

ಕೊಡಗು ವಿವಿ ಆರಂಭದ ಸಂದರ್ಭ ವಿದ್ಯಾರ್ಥಿಗಳ ಶಿಕ್ಷಣಕ್ಕೆ ತೊಂದರೆ ಯಾಗದಂತೆ ಹಂತ ಹಂತವಾಗಿ ಪ್ರಥಮ, ದ್ವಿತೀಯ ಮತ್ತು ತೃತೀಯ ವರ್ಷದ ಪದವಿ ವಿಭಾಗ ಕೊಡಗು ವಿವಿಯ ಅಧೀನಕ್ಕೆ ಬಂದಿದೆ. ಕೊಡಗು ವಿವಿ 3ನೇ ವರ್ಷದಲ್ಲಿರುವ ಈ ಹಂತದಿಂದ ಎಲ್ಲಾ ಪದವಿ ಹಂತಗಳು ಕೊಡಗು ವಿವಿಯ ಅಧೀನಕ್ಕೆ ಒಳಪಡುತ್ತದೆ.

ಕೊಡಗು ವಿವಿ ಮುಚ್ಚದಂತೆ ವಿದ್ಯಾರ್ಥಿಗಳ ಪ್ರತಿಭಟನೆ



ರಾಜ್ಯ ಸರ್ಕಾರ ಕೊಡಗು ವಿವಿ ಮುಚ್ಚಲು ಮುಂದಾಗಿದೆ ಎಂದು ಆರೋಪಿಸಿ ವಿದ್ಯಾರ್ಥಿಗಳು ಮಡಿಕೇರಿಯಲ್ಲಿ ಪ್ರತಿಭಟನೆ ನಡೆಸಿದರು.

ಮಡಿಕೇರಿ, ಫೆ.18–ರಾಜ್ಯ ಸರ್ಕಾರ ಕೊಡಗು ವಿಶ್ವವಿದ್ಯಾಲಯ ಮುಚ್ಚಲು ಮುಂದಾಗಿದೆ ಎಂದು ಆರೋಪಿಸಿ ಎಬಿವಿಪಿ ಕಾರ್ಯಕರ್ತರು ಹಾಗೂ ವಿದ್ಯಾರ್ಥಿಗಳು ನಗರದಲ್ಲಿ ಮಂಗಳವಾರ ಪ್ರತಿಭಟನೆ ನಡೆಸಿದರು.

ಅಖಿಲ ಭಾರತ ವಿದ್ಯಾರ್ಥಿ ಪರಿಷತ್ ನೇತೃತ್ವದಲ್ಲಿ ನಗರದ ಫೀಲ್ಡ್ ಮಾರ್ಷಲ್ ಕೆ.ಎಂ.ಕಾರ್ಯಪ್ಪ ಕಾಲೇಜು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಮತ್ತು ಸರ್ಕಾರಿ ಮಹಿಳಾ ಕಾಲೇಜಿನ ನೂರಾರು ವಿದ್ಯಾರ್ಥಿಗಳು ಜನರಲ್ ಕೆಎಸ್.ತಿಮ್ಮಯ್ಯ ವೃತ್ತದಲ್ಲಿ ಸಮಾವೇಶಗೊಂಡು ಪ್ರತಿಭಟನೆ ನಡೆಸಿದರು.

ಕೊಡಗು ಜಿಲ್ಲೆಯ ಗ್ರಾಮೀಣ ವಿದ್ಯಾರ್ಥಿಗಳಿಗೆ ಉಪಯುಕ್ತವಾಗುವ ವಿವಿಯನ್ನು ಯಾವುದೇ ಕಾರಣಕ್ಕೂ ಮುಚ್ಚುವ ಪ್ರಯತ್ನಕ್ಕೆ ಮುಂದಾಗಬಾರದು. ವಿದ್ಯಾರ್ಥಿಗಳ ಸ್ಥಿತಿ ಅಯೋಮಯ, ಮೈ ಮರೆತರೆ ವಿವಿಗಳೇ ಮಾಯ, ನಿಲ್ಲಿಸಿ ಶಿಕ್ಷಣದ ವ್ಯಾಪಾರೀಕರಣ, ವಿಧಾನಸೌಧದ ಖರ್ಚಿಗಳೇ ಕೇಳಿರಿ ವಿದ್ಯಾರ್ಥಿಗಳ ಅಳಲನ್ನ ಎಂಬ ಮೊದಲಾದ ಭಿತ್ತಿ ಫಲಕಗಳನ್ನು ಪ್ರದರ್ಶಿಸಿದ ವಿದ್ಯಾರ್ಥಿಗಳು, 'ವಿ ವಾಂಟ್ ಜಸ್ಟಿಸ್' ಘೋಷಣೆಯೊಂದಿಗೆ ಕೆಲಕಾಲ ಪ್ರತಿಭಟನೆ ನಡೆಸಿದರು. ನಂತರ ಮೆರವಣಿಗೆ ಮೂಲಕ ಜಿಲ್ಲಾಡಳಿತ ಭವನಕ್ಕೆ ತೆರಳಿ ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಿದರು.

ಪ್ರತಿಭಟನೆಯಲ್ಲಿ ಎಬಿವಿಪಿ ವಿಭಾಗೀಯ ಸಂಘಟನಾ ಕಾರ್ಯದರ್ಶಿ ಚಂದ್ರಶೇಖರ್, ರಾಜ್ಯ ಸಮಿತಿ ಸದಸ್ಯ ಅಜಯ್, ಮಡಿಕೇರಿ ಪ್ರಮೋದ್ ಪಲ್ಲೇದ, ವಿವಿಧ ಕಾಲೇಜಿನ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

> **ಬಿಜೆಪಿ ಅಧಿಕಾರದಲ್ಲಿ ಇದ್ದಾಗ ಸ್ಥಾಪನೆ ಮಾಡಿರುವ 9 ವಿಶ್ವವಿದ್ಯಾಲಯಗಳನ್ನು ರಾಜ್ಯ ಕಾಂಗ್ರೆಸ್ ಸರ್ಕಾರ ಮುಚ್ಚುವ ತೀರ್ಮಾನ ಕೈಗೊಳ್ಳುತ್ತಿರುವುದು ಖಂಡನೀಯ. ಕೊಡಗು ವಿಶ್ವವಿದ್ಯಾಲಯಕ್ಕೆ ಕನಿಷ್ಠ 2 ಕೋಟಿ ರೂ. ಅನುದಾನ ಕೂಡ ನೀಡಲು ಅಸಾಧ್ಯವಾಗದ ಸ್ಥಿತಿಗೆ ಕಾಂಗ್ರೆಸ್ ಸರ್ಕಾರ ತಲುಪಿದೆ. ಸರ್ಕಾರ ಬಳಿ ವಿಶ್ವವಿದ್ಯಾಲಯ ನಡೆಸಲು ಅನುದಾನ ಇಲ್ಲದೆ ಹೋದಲ್ಲಿ ಕೊಡಗಿನ ಜನತೆಯ ನೆರವಿನೊಂದಿಗೆ ಖಾಸಗಿ ಸಂಸ್ಥೆಗಳ ಅನುದಾನ ಬಳಸಿ ಕೊಡಗು ವಿವಿಯನ್ನು ಬಿಜೆಪಿ ಉಳಿಸಿಕೊಳ್ಳಲಿದೆ. ಕೊಡಗು ವಿವಿ ಉಳಿಸಿಕೊಳ್ಳುವ ನಿಟ್ಟಿನಲ್ಲಿ ನಾನು ವಿರಾಜಪೇಟೆ ಶಾಸಕ ಎ.ಎಸ್. ಪೊನ್ನಣ್ಣ ಅವರ ಜೊತೆ ಕೂಡ ಚರ್ಚಿಸಿದ್ದೇನೆ.**
> -ಎಂ.ಪಿ.ಅಪ್ಪಚ್ಚು ರಂಜನ್, ಮಾಜಿ ಶಾಸಕ



ಸರ್ಕಾರದ ನೆರವು ಅಗತ್ಯ

ಕೇವಲ 3 ವರ್ಷಗಳನ್ನಷ್ಟೆ ಪೂರೈಸಿರುವ ಕೊಡಗು ವಿವಿಯ ಅಭಿವೃದ್ಧಿ ಕಾರ್ಯಗಳು, ಶೈಕ್ಷಣಿಕ ಚಟುವಟಿಕೆಗಳನ್ನು ನಡೆಸಲು ಅಗತ್ಯವಾದ ಆರ್ಥಿಕ ಸ್ಥಿತಿಯನ್ನು ಕೊಡಗು ವಿವಿ ಹೊಂದಿಲ್ಲ. ಈ ಹಿನ್ನೆಲೆ ಸರ್ಕಾರದ ನೆರವು ಅಗತ್ಯ ವಾಗಿದೆ. ಆದರೆ, ರಾಜ್ಯದ 9 ವಿವಿಗಳನ್ನು ನಿರ್ವಹಿಸುವುದು ಬಹುಶಃ ಸರ್ಕಾರಕ್ಕೆ ಹೊರೆ ಎನಿಸಿದೆಯೇ ಎನ್ನುವ ಪ್ರಶ್ನೆ ಸಾರ್ವಜನಿಕರನ್ನು ಕಾಡುತ್ತಿದೆ. ಯಾವುದೇ ಸಮಸ್ಯೆಗಳಿದ್ದರೂ ಅಭಿವೃದ್ಧಿಯ ಪಥದಲ್ಲಿ ನಿಧಾನವಾಗಿ ಹೆಜ್ಜೆ ಇಡುತ್ತಿರುವ ಕೊಡಗು ವಿವಿ ಸ್ಥಗಿತಗೊಳಿಸುವುದು ಜಿಲ್ಲೆಯ ಮಕ್ಕಳ ಶೈಕ್ಷಣಿಕ ಪ್ರಗತಿಯ ಹಿನ್ನೆಲೆಯಲ್ಲಿ ಸರಿಯಾದ ಕ್ರಮವಲ್ಲ. ಇದಕ್ಕೆ ಜಿಲ್ಲೆಯ ಜನರ ವ್ಯಾಪಕ ವಿರೋಧಗಳು ಈಗಾಗಲೇ ವ್ಯಕ್ತವಾಗತೊಡಗಿದೆ.

ನಿಧನ



ಕೆ.ಪಿ.ರಾಮಚಂದ್ರ

ನಾಪೋಕ್ಲು, ಫೆ.18– ಸಮೀಪದ ಬೆಟ್ಟಗೇರಿ ಗ್ರಾಮ ಪಂಚಾಯಿತಿಯ ಪಾಲೂರು ಗ್ರಾಮದ ನಿವಾಸಿ ಕೆ.ಪಿ. ರಾಮಚಂದ್ರ (73) ಮಂಗಳವಾರ ನಿಧನರಾದರು. ಮೃತರು ಪತ್ನಿ, ಪುತ್ರನನ್ನು ಅಗಲಿದ್ದಾರೆ. ಬುಧವಾರ ಪಾಲೂರಿನ ಸ್ವಗೃಹ ಬಳಿ ಅಂತ್ಯಕ್ರಿಯೆ ನೆರವೇರಿಸಲಾಗುವುದು.

ಬಿ.ಎಸ್.ಚಂದ್ರಶೇಖರ್ ರೈ



ನಾಪೋಕ್ಲು, ಫೆ.18–ಸಮೀಪದ ಕಕ್ಕುಂದಕಾಡು ನಿವಾಸಿ ಬಿ.ಎಸ್. ಚಂದ್ರಶೇಖರ್ ರೈ (77) ಸೋಮವಾರ ನಿಧನರಾದರು. ಮೃತರು ಪತ್ನಿ, ಇಬ್ಬರು ಪುತ್ರರು, ಪುತ್ರಿ ಅಗಲಿದ್ದಾರೆ.


ಮಂಗಳವಾರ ಕಕ್ಕುಂದ ಕಾಡು ಹಿಂದೂ ರುದ್ರಭೂಮಿಯಲ್ಲಿ ಅಂತ್ಯಕ್ರಿಯೆ ನೆರವೇರಿತು.

ವನ್ಯಜೀವಿ ಉಗುರು ಸಾಗಿಸುತ್ತಿದ್ದ ಮೂವರ ಬಂಧನ

ಮಡಿಕೇರಿ, ಫೆ.18–ವನ್ಯಜೀವಿಗಳ ಉಗುರುಗಳನ್ನು ಸಾಗಿಸುತ್ತಿದ್ದ ಮೂವರು ಆರೋಪಿಗಳನ್ನು ಟಿ.ಶೆಟ್ಟಿಗೇರಿ ವಲಯ ಅರಣ್ಯಾಧಿಕಾರಿಗಳು ಬಂಧಿಸಿದ್ದಾರೆ.

ಪೊನ್ನಂಪೇಟೆ ತಾಲೂಕಿನ ಬೀರುಗ ಗ್ರಾಮದ ಸಂಜೀವ್ (35), ಟಿ.ಶೆಟ್ಟಿಗೇರಿ ಗ್ರಾಮದ ಸಿ.ಎಸ್.ರಾಜಪ್ಪ(63) ಹಾಗೂ ಬೆಂಗಳೂರು ಬನಶಂಕರಿ ನಿವಾಸಿ ಗೀತಾ ಬಂಧಿತರು. ಆರೋಪಿಗಳ ಬಳಿಯಿದ್ದ ವನ್ಯಜೀವಿಗಳ 12 ಉಗುರುಗಳನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

ವಶಪಡಿಸಿಕೊಂಡ ಉಗುರುಗಳು ಹುಲಿ ಅಥವಾ ಚಿರತೆಯದ್ದಾಗಿರುವ ಸಾಧ್ಯತೆ ಇದೆ. ಅದನ್ನು ಖಚಿತಪಡಿಸಲು ಉಗುರುಗಳನ್ನು ಪ್ರಯೋಗಾಲಯಕ್ಕೆ ಕಳುಹಿಸಲಾಗುವುದು ಎಂದು ಅರಣ್ಯಾಧಿಕಾರಿಗಳು ತಿಳಿಸಿದ್ದಾರೆ. ವನ್ಯಜೀವಿ ಡಿಎಫ್‌ಓ ನೆಹರು, ಹುಣಸೂರು ವನ್ಯಜೀವಿ ವಲಯದ ಲಕ್ಷ್ಮೀಕಾಂತ್, ಶ್ರೀಮಂಗಲ ಆರ್‌ಎಫ್‌ಓ ಅರವಿಂದ್, ಮಾಕುಟ್ಟ ವನ್ಯಜೀವಿ ವಿಭಾಗದ ಸಂತೋಷ್ ಹೂಗಾರ್ ಮತ್ತು ಸಿಬ್ಬಂದಿ ಕಾರ್ಯಾಚರಣೆ ನಡೆಸಿದ್ದಾರೆ. ಆರೋಪಿಗಳ ವಿರುದ್ಧ ಪ್ರಕರಣ ದಾಖಲಿಸಿ, ನ್ಯಾಯಾಂಗ ವಶಕ್ಕೆ ಒಪ್ಪಿಸಲಾಗಿದೆ.



ಕಟ್ಟೆಮಾಡುವಿನಲ್ಲಿ ತಹಸೀಲ್ದಾರ್ ಸಮ್ಮುಖದಲ್ಲಿ ಸಭೆ


ಕಟ್ಟೆಮಾಡು ಗ್ರಾಮದ ಸರ್ಕಾರಿ ಶಾಲೆಯಲ್ಲಿ ಮಡಿಕೇರಿ ತಹಸೀಲ್ದಾರ್ ಪ್ರವೀಣ್ ಸಮ್ಮುಖದಲ್ಲಿ ಗ್ರಾಮದ ಪ್ರಮುಖರ ಸಭೆ ನಡೆಯಿತು.

ಮಡಿಕೇರಿ, ಫೆ.18– ಕಟ್ಟೆಮಾಡು ಗ್ರಾಮದ ಮೃತ್ಯುಂಜಯ ದೇವಾಲಯ ವಸ್ತ್ರಸಂಹಿತೆ ವಿವಾದಕ್ಕೆ ಸಂಬಂಧಿಸಿದಂತೆ ಹೈಕೋರ್ಟ್ ಮಧ್ಯಂತರ ಆದೇಶದ ಹಿನ್ನೆಲೆಯಲ್ಲಿ ಮಡಿಕೇರಿ ತಹಸೀಲ್ದಾರ್ ಪ್ರವೀಣ್ ಸಮ್ಮುಖದಲ್ಲಿ ಕಟ್ಟೆಮಾಡು ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಗ್ರಾಮದ ಪ್ರಮುಖರ ಸಭೆ ನಡೆಯಿತು.

ಸಭೆಯಲ್ಲಿ ಹೈಕೋರ್ಟ್ ಮಧ್ಯಂತರ ಆದೇಶ ಪಾಲಿಸುವಂತೆ ಅಧಿಕಾರಿಗಳು ಸೂಚನೆ ನೀಡಿದರು. ದೇವಾಲಯದಿಂದ 200 ಮೀಟರ್ ಅಂತರದಲ್ಲಿ ಮಾ.13ರವರೆಗೆ 163 ಸೆಕ್ಷನ್ ಪ್ರಕಾರ ನಿಷೇಧಾಜ್ಞೆ ಜಾರಿ ಇರುವುದರಿಂದ ದೇವಾಲಯಕ್ಕೆ 5 ಮಂದಿಗಿಂತ ಹೆಚ್ಚಿನ ಜನರು ತೆರಳುವಂತಿಲ್ಲ. ಯಾವುದೇ ಕಾರಣಕ್ಕೂ ಶಾಂತಿ ಸುವ್ಯವಸ್ಥೆಗೆ ಧಕ್ಕೆಯಾಗದಂತೆ ಗ್ರಾಮದಲ್ಲಿ ಸೌಹಾರ್ದತೆ ಕಾಪಾಡಿಕೊಳ್ಳಬೇಕೆಂದು ತಹಸೀಲ್ದಾರ್ ಪ್ರವೀಣ್ ಮತ್ತು ಗ್ರಾಮಾಂತರ ಪೊಲೀಸ್ ಠಾಣಾಧಿಕಾರಿ ಚಂದ್ರಶೇಖರ್ ಸೂಚಿಸಿದರು.

ಸಭೆಯಲ್ಲಿ ದೇವಾಲಯ ಆಡಳಿತ ಮಂಡಳಿಯ 5 ಸದಸ್ಯರು, ಮರಗೋಡು ಗ್ರಾಪಂ ಅಧ್ಯಕ್ಷ, ಉಪಾಧ್ಯಕ್ಷ, ಸದಸ್ಯರು, ಪಿಡಿಓ ಸೇರಿದಂತೆ ಗ್ರಾಮದ ಪ್ರಮುಖರು ಉಪಸ್ಥಿತರಿದ್ದರು.

ಎಸ್ಸೆಸ್ಸೆಲ್ಸಿ ಪರೀಕ್ಷಾ ಕಾರ್ಯ ಸಮರ್ಪಕವಾಗಿ ನಿರ್ವಹಿಸಿ

ಸಭೆಯಲ್ಲಿ ಪ್ರಾಂಶುಪಾಲರು, ಅಧಿಕಾರಿಗಳಿಗೆ ಜಿಲ್ಲಾ ಪಂಚಾಯಿತಿ ಸಿಇಓ ಮೋನಾ ರೋತ್ ಸೂಚನೆ


ಚಾಮರಾಜನಗರದ ಜಿಲ್ಲಾಡಳಿತ ಭವನದ ಹಳೇ ಕೆಡಿಪಿ ಸಭಾಂಗಣದಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆ ಸಂಬಂಧ ನಡೆದ ಸಭೆಯಲ್ಲಿ ಜಿಪಂ ಸಿಇಓ ಮೋನಾ ರೋತ್ ಮಾತನಾಡಿದರು.

ಚಾಮರಾಜನಗರ, ಫೆ.18–ಮುಂದಿನ (ಮಾರ್ಚ್) ತಿಂಗಳು ನಡೆಯಲಿರುವ 2024–25ನೇ ಸಾಲಿನ ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷಾ ಕಾರ್ಯವನ್ನು ಸಕಲ ಸಿದ್ಧತೆಗಳೊಂದಿಗೆ ಸಮರ್ಪಕವಾಗಿ ನಿರ್ವಹಿಸಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಮೋನಾ ರೋತ್ ಅವರು ಪ್ರಾಂಶುಪಾಲರು ಹಾಗೂ ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಜಿಲ್ಲಾಡಳಿತ ಭವನದ ಹಳೇ ಕೆಡಿಪಿ ಸಭಾಂಗಣದಲ್ಲಿ ಮಂಗಳವಾರ ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆ ಸಂಬಂಧ ನಡೆದ ಪಿಯು ಕಾಲೇಜು ಪ್ರಾಂಶುಪಾಲರು, ಪ್ರೌಢಶಾಲೆಗಳ ಮುಖ್ಯ ಶಿಕ್ಷಕರು ಹಾಗೂ ಪರೀಕ್ಷಾ ಕಾರ್ಯಕ್ಕೆ ನಿಯೋಜನೆಗೊಂಡ ವಿವಿಧ ಇಲಾಖೆ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿದ ಅವರು, ಪರೀಕ್ಷೆಗಳಿಗೆ ಈಗಾಗಲೇ ವೇಳಾಪಟ್ಟಿ ಬಿಡುಗಡೆ ಮಾಡಲಾಗಿದೆ ಪರೀಕ್ಷಾ ಕಾರ್ಯವನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು. ಪರೀಕ್ಷೆ ಸಂಬಂಧ ನೀಡಲಾಗಿರುವ ಸೂಚನೆ, ಮಾರ್ಗದರ್ಶನದ ಪ್ರಕಾರ ಕಟ್ಟುನಿಟ್ಟಾಗಿ ಕೆಲಸ ನಿರ್ವಹಿಸಬೇಕು ಎಂದರು.

ಶಾಲಾ–ಕಾಲೇಜುಗಳ ಉಳಿದ ಸಮಯದಲ್ಲಿ ವಿದ್ಯಾರ್ಥಿಗಳಿಗೆ ಶ್ರಮವಹಿಸಿ ಅಧ್ಯಯನ ಮಾಡಲು ಉತ್ತೇಜಿಸಬೇಕು. ಜಿಲ್ಲೆಗೆ ಉತ್ತಮ ಫಲಿತಾಂಶ ಹಾಗೂ ಉನ್ನತ ಸ್ಥಾನಕ್ಕೆ ಏರಲು ಪೂರಕವಾಗಿರುವಂತೆ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಬೇಕು. ವಿಶೇಷ ತರಗತಿಗಳ ಮೂಲಕ ವಿದ್ಯಾರ್ಥಿಗಳನ್ನು ಪರೀಕ್ಷೆಗೆ ಸಜ್ಜುಗೊಳಿಸಬೇಕು ಎಂದು ಸಲಹೆ ನೀಡಿದರು.

ಪರೀಕ್ಷಾ ದಿನಾಂಕ ಹತ್ತಿರವಾಗುತ್ತಿರುವ ಹಿನ್ನೆಲೆಯಲ್ಲಿ ಗ್ರಾಮ ಪಂಚಾಯಿತಿಯಲ್ಲಿರುವ ಗ್ರಂಥಾಲಯಗಳನ್ನು ಬೆಳಗ್ಗಿನ ವೇಳೆ ಬೇಗನೆ ತೆರೆಯುವ ಅವಶ್ಯವಿದ್ದಲ್ಲಿ ಸೂಕ್ತ ನಿರ್ದೇಶನ ನೀಡಲಾಗುವುದು. ಪೋಷಕರೊಂದಿಗೆ ಸಂಪರ್ಕದಲ್ಲಿದ್ದು, ವಿದ್ಯಾರ್ಥಿಗಳಿಗೆ ಹೆಚ್ಚಿನ ಪ್ರೋತ್ಸಾಹ ನೀಡಬೇಕು ಎಂದು ತಿಳಿಸಿದರು.

> **ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯುಸಿ ಫಲಿತಾಂಶದಲ್ಲಿ ಜಿಲ್ಲೆ ಗಣನೀಯವಾಗಿ ಸುಧಾರಣೆಯಾಗಬೇಕು. ಎಲ್ಲಾ ವಿದ್ಯಾರ್ಥಿಗಳು ಮೊದಲ ಪ್ರಯತ್ನದಲ್ಲೇ ಉತ್ತಮ ಅಂಕಗಳೊಂದಿಗೆ ತೇರ್ಗಡೆಯಾಗಲು ಶಿಕ್ಷಕರು ವಿಶೇಷ ಕಾಳಜಿ ವಹಿಸಬೇಕು. ಪರೀಕ್ಷಾ ಕಾರ್ಯಗಳಿಗೆ ಈಗಾಗಲೇ ಎಲ್ಲಾ ಅಗತ್ಯ ತಂಡಗಳನ್ನು ನಿಯೋಜಿಸಲಾಗಿದೆ. ಪರೀಕ್ಷಾ ಕೇಂದ್ರಗಳಲ್ಲಿ ಎಲ್ಲಾ ಸೌಕರ್ಯ ಇರಬೇಕು. ಯಾವುದೇ ಸಮಸ್ಯೆಗಳಿದ್ದರೆ ಸಂಬಂಧಪಟ್ಟವರು ಕೂಡಲೇ ಗಮನಕ್ಕೆ ತರಬೇಕು.**
> -ಗೀತಾ ಹುಡೇದಾ, ಅಪರ ಜಿಲ್ಲಾಧಿಕಾರಿ

ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಮಂಜುನಾಥ ಪ್ರಸನ್ನ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ರಾಮಚಂದ್ರ ರಾಜೇ ಅರಸ್ ಪರೀಕ್ಷಾ ಸಿದ್ಧತೆಗಳ ಸಂಬಂಧ ವಿವರ ನೀಡಿದರು. ಸಭೆಯಲ್ಲಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶಶಿಧರ್, ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ಪ್ರಾಂಶುಪಾಲ ಕಾಶಿನಾಥ್ ಉಪಸ್ಥಿತರಿದ್ದರು.

ಆಲೂರಲ್ಲಿ ಗೌರಮ್ಮ ಬಿ.ರಾಚಯ್ಯ ಪುಣ್ಯಸ್ಮರಣೆ

ಶಾಸಕ ಎ.ಆರ್.ಕೃಷ್ಣಮೂರ್ತಿ, ಕುಟುಂಬಸ್ಥರಿಂದ ಸಮಾಧಿಗೆ ಪೂಜೆ ಸಲ್ಲಿಕೆ


ಆಲೂರು ಗ್ರಾಮದಲ್ಲಿ ಗೌರಮ್ಮ ಬಿ.ರಾಚಯ್ಯ ಅವರ ಸಮಾಧಿಗೆ ಶಾಸಕ ಎ.ಆರ್.ಕೃಷ್ಣಮೂರ್ತಿ ಹಾಗೂ ಕುಟುಂಬದವರು ಪೂಜೆ ಸಲ್ಲಿಸಿದರು.

ಚಾಮರಾಜನಗರ, ಫೆ.18– ಕೇರಳದ ಮಾಜಿ ರಾಜ್ಯಪಾಲ ದಿ.ಬಿ.ರಾಚಯ್ಯ ಅವರ ಪತ್ನಿ ಗೌರಮ್ಮ ರಾಚಯ್ಯ ಅವರ ಪುಣ್ಯಸ್ಮರಣೆ ಕಾರ್ಯಕ್ರಮ ಮಂಗಳವಾರ ತಾಲೂಕಿನ ಆಲೂರು ಗ್ರಾಮದಲ್ಲಿ ನಡೆಯಿತು.

ಗೌರಮ್ಮ ಬಿ.ರಾಚಯ್ಯ ಅವರ 11ನೇ ದಿನದ ಕಾರ್ಯ ಹಾಗೂ ಮಾಜಿ ರಾಜ್ಯಪಾಲ ಬಿ.ರಾಚಯ್ಯ ಅವರ 25ನೇ ವರ್ಷದ ಸಂಸ್ಮರಣಾ ಕಾರ್ಯಕ್ರಮದ ಪ್ರಯುಕ್ತ ಗ್ರಾಮದ ರಾಚಯ್ಯ ಸ್ಮಾರಕ ಭವನದ ಆವರಣದಲ್ಲಿರುವ ಚಿರಶಾಂತಿ ಧಾಮದ ಗೌರಮ್ಮ ಹಾಗೂ ಬಿ.ರಾಚಯ್ಯ ಅವರ ಸಮಾಧಿಗೆ ಪುತ್ರರಾದ ಕೊಳ್ಳೇಗಾಲ ಶಾಸಕ ಎ.ಆರ್.ಕೃಷ್ಣಮೂರ್ತಿ, ಜಿಪಂ ಮಾಜಿ ಸದಸ್ಯ ಎ.ಆರ್.ಬಾಲರಾಜು, ಪುತ್ರಿಯರು, ಅಳಿಯಂದಿರು, ಸೊಸೆಯಂದಿರು, ಮೊಮ್ಮಕ್ಕಳು ಸೇರಿದಂತೆ ಕುಟುಂಬ ವರ್ಗದವರು ಪೂಜೆ ಸಲ್ಲಿಸಿದರು.

ಸಮಾಧಿಯನ್ನು ವಿವಿಧ ಪುಷ್ಪಗಳಿಂದ ಅಲಂಕರಿಸಲಾಗಿತ್ತು. ಇದೇ ವೇಳೆ ಹರಿಕಥೆ ನಿಪುಣ ಕೆ.ರಾಮದಾಸ ಮತ್ತು ತಂಡದವರಿಂದ ಶ್ರೀ ಮಂಟೇಸ್ವಾಮಿ ಅವರ ಕಾವ್ಯ ಕಥನ ನಡೆಯಿತು. ಮೈಸೂರಿನ ಉರಿಲಿಂಗಿ ಪೆದ್ದಿಮಠದ ಶ್ರೀ ಜ್ಞಾನಪ್ರಕಾಶಸ್ವಾಮೀಜಿ, ಶಾಸಕ ಹೆಚ್.ಎಂ.ಗಣೇಶ್‌ಪ್ರಸಾದ್, ಕಾಡಾಧ್ಯಕ್ಷ ಮರಿಸ್ವಾಮಿ, ಪ್ರೊ.ನಂಜಯ್ಯ ಹೊಂಗನೂರು, ಡಾ.ರಂಗನಾಥಯ್ಯ ಸೇರಿದಂತೆ ಇತರೆ ಹಲವು ಗಣ್ಯರು ಸಮಾಧಿಗೆ ಪುಷ್ಪಾರ್ಚನೆ ಮಾಡಿದರು.

ಇದೇ ಸಂದರ್ಭದಲ್ಲಿ ಶ್ರೀ ಜ್ಞಾನ ಪ್ರಕಾಶ ಸ್ವಾಮೀಜಿ ಸೇರಿದಂತೆ ಇತರೆ ಗಣ್ಯರು ಚಿರಶಾಂತಿ ಧಾಮದ ಗ್ಯಾಲರಿಯಲ್ಲಿರುವ ರಾಚಯ್ಯ ಅವರ ಹಲವು ಭಾವಚಿತ್ರಗಳನ್ನು ವೀಕ್ಷಿಸಿದರು. ಸಾರ್ವಜನಿಕರಿಗೆ ಬಿ.ರಾಚಯ್ಯ ಸ್ಮಾರಕ ಭವನದ ಆವರಣದಲ್ಲಿ ಅನ್ನಸಂತರ್ಪಣೆ ಕಾರ್ಯ ನಡೆಯಿತು.

ನಗರಸಭೆ ಆಯುಕ್ತರ ತನಿಖೆಗೆ ಡಿಸಿ ಆದೇಶ

ಚಾಮರಾಜನಗರ, ಫೆ.18–ನಗರಸಭೆ ಆಯುಕ್ತ ಎಸ್.ವಿ.ರಾಮದಾಸ್ ವಿರುದ್ಧ ಅಕ್ರಮ ಖಾತೆ ಆರೋಪದ ಹಿನ್ನೆಲೆಯಲ್ಲಿ ಸಮಗ್ರ ತನಿಖೆ ನಡೆಸಲು ಅಧಿಕಾರಿಗಳ ತನಿಖಾ ತಂಡ ರಚಿಸಿ ಜಿಲ್ಲಾಧಿಕಾರಿ ಶಿಲ್ಪಾನಾಗ್ ಆದೇಶಿಸಿದ್ದಾರೆ.


ರಾಮದಾಸ್

ನಗರಸಭೆ ವ್ಯಾಪ್ತಿಯಲ್ಲಿ ಅಕ್ರಮ ಖಾತೆ, ಸರ್ಕಾರಿ ಆಸ್ತಿಗಳ ಪರಭಾರೆ ಮಾಡಿರುವಂತಹ ಗಂಭೀರ ಆರೋಪಗಳು ಬಂದಿದ್ದು, ಹಾಗಾಗಿ ರಾಮದಾಸ್ ಅವರ ಅವಧಿಯಲ್ಲಿ ಆಗಿರುವ ಖಾತೆ ಸೇರಿದಂತೆ ಎಲ್ಲಾ ವಿಭಾಗಗಳ ಕಡತಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ತನಿಖೆ ನಡೆಸುವಂತೆ ಹಾಗೂ ವರದಿಯನ್ನು 15 ದಿನದೊಳಗೆ ಸಲ್ಲಿಸುವಂತೆ ಸೂಚಿಸಲಾಗಿದೆ.

ತನಿಖಾಧಿಕಾರಿಗಳಾಗಿ ನಗರಾಭಿವೃದ್ಧಿ ಕೋಶದ ಅಲ್ತಾಫ್ ಅಹ್ಮದ್, ಕೊಳ್ಳೇಗಾಲ ನಗರಸಭೆ ಲೆಕ್ಕಾಧೀಕ್ಷಕ ಹನುಮಂತರಾಜು, ಗುಂಡ್ಲುಪೇಟೆ ಪುರಸಭೆ ಕಂದಾಯಾಧಿಕಾರಿ ಸವಿತಾ ಹಾಗೂ ಇಂಜಿನಿಯರ್ ಅನುಪಮಾ ಅವರನ್ನು ತನಿಖೆಗೆ ನೇಮಿಸಲಾಗಿದೆ.

ಗುಂಡ್ಲುಪೇಟೆಯಲ್ಲಿ ಕೋಟೆ ಮಾರಮ್ಮ ಹಬ್ಬ

ಗುಂಡ್ಲುಪೇಟೆ, ಫೆ.18–ಪಟ್ಟಣದ ಕೋಟೆ ಮಾರಮ್ಮ ದೇವಾಲಯದಲ್ಲಿ ಗ್ರಾಮ ದೇವತೆ ಹಬ್ಬ ಆಚರಿಸಲಾಯಿತು.

ಹಬ್ಬದ ಹಿನ್ನೆಲೆಯಲ್ಲಿ ದೇವಾಲಯವನ್ನು ತಳಿರು ತೋರಣ ಹಾಗೂ ದೀಪಗಳಿಂದ ಸಿಂಗರಿಸಲಾಗಿತ್ತು. ಗರ್ಭಗುಡಿಯಲ್ಲಿರುವ ದೇವಿಗೆ ಬೆಳ್ಳಿಯ ಮುಖವಾಡ ಧಾರಣೆ ಮಾಡಿ, ವಿವಿಧ ಪುಷ್ಪಗಳಿಂದ ಅಲಂಕರಿಸಲಾಗಿತ್ತು. ನಂತರ ಹೋಮ, ಪೂಜೆ ನೆರವೇರಿಸಿ ಪ್ರಸಾದ ವಿತರಿಸಲಾಯಿತು. ಇದೇ ವೇಳೆ ಭಕ್ತರು ತಂಪಿನ ಪೂಜೆ ನೆರವೇರಿಸಿ, ತಂಬಿಟ್ಟಿನ ದೀಪ ಬೆಳಗಿ ಹರಕೆ ತೀರಿಸಿದರು.


ಗುಂಡ್ಲುಪೇಟೆ ಕೋಟೆ ಮಾರಮ್ಮ ದೇವಾಲಯದಲ್ಲಿ ಹಬ್ಬದ ಅಂಗವಾಗಿ ಭಕ್ತರು ಪೂಜೆ ಸಲ್ಲಿಸಿದರು.

ಅರಣ್ಯಕ್ಕೆ ಬೆಂಕಿ ಹಾಕಿದ್ದ ಇಬ್ಬರ ಬಂಧನ


ಬಸವನಗುಡಿ ಅರಣ್ಯ ಪ್ರದೇಶಕ್ಕೆ ಬೆಂಕಿ ಹಾಕಿದ್ದ ಇಬ್ಬರು ಆರೋಪಿಗಳನ್ನು ಅರಣ್ಯಾಧಿಕಾರಿಗಳು ಬಂಧಿಸಿರುವುದು.

ಹನೂರು, ಫೆ.18–ತಾಲೂಕಿನ ರಾಮಾಪುರ ವನ್ಯಜೀವಿ ವಲಯದ ಕೌದಳ್ಳಿಯ ಬಸವನಗುಡಿ ಅರಣ್ಯ ಪ್ರದೇಶಕ್ಕೆ ಬೆಂಕಿ ಹಾಕಿದ್ದ ಇಬ್ಬರನ್ನು ಅರಣ್ಯಾಧಿಕಾರಿಗಳು ಬಂಧಿಸಿದ್ದಾರೆ. ಹನೂರು ತಾಲೂಕಿನ ದಂಟಳ್ಳಿ ಗ್ರಾಮದ ಕುಮಾರ ಅಲಿಯಾಸ್ ಶಿವಕುಮಾರ್ ಹಾಗೂ ಬಸವ ಅಲಿಯಾಸ್ ಬಸವಣ್ಣ ಬಂಧಿತರು.


ಈ ಇಬ್ಬರು ಫೆ.16ರಂದು ಬೆಳಗ್ಗೆ ಬಸವನಗುಡಿ ಅರಣ್ಯ ಪ್ರದೇಶಕ್ಕೆ ಬೆಂಕಿ ಹಾಕಿದ್ದರು. ಈ ವೇಳೆ ಗಸ್ತಿನಲ್ಲಿದ್ದ ಅರಣ್ಯ ಸಿಬ್ಬಂದಿ ಅರಣ್ಯಕ್ಕೆ ಬೆಂಕಿ ಬಿದ್ದಿರುವುದನ್ನು ಗಮನಿಸಿ, ತಕ್ಷಣ ಕಾರ್ಯಪ್ರವೃತ್ತರಾಗಿ ಬೆಂಕಿ ನಂದಿಸಿದ್ದರು.

ನಂತರ ಸಿಬ್ಬಂದಿ ಬೆಂಕಿ ಬಿದ್ದಿರುವ ವಿಷಯವನ್ನು ಮೇಲಧಿಕಾರಿಗಳಿಗೆ ತಿಳಿಸಿದ್ದರು. ಅರಣ್ಯಕ್ಕೆ ಬೆಂಕಿ ಬೀಳಲು ಕಾರಣವೇನು ಎಂದು ಪರಿಶೀಲಿಸಿ, ಉಪ ಅರಣ್ಯ ಸಂರಕ್ಷಣಾಧಿಕಾರಿ ಪರಮೇಶ ಮಾರ್ಗದರ್ಶನದಲ್ಲಿ ರಾಮಾಪುರ ವನ್ಯಜೀವಿ ವಲಯ ಅರಣ್ಯಾಧಿಕಾರಿ ಹಾಗೂ ಸಿಬ್ಬಂದಿ ಬೆಂಕಿ ಹಾಕಿದ್ದ ಇಬ್ಬರು ಆರೋಪಿಗಳನ್ನು ಪತ್ತೆಹಚ್ಚಿ ಬಂಧಿಸಿ, ನ್ಯಾಯಾಂಗ ವಶಕ್ಕೆ ಒಪ್ಪಿಸಿದ್ದಾರೆ. ಕಾರ್ಯಾಚರಣೆಯಲ್ಲಿ ಹನೂರು ವನ್ಯಜೀವಿ ಉಪ ವಿಭಾಗದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಸ್ವಪ್ನಿಲ್ ಮನೋಹರ್, ವಲಯ ಅರಣ್ಯಾಧಿಕಾರಿ ರಾಜಶೇಖರ್ ಹಾಗೂ ಸಿಬ್ಬಂದಿ ಭಾಗವಹಿಸಿದ್ದರು.

ಯರಿಯೂರು ಗ್ರಾಮದಲ್ಲಿ ಮಂಟೇಸ್ವಾಮಿ ಕೊಂಡೋತ್ಸವ

ಯಳಂದೂರು, ಫೆ.18–ತಾಲೂಕಿನ ಯರಿಯೂರು ಗ್ರಾಮದಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ಸಮುದಾಯ ಭವನದ ಮುಂಭಾಗ ಮಂಟೇಸ್ವಾಮಿ ಕೊಂಡೋತ್ಸವ ಸಾವಿರಾರು ಭಕ್ತರ ಸಮ್ಮುಖದಲ್ಲಿ ನೆರವೇರಿತು.

ಕೊಂಡೋತ್ಸವ ನಿಮಿತ್ತ ಗ್ರಾಮದ ಮಾರಮ್ಮ ದೇಗುಲ ಬಳಿ ಕೊಂಡ ಹಾಕಲಾಗಿತ್ತು. ರಾಷ್ಟ್ರೀಯ ಹೆದ್ದಾರಿ ಬಳಿಯ ಕೊಳವೆ ಬಾವಿಯಿಂದ ಹೊಸ ನೀರು ತಂದು ಪೂಜೆ ಸಲ್ಲಿಸಿ, ಹೂವು, ತಳಿರು ತೋರಣಗಳಿಂದ ಅಲಂಕೃತ ಸತ್ತಿಗೆ, ಸೂರಿಪಾನಿಗಳನ್ನು ಹೊತ್ತ ಭಕ್ತರು ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಯಲ್ಲಿ ಸಾಗಿ ಬಂದರು. ದಾರಿಯುದ್ದಕ್ಕೂ ಹರಕೆ ಹೊತ್ತ ಭಕ್ತರು, ಕರ್ಪೂರದ ಆರತಿ, ತೆಂಗಿನ ಕಾಯಿಗಳನ್ನು ಒಡೆದು ಪೂಜೆ ಸಲ್ಲಿಸಿದರು. ನಂತರ ಸಾವಿರಾರು ಭಕ್ತರು ಕೊಂಡವನ್ನು ದೇವರ ಹರ್ಷೋದ್ಗಾರ ನಡುವೆ ಹಾಯ್ದರು.


ಯರಿಯೂರು ಗ್ರಾಮದಲ್ಲಿ ಭಕ್ತರ ಸಮ್ಮುಖದಲ್ಲಿ ಮಂಟೇಸ್ವಾಮಿ ಕೊಂಡೋತ್ಸವದಲ್ಲಿ ನಡೆಯಿತು.

ಹಿಂದೂ ಧರ್ಮಕ್ಕೆ ಶ್ರೀ ರಾಮಕೃಷ್ಣ ಪರಮಹಂಸರ ಕೊಡುಗೆ ಅಪಾರ

ಶ್ರೀ ರಾಮಕೃಷ್ಣ ಪರಮಹಂಸ ಜಾತ್ರಾ ಮಹೋತ್ಸವದಲ್ಲಿ ಚಿಂತಕ ಚಕ್ರವರ್ತಿ ಸೂಲಿಬೆಲೆ





ಮೈಸೂರಿನ ರಾಮಕೃಷ್ಣ ವೃತ್ತದಲ್ಲಿ ಮಂಗಳವಾರ ಶ್ರೀ ರಾಮಕೃಷ್ಣ ಪರಮಹಂಸರ ಜಾತ್ರಾ ಮಹೋತ್ಸವ ನಡೆಯಿತು. ಮತ್ತೊಂದು ಚಿತ್ರದಲ್ಲಿ ರಥೋತ್ಸವ ಸಾಗುತ್ತಿರುವುದನ್ನು ಕಾಣಬಹುದು.

ಮೈಸೂರು,ಫೆ.18(ಪಿಎಂ)– ಇನ್ನೇನು ಹಿಂದೂ ಧರ್ಮ ಮೂಲೋತ್ಪಾಟನೆ ಆಗೇ ಬಿಟ್ಟಿತು ಎನ್ನುವ ಸಂದರ್ಭದಲ್ಲಿ ಅವತರಿಸಿದ ಮಹಾ ಮಹಿಮರೇ ಶ್ರೀರಾಮಕೃಷ್ಣ ಪರಮ ಹಂಸರು. ಹಿಂದೂ ಧರ್ಮ ಇಂದಿಗೂ ವೈಭವಯುತದಿಂದ ಮೆರೆಯುತ್ತಿದ್ದರೆ ಅದಕ್ಕೆ ರಾಮಕೃಷ್ಣರ ಕೊಡುಗೆ ಅಪಾರ ಎಂದು ವಾಗ್ಮಿ ಮತ್ತು ಚಿಂತಕ ಚಕ್ರವರ್ತಿ ಸೂಲಿಬೆಲೆ ಹೇಳಿದರು.

ಮೈಸೂರಿನ ರಾಮಕೃಷ್ಣ ಪರಮಹಂಸ ವೃತ್ತದಲ್ಲಿ ಮೈಸೂರು ಶ್ರೀ ರಾಮಕೃಷ್ಣ ಆಶ್ರಮದ ಮಾರ್ಗದರ್ಶನದಲ್ಲಿ ಶ್ರೀ ರಾಮಕೃಷ್ಣ ಪರಮಹಂಸ ಸೇವಾ ಪ್ರತಿಷ್ಠಾನದ ವತಿಯಿಂದ ಮಂಗಳವಾರ ಹಮ್ಮಿಕೊಂಡಿದ್ದ ಶ್ರೀ ರಾಮಕೃಷ್ಣ ಪರಮಹಂಸ ಜಾತ್ರಾ ಮಹೋತ್ಸವದಲ್ಲಿ (ರಾಮಕೃಷ್ಣರ ಜಯಂತಿ ಪ್ರಯುಕ್ತ) ಮುಖ್ಯ ಅತಿಥಿಯಾಗಿ ಮಾತನಾಡಿದರು.

ಈ ದೇಶದಲ್ಲಿ ಇನ್ನೇನು ಧರ್ಮಕ್ಕೆ ಉಳಿಗಾಲವಿಲ್ಲವೆಂಬ ಪರಿಸ್ಥಿತಿ ಎದುರಾದಾಗ ಅವತರಿಸಿ ಬಂದವರೇ ರಾಮಕೃಷ್ಣ ಪರಮಹಂಸರು. ಅನ್ಯ ಧರ್ಮೀಯರ ನಿರಂತರ ಆಕ್ರಮಣದ ನಂತರ ಹಿಂದೂ ಧರ್ಮ ಸತ್ತೇ ಹೋಗಿತ್ತು ಎನ್ನುವ ಸ್ಥಿತಿಯಲ್ಲಿ ಇತ್ತು. ಎಲ್ಲವನ್ನು ಮೆಟ್ಟಿನಿಂತು ನಮ್ಮದೇ ಸಾಮ್ರಾಜ್ಯ ಕಟ್ಟುತ್ತೇವೆ ಎಂದುಕೊಂಡಾಗ ಬ್ರಿಟಿಷರ ರೂಪದಲ್ಲಿ ಮತ್ತೊಂದು ಅನ್ಯ ಧರ್ಮೀಯರ ಆಗಮನವಾಯಿತು. ಅವರ ಪ್ರಭಾವಕ್ಕೆ ಒಳಗಾದ ನಮ್ಮ ಜನರೇ ಹಿಂದೂ ಧರ್ಮವನ್ನು ಅವಹೇಳನ ಮಾಡಲು ಶುರು ಮಾಡಿದ್ದರು. ದೇವಸ್ಥಾನಕ್ಕೆ ಹೋಗಬೇಕೋ ಬೇಡವೋ ಎನ್ನುವ ಆಲೋಚನೆಗೆ ಬಂದು ಬಿಟ್ಟಿದ್ದರು ಎಂದರು.

ಆ ಕಾಲಘಟ್ಟದಲ್ಲಿ ಧರ್ಮ ಉದ್ಧರಿಸಲು ರಾಮಕೃಷ್ಣರು ಬಂದಿಲ್ಲವೆಂದಿದ್ದರೆ ಹಿಂದೂವೇ ತನ್ನ ಧರ್ಮಕ್ಕೆ ಕೊಡಲಿ ಪೆಟ್ಟು ಕೊಡುತ್ತಿದ್ದ. ರಾಮಕೃಷ್ಣರು ಅದಕ್ಕೆ ಅಡ್ಡಗಟ್ಟಿ ನಿಂತರು. ನಮ್ಮ ಉಳಿದೆಲ್ಲಾ ಅವತಾರಗಳು ದುಷ್ಟರ ನಾಶಕ್ಕೆ ಬಂದರೆ, ರಾಮಕೃಷ್ಣರು ಮಾತ್ರ ದುಷ್ಟರ ಪರಿವರ್ತಿಸಿ ಅವರನ್ನು ಸಮಾಜದ ಮುಖ್ಯವಾಹಿನಿಗೆ ತರಲು ಬಂದವರು. ನಾವು ಅನುಸರಿಸಬಹುದಾದ ಚಿಂತನೆಗಳನ್ನು ರಾಮಕೃಷ್ಣರು ಅತ್ಯಂತ ಸರಳವಾಗಿ ತಿಳಿಸಿಕೊಟ್ಟಿದ್ದಾರೆ. ಉಪನಿಷತ್ತುಗಳು ಕೊಟ್ಟ ಧರ್ಮವನ್ನು ನಮ್ಮ ಮನೆಯ ಮನದವರೆಗೆ ತಂದುಕೊಟ್ಟವರು ರಾಮಕೃಷ್ಣರು ಎಂದು ಸ್ಮರಿಸಿದರು.

ಯಾವುದೇ ಬೆಳಕು ಇಲ್ಲದಾಗ ಆತ್ಮವೇ ಬೆಳಕು. ಇದು ಭಾರತದ ಅಂತಿಮ ಗುರಿ. ಇಂದು ಜೀವನ ಶೈಲಿ ಬದಲಾಗಿದೆ. ಪೋಷಕರು ಮಕ್ಕಳಿಗೆ ಹಣ ಮಾಡುವ ವೃತ್ತಿ ಆಯ್ಕೆ ಮಾಡಿಕೊಳ್ಳುವಂತೆ ಹೇಳುವುದೇ ಹೆಚ್ಚಾಗಿದೆ. ಆದರೆ ಎಷ್ಟೇ ಹಣ ವಿದ್ದರೂ ಕೆಲಸಕ್ಕೆ ಬಾರದ ಸಂದರ್ಭವೂ ಇದೆ. ಮಕ್ಕಳು ವಿದೇಶದಲ್ಲಿದ್ದು, ಪೋಷಕರು ಕೇಳಿದಾಗ ಹಣ ಕಳುಹಿಸಿದರೂ ಅವರನ್ನು ಆರೈಕೆ ಮಾಡಲು ಅನ್ಯರೇ ಬರಬೇಕು. ಈಗಾದರೆ ಹಣ ಎಷ್ಟಿದ್ದೂ ಏನು ಪ್ರಯೋಜನ ಎಂದರು.

56 ಕೋಟಿ ಜನ ಮಹಾಕುಂಭ ಮೇಳದಲ್ಲಿ ಮಿಂದೆದ್ದಿದ್ದಾರೆ. ಈ ದೇಶದ ಜನಸಂಖ್ಯೆ 150 ಕೋಟಿಯಾಗಿದ್ದು, 100 ಕೋಟಿ ಹಿಂದೂಗಳಲ್ಲಿ ಈಗಾಗಲೇ 56 ಕೋಟಿ ಜನ ಮಹಾಕುಂಭ ಮೇಳದಲ್ಲಿ ಸ್ನಾನ ಮಾಡಿದ್ದಾರೆ. ಅಂದರೆ ಪ್ರತಿ ಇಬ್ಬರಲ್ಲಿ ಒಬ್ಬರಾದರೂ ಅಲ್ಲಿ ಹೋಗಿ ಸ್ನಾನ ಮಾಡಿ ಬಂದಿದ್ದಾರೆ. ಅದೊಂದು ವೈಭವವೇ ಸರಿ. ಹಿಂದೂ ಯಾವತ್ತೂ ಒಂದಾಗಲ್ಲ ಎನ್ನುತ್ತಾರೆ. ಹಿಂದೂಗಳು ಒಂದಾಗಲಿಕ್ಕೆ ಮೈಕ್‌ನಲ್ಲಿ ಕರೆ ಕೊಡುವುದು ಬೇಕಿಲ್ಲ. ಹಿಂದೂ ಒಂದಾಗಲು ಪೋಸ್ಟರ್ ಸಹ ಹಂಚಬೇಕಿಲ್ಲ ಎಂದರು.

2 ಪೈಸೆ ವೆಚ್ಚದಲ್ಲಿ ಪೂರ್ಣಕುಂಭ!: ಬಹಳ ಹಿಂದೆ ಪ್ರಯಾಗದಲ್ಲಿ ಪೂರ್ಣ ಕುಂಭ ನಡೆದಾಗ ಪಂಡಿತ್ ಮದನ್ ಮೋಹನ್ ಮಾಳವಿಯ ಅವರನ್ನು ಇಷ್ಟೊಂದು ಜನ ಸೇರಲು ಭಾರಿ ಹಣ ವೆಚ್ಚ ಮಾಡಿರಬೇಕಲ್ಲವೇ ಎಂದು ಒಬ್ಬ ಬ್ರಿಟಿಷ್ ಅಧಿಕಾರಿ ಕೇಳಿದ್ದರು. ಅದಕ್ಕೆ ಮಾಳವೀಯ ಅವರು, ಕೇವಲ 2 ಪೈಸೆ ವೆಚ್ಚ ಮಾಡಿ ಕ್ಯಾಲೆಂಡರ್‌ನಲ್ಲಿ ದಿನಾಂಕದ ಮುಂದೆ ಇಂದು ಪೂರ್ಣಕುಂಭ ಎಂದಷ್ಟೇ ಪ್ರಕಟಿಸಲಾಗಿತ್ತು ಎಂದು ಹೇಳಿದಾಗ ಬ್ರಿಟಿಷ್ ಅಧಿಕಾರಿಗೆ ಅಚ್ಚರಿ ಉಂಟಾಗಿತ್ತು ಎಂದು ಹೇಳಿದರು.

ಧರ್ಮವೇ ಭಾರತದ ಕೇಂದ್ರಬಿಂದು: ಸ್ವಾಮಿ ವಿವೇಕಾನಂದರು ಹೇಳುತ್ತಾರೆ 'ಭಾರತ ಕೇಂದ್ರವೆಂದು ಏನಾದರೂ ಇದ್ದರೆ ಅದು ವ್ಯಾಪಾರವಲ್ಲ, ಸಮಾಜ ಸೇವೆ ಹಾಗೂ ಸಮಾಜ ಸುಧಾರಣೆಯೂ ಅಲ್ಲ. ಭಾರತ ಕೇಂದ್ರವೆಂದು ಏನಾದರೂ ಇದ್ದರೆ, ಅದು ಧರ್ಮ ಮಾತ್ರ ಎಂದು ಹೇಳಿದ್ದಾರೆ. ಧರ್ಮವೇ ಭಾರತದ ಕೇಂದ್ರ. ಈ ಕೇಂದ್ರವನ್ನು ಬದಲಿಸಲು ಹೊರಟರೆ ಈ ದೇಶವೇ ನಾಶವಾಗುತ್ತದೆ ಎಂದು ವಿವೇಕಾನಂದರು ಹೇಳಿದ್ದಾರೆ. ವಿವೇಕಾನಂದರು ಹೇಳಿದ ಈ ಮಾತು ಎಷ್ಟು ಸತ್ಯವಲ್ಲವೇ? ಎಂದು ಚಕ್ರವರ್ತಿ ಸೂಲಿಬೆಲೆ ಹೇಳಿದರು.

ಇದಕ್ಕೂ ಮುನ್ನ ರಾಮಕೃಷ್ಣನಗರದ ಐ ಬ್ಲಾಕ್‌ನ ಪ್ರಮುಖ ರಸ್ತೆಗಳಲ್ಲಿ ಶ್ರೀ ರಾಮಕೃಷ್ಣ ಪರಮಹಂಸರ ರಥೋತ್ಸವ ನಡೆಯಿತು. ಶ್ರೀ ರಾಮಕೃಷ್ಣ ಆಶ್ರಮದ ಅಧ್ಯಕ್ಷರಾದ ಸ್ವಾಮಿ ಮುಕ್ತಿದಾನಂದಜಿ ಮಹಾರಾಜ್ ಸಾನ್ನಿಧ್ಯ ವಹಿಸಿದ್ದರು. ಶ್ರೀ ರಾಮಕೃಷ್ಣ ಪರಮಹಂಸ ಸೇವಾ ಪ್ರತಿಷ್ಠಾನದ ಅಧ್ಯಕ್ಷ ಡಿ.ಮಾದೇಗೌಡ ಅಧ್ಯಕ್ಷತೆ ವಹಿಸಿದ್ದರು. ಶಾಸಕ ಜಿ.ಟಿ.ದೇವೇಗೌಡ, ಆಧ್ಯಾತ್ಮಿಕ ಹಾಗೂ ಸಾಂಸ್ಕೃತಿಕ ಚಿಂತಕ ಹಿರೇಮಗಳೂರು ಕಣ್ಣನ್, ನಗರಪಾಲಿಕೆ ಮಾಜಿ ಸದಸ್ಯೆ ಲಕ್ಷ್ಮಿಕಿರಣ್, ಪ್ರತಿಷ್ಠಾನದ ಕಾರ್ಯಾಧ್ಯಕ್ಷ ಡಾ.ಎಸ್.ಪಿ.ಯೋಗಣ್ಣ, ಬಿಜೆಪಿ ಮುಖಂಡ ಕವೀಶ್‌ಗೌಡ, ಜಾತ್ರಾ ಮಹೋತ್ಸವದ ಸಂಚಾಲಕ ಎಂ.ಕೆ.ಯಶ್ವಂತ್ ಕುಮಾರ್ ಮತ್ತಿತರರು ಹಾಜರಿದ್ದರು.

ಕುಣಿಯೋಣ ಬಾರಾ ಬದಲು! ನುಂಗೋಣ ಬಾರಾ...!!

ಜಾತ್ರಾ ಮಹೋತ್ಸವದಲ್ಲಿ ಮಾತನಾಡಿದ ಆಧ್ಯಾತ್ಮಿಕ ಹಾಗೂ ಸಾಂಸ್ಕೃತಿಕ ಚಿಂತಕ ಹಿರೇಮಗಳೂರು ಕಣ್ಣನ್, ಎಂದಿನಂತೆ ತಮ್ಮ ಹಾಸ್ಯಧಾಟಿ ಭಾಷಣದ ಮೂಲಕ ಅನೇಕ ವಿಚಾರಗಳನ್ನು ಪ್ರಸ್ತಾಪಿಸಿ ಸಭಿಕರನ್ನು ನಗುವಿನಲ್ಲಿ ತೇಲಿಸಿದ್ದೂ ಮಾತ್ರವಲ್ಲದೆ, ನೀತಿ ಬೋಧನೆ ಮೂಲಕ ಅವರನ್ನು ಚಿಂತನೆಗೂ ಹಚ್ಚಿದರು. ಧರ್ಮ ಎಂದರೆ ನಡೆಯುವುದು. ಸತ್ಯ ಎಂದರೆ ನುಡಿಯುವುದು. ಆದರೆ ಇಂದು ಇದಕ್ಕೆ ವಿರುದ್ಧವಾಗಿ ನಡೆದುಕೊಳ್ಳಲಾಗುತ್ತಿದೆ. ದೇವರು ಇಟ್ಟಂತೆ ನಾವು ಬದುಕಬೇಕು. ಅತಿಯಾಸೆ ಇರಬಾರದು. ಬದುಕಿನಲ್ಲಿ ಸಂಸ್ಕೃತಿ ರೂಪಿಸಿಕೊಳ್ಳಬೇಕು. ಪ್ರಸ್ತುತದಲ್ಲಿ ಒಟ್ಟಿಗೆ ಕುಣಿಯೋಣ ಬಾರ ಹೊರಟು ಹೋಗಿದ್ದು, ಬದಲಿಗೆ ನುಂಗೋಣ ಬಾರಾ ಎಂದು ಕುಕ್ಕರು ಬಡಿದಿದ್ದೇವೆ ಎಂದರು.

ಮಕ್ಕಳಿಗೆ ಭಾರತ ಎಂದರೆ ಆದರ್ಶ, ಅಧ್ಯಾತ್ಮ, ಸರ್ವಶಕ್ತ ರಾಷ್ಟ್ರ ಎಂದು ಹೇಳಿಕೊಡಬೇಕು. ಗೂಗಲ್‌ನಲ್ಲಿ ಪ್ರತಿ ದೇಶವೂ ಹುಟ್ಟಿದ್ದಕ್ಕೆ ದಿನಾಂಕವಿದೆ. ಆದರೆ ಭಾರತಕ್ಕೆ ಇಲ್ಲ. ಇದರ ಅರ್ಥ ಯಾವ ದೇಶಕ್ಕೆ ಡೇಟ್ ಆಫ್ ಬರ್ತ್ ಇಲ್ಲವೋ ಆ ದೇಶಕ್ಕೆ ಡೆಪ್ತ್ ಇದೆ ಎನ್ನುವುದಾಗಿದೆ. ನಮ್ಮ ರಾಷ್ಟ್ರ 'ಡೋಂಟ್ ಕೇರ್ ರಾಷ್ಟ್ರವಲ್ಲ', 'ಟೇಕ್ ಕೇರ್ ರಾಷ್ಟ್ರ'. ರಾಮಕೃಷ್ಣ ಪರಮಹಂಸರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಹವ್ಯಾಸ ಬದಲಾಯಿಸಿದರೆ ಹಣೆಬರಹ ಬದಲಾಗುತ್ತದೆ. ದೃಷ್ಟಿ ಬದಲಾಯಿಸಿದರೆ ದೃಶ್ಯ ಬದಲಾಗುತ್ತದೆ ಎಂಬಿತ್ಯಾದಿಯಾಗಿ ಪ್ರಾಸಬದ್ಧ ವಾಕ್ಯಗಳೊಂದಿಗೆ ಸಭಿಕರನ್ನು ನಕ್ಕು ನಗಿಸಿದರು.

ಅಧಿಕಾರ ಹಂಚಿಕೆ ಊಹಾಪೋಹ: ಹೈಕಮಾಂಡ್ ಅಂತಿಮ ನಿರ್ಧಾರ ಕೈಗೊಳ್ಳುತ್ತೆ!

ಬೆಂಗಳೂರು: ರಾಜ್ಯದಲ್ಲಿ ಮತ್ತೆ ಅಧಿಕಾರ ಹಂಚಿಕೆಯ ಊಹಾಪೋಹ ಮುನ್ನೆಲೆಗೆ ಬಂದಿದೆ. ಸರ್ಕಾರ ಅಸ್ತಿತ್ವಕ್ಕೆ ಬಂದು ಎರಡು ವರ್ಷ ಪೂರ್ಣಗೊಳ್ಳುತ್ತಿರುವಂತೆಯೇ, ಈ ಹಿಂದೆ ಅಧಿಕಾರ ಹಂಚಿಕೆ ಸೂತ್ರದಂತೆ ಸಿಎಂ ಸಿದ್ದರಾಮಯ್ಯ, ಡಿ.ಕೆ. ಶಿವಕುಮಾರ್‌ಗೆ ಸಿಎಂ ಸ್ಥಾನ ಬಿಟ್ಟುಕೊಡುವ ವಿಷಯ ಪದೇ ಪದೆ ಚರ್ಚೆಯಾಗುತ್ತಿದ್ದು, ಸಹಕಾರ ಸಚಿವ ಕೆಎನ್ ರಾಜಣ್ಣ ಸಿಎಂ ಪರ ತೀಕ್ಷ್ಣ ಹೇಳಿಕೆಗಳನ್ನು ನೀಡುತ್ತಿರುವುದು ಈ ಚರ್ಚೆ ತಾರಕಕ್ಕೇರುವಂತೆ ಮಾಡಿದೆ.



ಕಳೆದ 2–3 ದಿನಗಳಿಂದ ಈ ವಿಷಯವಾಗಿ ಡಿ.ಕೆ ಶಿವಕುಮಾರ್ ಹಾಗೂ ಸಹಕಾರ ಸಚಿವ ಕೆ.ಎನ್. ರಾಜಣ್ಣ ನಡುವೆ ಹೇಳಿಕೆಗಳ ಸಮರ ಮುಂದುವರೆದಿದೆ. ಈ ಹೇಳಿಕೆಗಳ ಬಗ್ಗೆ ಸಿಎಂ ಸಿದ್ದರಾಮಯ್ಯ ಪ್ರತಿಕ್ರಿಯೆ ನೀಡಲು ನಿರಾಕರಿಸಿದ್ದು, ಮೌನವೇ ತಮ್ಮ ಉತ್ತರ ಎಂದು ಹೇಳಿದ್ದಾರೆ. ಕಾಂಗ್ರೆಸ್ ಸರ್ಕಾರದ ಐದು ವರ್ಷಗಳ ಅವಧಿಯ ಮೊದಲಾರ್ಧದಲ್ಲಿ ಸಿದ್ದರಾಮಯ್ಯ ಮುಖ್ಯಮಂತ್ರಿಯಾಗಿರುತ್ತಾರೆ ಮತ್ತು ನಂತರ ಶಿವಕುಮಾರ್ ಅವರನ್ನು ಬದಲಾಯಿಸುತ್ತಾರೆ ಎಂಬ ರಹಸ್ಯ ಅಧಿಕಾರ ಹಂಚಿಕೆ ಸೂತ್ರವಿದೆ ಎಂದು ವದಂತಿ ಹಬ್ಬಿತ್ತು.

ಕಾಂಗ್ರೆಸ್ ಶಾಸಕರು ಮತ್ತು ಸಚಿವರ ಒಂದು ವರ್ಗವು ಸಿದ್ದರಾಮಯ್ಯ ಅವರನ್ನು ಬೆಂಬಲಿಸುತ್ತಿದ್ದು, ಅವರು ಐದು ವರ್ಷಗಳ ಅವಧಿಯನ್ನು ಪೂರ್ಣಗೊಳಿಸಬೇಕೆಂದು ಬಯಸುತ್ತಿದ್ದಾರೆ. ಮತ್ತೊಂದೆಡೆ, ಕಾಂಗ್ರೆಸ್ ರಾಜ್ಯಾಧ್ಯಕ್ಷರೂ ಆಗಿರುವ ಶಿವಕುಮಾರ್, ಪಕ್ಷದೊಳಗಿನ ತಮ್ಮ ವಿರೋಧಿಗಳನ್ನು ಬಾಯಿಮುಚ್ಚಿಸಲು ಪ್ರಯತ್ನಿಸುತ್ತಿದ್ದಾರೆ. ಪಕ್ಷಕ್ಕೆ ಹಾನಿ ಉಂಟುಮಾಡುವುದರಿಂದ ಅಂತಹ ಯಾವುದೇ ಚರ್ಚೆಗಳಿಂದ ದೂರ ವಿರಿ ಎಂದು ಕೇಳಿಕೊಳ್ಳುತ್ತಿದ್ದಾರೆ.

ಮಂಗಳವಾರ ಸುದ್ದಿಗಾರರೊಂದಿಗೆ ಮಾತನಾಡಿದ ಸಿದ್ದರಾಮಯ್ಯ, ಈ ವಿಷಯದ ಬಗ್ಗೆ ಮಾತನಾಡದಿರಲು ನಿರ್ಧರಿಸಿರುವುದಾಗಿ ಹೇಳಿದ್ದಾರೆ. 'ನಾನು ಈಗ ವಿವಾದದ ಬಗ್ಗೆ ಮಾತನಾಡುವುದಿಲ್ಲ. ರಾಜಣ್ಣ ಮತ್ತು ಶಿವಕುಮಾರ್ ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದ್ದಾರೆ' ಎಂದಷ್ಟೇ ಹೇಳಿದ್ದಾರೆ.

ಅಧಿಕಾರ ಹಂಚಿಕೆ ಒಪ್ಪಂದ ನಿಜವೇ ಎಂದು ಕೇಳಿದಾಗ, 'ಹೈಕಮಾಂಡ್ ಅಂತಿಮ ನಿರ್ಧಾರ ತೆಗೆದುಕೊಳ್ಳುತ್ತದೆ ಎಂದು ನಾನು ಎಷ್ಟು ಬಾರಿ ಹೇಳಬೇಕು. ಅವು (ಹೈಕಮಾಂಡ್) ಏನು ನಿರ್ಧರಿಸುತ್ತಾರೋ ಅದು ಎಲ್ಲರಿಗೂ ಅನ್ವಯಿಸುತ್ತದೆ' ಎಂದು ಹೇಳಿದರು.

ಸಿಎಂ ಸಿದ್ದರಾಮಯ್ಯ ಅವರಿಗೆ ಹತ್ತಿರವಿರುವ ಪಕ್ಷದ ಇತರ ನಾಯಕರು ಮತ್ತು ಸಚಿವರನ್ನು ಪರೋಕ್ಷವಾಗಿ ಟೀಕಿಸಿದ ಶಿವಕುಮಾರ್ ಅವರ ಹೇಳಿಕೆಗೆ ಪ್ರತಿಕ್ರಿಯಿಸಿದ್ದ ರಾಜಣ್ಣ ಕರ್ನಾಟಕದಲ್ಲಿ ಕಾಂಗ್ರೆಸ್ ಪಕ್ಷದ ನಿರ್ವಿವಾದ ನಾಯಕರಾಗಿರುವ ಸಿಎಂ ಅವರ ಹೆಸರನ್ನು ಯಾರೂ 'ದುರುಪಯೋಗಪಡಿಸಿಕೊಳ್ಳುವ' ಅಗತ್ಯವಿಲ್ಲ ಎಂದು ಹೇಳಿದ್ದರು.

ಬೃಹತ್ ಮೈಸೂರು ಮಹಾನಗರ ಪಾಲಿಕೆ ಸಂಬಂಧಿತ ಸಭೆ ಮುಂದೂಡಿಕೆ

ಮೈಸೂರು, ಫೆ.18(ಎಸ್‌ಬಿಡಿ)– ಬೃಹತ್ ಮೈಸೂರು ಮಹಾನಗರ ಪಾಲಿಕೆ ರಚನೆ ಸಂಬಂಧ ಮಂಗಳವಾರ ನಿಗದಿಯಾಗಿದ್ದ ಮಹತ್ವದ ಸಭೆ ಮುಂದೂಡಲ್ಪಟ್ಟಿದೆ.



ನಗರದ ಹೊರವಲಯದ ಪ್ರದೇಶಗಳನ್ನು ಸೇರ್ಪಡೆಮಾಡಿಕೊಂಡು ಬೃಹತ್ ಮೈಸೂರು ಮಹಾನಗರ ಪಾಲಿಕೆ ರಚಿಸಬೇಕೆಂಬ ಕೂಗು ದಶಕದಿಂದ ಕೇಳಿ ಬರುತ್ತಿದೆ. ಈ ನಿಟ್ಟಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಆಸಕ್ತಿ ತೋರಿದ್ದು, ಅವರ ಸೂಚನೆ ಮೇರೆಗೆ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಎಲ್.ಕೆ.ಅತೀಕ್ ಅವರು ಮಂಗಳವಾರ ಮೈಸೂರು ನಗರ ಪಾಲಿಕೆಯಲ್ಲಿ ಅಧಿಕಾರಿಗಳ ಸಭೆ ನಿಗದಿ ಮಾಡಿದ್ದರು. ಆದರೆ ಅವರ ಸೂಚನೆ ಮೇರೆಗೆ ಸಭೆ ಮುಂದೂಡಲಾಗಿದೆ ಮುಂದಿನ ದಿನಾಂಕ ಇನ್ನೂ ನಿಗದಿಯಾಗಿಲ್ಲ ಎಂದು ಪಾಲಿಕೆ ಅಧಿಕಾರಿಗಳು ತಿಳಿಸಿದ್ದಾರೆ.

ಅಧಿಕಾರಿಗಳು ಸಜ್ಜು: ಬೃಹತ್ ಮೈಸೂರು ಮಹಾನಗರ ಪಾಲಿಕೆ ರಚನೆ ಸಂಬಂಧಿತ ಮಹತ್ವದ ಸಭೆಗೆ ಪಾಲಿಕೆ ಅಧಿಕಾರಿಗಳು ಸಜ್ಜಾಗಿದ್ದರು. ಪಾಲಿಕೆ ಆಯುಕ್ತ ಶೇಖ್ ತನ್ವೀರ್ ಆಸಿಫ್ ನೇತೃತ್ವದಲ್ಲಿ ಸಭೆ ನಡೆಸಿ, ಪ್ರಸ್ತಾಪಿತ ವ್ಯಾಪ್ತಿಗೆ ಬರುವ ಇತರೆ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳಿಂದ ಮಾಹಿತಿ ಸಂಗ್ರಹಿಸಿದ್ದರು. ನಗರಪಾಲಿಕೆ, ನಗರಸಭೆ, ನಾಲ್ಕು ಪಟ್ಟಣ ಪಂಚಾಯಿತಿ ಹಾಗೂ ನಾಲ್ಕು ಗ್ರಾಮ ಪಂಚಾಯಿತಿ ಅಧಿಕಾರಿಗಳಿಂದ ಈಗಾಗಲೇ ಮಾಹಿತಿ ಕ್ರೋಢೀಕರಿಸಿ, ಮುಖ್ಯ ಕಾರ್ಯದರ್ಶಿಗಳ ಸಮ್ಮುಖದಲ್ಲಿ ಪ್ರಸ್ತುತಪಡಿಸಲು ಸಿದ್ಧತೆ ಮಾಡಿಕೊಂಡಿದ್ದರು. ಆದರೆ ಕಡೇ ಗಳಿಗೆಯಲ್ಲಿ ಸಭೆ ಮುಂದೂಡಲ್ಪಟ್ಟಿದೆ.

ಬಹುತೇಕ ಒಪ್ಪಿಗೆ: ಬೃಹತ್ ಮೈಸೂರು ಮಹಾನಗರ ಪಾಲಿಕೆಯಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆಗೆ ಬಹುತೇಕ ಸ್ಥಳೀಯ ಸಂಸ್ಥೆಗಳ ಒಪ್ಪಿಗೆ ದೊರೆತಿದೆ. ಮೈಸೂರು ಮಹಾನಗರ ಪಾಲಿಕೆ ಹಾಗೂ ಚಾಮುಂಡಿಬೆಟ್ಟ ಗ್ರಾಮ ಪಂಚಾಯಿತಿಯಲ್ಲಿ ಪ್ರಸ್ತಾವನೆ ಸಲ್ಲಿಸಲಾಗಿದೆ. ಹೂಟಗಳ್ಳಿ ನಗರಸಭೆ, ರಮ್ಮನಹಳ್ಳಿ ಪಟ್ಟಣ ಪಂಚಾಯಿತಿ, ಕಡಕೊಳ ಪಟ್ಟಣ ಪಂಚಾಯಿತಿ, ಆಲನಹಳ್ಳಿ ಗ್ರಾಮ ಪಂಚಾಯಿತಿ ಹಾಗೂ ಸಿದ್ದಲಿಂಗಪುರ ಗ್ರಾಮ ಪಂಚಾಯಿತಿಗಳಲ್ಲಿ ಸರ್ವಾನುಮತದ ಒಪ್ಪಿಗೆ ದೊರೆತಿದೆ. ಶ್ರೀರಾಂಪುರ ಪಟ್ಟಣ ಪಂಚಾಯಿತಿ, ಬೋಗಾದಿ ಪಟ್ಟಣ ಪಂಚಾಯಿತಿ ಹಾಗೂ ಇಲವಾಲ ಗ್ರಾಮ ಪಂಚಾಯಿತಿ ಆಡಳಿತಾಧಿಕಾರಿಗಳೂ ಅನುಮೋದಿಸಿದ್ದಾರೆ. ಇನ್ನು ನಾಗನಹಳ್ಳಿ ಗ್ರಾಪಂನ ಶ್ಯಾದನಹಳ್ಳಿ ಸೇರ್ಪಡೆ ಸಂಬಂಧ ಮುಂದಿನ ಕೌನ್ಸಿಲ್ ಸಭೆಯಲ್ಲಿ ಪ್ರಸ್ತಾವನೆ ಸಲ್ಲಿಕೆಯಾಗಬೇಕಿದೆ.

ಸೂಕ್ತ ಸಂದರ್ಭ?: ಬೃಹತ್ ಮೈಸೂರು ಮಹಾನಗರ ಪಾಲಿಕೆ ಕೂಗು ಇತ್ತೀಚಿನದ್ದಲ್ಲ. ದಶಕದಿಂದಲೂ ಒತ್ತಾಯ ಕೇಳಿ ಬಂದಿದೆ. ಆದರೆ 2018ರ ಚುನಾವಣೆ ಸಂದರ್ಭದಲ್ಲಿ ಹೆಚ್ಚು ಸದ್ದು ಮಾಡಿತ್ತು. ಆದರೆ ಯಾವುದೇ ಪಕ್ಷಕ್ಕೂ ಬಹುಮತ ದೊರೆಕಲಿಲ್ಲ. ನಂತರ ಕಾಂಗ್ರೆಸ್ ಮತ್ತು ಜೆಡಿಎಸ್ ಮೈತ್ರಿ ಸರ್ಕಾರ ಈ ಸಾಹಸಕ್ಕೆ ಕೈ ಹಾಕದೆ, ವಾರ್ಡ್ ಮೀಸಲಾತಿಯನ್ನು ಬದಲಿಸಿ ಪಾಲಿಕೆ ಚುನಾವಣೆ ನಡೆಸಿತ್ತು. 2023ರ ನವೆಂಬರ್ ತಿಂಗಳಲ್ಲಿ ಪಾಲಿಕೆ ಸದಸ್ಯರ ಅವಧಿ ಮುಗಿದು ಆಡಳಿತಾಧಿಕಾರಿಗಳನ್ನು ನೇಮಕ ಮಾಡಲಾಗಿದೆಯಾದರೂ ಈವರೆಗೂ ಪಾಲಿಕೆ ಚುನಾವಣೆ ಬಗ್ಗೆ ಪ್ರಸ್ತಾಪವಿಲ್ಲ. ಹಾಗೆಯೇ ಹೊಸದಾಗಿ ರಚನೆಯಾದ ನಗರಸಭೆ, ನಾಲ್ಕು ಪಟ್ಟಣ ಪಂಚಾಯಿತಿಗಳಿಗೂ ಚುನಾವಣೆ ನಡೆಸದೆ ಆಡಳಿತಾಧಿಕಾರಿಗಳನ್ನು ನೇಮಕ ಮಾಡಲಾಗಿದೆ. ಹಾಗಾಗಿ ನಗರಪಾಲಿಕೆ ಮತ್ತು ಹೊರವಲಯದ ಸ್ಥಳೀಯ ಸಂಸ್ಥೆಗಳನ್ನು ಸೇರ್ಪಡೆಗೊಳಿಸಿ ಬೃಹತ್ ಮಹಾನಗರ ಪಾಲಿಕೆ ರಚನೆ ಮಾಡಿದರೆ ಯಾವುದೇ ತೊಡಕು ಅಥವಾ ಕಾನೂನಾತ್ಮಕ ಸಮಸ್ಯೆ ಎದುರಾಗುವುದಿಲ್ಲ ಎಂದು ರಾಜ್ಯ ಸರ್ಕಾರ ಪ್ರಕ್ರಿಯೆ ಚುರುಕುಗೊಳಿಸಿದೆ ಎಂದು ತಿಳಿದುಬಂದಿದೆ.

ವಿಸ್ತೀರ್ಣದೊಂದಿಗೆ ಆದಾಯವೂ ಹೆಚ್ಚಳ...

ಬೃಹತ್ ಮೈಸೂರು ಮಹಾನಗರ ಪಾಲಿಕೆ ರಚನೆ ಸಂಬಂಧ ಮಹತ್ವದ ಸಭೆಯಲ್ಲಿ ವಿವರಣೆ ನೀಡಲು ಸಂಕ್ಷಿಪ್ತವಾಗಿ ಮಾಹಿತಿ ಪಟ್ಟಿ ಮಾಡಿದ್ದಾರೆ. ಅದರನ್ವಯ ಬೃಹತ್ ಮಹಾನಗರ ಪಾಲಿಕೆಯಾದರೆ ಮೈಸೂರಿನ ವಿಸ್ತೀರ್ಣ 86.31 ಚದರ ಕಿ.ಮೀ.ನಿಂದ 276 ಚದರ ಕಿ.ಮೀ.ಗೆ ವಿಸ್ತತಗೊಳ್ಳಲಿದೆ. ಜೊತೆಗೆ ಜನಸಂಖ್ಯೆಯೂ ಸುಮಾರು 17 ಲಕ್ಷ ಮೀರಬಹುದು. ಇನ್ನು ಆಸ್ತಿ ತೆರಿಗೆ, ನೀರಿನ ತೆರಿಗೆ ಸೇರಿದಂತೆ ವಾರ್ಷಿಕ ಆದಾಯ 350 ಕೋಟಿಯಿಂದ 428 ಕೋಟಿ ರೂ.ಗೆ ಹೆಚ್ಚಬಹುದು ಎಂದು ಅಂದಾಜಿಸಲಾಗಿದೆ. ಹಾಗೆಯೇ ಸ್ಥಳೀಯ ಸಂಸ್ಥೆಗಳಲ್ಲಿರುವ ಖಾಯಂ ಹಾಗೂ ಗುತ್ತಿಗೆ ಆಧಾರಿತ ಸಿಬ್ಬಂದಿ, ವಾಹನಗಳು ಇನ್ನಿತರ ಮಾಹಿತಿಯನ್ನೂ ಸಂಗ್ರಹಿಸಲಾಗಿದೆ.

ಅಂಗನವಾಡಿಯಲ್ಲಿ ಆಟವಾಡುತ್ತಾ ಕುಸಿದು ಬಿದ್ದು 5ರ ಬಾಲಕಿ ಸಾವು

ಕೊಪ್ಪಳ, ಫೆ.18– ಅಂಗನವಾಡಿಯಲ್ಲಿ ಆಟವಾಡುತ್ತಿದ್ದಾಗ ಕುಸಿದು ಬಿದ್ದು 5 ವರ್ಷದ ಬಾಲಕಿ ಸಾವನ್ನಪ್ಪಿರುವ ಘಟನೆ ಕೊಪ್ಪಳ ಜಿಲ್ಲೆಯ ಕುಷ್ಟಗಿ ತಾಲೂಕಿನ ಬಳೂಟಗಿ ಗ್ರಾಮದಲ್ಲಿ ನಡೆದಿದೆ. ಮೃತ ಬಾಲಕಿಯನ್ನು ಅಲಿಯಾ ಮಹ್ಮದ್ ರಿಯಾಜ್ (5) ಎಂದು ತಿಳಿಯಲಾಗಿದ್ದು, ಸೋಮವಾರ ಮಧ್ಯಾಹ್ನ ಈ ಘಟನೆ ನಡೆದಿದೆ.

ಮಧ್ಯಾಹ್ನದ ವೇಳೆ ಬಾಲಕಿ ಅಂಗನವಾಡಿಯಲ್ಲಿ ಆಟವಾಡುತ್ತಿದ್ದಾಗ ಕುಸಿದು ಬಿದ್ದಿದ್ದಾಳೆ. ಕೂಡಲೇ ಬಾಲಕಿಯನ್ನು ದೋಟಿಹಾಳ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ರವಾನಿಸುತ್ತಿದ್ದಾಗ, ಮಾರ್ಗಮಧ್ಯೆ ಸಾವನ್ನಪ್ಪಿದ್ದಾಳೆ. ವೈದ್ಯರ ತಪಾಸಣೆಯ ಬಳಿಕ ಮೆದುಳಿನಲ್ಲಿ ರಕ್ತ ಹೆಪ್ಪುಗಟ್ಟಿ ಮೃತಪಟ್ಟಿರುವುದಾಗಿ ತಿಳಿಸಿದ್ದಾರೆ.

ಸಿಎಂ ಸಿದ್ದರಾಮಯ್ಯ, ಗೃಹ ಸಚಿವರನ್ನು ನಿಂದಿಸಿ ವಿಡಿಯೋ ಹರಿಬಿಟ್ಟ ವ್ಯಕ್ತಿ ಅರೆಸ್ಟ್

ಬೆಂಗಳೂರು, ಫೆ18– ಮುಖ್ಯಮಂತ್ರಿ ಸಿದ್ದರಾಮಯ್ಯ, ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅವರನ್ನು ಅವಾಚ್ಯವಾಗಿ ನಿಂದಿಸಿ, ಸಾಮಾಜಿಕ ಜಾಲತಾಣಗಳಲ್ಲಿ ವಿಡಿಯೋ ಹರಿಬಿಟ್ಟಿದ್ದ ಆರೋಪಿಯನ್ನು ಪೊಲೀಸರು ಬಂಧಿಸಿದ್ದಾರೆ. ಸುಂಕದಕಟ್ಟೆ ವಾರ್ಡ್ ಕಾಂಗ್ರೆಸ್ ಅಧ್ಯಕ್ಷ ನವೀನ್ ಕುಮಾರ್ ನೀಡಿದ್ದ ದೂರಿನ ಹಿನ್ನೆಲೆಯಲ್ಲಿ, ಆರೋಪಿಯನ್ನು ಕಾಮಾಕ್ಷಿಪಾಳ್ಯ ಠಾಣೆ ಪೊಲೀಸರು ಬಂಧಿಸಿ, ವಿಚಾರಣೆ ನಡೆಸಿದ್ದಾರೆ. ಕಾಂಗ್ರೆಸ್ ನಾಯಕ ನವೀನ್ ಕುಮಾರ್, ಆರೋಪಿ ಕೋಮುಗಲಭೆಗೆ ಪ್ರಚೋದನೆ ನೀಡುತ್ತಿದ್ದಾನೆ. ಆತನ ವಿರುದ್ಧ ಕ್ರಮ ಕೈಗೊಳ್ಳುವಂತೆ ದೂರು ನೀಡಿದ್ದರು. ಈ ಹಿನ್ನೆಲೆಯಲ್ಲಿ ಆರೋಪಿಯನ್ನು ಬಂಧಿಸಲಾಗಿದೆ.

ಡಾ.ಯತೀಂದ್ರ, ಅನಿಲ್ ಚಿಕ್ಕಮಾದು ಸಿದ್ದರಾಮಯ್ಯ ಸಂಪುಟದಲ್ಲಿ ಸಚಿವರಾಗಬೇಕು

ಚಾಮರಾಜ ಕ್ಷೇತ್ರದ ಶಾಸಕ ಕೆ.ಹರೀಶ್‌ಗೌಡರ ಆಶಯ

ಮೈಸೂರು, ಫೆ.18(ಎಸ್‌ಪಿಎನ್)– ಡಾ.ಯತೀಂದ್ರ ಸಿದ್ದರಾಮಯ್ಯ, ಹೆಚ್.ಡಿ. ಕೋಟೆ ಶಾಸಕ ಅನಿಲ್ ಚಿಕ್ಕಮಾದು ಎರಡನೇ ಬಾರಿ ಶಾಸಕರಾಗಿದ್ದಾರೆ. ಮುಂದಿನ ದಿನಗಳಲ್ಲಿ ಇವರಿಬ್ಬರೂ ಹಳೆ ಮೈಸೂರು ಪ್ರಾಂತ್ಯದಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ ಸಂಪುಟದಲ್ಲಿ ಮಂತ್ರಿಗಳಾಗಿ ಆಯ್ಕೆ ಆದರೆ ಅಭಿವೃದ್ಧಿ ದೃಷ್ಟಿಯಿಂದ ಒಳ್ಳೆಯದು ಎಂದು ಶಾಸಕ ಕೆ.ಹರೀಶ್‌ಗೌಡರು ಅಭಿಪ್ರಾಯಪಟ್ಟರು.

ಮೈಸೂರು ಬೋಗಾದಿ–ಹಿನಕಲ್ ರಿಂಗ್‌ರಸ್ತೆಯಲ್ಲಿರುವ ಹೋಟೆಲ್ ಬೈಪಾಸ್ ಕೋಸ್ಟಲ್ ಪರ್ಲ್ ಆವರಣದಲ್ಲಿ ಡಾ. ಯತೀಂದ್ರ ಸಿದ್ದರಾಮಯ್ಯ ಅಭಿಮಾನಿಗಳ ಬಳಗದ ವತಿಯಿಂದ ಆಯೋಜಿಸಿದ್ದ ಅಭಿನಂದನಾ ಸಮಾರಂಭದಲ್ಲಿ ವಿಧಾನಪರಿಷತ್ ಸದಸ್ಯರಾದ ಡಾ.ಯತೀಂದ್ರ ಸಿದ್ದರಾಮಯ್ಯ, ಚಾಮರಾಜನಗರ ಸಂಸದ ಸುನಿಲ್ ಬೋಸ್ ಹಾಗೂ ಅನಿಲ್ ಚಿಕ್ಕಮಾದು ಅವರನ್ನು ಸನ್ಮಾನಿಸಿ ಮಾತನಾಡಿದರು.

ರಾಜಕಾರಣದಲ್ಲಿ ಅಧಿಕಾರ ಸಿಕ್ಕಾಗ ಸಂಯಮ, ತಾಳ್ಮೆ ಇರಬೇಕಾಗುತ್ತದೆ. ಕೆಲವು ಬಾರಿ ನಮ್ಮನಮ್ಮ ಕ್ಷೇತ್ರದಲ್ಲಿ ಕಾರ್ಯಕರ್ತರ ಪಡೆ ಕೆಲಸ ನಿಮಿತ್ತ ಸುತ್ತುವರೆದಾಗ ಆ ವೇಳೆ ಸ್ವಲ್ಪ ತಾಳ್ಮೆ ಕಳೆದುಕೊಳ್ಳುತ್ತೇವೆ. ಆದರೆ, ಡಾ.ಯತೀಂದ್ರ ಸಿದ್ದರಾಮಯ್ಯ ಅವರು, ಕಾರ್ಯಕರ್ತರು, ಸಿದ್ದರಾಮಯ್ಯ ಅಭಿಮಾನಿಗಳು, ಕಾಂಗ್ರೆಸ್ ಕಾರ್ಯಕರ್ತರು ಸೇರಿದಂತೆ ಜನಸಾಮಾನ್ಯರು ಸುತ್ತುವರೆದರೂ ಅವರ ಅಹವಾಲುಗಳನ್ನು ಬಹಳ ತಾಳ್ಮೆವಹಿಸಿ ಕೇಳುತ್ತಾರೆ. ಕೆಲವರ ಕಷ್ಟಗಳನ್ನು ಬಗೆಹರಿಸುವಲ್ಲಿ ಯಶಸ್ವಿಯೂ ಆಗಿದ್ದಾರೆ. ಹಾಗಾಗಿ ಇವರು (ಡಾ. ಯತೀಂದ್ರ) ಸಿದ್ದರಾಮಯ್ಯ ಸಂಪುಟದಲ್ಲಿ ಮಂತ್ರಿಗಳಾಗಿ ಅಧಿಕಾರ ವಹಿಸಿಕೊಂಡರೆ ಒಳ್ಳೆಯದು ಎಂದರು.

ನಿಮ್ಮ ಪ್ರೀತಿಗೆ ಚಿರಋಣಿ: ಸಂಸದ ಸುನಿಲ್ ಬೋಸ್ ಮಾತನಾಡಿ, ಮುಂದಿನ ಪೀಳಿಗೆ ರಾಜಕಾರಣದಲ್ಲಿ ಡಾ.ಯತೀಂದ್ರ ಸಿದ್ದರಾಮಯ್ಯ, ಹೆಚ್.ಡಿ.ಕೋಟೆ ಶಾಸಕ ಅನಿಲ್ ಚಿಕ್ಕಮಾದು, ಗುಂಡ್ಲುಪೇಟೆ ಶಾಸಕ ಗಣೇಶ್ ಪ್ರಸಾದ್, ನಂಜನಗೂಡು ಶಾಸಕ ದರ್ಶನ್ ಧ್ರುವನಾರಾಯಣ್, ಕೆ.ಆರ್.ನಗರ ಶಾಸಕ ಡಿ.ರವಿಶಂಕರ್ ಹಾಗೂ ಚಾಮರಾಜ ಕ್ಷೇತ್ರದ ಶಾಸಕ ಕೆ.ಹರೀಶ್‌ಗೌಡರು ಬೆಳೆಯಲಿ ಎನ್ನುವ ಕಾರಣಕ್ಕೆ ಡಾ.ಯತೀಂದ್ರ ಸಿದ್ದರಾಮಯ್ಯ ಅಭಿಮಾನಿ ಬಳಗದ ಕಾರ್ಯಕರ್ತರು ಇಂದಿನ ಅಭಿಮಾನದ ಸಭೆಯನ್ನು ಆಯೋಜಿಸಿರುವುದು ಸಂತೋಷದ ಸಂಗತಿ ಎಂದರು.

ಹರೀಶ್‌ಗೌಡರು ಹೋರಾಟದಿಂದ ಶಾಸಕರಾದರು: ಅಲ್ಲದೆ, ವೇದಿಕೆಯಲ್ಲಿರುವ ಶಾಸಕ ಕೆ.ಹರೀಶ್‌ಗೌಡರನ್ನು ಬಿಟ್ಟು ನಾನು ಸೇರಿದಂತೆ ವೇದಿಕೆ ಮೇಲಿರುವ ಇತರೆ ಶಾಸಕರಿಗೆ ರಾಜಕೀಯ ಹಿನ್ನೆಲೆ ಇತು. ಆದರೆ, ಚಾಮರಾಜ ಕ್ಷೇತ್ರದ ಶಾಸಕ ಕೆ.ಹರೀಶ್‌ಗೌಡರು ರಾಜಕೀಯ ಹಿನ್ನೆಲೆ ಇಲ್ಲದಿದ್ದರೂ ಸತತ ಹೋರಾಟ ಮಾಡಿದವರು. 2018ರಲ್ಲಿ ಸ್ವತಂತ್ರ ಅಭ್ಯರ್ಥಿಯಾಗಿ ನಿಂತಿದ್ದರು. ನಂತರ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿ ಶಾಸಕರಾಗಿ ಆಯ್ಕೆಯಾಗಿರುವುದರ ಹಿಂದೆ ಸಾಕಷ್ಟು ಶ್ರಮವಿದೆ ಎಂದರು.

ಡಾ.ಯತೀಂದ್ರ ಸಿದ್ದರಾಮಯ್ಯ ಅಭಿಮಾನಿ ಬಳಗದ ಶೀರ್ಷಿಕೆಯಡಿ ಹಲವಾರು ಸಾಮಾಜಿಕ ಸೇವೆಗಳನ್ನು ಮಾಡುತ್ತ, ನಮ್ಮ ರಾಜಕೀಯ ಏಳಿಗೆಗೆ ಶ್ರಮಿಸುತ್ತಿರುವ ಬೈಪಾಸ್ ಕೋಸ್ಟಲ್ ಪರ್ಲ್ ಹೋಟೆಲ್ ಮಾಲೀಕ ಬೈಪಾಸ್ ಮಂಜುನಾಥ್, ಮೈಸೂರು ವಿವಿ ಸಿಂಡಿಕೇಟ್ ಸದಸ್ಯ ಡಾ.ಬಸವರಾಜು ಸಿ.ಜೆಟ್ಟಿಹುಂಡಿ, ಮಾನವ ಹಕ್ಕುಗಳು ಹಾಗೂ ಭ್ರಷ್ಟಾಚಾರ ವಿರೋಧಿ ಸಂಸ್ಥೆಯ ಹೆಚ್.ಡಿ.ಕೋಟೆ ತಾಲೂಕು ಅಧ್ಯಕ್ಷ ಬೀರ್ವಾಳು ಎಂ.ಚಿಕ್ಕಣ್ಣ, ಕೆಇಬಿ ಗುತ್ತಿಗೆದಾರ ಮರಿಸ್ವಾಮಿ, ಕೆಪಿಸಿಸಿ ಹಿಂದುಳಿದ ವರ್ಗಗಳ ವಿಭಾಗದ ರಾಜ್ಯ ಉಪಾಧ್ಯಕ್ಷ ವೈ.ಕೆ.ಮಂಜುನಾಥ್ ಹಾಗೂ ಇತರೆ ಕಾರ್ಯಕರ್ತರು ನಮ್ಮನ್ನು ಅಭಿನಂದಿಸುತ್ತಿರುವುದು ಸ್ವಾಗತಾರ್ಹ. ಇದರಿಂದ ನಮ್ಮ ಜವಾಬ್ದಾರಿ ಮತ್ತಷ್ಟು ಹೆಚ್ಚಾಗಿದೆ ಎಂದರು.

ಹೆಚ್.ಡಿ.ಕೋಟೆ ಶಾಸಕ ಅನಿಲ್ ಚಿಕ್ಕಮಾದು ಮಾತನಾಡಿ, ನಮ್ಮ ತಂದೆ ಚಿಕ್ಕಮಾದುರವರು ಜನಸಾಮಾನ್ಯರ ನಡುವೆ ಬದುಕಿದವರು. ಆದರೆ, ಎಂದಿಗೂ ಹಣಗಳಿಸುವ ಗೋಜಿಗೆ ಹೋಗಲಿಲ್ಲ ಎಂದರು.

ಕೆ.ಆರ್.ನಗರ ಶಾಸಕ ಡಿ.ರವಿಶಂಕರ್ ಮಾತನಾಡಿ, ಡಾ.ಯತೀಂದ್ರ ಸಿದ್ದರಾಮಯ್ಯನವರು ವಿಧಾನಪರಿಷತ್ ಸದಸ್ಯರಾಗಿ ಆಯ್ಕೆಯಾಗಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಸುಪುತ್ರರಾಗಿ ಹಳೆ ಮೈಸೂರು ಭಾಗದಲ್ಲಿ ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಕಾಂಗ್ರೆಸ್ ಕಾರ್ಯಕರ್ತರ ಕಣ್ಮಣಿಯಾಗಿ ಕೆಲಸ ಮಾಡುತ್ತಿದ್ದಾರೆ. ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಪುತ್ರರಾದ ಸಂಸದ ಸುನಿಲ್ ಬೋಸ್, ಮಾಜಿ ಸಚಿವ ದಿ.ಮಹದೇವ ಪ್ರಸಾದ್ ಅವರ ಪುತ್ರ ಶಾಸಕ ಗಣೇಶ್ ಪ್ರಸಾದ್, ಮಾಜಿ ಸಂಸದ ಧ್ರುವನಾರಾಯಣ ಅವರ ಪುತ್ರ ದರ್ಶನ್ ಧ್ರುವನಾರಾಯಣ್ ಅವರು, ತಮ್ಮತಮ್ಮ ಕ್ಷೇತ್ರದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮಾರ್ಗದರ್ಶನದಲ್ಲಿ ಕೆಲಸ ಮಾಡುತ್ತಿದ್ದೇವೆ. ಇದಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಹಿರಿಯರ ಆಶೀರ್ವಾದವೇ ಕಾರಣ ಎಂದರು.

ಈ ವೇಳೆ ಹೆಚ್.ಡಿ.ಕೋಟೆ ಶಾಸಕ ಅನಿಲ್ ಚಿಕ್ಕಮಾದು ಅವರ ಹುಟ್ಟುಹಬ್ಬ ಹಿನ್ನೆಲೆಯಲ್ಲಿ ವಿಶೇಷಚೇತನ ಮಕ್ಕಳೊಂದಿಗೆ ಕೇಕ್ ಕತ್ತರಿಸುವ ಮೂಲಕ ಅರ್ಥಪೂರ್ಣವಾಗಿ ಆಚರಿಸಲಾಯಿತು. ಕೋವಿಡ್–19 ಸಂದರ್ಭದಲ್ಲಿ ಕೆಲಸ ಮಾಡಿದ ಮೈಸೂರು ಜಿಲ್ಲಾ ಆರೋಗ್ಯಾಧಿಕಾರಿ ಡಾ.ಕುಮಾರ ಸ್ವಾಮಿ ಸೇರಿದಂತೆ ಇತರೆ ಸಿಬ್ಬಂದಿಗಳನ್ನು ಸನ್ಮಾನಿಸಲಾಯಿತು. ಆಯ್ದ ಸಾಧಕ ರೈತರಿಗೆ ಕೃಷಿ ಸಲಕರಣೆಗಳನ್ನು ವಿತರಿಸಲಾಯಿತು. ಉಚಿತ ಆರೋಗ್ಯ ಹಾಗೂ ರಕ್ತದಾನ ಶಿಬಿರ ಆಯೋಜಿಸಲಾಗಿತ್ತು. ರಾಷ್ಟ್ರಮಟ್ಟದ ಜಾನಪದ ಗಾಯಕ ಅಮ್ಮ ರಾಮಚಂದ್ರ ನೇತೃತ್ವದ ಕಲಾವಿದರು ಜನಪದ ಗೀತೆಗಳನ್ನು ಹಾಡಿದರು. ವೇದಿಕೆಯಲ್ಲಿ ಅಖಿಲ ಕರ್ನಾಟಕ ಕುರುಬರ ಸಂಘ ಮಾಜಿ ಅಧ್ಯಕ್ಷ ಸುಬ್ರಹ್ಮಣ್ಯ, ಮೌರ್ಯ ಆಸ್ಪತ್ರೆಯ ಮಾಲೀಕ ಜೆ.ಜೆ.ಆನಂದ್, ಮೈಸೂರು ನಗರಪಾಲಿಕೆ ಮಾಜಿ ಸದಸ್ಯ ಗೋಪಿ, ಕಾಂಗ್ರೆಸ್ ಮುಖಂಡರಾದ ಸೀತರಾಮು ಸೇರಿದಂತೆ ಇತರೆ ಮುಖಂಡರಿದ್ದರು.



ವಿಧಾನ ಪರಿಷತ್ ಸದಸ್ಯರಾದ ಡಾ.ಯತೀಂದ್ರ ಸಿದ್ದರಾಮಯ್ಯ, ಚಾಮರಾಜನಗರ ಸಂಸದ ಸುನಿಲ್ ಬೋಸ್ ಹಾಗೂ ಅನಿಲ್ ಚಿಕ್ಕಮಾದು ಅವರನ್ನು ಡಾ.ಯತೀಂದ್ರ ಸಿದ್ದರಾಮಯ್ಯ ಅಭಿಮಾನಿಗಳ ಬಳಗದ ವತಿಯಿಂದ ಸನ್ಮಾನಿಸಲಾಯಿತು. ಶಾಸಕರಾದ ಕೆ.ಹರೀಶ್‌ಗೌಡರು, ದರ್ಶನ್ ಧ್ರುವನಾರಾಯಣ್, ಗಣೇಶ್ ಪ್ರಸಾದ್, ಬೈಪಾಸ್ ಕೋಸ್ಟಲ್ ಪರ್ಲ್ ಹೋಟೆಲ್ ಮಾಲೀಕ ಬೈಪಾಸ್ ಮಂಜುನಾಥ್, ಮೈಸೂರು ವಿವಿ ಸಿಂಡಿಕೇಟ್ ಸದಸ್ಯ ಡಾ.ಬಸವರಾಜು ಸಿ.ಜೆಟ್ಟಿಹುಂಡಿ, ಮಾನವ ಹಕ್ಕುಗಳು ಹಾಗೂ ಭ್ರಷ್ಟಾಚಾರ ವಿರೋಧಿ ಸಂಸ್ಥೆಯ ಹೆಚ್.ಡಿ.ಕೋಟೆ ತಾಲೂಕು ಅಧ್ಯಕ್ಷ ಬೀರ್ವಾಳು ಎಂ.ಚಿಕ್ಕಣ್ಣ, ಕೆಇಬಿ ಗುತ್ತಿಗೆದಾರ ಮರಿಸ್ವಾಮಿ, ಕೆಪಿಸಿಸಿ ಹಿಂದುಳಿದ ವರ್ಗಗಳ ವಿಭಾಗದ ರಾಜ್ಯ ಉಪಾಧ್ಯಕ್ಷ ವೈ.ಕೆ.ಮಂಜುನಾಥ್ ಸೇರಿದಂತೆ ಇತರರಿದ್ದರು.

ನನ್ನ ತಂದೆ ಮೇಲಿನ ಅಭಿಮಾನದಿಂದ ನನ್ನ ಅಭಿಮಾನಿ ಸಂಘವನ್ನು ಕಟ್ಟಿದ್ದಾರೆ

ಮೈಸೂರು, ಫೆ.18– ನನ್ನ ಹೆಸರಿನಲ್ಲಿ ಅಭಿಮಾನಿ ಬಳಗ ಸ್ಥಾಪಿಸುವುದು ಎಂದರೆ, ಅದು ನನ್ನ ತಂದೆಯವರ ಮೇಲಿನ ಅಭಿಮಾನಕ್ಕೆ. ಅವರ ಹಲವು ವರ್ಷದ ಸಾರ್ವಜನಿಕ ಸೇವೆಗೆ ಎಂದು ಭಾವಿಸುತ್ತೇನೆ ಎಂದು ವಿಧಾನ ಪರಿಷತ್ ಸದಸ್ಯ ಡಾ.ಯತೀಂದ್ರ ಸಿದ್ದರಾಮಯ್ಯ ಅಭಿಪ್ರಾಯಪಟ್ಟರು.

ನನ್ನ ಹೆಸರಿನ ಅಭಿಮಾನಿ ಬಳಗದ ಕರ್ತೃಗಳು ಬೈಪಾಸ್ ಮಂಜುನಾಥ್, ಡಾ.ಬಸವರಾಜು ಸಿ.ಜೆಟ್ಟಿಹುಂಡಿ, ಬೀರ್ವಾಳು ಎಂ.ಚಿಕ್ಕಣ್ಣ, ಕೆಇಬಿ ಗುತ್ತಿಗೆದಾರ ಮರಿಸ್ವಾಮಿ, ವೈ.ಕೆ.ಮಂಜುನಾಥ್; ನನ್ನ ಹೆಸರಿನ ಅಭಿಮಾನಿ ಬಳಗ ಸ್ಥಾಪಿಸುವುದು ಮೊದಲು ನನಗೆ ತಿಳಿದಿರಲಿಲ್ಲ. ಈ ರೀತಿ ಅಭಿಮಾನಿ ಬಳಗ ಸ್ಥಾಪಿಸಿದರೆ, ಇದಕ್ಕೆ ನಾನು ಎಷ್ಟು ಅರ್ಹನೂ ತಿಳಿಯದು. ಆದರೆ, ಅಭಿಮಾನಿ ಬಳಗದ ಹೆಸರಿನಲ್ಲಿ ವಿವಿಧ ಕ್ಷೇತ್ರದ ಬಡವರನ್ನು ಗುರುತಿಸಿರುವುದು ಸಂತೋಷದ ವಿಷಯ ಎಂದರು. ಇಂದಿನ ಕಾರ್ಯಕ್ರಮದಲ್ಲಿ ನನ್ನನ್ನು ಸೇರಿದಂತೆ ಇತರೆ ಜನಪ್ರತಿನಿಧಿಗಳನ್ನು ಸನ್ಮಾನಿಸುವುದರಿಂದ ಮತ್ತಷ್ಟು ನಮ್ಮ ಮೇಲಿನ ಜವಾಬ್ದಾರಿ ಹೆಚ್ಚಾಗಿದೆ ಎಂದು ಭಾವಿಸಿ, ಮುಂದಿನ ದಿನಗಳಲ್ಲಿ ಹೆಚ್ಚಿನ ಜನಸೇವೆಯಲ್ಲಿ ತೊಡಗಿಸಿಕೊಳ್ಳಲು ಪ್ರಯತ್ನಿಸುತ್ತೇನೆ ಎಂದರು.

ಮೈಸೂರು ಮಿತ್ರ

ಜೀತ ವಿಮುಕ್ತರ ಅಭಿವೃದ್ಧಿಗೆ 500 ಕೋಟಿ ಮೀಸಲಿಡುವುದು ಸೇರಿದಂತೆ

ವಿವಿಧ ಬೇಡಿಕೆ ಈಡೇರಿಕೆಗೆ ಒತ್ತಾಯಿಸಿ ಪ್ರತಿಭಟನೆ

ಹೆಚ್.ಡಿ.ಕೋಟೆ, ಫೆ.18– ಜೀತ ವಿಮುಕ್ತರಿಗೆ ಯಾವುದೇ ಅನುದಾನ ನೀಡುತ್ತಿಲ್ಲ, ಜೀತ ವಿಮುಕ್ತರ ಅಭಿವೃದ್ಧಿಗೆ ಬಜೆಟ್‌ನಲ್ಲಿ 500 ಕೋಟಿ ರೂ. ಮೀಸಲಿಡಬೇಕು ಎಂಬುದು ಸೇರಿದಂತೆ ವಿವಿಧ ಬೇಡಿಕೆ ಈಡೇರಿಕೆಗೆ ಒತ್ತಾಯಿಸಿ ಪಟ್ಟಣದಲ್ಲಿ ಕರ್ನಾಟಕ ಜೀತದಾಳು ಮತ್ತು ಕೃಷಿ ಕಾರ್ಮಿಕರ ಒಕ್ಕೂಟ ಹಾಗೂ ಪ್ರಗತಿಪರ ಸಂಘಟನೆಗಳ ವತಿಯಿಂದ ಮಂಗಳವಾರ ಪ್ರತಿಭಟನೆ ನಡೆಸಲಾಯಿತು.

ಪಟ್ಟಣದ ಡಾ.ಬಿ.ಆರ್.ಅಂಬೇಡ್ಕರ್ ಭವನದ ಬಳಿ ಜಮಾಯಿಸಿದ ಕರ್ನಾಟಕ ಜೀತದಾಳು ಮತ್ತು ಕೃಷಿ ಕಾರ್ಮಿಕರ ಒಕ್ಕೂಟ ಹಾಗೂ ಪ್ರಗತಿಪರ ಸಂಘಟನೆಗಳ ಒಕ್ಕೂಟ ಸೇರಿದಂತೆ ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಅಲ್ಲಿಂದ ಮೆರವಣಿಗೆಯಲ್ಲಿ ಜೀತ ವಿಮುಕ್ತರಿಗೆ ವ್ಯವಸಾಯ ಭೂಮಿ ಕೊಡಿ, ಮುಂಬರುವ ಬಜೆಟ್‌ನಲ್ಲಿ 500 ಕೋಟಿ ಹಣ ಮೀಸಲಿಡಿ, ಸಮಗ್ರ ಪುನರ್ವಸತಿ ಕಲ್ಪಿಸಿ, ಭೂಮಿ ಕೊಡಿ, ನಿವೇಶನ ಮನೆ ಕೊಡಿ, ಎಲ್ಲಕ್ಕಿಂತಲೂ ಹೆಚ್ಚಾಗಿ ಬದುಕುವುದಕ್ಕೆ ಆಹಾರ ನೀಡಿ, ಜೀತ ವಿಮುಕ್ತ ದೇಶಕ್ಕೆ ಶಕ್ತಿ ಎಂದು ಘೋಷಣೆಗಳನ್ನು ಕೂಗುತ್ತಾ ತಾಲೂಕು ಕಚೇರಿಗೆ ಆಗಮಿಸಿ ಪ್ರತಿಭಟನೆ ನಡೆಸಿ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಕರ್ನಾಟಕ ಜೀತದಾಳು ಮತ್ತು ಕೃಷಿ ಕಾರ್ಮಿಕರ ಒಕ್ಕೂಟದ ರಾಜ್ಯಾಧ್ಯಕ್ಷ ಮಹದೇವ ಮಾತನಾಡಿ, ಜೀತ ವಿಮುಕ್ತರಿಗೆ ಸಮಗ್ರ ಪುನರ್ವಸತಿ ಕಲ್ಪಿಸಿ, ವ್ಯವಸಾಯಕ್ಕೆ ಭೂಮಿ ಕೊಡಿ, ಸಾಗುವಳಿ ನೀಡಿ, ಮಾರಕ ಎಸ್‌ಓಪಿ ಕಾಯ್ದೆಯನ್ನು ಕೂಡಲೇ ರದ್ದು ಮಾಡಿ, ಬಜೆಟ್‌ನಲ್ಲಿ ಜೀತ ವಿಮುಕ್ತರ ಅಭಿವೃದ್ಧಿಗೆ 500 ಕೋಟಿ ರೂ. ಅನುದಾನ ನಿಗದಿ ಮಾಡಿ ಬದುಕುವುದಕ್ಕೆ ಅವಕಾಶ ಮಾಡಿಕೊಡಿ, ಜೀತ ವಿಮುಕ್ತಿ ಕಾನೂನು ಪರಿಣಾಮಕಾರಿಯಾಗಿ ಅನುಷ್ಠಾನಕ್ಕೆ ತರಬೇಕು ಎಂದು ಒತ್ತಾಯಿಸಿದರು. ಎಸ್.ಓ.ಪಿ ನಿಯಮದಡಿ ಜೀತವಿಮುಕ್ತರಿಗೆ 7200 ರೂ.ಗಳಂತೆ ಮಾಸಾಸನ ನೀಡಬೇಕು, ಪುನರ್ ವಸತಿ ಕಲ್ಪಿಸಬೇಕು ಎಂದು ನಿಯಮವಿದ್ದರೂ ಸಹ ಈ ನಿಯಮವನ್ನು ಸರ್ಕಾರ ಗಾಳಿಗೆ ತೂರಿದೆ ಎಂದು ಆರೋಪಿಸಿದರು.



ಪ್ರತಿಭಟನಾನಾರರು ಶಾಸಕ ಅನಿಲ್ ಹಾಗೂ ತಹಸೀಲ್ದಾರ್ ಶ್ರೀನಿವಾಸ್‌ಗೆ ಮನವಿ ಸಲ್ಲಿಸಿದರು.

2001ರಿಂದ 2012ರವರಗೆ 753 ಜೀತದಾಳುಗಳನ್ನು ಬಿಡುಗಡೆ ಮಾಡಿ ತಲಾ 20 ಸಾವಿರ ಪರಿಹಾರ ಮತ್ತು 7200 ರೂ. ಮಾಸಾಶನ ನೀಡಿರುತ್ತಾರೆ. 2014ರಿಂದ 2024ರವರೆಗೆ 258 ಜೀತದಾಳುಗಳನ್ನು ಬಿಡುಗಡೆ ಮಾಡಿ 163 ಜನರಿಗೆ ತಲಾ ಒಂದು ಸಾವಿರ ರೂ. ತಾತ್ಕಾಲಿಕ ಪರಿಹಾರ ಹಾಗೂ 95 ಜನರಿಗೆ 5000 ರೂ.ಗಳ ತಾತ್ಕಾಲಿಕ ಪರಿಹಾರ ನೀಡಿದ್ದಾರೆ. ಆದರೆ 35 ಜನರಿಗೆ ತಾತ್ಕಾಲಿಕ ಪರಿಹಾರ ನೀಡಿಲ್ಲ. 49 ಮಂದಿಗೆ ಮಾಸಾಶನ ನೀಡಿಲ್ಲ. ಸಂಪೂರ್ಣವಾಗಿ 258 ಮಂದಿಗೆ ಪರಿಹಾರ ಕಲ್ಪಿಸಿಲ್ಲ ಎಂದ ಅವರು, 550 ಮಂದಿಗೆ ಮನೆ ಮಂಜೂರು ಮಾಡಿಲ್ಲ. ಇದನ್ನೆಲ್ಲಾ ಮನಗಂಡು ಅಧಿಕಾರಿಗಳನ್ನು ಪ್ರಶ್ನಿಸಿದರೆ ಹಣ ಇಲ್ಲ ಎಂಬ ಉತ್ತರಗಳು ಕೇಳಿ ಬರುತ್ತಿದೆ. ಇನ್ನಾದರೂ 2025–26ನೇ ಸಾಲಿನ ಬಜೆಟ್‌ನಲ್ಲಿ 500 ಕೋಟಿ ರೂ. ಮೀಸಲಿಡಬೇಕು ಎಂದು ಒತ್ತಾಯಿಸಿದರು.

ಜೀತ ವಿಮುಕ್ತರಿಗೆ ಸವಲತ್ತು ಕಲ್ಪಿಸುವಲ್ಲಿ ಸರ್ಕಾರ ವಿಫಲವಾಗಿದೆ ಎಂದು ಆರೋಪಿಸಿದ ಅವರು, ಎಸ್‌ಓಪಿ ಕಾನೂನು ಜೀತ ವಿಮುಕ್ತರಿಗೆ 24 ಗಂಟೆ ಒಳಗೆ ಪರಿಹಾರ ಕಲ್ಪಿಸಬೇಕು ಎಂದು ಇದ್ದರೂ ಕೂಡ ಅದನ್ನು ಮಾಡುವಲ್ಲಿ ಸರ್ಕಾರ ವಿಫಲವಾಗಿದೆ ಎಂದು ದೂರಿದರು.

ರಾಜ್ಯ ಸರ್ಕಾರ ರಾಜ್ಯದ ಜನತೆ 5 ಭಾಗ್ಯಗಳನ್ನು ನೀಡಿದ್ದು, ಇದರ ಜೊತೆಯಲ್ಲಿ ಜೀತ ವಿಮುಕ್ತರಿಗೆ ಪುನರ್ವಸತಿ ಕಲ್ಪಿಸುವ ಭಾಗ್ಯವನ್ನು ಜಾರಿಗೆ ತರಬೇಕು. ಅಲ್ಲದೇ ಮೇಲಿನ ಎಲ್ಲಾ ಒತ್ತಾಯಗಳನ್ನು ಈಡೇರಿಸುವಂತೆ ರಾಜ್ಯ ಸರ್ಕಾರಕ್ಕೆ ಶಾಸಕ ಅನಿಲ್ ಅವರ ಮೂಲಕ ಮನವಿ ಸಲ್ಲಿಸಿದರು.

ಮನವಿ ಸ್ವೀಕರಿಸಿ ಮಾತನಾಡಿದ ಶಾಸಕ ಅನಿಲ್, ನನ್ನ ವ್ಯಾಪ್ತಿಗೆ ಬರುವ ಎಲ್ಲಾ ವಿಚಾರಗಳನ್ನು ಮುಖ್ಯಮಂತ್ರಿಗಳ ಗಮನಕ್ಕೆ ತಂದು ಅಧಿವೇಶನದಲ್ಲಿ ಜೀತ ವಿಮುಕ್ತರ ಬೇಡಿಕೆಗಳ ಬಗ್ಗೆ ಧ್ವನಿ ಎತ್ತುತ್ತೇನೆ. ನಮ್ಮ ಸರ್ಕಾರ ಬಡವರ, ದೀನ ದಲಿತರ, ರೈತರ ಪರವಾಗಿ ಕೆಲಸ ಮಾಡುತ್ತಿದ್ದು, ಈಗಾಗಲೇ ಸಾಕಷ್ಟು ಸವಲತ್ತುಗಳನ್ನು ನೀಡಲು ಮುಂದಾಗಿದೆ. ಮುಂದಿನ ದಿನಗಳಲ್ಲೂ ಜೀತ ವಮುಕ್ತರಿಗೆ ಯಾವುದೇ ಅನುದಾನ ಕೊರತೆಯಾಗದಂತೆ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ ಕ್ರಮ ಕೈಗೊಳ್ಳಲಾಗುವುದು ಎಂದರು.

ಪ್ರತಿಭಟನೆಯಲ್ಲಿ ತಹಸೀಲ್ದಾರ್ ಶ್ರೀನಿವಾಸ್, ಒಕ್ಕೂಟದ ಮಾಜಿ ರಾಜ್ಯಾಧ್ಯಕ್ಷ ಶಿವಣ್ಣ, ಜೀವಿಕ ಬಸವರಾಜ್, ಮಂಜುನಾಥ್, ಮಲ್ಲಿಗಮ್ಮ, ಪುಟ್ಟರಾಜಯ್ಯ, ಗೋಪಾಲ್, ಚಾ.ನಂಜುಂಡ ಮೂರ್ತಿ, ಜೀವಿಕಾ ಉಮೇಶ್, ರಾಜು, ಲಕ್ಷ್ಮಮ್ಮ, ಮಾಲಿಂಗಯ್ಯ, ಚಂದ್ರಶೇಖರ ಮೂರ್ತಿ, ಕರ್ನಾಟಕ ಜೀತದಾಳು ಮತ್ತು ಕೃಷಿ ಕಾರ್ಮಿಕರ ಒಕ್ಕೂಟದ ಸದಸ್ಯರು, ಮಹಿಳೆಯರು, ವಿವಿಧ ಸಂಘಟನೆ ಪದಾಧಿಕಾರಿಗಳು ಭಾಗವಹಿಸಿದ್ದರು.

1.35 ಕೋಟಿ ವೆಚ್ಚದ ಕಾಮಗಾರಿಗೆ ಗುದ್ದಲಿ ಪೂಜೆ



ಅಭಿವೃದ್ಧಿ ಕಾಮಗಾರಿಗೆ ಶಾಸಕ ದರ್ಶನ್ ಗುದ್ದಲಿ ಪೂಜೆ ನೆರವೇರಿಸಿದರು.

ನಂಜನಗೂಡು, ಫೆ.18– ನಗರದ ಬಾಲಕಿಯರ ಪದವಿ ಪೂರ್ವ ಕಾಲೇಜನ್ನು ಕ್ಷೇತ್ರದಲ್ಲೇ ಮಾದರಿ ಕಾಲೇಜ್ ಆಗಿ ರೂಪಿಸುವ ಸಲುವಾಗಿ 1 ಕೋಟಿ 35 ಲಕ್ಷ ವೆಚ್ಚದಲ್ಲಿ ಕಾಲೇಜಿನ ಕೊಠಡಿ ನಿರ್ಮಾಣ ಮತ್ತು ಹೈಟೆಕ್ ಶೌಚಾಲಯ ಕಾಮಗಾರಿಗಳಿಗೆ ಚಾಲನೆ ನೀಡಲಾಗಿದೆ ಎಂದು ಶಾಸಕ ದರ್ಶನ್ ತಿಳಿಸಿದರು.

ನಗರದ ನಾಗಮ್ಮ ಶಾಲೆ ಆವರಣದಲ್ಲಿರುವ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿನಲ್ಲಿ 1.35 ಕೋಟಿ ರೂ. ವೆಚ್ಚದ ಕಾಮಗಾರಿಗಳಿಗೆ ಗುದ್ದಲಿ ಪೂಜೆ ನೆರವೇರಿಸಿ ಅವರು ಮಾತನಾಡಿದರು.

ಬಾಲಕಿಯರ ಕಾಲೇಜನ್ನು ಕ್ಷೇತ್ರದ ಮಾದರಿ ಕಾಲೇಜನ್ನಾಗಿ ರೂಪಿಸುವ ಸಲುವಾಗಿ ಕ್ರಮ ವಹಿಸಲಾಗಿದ್ದು, ದಾನಿಗಳ ಸಹಾಯದಿಂದ ಹಲವು ಕಾಮಗಾರಿಗಳು ನಡೆದಿವೆ. ಧ್ರುವನಾರಾಯಣ್ ಎಜುಕೇಶನ್ ಟ್ರಸ್ಟ್ ವತಿಯಿಂದ ಈ ಕಾಲೇಜಿನ ಬಾಲಕಿಯರಿಗೆ ಉಚಿತವಾಗಿ ಸಿಇಟಿ, ಪರೀಕ್ಷೆಗಳ ತರಬೇತಿ ಶಿಬಿರ ಆಯೋಜನೆ ಮಾಡಲಾಗಿದೆ. ಅಲ್ಲದೇ ಕಾಲೇಜಿನಲ್ಲಿ ಕೊಠಡಿ ಸಮಸ್ಯೆ ನಿವಾರಿಸುವ ಸಲುವಾಗಿ ಈಗಾಗಲೇ 1.5 ಕೋಟಿ ವೆಚ್ಚದಲ್ಲಿ ಕೊಠಡಿ ನಿರ್ಮಾಣ ಕಾಮಗಾರಿಗೆ ಚಾಲನೆ ನೀಡಲಾಗಿದೆ. ಇದೀಗ ಮತ್ತೊಮ್ಮೆ ಮೂಲ ಸೌಕರ್ಯ ಅಭಿವೃದ್ಧಿಗಾಗಿ 1.35 ಕೋಟಿ ಅನುದಾನ ಬಿಡುಗಡೆಯಾಗಿದ್ದು, 1 ಕೋಟಿ ವೆಚ್ಚದಲ್ಲಿ 4 ಕೊಠಡಿ ನಿರ್ಮಿಸಲಾಗುವುದು. 28 ಲಕ್ಷ ವೆಚ್ಚದಲ್ಲಿ ಡಯಾಜ್ ನಿರ್ಮಾಣ ಮತ್ತು ಸಭಾಂಗಣಕ್ಕೆ ನೆಲಹಾಸು ಕಾಮಗಾರಿ ನಿರ್ವಹಿಸಲಾಗುವುದು. ಜೊತೆಗೆ 7 ಲಕ್ಷ ವೆಚ್ಚದಲ್ಲಿ ಹೈಟೆಕ್ ಶೌಚಾಲಯ ನಿರ್ಮಿಸಲಾಗುವುದು. ಮುಂದಿನ ದಿನಗಳಲ್ಲಿ ಹೆಚ್ಚಿನ ಅನುದಾನ ನಿಯೋಗಿಸಿ ಖಾಸಗಿ ಕಾಲೇಜಿಗಿಂತಲೂ ಹೆಚ್ಚಿನ ಸೌಲಭ್ಯಗಳನ್ನು ಕಲ್ಪಿಸುವ ಮೂಲಕ ಕ್ಷೇತ್ರದಲ್ಲೇ ಅತ್ಯುತ್ತಮ ಮಾದರಿ ಕಾಲೇಜ್ ಆಗಿ ರೂಪಿಸಲಾಗುವುದು ಎಂದರು.

ಈ ವೇಳೆ ಮಾಜಿ ಶಾಸಕ ಕಳಲೆ ಕೇಶವಮೂರ್ತಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕುರಹಟ್ಟಿ ಕೆ.ಜಿ.ಮಹೇಶ್, ಸಿ.ಎಂ.ಶಂಕರ್, ನಗರಸಭಾ ಸದಸ್ಯರಾದ ಕೆ.ಎಂ.ಬಸವರಾಜು, ರವಿ, ಮುಖಂಡರಾದ ಪ್ರಕಾಶ್, ನಾಗರಾಜು, ದೊರೆಸ್ವಾಮಿ, ಮಮತ ಕಾಲೇಜಿನ ಪ್ರಾಂಶುಪಾಲ ಚಂದ್ರಶೇಖರ ಬಾಬು ಸೇರಿದಂತೆ ಹಲವರಿದ್ದರು.

ವಿಜೃಂಭಣೆಯ ಶ್ರೀಮಹದೇಶ್ವರಸ್ವಾಮಿ ಜಾತ್ರಾ ಮಹೋತ್ಸವ

ಸರಗೂರು, ಫೆ.18– ತಾಲೂಕಿನ ಕಂದೇಗಾಲ ಗ್ರಾಮದಲ್ಲಿ ಶ್ರೀಮಹದೇಶ್ವರ ಸ್ವಾಮಿ ಜಾತ್ರಾ ಮಹೋತ್ಸವದ ಅಂಗವಾಗಿ ಕೊಂಡೋತ್ಸವ ಸಾವಿರಾರು ಭಕ್ತರ ಸಮ್ಮುಖದಲ್ಲಿ ಮಂಗಳವಾರ ವಿಜೃಂಭಣೆಯಿಂದ ನಡೆಯಿತು.

ಸೋಮವಾರ ರಾತ್ರಿ ಹಂಚೀಪುರ ಮಠಾಧ್ಯಕ್ಷ ಚನ್ನಬಸವ ಸ್ವಾಮೀಜಿ, ಪಡುವಲು ವಿರಕ್ತ ಮಠದ ಮಹದೇವ ಸ್ವಾಮೀಜಿ, ಹಂಚೀಪುರ ಮಠದ ಸ್ವಾಮೀಜಿ, ದಡದಹಳ್ಳಿ ಮಠದ ಷಡಕ್ಷರಿ ಸ್ವಾಮೀಜಿ, ಬೀಚನಹಳ್ಳಿ ಪುರದ ಶಿವಕುಮಾರ ಸ್ವಾಮೀಜಿ ಸೇರಿದಂತೆ ವಿವಿಧ ಮಠಾಧೀಶರ ನೇತೃತ್ವದಲ್ಲಿ ಮಹದೇಶ್ವರಸ್ವಾಮಿಗೆ ವಿಶೇಷ ಪೂಜೆ ನಡೆಸಲಾಯಿತು.

ಜಾತ್ರಾ ಮಹೋತ್ಸವದ ಅಂಗವಾಗಿ ದೇವಾಲಯ ಮತ್ತು ಗ್ರಾಮವನ್ನು ವಿದ್ಯುತ್ ದೀಪಗಳಿಂದ ಅಲಂಕರಿಸಲಾಗಿತ್ತು. ಮಂಗಳವಾರ ಮುಂಜಾನೆಯಿಂದಲೇ ಶಿವನಿಗೆ ಹೋಮ ಹವನ, ರುದ್ರಾಭಿಷೇಕ ಸೇರಿದಂತೆ ವಿಶೇಷ ಪೂಜೆ ಸಲ್ಲಿಸಲಾಯಿತು. ಬಳಿಕ ನದಿಗೆ ತೆರಳಿ ಗಂಗಾ ಪೂಜೆ ನಡೆಸಿ ಉತ್ಸವ ಮೂರ್ತಿಯನ್ನು ವಿವಿಧ ಹೂಗಳಿಂದ ಅಲಂಕರಿಸಿ ರಥದಲ್ಲಿ ಪ್ರತಿಷ್ಠಾಪಿಸಿ ಮೆರವಣಿಗೆ ಮಾಡಲಾಯಿತು.



ಕಂದೇಗಾಲದಲ್ಲಿ ಶ್ರೀಮಹದೇಶ್ವರಸ್ವಾಮಿ ಜಾತ್ರಾ ಮಹೋತ್ಸವ ವಿಜೃಂಭಣೆಯಿಂದ ನಡೆಯಿತು.

ಮೆರವಣಿಗೆ ದಾರಿಯುದ್ದಕ್ಕೂ ಭಕ್ತರು ಮಲೆ ಮಹದೇಶ್ವರರಿಗೆ ಜೈಕಾರ ಕೂಗಿದರು. ಈ ವೇಳೆ ವೀರಗಾಸೆ ಕುಣಿತ, ಸತ್ತಿಗೆ, ಸೂರಿಪಾನಿಗಳು, ವಾದ್ಯಗೋಷ್ಠಿಗಳು ಮೆರವಣಿಗೆಯಲ್ಲಿ ಭಾಗವಹಿಸಿದ್ದವು. ಮೆರವಣಿಗೆ ದೇವಾಲಯ ತಲುಪಿದ ಬಳಿಕ ದೇವಾಲಯದ ಸುತ್ತ ಪ್ರದಕ್ಷಿಣೆ ಹಾಕಿಸಲಾಯಿತು. ನಂತರ ಕೊಂಡೋತ್ಸವಕ್ಕೆ ಚಾಲನೆ ನೀಡಲಾಯಿತು. ಈ ವೇಳೆ ನೂರಾರು ಭಕ್ತರು ಕೊಂಡ ಹಾಯ್ದು ಹರಕೆ ತೀರಿಸಿದರು. ಸರಗೂರು ಠಾಣೆ ಎಸ್‌ಐ ಆರ್.ಕಿರಣ್, ಗೋಪಾಲ್, ಮುಖ್ಯಪೇದೆಗಳಾದ ಚಂದ್ರು, ಗಣಪತಿ, ಸಿಬ್ಬಂದಿಗಳಾದ ಇಮ್ರಾನ್ ಅಹಮದ್, ಶಿವಕುಮಾರ್ ಸೂಕ್ತ ಬಂದೋಬಸ್ತ್ ವ್ಯವಸ್ಥೆ ಮಾಡಿದ್ದರು. ಜಾತ್ರಾ ಮಹೋತ್ಸವದಲ್ಲಿ ಸಾವಿರಾರು ಭಕ್ತರು ಭಾಗವಹಿಸಿದ್ದರು. ಹರಕೆ ಹೊತ್ತ ಭಕ್ತರು ಹರಕೆ ತೀರಿಸಿದರು. ಅಲ್ಲದೇ ಸರತಿ ಸಾಲಿನಲ್ಲಿ ನಿಂತು ದೇವರ ದರ್ಶನ ಪಡೆದು ಪುನೀತರಾದರು. ಭಕ್ತರಿಗೆ ಅನ್ನದಾನ ಹಮ್ಮಿಕೊಳ್ಳಲಾಗಿತ್ತು. ಮಂಗಳವಾರ ರಾತ್ರಿ ಸಾಗರೆ ಗ್ರಾಮದ ಕಲಾವಿದರಿಂದ ಸುಗಮ ಸಂಗೀತ ಏರ್ಪಡಿಸಲಾಗಿತ್ತು. ಈ ವೇಳೆ ದೇವಾಲಯ ಕಮಿಟಿ ಸದಸ್ಯರು, ಗ್ರಾಮದ ಯಜಮಾನರು, ಗ್ರಾಮಸ್ಥರು ಇನ್ನಿತರರಿದ್ದರು.

ಗುರುಮಲ್ಲೇಶ್ವರ ದಾಸೋಹ ಭವನ ಲೋಕಾರ್ಪಣೆ



ಕಾರ್ಯಕ್ರಮದಲ್ಲಿ ಸುತ್ತೂರು ಶ್ರೀಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಮಾತನಾಡಿದರು.

ಮಲ್ಕುಂಡಿ, ಫೆ.18– ಈ ಭಾಗದಲ್ಲಿ ದಾಸೋಹದ ಪಾವಿತ್ರ್ಯತೆಯ ಪರಿಕಲ್ಪನೆ ಬಿತ್ತಿದವರು ದೇವನೂರು ಗುರುಮಲ್ಲೇಶ್ವರ ಸ್ವಾಮೀಜಿ ಎಂದು ಸುತ್ತೂರು ಕ್ಷೇತ್ರದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ತಿಳಿಸಿದರು.

ಸಮೀಪದ ಹೆಡಿಯಾಲದಲ್ಲಿ ನೂತನ ದಾಸೋಹ ಭವನ ಲೋಕಾರ್ಪಣೆಗೊಳಿಸಿ ಮಾತನಾಡಿದ ಅವರು, ಮಠಮಾನ್ಯಗಳು ಅಕ್ಷರ, ಅನ್ನ ದಾಸೋಹ ನಡೆಸುವ ಮೂಲಕ ಸಮಾಜದ ಅಭಿವೃದ್ಧಿಗಾಗಿ ಶ್ರಮಿಸುತ್ತಿವೆ. ಇದನ್ನು ಎಲ್ಲರೂ ಸದ್ಬಳಕೆ ಮಾಡಿಕೊಳ್ಳುವ ಮೂಲಕ ಧಾರ್ಮಿಕ ಬಾವನೆಗೆ ಹೆಚ್ಚು ಒತ್ತು ನೀಡಬೇಕು. ಅಲ್ಲದೇ ನಂಬಿಕೆ ವಿಶ್ವಾಸದಿಂದ ಮುನ್ನಡೆಯಬೇಕು ಎಂದರು. ವಿಶ್ವಗುರು ಬಸವಣ್ಣನವರು ತಮ್ಮ ವಚನಗಳ ಮೂಲಕ ಸಮಾಜಕ್ಕೆ ಅಪಾರ ಕೊಡುಗೆ ನೀಡಿದ್ದಾರೆ. ಇಂದಿನ ಯುವ ಪೀಳಿಗೆ ಬಸವಣ್ಣನವರ ಆದರ್ಶಗಳನ್ನು ಅಳವಡಿಸಿಕೊಂಡಾಗ ಮಾತ್ರ ಶಾಂತಿಯುತ ಜೀವನ ನಡೆಸಲು ಸಾಧ್ಯ. ಬಸವಣ್ಣನವರು ಯಾವುದೇ ಒಂದು ಜಾತಿಗೆ ಸೀಮಿತವಾಗಿದವರಲ್ಲ. ಎಲ್ಲಾ ಜನಾಂಗದವರನ್ನು ಅನುಭವ ಮಂಟಪದ ಮೂಲಕ ಒಗ್ಗೂಡಿಸಿದ ಒಬ್ಬ ಮಹಾನ್ ವ್ಯಕ್ತಿ ಎಂದು ಬಣ್ಣಿಸಿದರು.

ಈ ವೇಳೆ ದೇವನೂರು ಮಠಾಧೀಶ ಮಹಾಂತ ಸ್ವಾಮೀಜಿ, ಕನಕಪುರ ಮಠಾಧೀಶ ಚೆನ್ನಬಸವ ಸ್ವಾಮೀಜಿ, ಸೋಮಹಳ್ಳಿ ಮಠಾಧೀಶ ಸಿದ್ದಮಲ್ಲಸ್ವಾಮೀಜಿ, ಹೆಡಿಯಾಲ ದಾಸೋಹ ಮಠದ ನಾಗೇಂದ್ರ ಸ್ವಾಮೀಜಿ, ವೀರಶೈವ ಮಹಾಸಭಾ ತಾಲೂಕು ಅಧ್ಯಕ್ಷ ಎಸ್.ಎಂ. ಕೆಂಪಣ್ಣ, ಪ್ರದೀಪ್ ಕುಮಾರ್, ದೇಬೂರು ಅಶೋಕ್, ವೀರಶೈವ ಲಿಂಗಾಯತ ಮಹಾಸಭಾ ತಾಲೂಕು ಯುವ ಘಟಕದ ಅಧ್ಯಕ್ಷ ಮಲ್ಕುಂಡಿ ಮಹದೇವಸ್ವಾಮಿ ಸೇರಿದಂತೆ ಇತರರಿದ್ದರು.

ಉಚಿತ ಆರೋಗ್ಯ, ಕಣ್ಣಿನ ತಪಾಸಣಾ ಶಿಬಿರ

ಹುಣಸೂರು, ಫೆ.18– ಡಿ.ದೇವರಾಜ ಅರಸು ಸಾರ್ವಜನಿಕ ಆಸ್ಪತ್ರೆ ಹುಣಸೂರು, ಪ್ರಾಥಮಿಕ ಆರೋಗ್ಯ ಕೇಂದ್ರ ಚಿಲ್ಕುಂದ, ಆಸರೆ ಆಸ್ಪತ್ರೆ ಹುಣಸೂರು, ಡಾ.ಅಗರ್ವಾಲ್ ಕಣ್ಣಿನ ಆಸ್ಪತ್ರೆ ಹುಣಸೂರು ಇವರ ಸಹಯೋಗದೊಂದಿಗೆ ತಾಲೂಕಿನ ಹಬ್ಬನಕುಪ್ಪೆಯಲ್ಲಿ ನಗರದ ಜ್ಞಾನಧಾರ ಪ್ರಥಮ ದರ್ಜೆ ಕಾಲೇಜು ಎನ್‌ಎಸ್‌ಎಸ್ ಶಿಬಿರದಿಂದ ಉಚಿತ ಆರೋಗ್ಯ, ಕಣ್ಣಿನ ತಪಾಸಣಾ ಶಿಬಿರ ಹಾಗೂ ಆರೋಗ್ಯ ಅರಿವು ಕಾರ್ಯಕ್ರಮ ನಡೆಯಿತು.

ಶಿಬಿರದಲ್ಲಿ ಸುತ್ತಮುತ್ತಲ ಗ್ರಾಮಗಳ 300ಕ್ಕೂ ಹೆಚ್ಚು ಮಂದಿ ಚಿಕಿತ್ಸೆ ಪಡೆದುಕೊಂಡರು. ಮೈಸೂರು ವಿವಿ ಎನ್‌ಎಸ್‌ಎಸ್ ಕಾರ್ಯಕ್ರಮ ಸಂಯೋಜನಾಧಿಕಾರಿ ಡಾ.ಎಂ.ಬಿ.ಸುರೇಶ್ ಪ್ರಾಸ್ತಾವಿಕವಾಗಿ ಮಾತನಾಡಿ, ಶಿಬಿರಾರ್ಥಿಗಳಿಗೆ ಎನ್‌ಎಸ್‌ಎಸ್‌ನಿಂದ ದೊರೆಯುವ ಶೈಕ್ಷಣಿಕ ಸವಲತ್ತುಗಳ ಬಗ್ಗೆ ತಿಳಿಸಿದರು.

ಇಓ ರಾಜೇಶ್ವರಿ ತಂಬಾಕಿನಿಂದಾಗುವ ದುಷ್ಪರಿಣಾಮಗಳ ಬಗ್ಗೆ ಮತ್ತು ಹೆಣ್ಣು ಮಕ್ಕಳ ಆರೋಗ್ಯ ಸಮಸ್ಯೆಗಳ ಬಗ್ಗೆ ವಿಶೇಷ ಉಪನ್ಯಾಸ ನೀಡಿದರು. ಡಾ.ವಿ.ರವಿಕುಮಾರ್ ಅವರು ಸಮುದಾಯದ ಆರೋಗ್ಯ ಸಮಸ್ಯೆಗಳ ಕುರಿತು ಮಾತನಾಡಿ, ಸರ್ಕಾರಿ ಆಸ್ಪತ್ರೆಯಲ್ಲಿ ದೊರೆಯುವ ಸೌಲಭ್ಯಗಳ ಕುರಿತು ತಿಳಿಸಿದರು.



ಹಬ್ಬನಕುಪ್ಪೆಯಲ್ಲಿ ಉಚಿತ ಆರೋಗ್ಯ, ಕಣ್ಣಿನ ತಪಾಸಣಾ ಶಿಬಿರ ನಡೆಯಿತು.

ಹುಣಸೂರು ಸಾರ್ವಜನಿಕ ಆಸ್ಪತ್ರೆ ವೈದ್ಯ ಡಾ.ಮಂಜುನಾಥ್, ಬಿಪಿ, ಶುಗರ್, ಹೃದಯ ಸಂಬಂಧಿ ಕಾಯಿಲೆಗಳ ಬಗ್ಗೆ ಅರಿವು ಹಾಗೂ ರೋಗ ಲಕ್ಷಣಗಳ ಬಗ್ಗೆ ಮಾಹಿತಿ ನೀಡಿದರು. ಕಾರ್ಯಕ್ರಮ ದಲ್ಲಿ ಮುಖಂಡ ಪ್ರಜ್ವಲ್, ಡಾ.ಅಗರ್ವಾಲ್ ಕಣ್ಣಿನ ಆಸ್ಪತ್ರೆ ಹುಣಸೂರು ಇಲ್ಲಿನ ಸಿಬ್ಬಂದಿ, ಸತೀಶ್, ಮಹೇಶ್, ರಾಮಲಿಂಗೇಗೌಡ, ಗ್ರಾಮಸ್ಥರು, ಶಿಬಿರಾರ್ಥಿಗಳು ಇದ್ದರು.

ಇಂದು ಚಾಮನಹಳ್ಳಿ ಪಿಎಸಿಎಸ್ ಚುನಾವಣೆ

ತಿ.ನರಸೀಪುರ, ಫೆ.18– ತಾಲೂಕಿನ ಚಾಮನಹಳ್ಳಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನಿರ್ದೇಶಕರ ಚುನಾವಣೆ ಪ್ರತಿಷ್ಠೆಯ ಕಣವಾಗಿದ್ದು, ಫೆ.19ರ ಬುಧವಾರ(ಇಂದು) ಚುನಾವಣೆ ನಡೆಯಲಿದೆ.



ಸಿದ್ದೇಗೌಡ



ಸುನೀತಾ

ಗ್ರಾಮಾಂತರ ಪ್ರದೇಶಗಳನ್ನು ಒಳಗೊಂಡಂತೆ ಬನ್ನೂರು ಪಟ್ಟಣದ ವ್ಯಾಪ್ತಿಯ ಚಾಮನಹಳ್ಳಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ 12 ನಿರ್ದೇಶಕರ ಆಯ್ಕೆಗೆ 21 ಮಂದಿ ಕಣದಲ್ಲಿದ್ದು, ಬೆಳಗ್ಗೆ 9 ರಿಂದ ಸಂಜೆ 5 ರವರೆಗೆ ಚುನಾವಣೆ ಸಂಘದ ಆವರಣದಲ್ಲಿ ನಡೆಯಲಿದ್ದು, ಹನುಮನಾಳು ಸಿದ್ದೇಗೌಡ ಹಾಗೂ ಜೆ.ಸುನೀತಾ ವೀರಪ್ಪಗೌಡ ಬಣದ ನಡುವೆ ನೇರ ಹಣಾಹಣಿ ಏರ್ಪಟ್ಟಿದೆ.

ಜಿಲ್ಲಾ ಸಹಕಾರ ಯೂನಿಯನ್ ಉಪಾಧ್ಯಕ್ಷ ಹನುಮನಾಳು ಸಿದ್ದೇಗೌಡ ಬಣದಿಂದ ಅವರು ಸೇರಿದಂತೆ ಆರ್.ಜಗದೀಶ, ನರಸಿಂಹ ನಾಯಕ, ನಾಗರತ್ನ, ಡಿ.ಸಿ.ಪುಟ್ಟಸ್ವಾಮಿ, ಬೃಂದಾ ಕೃಷ್ಣೇಗೌಡ, ರತ್ನಮ್ಮ, ಶಬರೀಶ, ಡಿ.ಸುನೀಲ್‌ಕುಮಾರ್, ಸೋಮಚಾರಿ, ಮಾಜಿ ಶಾಸಕಿ ಜೆ.ಸುನೀತಾ ವೀರಪ್ಪಗೌಡ ಬಣದಿಂದ ಅವರು ಸೇರಿದಂತೆ ಉಮೇಶ, ಗೋಪಾಲ, ಚನ್ನಮಲ್ಲು, ಎಂ.ಎಸ್. ಜಯರಾಮೇಗೌಡ, ಬಿ.ದೇವರಾಜು, ಹೆಚ್.ಎಂ. ಮಾದೇಗೌಡ, ಲಕ್ಷ್ಮಮ್ಮ, ಸಿ.ಪಿ.ವಿದ್ಯಾ, ವಿ.ಶಂಕರೇಗೌಡ ಹಾಗೂ ಎಂ.ಸತೀಶ ಅಖಾಡದಲ್ಲಿದ್ದಾರೆ.

> 6 ಚಾಮನಹಳ್ಳಿ ಪಿಎಸಿಎಸ್ ಅಭಿವೃದ್ಧಿಗಾಗಿ ಬದಲಾವಣೆ ಆಗಲೇಬೇಕು. ಷೇರುದಾರ ಸದಸ್ಯ ರೈತ ಈ ಬಾರಿ ನಮ್ಮ ಬಣದ ಅಭ್ಯರ್ಥಿಗಳನ್ನು ಬೆಂಬಲಿಸಿ, ನಿರ್ದೇಶಕರ ಆಯ್ಕೆಯಲ್ಲಿ ಮಹತ್ತರ ಬದಲಾವಣೆ ತರಲಿದ್ದಾರೆ. ಪ್ರತಿಯೊಬ್ಬ ರೈತರನ್ನು ನೇರವಾಗಿ ಭೇಟಿಯಾಗಿ ಬೆಂಬಲಿಸುವಂತೆ ಸಹಕಾರ ಕೇಳಿದ್ದೇವೆ.
>
> -ಹನುಮನಾಳು ಸಿದ್ದೇಗೌಡ,
> ಉಪಾಧ್ಯಕ್ಷ, ಜಿಲ್ಲಾ ಸಹಕಾರ ಯೂನಿಯನ್.

ವಿಜೃಂಭಣೆಯ ಮಾರಮ್ಮ ಜಾತ್ರಾ ಮಹೋತ್ಸವ

ಕಂಪಲಾಪುರ, ಫೆ.18– ಗ್ರಾಮದ ಮಡಿವಾಳ ಬೀದಿಯಲ್ಲಿರುವ ಗೋಣಹಳ್ಳಿ ಮಾರಮ್ಮ ದೇವಸ್ಥಾನದ 5ನೇ ವರ್ಷದ ಜಾತ್ರಾ ಮಹೋತ್ಸವ ವಿಜೃಂಭಣೆಯಿಂದ ನಡೆಯಿತು.

ಮಂಗಳವಾರ ಬೆಳಗ್ಗೆ ಗ್ರಾಮದ ಹೆಗ್ಗೆರೆಯಿಂದ ಕಳಸ ತಂದ ನಂತರ ಪೂಜಾ ಕೈಂಕರ್ಯಗಳು ನೆರವೇರಿದವು. ಮಧ್ಯಾಹ್ನ 12.30ಕ್ಕೆ ಮಹಾಮಂಗಳಾರತಿ ನೆರವೇರಿಸಲಾಯಿತು. ಬಳಿಕ ಸರತಿ ಸಾಲಿನಲ್ಲಿ ನಿಂತು ಭಕ್ತರು ದೇವರ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿ ಪುನೀತರಾದರು. ಇದೇ ವೇಳೆ ಸಾರ್ವಜನಿಕರಿಗೆ ಅನ್ನಸಂತರ್ಪಣೆ ಹಮ್ಮಿಕೊಳ್ಳಲಾಗಿತ್ತು. ರಾತ್ರಿ 7 ರಿಂದ ದೇವಿಯನ್ನು ಅಲಂಕೃತ ಮಂಟಪದಲ್ಲಿ ಇರಿಸಿ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮಾಡಲಾಯಿತು.



ಗೋಣಹಳ್ಳಿ ಮಾರಮ್ಮ ದೇವಸ್ಥಾನದ 5ನೇ ವರ್ಷದ ಜಾತ್ರಾ ಮಹೋತ್ಸವ ವಿಜೃಂಭಣೆಯಿಂದ ನಡೆಯಿತು.

ಗ್ರಾಮ ಆಡಳಿತಾಧಿಕಾರಿಗಳ ಬೇಡಿಕೆ ಈಡೇರಿಸಲು ಒತ್ತಾಯ



ಮಾಜಿ ಶಾಸಕ ಎಂ.ಅಶ್ವಿನ್ ಕುಮಾರ್ ಮುಷ್ಕರನಿರತರ ಅಹವಾಲು ಸ್ವೀಕರಿಸಿದರು.

ತಿ.ನರಸೀಪುರ, ಫೆ.18– ಗ್ರಾಮ ಆಡಳಿತಾಧಿಕಾರಿಗಳ ಅನಿರ್ದಿಷ್ಟಾವಧಿ ಮುಷ್ಕರದಿಂದ ಕಂದಾಯ ಇಲಾಖೆಯಲ್ಲಿ ಸಾರ್ವಜನಿಕ ಕೆಲಸ ಕಾರ್ಯಗಳಿಗೆ ತೀವ್ರ ತೊಂದರೆ ಆಗುತ್ತಿರುವುದರಿಂದ ಸಿಎಂ ಸಿದ್ದರಾಮಯ್ಯ ಹಾಗೂ ಕಂದಾಯ ಸಚಿವ ಕೃಷ್ಣ ಭೈರೇಗೌಡ ಅವರು ಕೂಡಲೇ ಗ್ರಾಮ ಲೆಕ್ಕಾಧಿಕಾರಿಗಳು ಹಾಗೂ ಕಂದಾಯ ಅಧಿಕಾರಿಗಳ ನ್ಯಾಯಯುತ ಬೇಡಿಕೆಗಳನ್ನು ಈಡೇರಿಸಬೇಕೆಂದು ಮಾಜಿ ಶಾಸಕ ಎಂ.ಅಶ್ವಿನ್ ಕುಮಾರ್ ಒತ್ತಾಯಿಸಿದರು.

ಪಟ್ಟಣದ ತಾಲೂಕು ಕಚೇರಿ ಆವರಣದಲ್ಲಿ ಕೇಂದ್ರ ಸಂಘದ ಕರೆಯಂತೆ ಅನಿರ್ದಿಷ್ಟಾವಧಿ ಮುಷ್ಕರ ನಡೆಸುತ್ತಿರುವ ಗ್ರಾಮ ಆಡಳಿತಾಧಿಕಾರಿಗಳ ಪ್ರತಿಭಟನೆಯಲ್ಲಿ ಮಂಗಳವಾರ ಭಾಗವಹಿಸಿ ಪ್ರತಿಭಟನಾನಿರತರ ಅಹವಾಲು ಆಲಿಸಿ ಮಾತನಾಡಿದ ಅವರು, ರಾಜ್ಯಾದ್ಯಂತ ಗ್ರಾಮ ಆಡಳಿತಾಧಿಕಾರಿಗಳು ಸಮಸ್ಯೆಗಳನ್ನು ಪರಿಹರಿಸುವಂತೆ ಹಾಗೂ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ನಡೆಸುತ್ತಿರುವ ಅನಿರ್ದಿಷ್ಟಾವಧಿ ಮುಷ್ಕರ 9ನೇ ದಿನಕ್ಕೆ ಕಾಲಿಟ್ಟಿರುವುದನ್ನು ಗಮನಿಸಿ, ಸರ್ಕಾರ ಕೂಡಲೇ ಪ್ರತಿಭಟನೆ ಸುಖಾಂತ್ಯಗೊಳಿಸಬೇಕು ಎಂದು ಆಗ್ರಹಿಸಿದರು.

ಗ್ರಾಮ ಆಡಳಿತಾಧಿಕಾರಿಗಳು ತಮಗೆ ಅವಶ್ಯಕವಿರುವ ಮೂಲಸೌಕರ್ಯಗಳ ಬಗ್ಗೆ ಹೋರಾಟ ನಡೆಸುತ್ತಿದ್ದಾರೆ. ವೇತನ ಪರಿಷ್ಕರಣೆಯಾಗಬೇಕು. ಪ್ರತಿಯೊಂದು ಹಂತಗಳಲ್ಲೂ ನೌಕರರು ಎದುರಿಸುತ್ತಿರುವ ಸಮಸ್ಯೆಗಳನ್ನು ಇತ್ಯರ್ಥಗೊಳಿಸಬೇಕು. ಸರ್ಕಾರ ಬೇಡಿಕೆಗಳನ್ನು ಈಡೇರಿಸುವ ಮೂಲಕ ತಾಲೂಕು ಆಡಳಿತದ ಸುಸಜ್ಜಿತ ಕಾರ್ಯ ವ್ಯವಸ್ಥೆಗೆ ಅನುವು ಮಾಡಿಕೊಡಬೇಕು. ಮುಷ್ಕರ ನಿರತ ನೌಕರರ ಅಹವಾಲುಗಳನ್ನು ಸರಿದೂಗಿಸದಿದ್ದಲ್ಲಿ ಮುಂಬರುವ ಅಧಿವೇಶನದಲ್ಲಿ ಜೆಡಿಎಸ್ ಶಾಸಕಾಂಗ ನಾಯಕರ ಮುಖಾಂತರ ಅಧಿವೇಶನದಲ್ಲಿ ಧ್ವನಿ ಎತ್ತುವ ಬಗ್ಗೆಯೂ ವಿಪಕ್ಷಗಳ ನಾಯಕರ ಗಮನಕ್ಕೆ ತರುತ್ತೇನೆ ಎಂದರು.

ಪ್ರತಿಭಟನೆಯಲ್ಲಿ ಸಂಘದ ಅಧ್ಯಕ್ಷ ಎಂ.ಎಸ್.ಆನಂದ, ಕಾರ್ಯದರ್ಶಿ ಶಿವರಾಮು, ಉಪಾಧ್ಯಕ್ಷ ಶ್ರೀನಿವಾಸ್ ಮೂರ್ತಿ, ಕಂದಾಯ ಅಧಿಕಾರಿಗಳಾದ ಎಸ್.ಸಿದ್ದರಾಜು, ಶ್ಯಾಮ್, ಬಸವರಾಜು, ಮಹೇಂದ್ರ, ನಾಗೇಂದ್ರ, ಗ್ರಾಮ ಲೆಕ್ಕಾಧಿಕಾರಿಗಳಾದ ಸೋಮು, ಪ್ರಸನ್ನ, ನಯನ, ನಾಗೇರಪ್ಪ, ಶಿವರಾಂ, ಶ್ರೀನಿವಾಸ, ಸತೀಶ, ಜೆಡಿಎಸ್ ಕ್ಷೇತ್ರ ಅಧ್ಯಕ್ಷ ಸಿಬಿಹುಂಡಿ ಚಿನ್ನಸ್ವಾಮಿ, ಜಿಲ್ಲಾ ಜನಜಾಗೃತಿ ಜಿಲ್ಲಾಧ್ಯಕ್ಷ ಕೆ.ಎನ್.ಪ್ರಭುಸ್ವಾಮಿ, ಗಣೇಶ್, ದೊಡ್ಡ ಮಾದನಾಯಕ, ತಿರುಮಕೂಡಲು ಜಯರಾಮ್ ಹಾಗೂ ಇತರರಿದ್ದರು.

ಆರೋಗ್ಯ ಕೇಂದ್ರ ದುರಸ್ತಿ ಜೊತೆಗೆ ಸಿಬ್ಬಂದಿ ನೇಮಿಸಲು ಕ್ರಮ

ಶಾಸಕ ಡಿ.ರವಿಶಂಕರ್



ಕಾರ್ಯಕ್ರಮವನ್ನು ಶಾಸಕ ಡಿ.ರವಿಶಂಕರ್ ಉದ್ಘಾಟಿಸಿದರು.

ಕೆ.ಆರ್.ನಗರ, ಫೆ.18– ಕ್ಷೇತ್ರದ ಜನತೆಯ ಆರೋಗ್ಯದ ದೃಷ್ಟಿಯಿಂದ ಸಾರ್ವಜನಿಕ ಆಸ್ಪತ್ರೆ ಸೇರಿದಂತೆ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರಗಳ ದುರಸ್ತಿ ಮಾಡುವ ಜೊತೆಗೆ ಅಗತ್ಯ ಸಿಬ್ಬಂದಿ ನೇಮಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಶಾಸಕ ಡಿ.ರವಿಶಂಕರ್ ತಿಳಿಸಿದರು.

ತಾಲೂಕಿನ ಮಾವತ್ತೂರು ಗ್ರಾಪಂ ವ್ಯಾಪ್ತಿಯ ಮಳಲಿ ಗ್ರಾಮದಲ್ಲಿ ನಡೆದ ಬಾಗಿಲಿಗೆ ಬಂತು ಸರ್ಕಾರ, ಸೇವೆಗೆ ಇರಲಿ ಸಹಕಾರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು ಶಿಥಿಲಗೊಂಡಿರುವ ಪ್ರಾಥಮಿಕ ಆರೋಗ್ಯ ಕೇಂದ್ರದ ಕಟ್ಟಡವನ್ನು ಕೆಡವಿ ಹೊಸ ಆಸ್ಪತ್ರೆ ನಿರ್ಮಾಣ ಮಾಡಲಾಗುವುದು ಎಂದರು.

ಕೆಸ್ತೂರು ಏತ ನೀರಾವರಿ ಯೋಜನೆಗೆ ಈಗಾಗಲೇ ಸರ್ಕಾರದಿಂದ ಮಂಜೂರಾತಿ ದೊರೆತಿದ್ದು, ಶೀಘ್ರ ಕಾಮಗಾರಿಗೆ ಚಾಲನೆ ನೀಡಲಾಗುವುದು. ಈ ಯೋಜನೆಯಿಂದ ಮಾವತ್ತೂರು, ಕೆಸ್ತೂರು, ಸಿದ್ದಾಪುರ, ಬ್ಯಾಡರಹಳ್ಳಿ ಗ್ರಾಪಂ ವ್ಯಾಪ್ತಿಯ ಎಲ್ಲಾ ಕೆರೆ ಕಟ್ಟೆಗಳಿಗೆ ನೀರು ತುಂಬಿಸಲು ಅನುಕೂಲವಾಗುತ್ತದೆ ಎಂದರು. ಮಳಲಿ ಗ್ರಾಮದ ಸಾರ್ವಜನಿಕರ ಬಹುದಿನಗಳ ಬೇಡಿಕೆಯಾದ ಮಳಲಿ ವೃತ್ತ ನಿರ್ಮಾಣದ ಜೊತೆಗೆ ಕೆಸ್ತೂರು ಗ್ರಾಮದಿಂದ ಮಾವತ್ತೂರು ಗ್ರಾಮದ ಮಾರ್ಗವಾಗಿ ಹುಣಸೂರು ತಾಲೂಕು ಸಂಪರ್ಕ ರಸ್ತೆ ಅಗಲೀಕರಣಕ್ಕೆ ಅಗತ್ಯ ಅನುದಾನ ಮಂಜೂರು ಮಾಡಿಸಲಾಗಿದೆ ಎಂದರು.

ಗ್ರಾಮದ ಪರಿಮಿತಿಯಲ್ಲಿ ಗಣಿಗಾರಿಕೆ ನಡೆಸುತ್ತಿರುವವರು ಸಾರ್ವಜನಿಕರಿಗೆ ಮತ್ತು ಜಾನುವಾರುಗಳಿಗೆ ತೊಂದರೆಯಾಗದ ರೀತಿ ಗಣಿಗಾರಿಕೆ ಮಾಡುವಂತೆ ನೋಡಿಕೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದ ಶಾಸಕರು, ಮಳಲಿ ಗ್ರಾಮದ ಕಾಡುಬಸವೇಶ್ವರ ದೇವಾಲಯಕ್ಕೆ ಕುಡಿಯುವ ನೀರು ಸರಬರಾಜು ಮಾಡಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದರು.

ತಹಸೀಲ್ದಾರ್ ಜಿ.ಸುರೇಂದ್ರಮೂರ್ತಿ, ತಾಪಂ ಇಓ ವಿ.ಪಿ.ಕುಲದೀಪ್ ಮಾತನಾಡಿದರು. ಮಾವತ್ತೂರು ಗ್ರಾಪಂ ಅಧ್ಯಕ್ಷೆ ಸುಕನ್ಯ, ಸದಸ್ಯ ಎಂ.ಎಸ್.ಹರಿಚಿದಂಬರ, ಮಾಜಿ ಸದಸ್ಯ ಸ್ವಾಮಿ, ಪಿಡಿಓ ಧನಂಜಯ, ಮುಖಂಡರಾದ ಮಾದೇಗೌಡ, ಮಂಜುನಾಥ್, ಎಂ.ಆರ್.ಪ್ರಸಾದ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಉದಯಶಂಕರ್, ನಗರಾಧ್ಯಕ್ಷ ಎಂ.ಜೆ.ರಮೇಶ್, ತಾಲೂಕು ವಕ್ತಾರ ಸೈಯದ್ ಜಾಬೀರ್, ಸಿಡಿಪಿಓ ಸಿ.ಎಂ.ಅಣ್ಣಯ್ಯ, ಸಮಾಜ ಕಲ್ಯಾಣಾಧಿಕಾರಿ ಹೆಚ್.ಎಲ್.ಶಂಕರಮೂರ್ತಿ, ಸಹಾಯಕ ಕೃಷಿ ನಿರ್ದೇಶಕ ಕೆ.ಜೆ.ಮಲ್ಲಿಕಾರ್ಜುನ್, ಪಶುಪಾಲನಾ ಇಲಾಖೆ ಮುಖ್ಯ ವೈದ್ಯಾಧಿಕಾರಿ ಡಾ.ಬಿ.ಮಂಜುನಾಥ್ ಸೇರಿದಂತೆ ತಾಲೂಕು ಮಟ್ಟದ ಅಧಿಕಾರಿಗಳು ಗ್ರಾಮಸ್ಥರು ಹಾಜರಿದ್ದರು.

ಶಿವಣ್ಣ ನಿಧನ



ಸರಗೂರು, ಫೆ.18– ತಾಲೂಕಿನ ಬಾಡಗ ಗ್ರಾಮದ ನಿವಾಸಿ ಶಿವಣ್ಣ (62) ಸೋಮವಾರ ಸಂಜೆ ನಿಧನರಾದರು. ಮೃತರು ಪತ್ನಿ, ಓರ್ವ ಪುತ್ರ, ಪುತ್ರಿ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಸ್ವಗ್ರಾಮದ ಮೃತರ ತೋಟದಲ್ಲಿ ಮಂಗಳವಾರ ನಡೆಯಿತು.

ವಿದ್ಯಾರ್ಥಿ ಚಳವಳಿಗಳನ್ನು ರಾಮಕೃಷ್ಣ ಹೆಗಡೆ ಸಾಯಿಸಿದರು

● ವಿಧಾನಪರಿಷತ್ ಸದಸ್ಯ ಅಡಗೂರು ಹೆಚ್.ವಿಶ್ವನಾಥ್ ವಿಷಾದ ● ಈಗಿನ ವಿದ್ಯಾರ್ಥಿಗಳಲ್ಲಿ, ಯುವಕರಲ್ಲಿ ಪ್ರಶ್ನಿಸುವ ಎದೆಗಾರಿಕೆ ಇಲ್ಲ ● ಕನ್ನಡ ಚಳವಳಿಗಾರ ಮೈ.ನಾ.ಗೋಪಾಲಕೃಷ್ಣರಿಗೆ ಶ್ರದ್ಧಾಂಜಲಿ

ಮೈಸೂರು, ಫೆ.18(ಎಂಟಿವೈ)– ರಾಜ್ಯಕ್ಕೆ ಉತ್ತಮ ನಾಯಕರನ್ನು ಕೊಡುಗೆ ನೀಡುತ್ತಿದ್ದ ವಿದ್ಯಾರ್ಥಿ ಚಳವಳಿಗಳನ್ನು ರಾಮಕೃಷ್ಣ ಹೆಗಡೆ ಅವರು ಮುಖ್ಯಮಂತ್ರಿಗಳಾಗಿದ್ದಾಗ ಸಾಯಿಸಿದರು ಎಂದು ವಿಧಾನ ಪರಿಷತ್ ಸದಸ್ಯ ಅಡಗೂರು ಹೆಚ್.ವಿಶ್ವನಾಥ್ ಆರೋಪಿಸಿದ್ದಾರೆ.

ಮೈಸೂರಿನ ಜಿಲ್ಲಾ ಪತ್ರಕರ್ತರ ಭವನದಲ್ಲಿ ಕನ್ನಡ ಚಳುವಳಿಗಾರರ ಸಂಘದ ವತಿಯಿಂದ ಏರ್ಪಡಿಸಿದ್ದ ಇತ್ತೀಚೆಗೆ ನಿಧನರಾದ ಕನ್ನಡ ಚಳವಳಿ ಹೋರಾಟಗಾರ ಮೈ.ನಾ.ಗೋಪಾಲಕೃಷ್ಣ ಅವರ ಶ್ರದ್ಧಾಂಜಲಿ ಸಭೆಯಲ್ಲಿ ಪುಷ್ಪ ನಮನ ಸಲ್ಲಿಸಿ ಮಾತನಾಡಿದ ಅವರು, ರಾಜ್ಯದಲ್ಲಿ ರಾಜಕೀಯ, ಸಾಮಾಜಿಕ ನಾಯಕತ್ವಕ್ಕೆ ಚಳವಳಿಗಳ ಕೊಡುಗೆ ಅಪಾರ. ಚಳುವಳಿಯಿಂದ ರಾಜ್ಯದಲ್ಲಿ ಅನೇಕರು ನಾಯಕರಾಗಿ ಹೊರಹೊಮ್ಮಿ, ಉತ್ತಮ ಆಡಳಿತ ನೀಡಿದ್ದಾರೆ. ವಿದ್ಯಾರ್ಥಿ, ರೈತ ಹಾಗೂ ದಲಿತ ಚಳವಳಿಯಿಂದ ಅನೇಕ ನಾಯಕರು ಹೊರಹೊಮ್ಮಿದ್ದಾರೆ ಎಂದರು.

ರೈತ ವಿದ್ಯಾರ್ಥಿ ಹಾಗೂ ದಲಿತ ಚಳುವಳಿಯಿಂದಾಗಿ ಗುಂಡೂರಾವ್ ಅವರ ಸರ್ಕಾರ ಪತನಗೊಂಡಿತು. ಆ ಬಳಿಕ ಮುಖ್ಯಮಂತ್ರಿಯಾದ ರಾಮಕೃಷ್ಣಹೆಗಡೆ ಅವರು ವಿದ್ಯಾರ್ಥಿ ಚಳವಳಿಯನ್ನು ಸಾಯಿಸಿದರು. ಕಾಲೇಜುಗಳಲ್ಲಿ ವಿದ್ಯಾರ್ಥಿ ಸಂಘಟನೆಗಳು ಇದ್ದರೆ ಹೋರಾಟ, ಚಳವಳಿ ನಡೆಯುತ್ತವೆ ಎಂದು ಹೇಳಿ, ಎಲ್ಲಾ ಕಾಲೇಜು, ವಿಶ್ವವಿದ್ಯಾನಿಲಯ, ಶಿಕ್ಷಣ ಸಂಸ್ಥೆಗಳಲ್ಲಿ ವಿದ್ಯಾರ್ಥಿ ಸಂಘಟನೆ ಇಲ್ಲದಂತೆ ಮಾಡಿದರು. ಅವರ ಅಧಿಕಾರಾವಧಿಯಲ್ಲಿ ವಿದ್ಯಾರ್ಥಿ ಚಳವಳಿಗಳಿಗೆ ನಿಷೇಧ ಹೇರಿದರು. ರೈತ ಚಳವಳಿಯನ್ನು ದುರ್ಬಲಗೊಳಿಸಿದರು ಎಂದು ದೂರಿದರು.

ರಾಜಕಾರಣವನ್ನು ನಿಯಂತ್ರಿಸುತ್ತಿದ್ದ ಚಳವಳಿ ಇಂದು ಧ್ವನಿ ಕಳೆದುಕೊಂಡಿದೆ. ಯುವ ಜನರಲ್ಲಿ ಅನ್ಯಾಯವನ್ನು ಪ್ರಶ್ನಿಸುವ ಉತ್ಸಾಹವೇ ಇಲ್ಲವಾಗಿದೆ. ಹೀಗಾದರೆ ಸರ್ಕಾರಕ್ಕೆ ಹೇಳುವವರು, ಕೇಳುವವರು ಇಲ್ಲವಾಗುತ್ತಾರೆ. ಜನಪರ ಕಾರ್ಯಕ್ರಮಗಳು ಕುಂಠಿತವಾಗುತ್ತವೆ ಎಂದು ವಿಷಾದಿಸಿದರು.

ಇತ್ತೀಚೆಗೆ ನಿಧನರಾದ ಮೈ.ನಾ.ಗೋಪಾಲಕೃಷ್ಣ ಸಾಕಷ್ಟು ಕನ್ನಡಪರ ಹೋರಾಟಗಳಲ್ಲಿ ಪಾಲ್ಗೊಂಡಿದ್ದರು. ಅವರಂತೆ ಅನೇಕರು ಕನ್ನಡ ಪರ ಹೋರಾಟದಲ್ಲಿ ಸಕ್ರಿಯವಾಗಿದ್ದರು. ಅವರ ನಿಸ್ವಾರ್ಥ ಹೋರಾಟದಿಂದ ಭಾಷಾಭಿಮಾನ ವೃದ್ಧಿಯಾಗಿತ್ತು. ನಾಡಿನಲ್ಲಿ ಜಾಗೃತಿ ಉಂಟಾಗಲು ಸಾಮಾಜಿಕ ಹೋರಾಟಗಾರರ ಅಗತ್ಯ ಹೆಚ್ಚಾಗಬೇಕು ಎಂದರು.

ಕನ್ನಡಪರ ಹೋರಾಟಗಾರ ಮೂಗೂರು ನಂಜುಂಡಸ್ವಾಮಿ ಮಾತನಾಡಿ, ಕನ್ನಡಪರ ಹೋರಾಟಗಾರ ಮೈ.ನಾ.ಗೋಪಾಲಕೃಷ್ಣ 2–3 ದಶಕಗಳಿಂದ ಮೈಸೂರಲ್ಲಿ ಕನ್ನಡ ಭಾಷೆಗಾಗಿ ಹೋರಾಟ ಮಾಡಿದ್ದು. ಎರಡು ಪತ್ರಿಕೆ ಮುನ್ನಡೆಸಿದರು. ಅವರ ಕನ್ನಡಪರ ಹೋರಾಟವನ್ನು ಮನಗಂಡು ಈ ಹಿಂದೆ ವಿಶ್ವನಾಥ್ ಅವರು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರಾಗಿದ್ದಾಗ ಮೈ.ನಾ.ಗೋಪಾಲಕೃಷ್ಣ ಅವರನ್ನು ದಸರಾ ವಸ್ತು ಪ್ರದರ್ಶನ ಪ್ರಾಧಿಕಾರಕ್ಕೆ ಉಪಾಧ್ಯಕ್ಷರನ್ನಾಗಿ ನೇಮಕ ಮಾಡಿದ್ದರು ಎಂದು ಸ್ಮರಿಸಿದರು. ಈಗಲೂ ಹೋರಾಟಗಳನ್ನು ಸಮರ್ಥವಾಗಿ ನಡೆಸುವ ಆಸಕ್ತಿ ಹೋರಾಟಗಾರರಲ್ಲಿದೆ. ಆದರೆ, ಯಾವುದೇ ಒಂದು ಪ್ರಬಲ ಹೋರಾಟ ಮಾಡಬೇಕಾದರೆ ಕನಿಷ್ಠ 10 ಸಾವಿರ ರೂ. ಬೇಕಾಗುತ್ತದೆ. ಆ ಕಾರಣದಿಂದ ಹೋರಾಟಗಳು ಸಾಂಕೇತಿಕವಾಗಿ ನಡೆಯುತ್ತಿವೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಕಸಾಪ ಜಿಲ್ಲಾಧ್ಯಕ್ಷ ಮಡ್ಡೀಕೆರೆ ಗೋಪಾಲ್, ಸಮಾಜ ಸೇವಕ ರಘುರಾಂ ವಾಜಪೇಯಿ ಇನ್ನಿತರರು ಉಪಸ್ಥಿತರಿದ್ದರು.



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಕನ್ನಡ ಚಳುವಳಿಗಾರರ ಸಂಘದ ವತಿಯಿಂದ ಆಯೋಜಿಸಿದ್ದ ಕನ್ನಡಪರ ಹೋರಾಟಗಾರ ಮೈ.ನಾ.ಗೋಪಾಲಕೃಷ್ಣ ಅವರ ಶ್ರದ್ಧಾಂಜಲಿ ಸಭೆಯಲ್ಲಿ ವಿಧಾನ ಪರಿಷತ್ ಸದಸ್ಯ ಎ.ಹೆಚ್.ವಿಶ್ವನಾಥ್ ಪುಷ್ಪ ನಮನ ಸಲ್ಲಿಸಿದರು.

ವಿವಿಗಳ ಮುಚ್ಚುವುದಕ್ಕೆ ವಿಶ್ವನಾಥ್ ಸಹಮತ

ಕುಲಪತಿಗಳಿಗೆ 5 ಕೋಟಿ ಫಿಕ್ಸ್ ಮಾಡಿದ್ದೇ ಬಿಜೆಪಿ ಸರ್ಕಾರ!

ಮೈಸೂರು, ಫೆ.18(ಎಂಟಿವೈ)– ರಾಜ್ಯದ ವಿವಿಧೆಡೆ ಕಳೆದ ಮೂರು ವರ್ಷದಿಂದ ಹೊಸದಾಗಿ ಆರಂಭಿಸಿದ್ದ 9 ವಿಶ್ವವಿದ್ಯಾನಿಲಯಗಳನ್ನು ಮುಚ್ಚಲು ಮುಂದಾಗಿರುವುದು ಒಳ್ಳೆಯ ನಿರ್ಧಾರ ಎಂದು ರಾಜ್ಯ ಸರ್ಕಾರದ ನಿಲುವನ್ನು ವಿಧಾನಪರಿಷತ್ ಸದಸ್ಯ ಅಡಗೂರು ಹೆಚ್. ವಿಶ್ವನಾಥ್ ಬೆಂಬಲಿಸಿದ್ದಾರೆ.

ಮೈಸೂರಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಜಿಲ್ಲೆಗೊಂದು ವಿಶ್ವವಿದ್ಯಾನಿಲಯ ಕೊಟ್ಟರೆ ಏನಾಗಬೇಕು. ಅನುದಾನ ಕೊಟ್ಟಿಲ್ಲ. ವಿಶ್ವವಿದ್ಯಾಲಯದ ಕುಲಪತಿ ಹುದ್ದೆ ಪಡೆಯಲು 5 ಕೋಟಿ ಫಿಕ್ಸ್ ಮಾಡಿದ್ದೇ ಈ ಹಿಂದಿನ ಬಿಜೆಪಿ ಸರ್ಕಾರ. ಅದು ಈಗಲೂ ಮುಂದುವರಿದಿದೆ. ಈ ವಿಚಾರ ಎಲ್ಲರಿಗೂ ಗೊತ್ತಿದೆ. ಹಲವು ವಿವಿಗಳನ್ನು ಬಂದ್ ಮಾಡಲು ಮುಂದಾಗಿರುವ ರಾಜ್ಯ ಸರ್ಕಾರದ ನಿಲುವು ಸರಿಯಾಗಿದೆ. ರಾಜ್ಯದಲ್ಲೀಗ ಅಕ್ಷರ, ಆರೋಗ್ಯ ಎರಡಕ್ಕೂ ಬೆಲೆ ಇಲ್ಲದಂತಾಗಿದೆ ಎಂದು ವಿಷಾದಿಸಿದರು.

ರಾಜ್ಯದಲ್ಲಿ ಗಲಭೆ, ಕೊಲೆ, ಆತ್ಮಹತ್ಯೆ ಹೆಚ್ಚಾಗುತ್ತಿದೆ: ರಾಜ್ಯದಲ್ಲಿ ಶಾಂತಿಗೆ ಅವಕಾಶ ಇಲ್ಲದಂತಾಗಿದೆ ಎಲ್ಲಾ ಕಡೆ ಪ್ರಕ್ಷುಬ್ಧತೆ, ಗಲಾಟೆ–ಗಲಭೆ, ಕೊಲೆ, ಆತ್ಮಹತ್ಯೆಗಳು ನಡೆಯುತ್ತಿವೆ. ಇದಕ್ಕೆಲ್ಲಾ ಯಾರು ಕಾರಣ. ಜನ ಕಾರಣ ಅಲ್ಲ. ನಾವು ಆಯ್ಕೆ ಮಾಡಿದ ಸರ್ಕಾರ ಕಾರಣ. ಸರ್ಕಾರದ ಮುಖ್ಯಸ್ಥರಾಗಿರುವ ಸಿದ್ದರಾಮಯ್ಯ ಇದಕ್ಕೆಲ್ಲ ಉತ್ತರ ಕೊಡಬೇಕು ಎಂದು ಒತ್ತಾಯಿಸಿದರು.

ಬಜೆಟ್ ಪೂರ್ವಭಾವಿ ಸಭೆ ನಡೆಸುತ್ತಿರುವ ಸಿಎಂ ಸಿದ್ದರಾಮಯ್ಯ ವಿರುದ್ಧ ವಾಗ್ದಾಳಿ ನಡೆಸಿದ ಹೆಚ್ ವಿಶ್ವನಾಥ್, ಸಿದ್ದರಾಮಯ್ಯ ಸರ್ಕಾರದಲ್ಲಿ ಶಾಸಕಾಂಗಕ್ಕೆ ಬೆಲೆಯೇ ಇಲ್ಲದಂತಾಗಿದೆ. ಬಜೆಟ್ ಕುರಿತು ಶಾಸಕಾಂಗ ಒಪ್ಪಿಗೆ ನೀಡುತ್ತದೆ. ಆದರೆ ಸರ್ಕಾರ ಶಾಸಕಾಂಗದ ಒಪ್ಪಿಗೆ ನೀಡಿದ ಬಜೆಟ್ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಏನು ಮಾಡಿದೆ. ಕಳೆದ ಬಾರಿಯ ಬಜೆಟ್ ಏನಾಯಿತು ಎಂದು ಪ್ರಶ್ನಿಸಿದರು.

ಉತ್ತಮ ವ್ಯವಸ್ಥೆ: ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ಮಹಾಕುಂಭ ಮೇಳಕ್ಕೆ ಉತ್ತರಪ್ರದೇಶ ಸರ್ಕಾರ ಮಾಡಿರುವ ವ್ಯವಸ್ಥೆ ಅತ್ಯುತ್ತಮವಾಗಿದೆ. ಸಣ್ಣಪುಟ್ಟ ಘಟನೆ ಹೊರತುಪಡಿಸಿ ಇಡೀ ಕುಂಭಮೇಳದ ವ್ಯವಸ್ಥೆ ಚೆನ್ನಾಗಿದೆ. ಒಂದು ಮನೆ ನಡೆಸೋದೇ ಕಷ್ಟ. ಕೋಟ್ಯಾಂತರ ಜನರು ಭಾಗಿಯಾಗಿರುವ ಕುಂಭಮೇಳ ಯಶಸ್ವಿಯಾಗಿ ನಡೆದಿದೆ. ಇದಕ್ಕಾಗಿ ಉತ್ತರಪ್ರದೇಶ ಸರ್ಕಾರ ಸೂಕ್ತ ವ್ಯವಸ್ಥೆ ಮಾಡಿದೆ ಎಂದು ಶ್ಲಾಘಿಸಿದರು.

ವಿಳಂಬ: ರಾಜ್ಯ ಸರ್ಕಾರದ ಗೃಹಲಕ್ಷ್ಮಿ ಯೋಜನೆಯ ಫಲಾನುಭವಿ ಮಹಿಳೆಯರು ಹಾಗೂ ಅನ್ನಭಾಗ್ಯ ಯೋಜನೆಯ ಫಲಾನುಭವಿಗಳ ಖಾತೆಗೆ ಹಣ ಜಮೆಯಾಗದ ವಿಚಾರ ಕುರಿತು ಪ್ರತಿಕ್ರಿಯಿಸಿದ ಹೆಚ್ ವಿಶ್ವನಾಥ್, ಗೃಹಲಕ್ಷ್ಮಿ ಯೋಜನೆಯ ಹಣ ಬರ್ತಿಲ್ಲ ಅಂತಾ ಹೇಳುತ್ತಿದ್ದಾರೆ. ಇದರಿಂದ ಮನೆಗಳು ಮುರಿದು ಹೋಗುವ ಪರಿಸ್ಥಿತಿ ಬಂದಿದೆ ಎಂದರು.

ಕಲ್ಲು ತೂರಾಟ ಕೇಸ್: ಉದಯಗಿರಿ ಠಾಣೆ ಸಬ್ ಇನ್‌ಸ್ಪೆಕ್ಟರ್ ವರ್ಗಾವಣೆ

ಮೈಸೂರು: ಉದಯಗಿರಿ ಕಲ್ಲು ತೂರಾಟ ಪ್ರಕಣಕ್ಕೆ ಸಂಬಂಧಿಸಿದಂತೆ ಉದಯಗಿರಿ ಠಾಣೆಸಬ್‌ಇನ್ಸ್‌ಪೆಕ್ಟರ್ ರೂಪೇಶ್ ಅವರನ್ನು ವರ್ಗಾವಣೆ ಮಾಡಲಾಗಿದೆ



ನಗರ ಪೊಲೀಸ್ ಆಯುಕ್ತು ಕಚೇರಿಯ ಆಟೋಮೇಷನ್ ಸೆಂಟರ್‌ಗೆ ವರ್ಗಾವಣೆ ಮಾಡಿ ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್ ಆದೇಶ ಹೊರಡಿಸಿದ್ದಾರೆ.

ಗಲಾಟೆ ತಡೆಯಲು ಅವಕಾಶ ಇದ್ದರೂ ಕೂಡ ನಿರ್ಲಕ್ಷ್ಯ ವಹಿಸಿದ್ದರಿಂದ ಗಲಭೆ ನಡೆದಿದೆ ಎಂಬ ಮಾತುಗಳು ಕೇಳಿ ಬಂದ ಬೆನ್ನಲ್ಲೇ ರೂಪೇಶ್ ಅವರನ್ನು ವರ್ಗಾವಣೆ ಮಾಡಲಾಗಿದೆ.

ಸೋಷಿಯಲ್ ಮೀಡಿಯಾದಲ್ಲಿ ಫೋಟೋ ವೈರಲ್ ಆದ ನಂತರ ಸ್ಟೇಟಸ್ ಹಾಕಿದ್ದ ಆರೋಪಿ ಸತೀಶ್ ಅಲಿಯಾಸ್ ಪಾಂಡುರಂಗನನ್ನ ರೂಪೇಶ್ ಠಾಣೆಗೆ ಕರೆತಂದಿದ್ದರು.

ಬೆಳಿಗ್ಗೆಯಿಂದ ಸಂಜೆಯವರೆಗೂ ಸತೀಶ್ ಮೇಲೆ ಕ್ರಮ ಕೈಗೊಳ್ಳಲು ಹಿಂದೇಟು ಹಾಕಿದ್ದಕ್ಕೆ ಠಾಣೆ ಮುಂದೆ ಮುಸ್ಲಿಂ ಯುವಕರ ಗುಂಪು ಜಮಾಯಿಸಿ ಗಲಾಟೆ ನಡೆಸಿತ್ತು.

ಕೆರ್ಗಳ್ಳಿಯಲ್ಲಿ ಎಂಐಟಿ ಕಾಲೇಜು ವಿದ್ಯಾರ್ಥಿಗಳಿಂದ ಸ್ವಚ್ಛತಾ ಕಾರ್ಯಕ್ರಮ

ರಾಶಿ–ರಾಶಿ ಕಸ, ವಾಮಾಚಾರದ ವಸ್ತುಗಳ ಸಂಗ್ರಹ



ಮೈಸೂರಿನ ಎಂಐಟಿ ಪ್ರಥಮ ದರ್ಜೆ ಕಾಲೇಜಿನ ಎನ್‌ಎಸ್‌ಎಸ್ ಘಟಕದ ವಿದ್ಯಾರ್ಥಿಗಳು ಕೇರ್ಗಳ್ಳಿ ಕೆರೆ ಸೇರಿದಂತೆ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಸ್ವಚ್ಛತಾ ಕಾರ್ಯ ನಡೆಸಿ, ರಾಶಿ ರಾಶಿ ಕಸ ಸಂಗ್ರಹಿಸಿದರು.

> “ನಮಗೆ ಯಾರಾದೂ ಜೆಸಿಬಿ ಸೇರಿದಂತೆ ಇನ್ನಿತರ ಅಗತ್ಯ ಪರಿಕರಗಳನ್ನು ಒದಗಿಸಿದರೆ ನಮ್ಮ ಎನ್‌ಎಸ್‌ಎಸ್ ಶಿಬಿರದ ವಿದ್ಯಾರ್ಥಿಗಳು ಹೂಳು ತುಂಬಿರುವ ಕೇರ್ಗಳ್ಳಿಯ ಕೆರೆಯ ಹೂಳು ತೆಗೆದು ಸ್ವಚ್ಛಗೊಳಿಸುವ ಮೂಲಕ ಕೆರೆಯನ್ನು ಸೌಂದರ್ಯೀಕರಣ ಮಾಡಲು ಬಹಳ ಉತ್ಸುಕರಾಗಿದ್ದಾರೆ.
> –ಡಾ.ನಂದಾ,, ಟಿ.ಎನ್‌ಎನ್‌ಎಸ್‌ಎಸ್ ಉಪಕಾರ್ಯಕ್ರಮಾಧಿಕಾರಿ

ಮೈಸೂರು,ಫೆ.18–ಮೈಸೂರಿನ ಎಂಐಟಿ ಪ್ರಥಮ ದರ್ಜೆ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆ ಘಟಕದ ವಿದ್ಯಾರ್ಥಿಗಳು ಕೇರ್ಗಳ್ಳಿ ಕೆರೆ ಸೇರಿದಂತೆ ಸುತ್ತ–ಮುತ್ತಲಿನ ಪ್ರದೇಶ ಗಳಲ್ಲಿ ಸ್ವಚ್ಛತಾ ಕಾರ್ಯ ನಡೆಸುವ ಮೂಲಕ ವಾರ್ಷಿಕ ಶಿಬಿರದ ಶ್ರಮದಾನ ನಡೆಸಿದರು.

ಎನ್‌ಎಸ್‌ಎಸ್ ಘಟಕದ ಕಾರ್ಯಕ್ರಮಾಧಿಕಾರಿ ಅಭಿನಂದನ್, ಉಪ ಕಾರ್ಯಕ್ರಮಾಧಿಕಾರಿ ಡಾ.ನಂದ ಟಿ.ಎನ್. ನೇತೃತ್ವದಲ್ಲಿ ಸುಮಾರು 50ಕ್ಕೂ ಹೆಚ್ಚು ವಿದ್ಯಾರ್ಥಿಗಳು ಕೇರ್ಗಳ್ಳಿ ರಸ್ತೆ ಬದಿ ಮತ್ತು ಖಾಲಿ ಪ್ರದೇಶಗಳಲ್ಲಿ ಬಿಸಾಡಿರುವ ಕಸವನ್ನು ಸಂಗ್ರಹಿಸಿದರಲ್ಲದೆ, ಗಿಡ–ಗಂಟಿಗಳನ್ನು ಕತ್ತರಿಸಿ ಸ್ವಚ್ಛಗೊಳಿಸಿದರು. ಅದರಲ್ಲೂ ಹಲವಾರು ವರ್ಷಗಳಿಂದ ಹೂಳು ಮತ್ತು ಚರಂಡಿ ನೀರಿನಿಂದ ಗಬ್ಬೆದ್ದು ನಾರುತ್ತಿದ್ದ ಕೇರ್ಗಳ್ಳಿಯ ಕುಂಬಾರಕಟ್ಟೆ ಕೆರೆಯಲ್ಲಿ ಈಗ ನೀರಿಲ್ಲದೆ ಒಣಗಿರುವುದರಿಂದ ಅಲ್ಲಿ ತುಂಬಿದ್ದ ಕಸ–ಕಡ್ಡಿಗಳು ಮತ್ತು ರಾಶಿಗಟ್ಟಲೆ ವಾಮಾಚಾರದ ಮಡಿಕೆ, ಕುಡಿಕೆ, ದಾರಗಳು, ನಿಂಬೆಹಣ್ಣು, ಅರಿಶಿನ ಕುಂಕುಮ ಪೊಟ್ಟಣ, ಗೊಂಬೆಗಳನ್ನು ಸಂಗ್ರಹಿಸಿ ಸ್ವಚ್ಛಗೊಳಿಸುವ ಮೂಲಕ ಕೆರೆ ಕಂಗೊಳಿಸುವಂತೆ ಮಾಡಿದರು.

ಇದರೊಂದಿಗೆ ಊರಿನ ಶ್ರೀ ಹೊಂಬಾಳಮ್ಮ ದೇವಸ್ಥಾನದ ಎದುರು ಸಾರ್ವಜನಿಕರು ಎಲ್ಲೆಂದರಲ್ಲಿ ಬಿಸಾಡಿದ್ದ ರಾಶಿ–ರಾಶಿ ಕಸವನ್ನೂ ಸಂಗ್ರಹಿಸಿ ಇಡೀ ಪ್ರದೇಶ ಅಚ್ಚುಕಟ್ಟಾಗಿ ಕಾಣುವಂತೆ ಮಾಡಿದ್ದು, ಗ್ರಾಮಸ್ಥರು ಮೆಚ್ಚುಗೆ ವ್ಯಕ್ತಪಡಿಸಿದರು.

ಶಿಬಿರವನ್ನು ಕೇರ್ಗಳ್ಳಿ ಗ್ರಾಪಂ ಮಾಜಿ ಅಧ್ಯಕ್ಷ ಬಸವೇಗೌಡ ಉದ್ಘಾಟಿಸಿದರು. ತಾಪಂ ಮಾಜಿ ಅಧ್ಯಕ್ಷ ಕೆಂಚಪ್ಪ ಅಧ್ಯಕ್ಷತೆ ವಹಿಸಿದ್ದರು. ಶಿಕ್ಷಣ ಸಂಸ್ಥೆಯ ಕರೆ ಸ್ಪಾಂಡೆಂಟ್ ಎನ್.ಆರ್.ಮಂಜುನಾಥ್, ಕಾಲೇಜಿನ ಪ್ರಾಂಶುಪಾಲ ಡಾ.ಚಂದ್ರಜಿತ್, ಮುಖಂಡರು ಉಪಸ್ಥಿತರಿದ್ದರು.

ಶಿಬಿರಾರ್ಥಿಗಳು ಕೇರ್ಗಳ್ಳಿಯಲ್ಲಿರುವ ಶ್ರೀ ಹೊಂಬಾಳಮ್ಮ ಸಿದ್ದರಾಮೇಶ್ವರ ಸಮುದಾಯ ಭವನದಲ್ಲಿ ವಾಸ್ತವ್ಯ ಹೂಡಿ ಎನ್‌ಎಸ್‌ಎಸ್ ಕಾರ್ಯಕ್ರಮದಲ್ಲಿ ಭಾಗವಹಿಸುತ್ತಿದ್ದು, ಶುಕ್ರವಾರದವರೆಗೂ ಕೇರ್ಗಳ್ಳಿ ಗ್ರಾಮದ ಸುತ್ತ–ಮುತ್ತಲಿನ ಪ್ರದೇಶಗಳಲ್ಲಿ ಸ್ವಚ್ಛತಾ ಕಾರ್ಯ ನಡೆಸಲು ಮುಂದಾಗಿದ್ದಾರೆ. ಸಂಗ್ರಹಿಸಿರುವ ಕಸದ ರಾಶಿಯನ್ನು ನಾಳೆ(ಬುಧವಾರ) ಬೋಗಾದಿ ಪಪಂ ವಾಹನಗಳ ಮೂಲಕ ವಿಲೇವಾರಿ ಮಾಡಲಾಗುವುದು ಎಂದು ಪಪಂ ಮುಖ್ಯಾಧಿಕಾರಿ ಬಸವರಾಜು ತಿಳಿಸಿದ್ದಾರೆ.

ಸಾಲಗಾರರ ಕಾಟ; ಗೃಹಿಣಿ ನಾಪತ್ತೆ

ಪತಿ ಮಾಜಿ ಯೋಧನಿಂದ ಪೊಲೀಸ್ ಠಾಣೆಗೆ ದೂರು

ಮೈಸೂರು, ಫೆ.18– ಕುಟುಂಬ ನಿರ್ವಹಣೆಗೆ ಕೈಸಾಲ ಮಾಡಿದ್ದ ಗೃಹಿಣಿ, ಸಾಲಗಾರರ ಕಾಟ ತಾಳಲಾರದೆ ನಾಪತ್ತೆಯಾಗಿದ್ದಾರೆ ಎಂದು ಮೈಸೂರಿನ ಇಲವಾಲ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



ಇಲವಾಲ ಹೋಬಳಿ, ಭದ್ರೇಗೌಡನ ಕೊಪ್ಪಲು ಗ್ರಾಮದ ಎಸ್.ಶ್ರುತಿ(34) ನಾಪತ್ತೆಯಾಗಿದ್ದು, ಈ ಸಂಬಂಧ ಅವರ ಪತಿ, ಮಾಜಿ ಯೋಧ ಮೋಹನ್‌ಕುಮಾರ್ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ.

ನಾನು ಸೇವೆಯಲ್ಲಿದ್ದಾಗ ನನ್ನ ತಾಯಿ, ಪತ್ನಿ ಹಾಗೂ ಮೂವರು ಮಕ್ಕಳು ಭದ್ರೇಗೌಡನ ಕೊಪ್ಪಲು ಗ್ರಾಮದಲ್ಲಿ ವಾಸವಿದ್ದರು. ಕಳೆದ ಜನವರಿ 25ರಂದು ನನ್ನ ಪತ್ನಿ ಶ್ರುತಿ ಕರೆ ಮಾಡಿ, ಮನೆ ಖರ್ಚಿಗಾಗಿ ಕೆಲವರಿಂದ ಕೈಸಾಲ ಮಾಡಿದ್ದು, ಅವರೆಲ್ಲಾ ಮನೆ ಮುಂದೆ ಬಂದು ಹಣ ವಾಪಸ್ ನೀಡುವಂತೆ ತೊಂದರೆ ಕೊಡುತ್ತಿದ್ದಾರೆ. ಆದ್ದರಿಂದ ನಾನು ಬೆಂಗಳೂರಿನ ಸಂಬಂಧಿ ಕರ ಮನೆಯಲ್ಲಿದ್ದೇನೆ ಎಂದು ತಿಳಿಸಿದರು. ಆಗ ಈ ತಿಂಗಳು ನಿವೃತ್ತಿಯಾಗುತ್ತಿದ್ದೇನೆ ನೀನು ಮನೆಗೆ ಬಾ, ಮಾತಾಡೋಣ ಎಂದು ಸಮಾಧಾನಪಡಿಸಿದೆ. ಫೆ1ರಂದು ನಾನು ಮನೆಗೆ ಬಂದಾಗ ಪತ್ನಿ ಶ್ರುತಿ ಇರಲಿಲ್ಲ. ಈ ಬಗ್ಗೆ ತಾಯಿಯನ್ನು ವಿಚಾರಿಸಿದಾಗ ಸಾಲ ಕೊಟ್ಟವರು ತೊಂದರೆ ಕೊಡುತ್ತಿದ್ದ ಕಾರಣ ಜ.24ರಂದು ಬೆಂಗಳೂರಿಗೆ ಹೋಗಿಬರುವುದಾಗಿ ಹೇಳಿ ಹೋಗಿದ್ದಾಗಿ ಹೇಳಿದರು. ನಂತರ ಎಲ್ಲಾ ಕಡೆ ಹುಡುಕಾಡಿದರೂ ಪತ್ತೆಯಾಗದ ಕಾರಣ ದೂರು ನೀಡುತ್ತಿರುವುದಾಗಿ ದೂರಿನಲ್ಲಿ ತಿಳಿಸಿದ್ದಾರೆ.

ಈ ಸಂಬಂಧ ಪ್ರಕರಣ ದಾಖಲಿಸಿಕೊಂಡಿರುವ ಇಲವಾಲ ಠಾಣೆ ಪೊಲೀಸರು, ಶ್ರುತಿ ಅವರ ಬಗ್ಗೆ ಮಾಹಿತಿ ತಿಳಿದವರು ಮೈಸೂರು ಜಿಲ್ಲಾ ಪೊಲೀಸ್ ಕಂಟ್ರೋಲ್ (0821–2444800) ಅಥವಾ ಇಲವಾಲ ಠಾಣೆ(2402222) ಯನ್ನು ಸಂಪರ್ಕಿಸುವಂತೆ ಪ್ರಕಟಣೆಯಲ್ಲಿ ಕೋರಿದ್ದಾರೆ.

ಸ್ನೇಹಿತನ ಜೊತೆ ಪತ್ನಿ ಪರಾರಿ: ಪತಿ ಆತ್ಮಹತ್ಯೆ!

ತುಮಕೂರು, ಫೆ18– ಸ್ನೇಹಿತನ ಜೊತೆ ಪತ್ನಿ ಪರಾರಿಯಾಗಿದ್ದಾಳೆ ಎಂದು ಆರೋಪಿಸಿ ಪತಿ ಸೆಲ್ಫಿ ವಿಡಿಯೋ ಮಾಡಿಟ್ಟು ಆತ್ಮಹತ್ಯೆಗೆ ಶರಣಾಗಿರುವ ಘಟನೆ ತುಮಕೂರು ಜಿಲ್ಲೆಯ ಗುಬ್ಬಿಯಲ್ಲಿ ನಡೆದಿದೆ. ನಾಗೇಶ್ ಆತ್ಮಹತ್ಯೆಗೆ ಶರಣಾಗಿರುವ ವ್ಯಕ್ತಿ. ಪತ್ನಿ ರಂಜಿತಾಗೆ ಸ್ನೇಹಿತ ಭರತ್ ಜೊತೆ ಅಕ್ರಮ ಸಂಬಂಧವಿದೆ ಎಂದು ಆರೋಪಿಸಿರುವ ನಾಗೇಶ್, ಆತನೊಂದಿಗೆ ಪತ್ನಿ ಓಡಿಹೋಗಿದ್ದಾಳೆ ಎಂದು ಆರೋಪಿಸಿದ್ದಾನೆ. ತನ್ನ ಸಾವಿಗೆ ಪತ್ನಿ ಹಾಗೂ ಸ್ನೇಹಿತನೇ ಕಾರಣ ಎಂದು ಸೆಲ್ಫಿ ವಿಡಿಯೋ ಮಾಡಿಟ್ಟು ನಾಗೇಶ್ ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಘಟನಾ ಸ್ಥಳಕ್ಕೆ ಗುಬ್ಬಿ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಕೆಪಿಸಿಸಿ ಅಧ್ಯಕ್ಷ ಸ್ಥಾನದಿಂದ ಡಿಕೆಶಿ ಬದಲಿಸುವ ಹಠ ಇಲ್ಲ: ಸತೀಶ ಜಾರಕಿಹೊಳಿ

ಮಂಗಳೂರು: ಡಿ.ಕೆ.ಶಿವಕುಮಾರ್ ಅವರನ್ನು ಕೆಪಿಸಿಸಿ ಅಧ್ಯಕ್ಷ ಸ್ಥಾನದಿಂದ ಬದಲಿಸುವ ವಿಚಾರದಲ್ಲಿ ನಾವು ಹಠಕ್ಕೆ ಬಿದ್ದಿಲ್ಲ. ಪಕ್ಷದ ದೆಹಲಿ ಹೈಕಮಾಂಡ್ ನಮಗೆ ದೇವಸ್ಥಾನ ಇದ್ದ ಹಾಗೆ. ಹೈಕಮಾಂಡ್ ಬಳಿ ಪ್ರಾರ್ಥನೆ ಮಾಡಿದ್ದೇವೆ. ನಿರ್ಧಾರ ಕೈಗೊಳ್ಳುವುದು ಅವರಿಗೆ ಬಿಟ್ಟಿದ್ದು ಎಂದು ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಹೇಳಿದರು.

ಇಲ್ಲಿ ಸುದ್ದಿಗಾರರ ಜೊತೆ ಮಂಗಳವಾರ ಮಾತನಾಡಿದ ಅವರು, ನಮ್ಮ ಪಕ್ಷ ಬೆಳೆಯಬೇಕು, ಮತ್ತೆ ಅಧಿಕಾರಕ್ಕೆ ಬರಬೇಕು ಎಂಬ ಕಾರಣಕ್ಕೆ ಹೈಕಮಾಂಡ್ ಮುಂದೆ ಕೆಲವೊಂದಿಷ್ಟು ವಿಚಾರಗಳನ್ನು ವ್ಯಕ್ತಪಡಿಸಿದ್ದೇವೆ. ಸಣ್ಣಪುಟ್ಟ ವ್ಯತ್ಯಾಸಗಳಿದ್ದರೆ ಸರಿಪಡಿಸುವ ಕಾರ್ಯವನ್ನು ಹೈಕಮಾಂಡ್ ಮಾಡುತ್ತದೆ ಎಂದರು. ದಲಿತ ಸಮಾವೇಶ ಸದ್ಯಕ್ಕೆ ಇಲ್ಲ. ಅದು ನಡೆಯುವುದು ಗೃಹಸಚಿವ ಜಿ.ಪರಮೇಶ್ವರ ನೇತೃತ್ವದಲ್ಲಿ. ಅವರು ಹೇಳಿದಾಗ ಸಮಾವೇಶ ನಡೆಸುತ್ತೇವೆ ಎಂದರು.



ಸಚಿವ ರಾಜಣ್ಣ ಅವರ ಹೇಳಿಕೆಗಳಿಂದ ಮುಜುಗರ ಆಗುತ್ತಿದೆ ಎಂದು ಕೆಪಿಸಿಸಿ ಕಾರ್ಯಾಧ್ಯಕ್ಷ ಜಿ.ಸಿ.ಚಂದ್ರಶೇಖರ್ ಅವರು ಹೈಕಮಾಂಡ್‌ಗೆ ಪತ್ರ ಬರೆಯುವ ಅವಶ್ಯಕತೆ ಇರಲಿಲ್ಲ. ರಾಜಣ್ಣ ಅವರನ್ನು ಇಲ್ಲೇ ಕರೆಸಿ ಚರ್ಚೆ ಮಾಡಬಹುದಿತ್ತು ಎಂದು ಅಭಿಪ್ರಾಯಪಟ್ಟರು.

ಸಿದ್ದರಾಮಯ್ಯನವರೇ ಮುಖ್ಯಮಂತ್ರಿಯಾಗಿ ಮುಂದುವರಿಯಲಿ ಎಂದು ಡಿ.ಕೆ.ಶಿವಕುಮಾರ್ ಅವರೇ ಹೇಳಿರುವುದರಿಂದ ಈ ಬಗ್ಗೆ ಪ್ರತಿಕ್ರಿಯಿಸುವ ಪ್ರಶ್ನೆಯೇ ಬರುವುದಿಲ್ಲ. ಸಚಿವರ ಬದಲಾವಣೆ ಕುರಿತು ನಮ್ಮ ಹಂತದಲ್ಲಿ ಯಾವುದೇ ಚರ್ಚೆ ನಡೆದಿಲ್ಲ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ಮೇಕೆದಾಟು ಅಣೆಕಟ್ಟು ನಿರ್ಮಾಣಕ್ಕೆ ಅನುಮತಿ ನೀಡುವಂತೆ ಕೇಂದ್ರಕ್ಕೆ ಡಿಕೆಶಿ ಆಗ್ರಹ

ಬೆಂಗಳೂರು, ಫೆ.18(ಕೆಎಂಶಿ)– ಮಳೆ ನೀರು ಸಮುದ್ರಕ್ಕೆ ಹರಿದು ಪೋಲಾಗದಂತೆ ತಡೆಯಲು ಕಾವೇರಿ ಜಲಾನಯನ ಪ್ರದೇಶದ ಕೃಷ್ಣರಾಜ ಸಾಗರ ಅಣೆಕಟ್ಟೆಗೆ ಸಮಾನಾಂತರವಾಗಿ ಮೇಕೆದಾಟು ಸಮೀಪ ಜಲಾಶಯ ನಿರ್ಮಾಣಕ್ಕೆ ಅನುಮತಿ ನೀಡಬೇಕೆಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕೇಂದ್ರ ಸರ್ಕಾರವನ್ನು ಆಗ್ರಹಿಸಿದ್ದಾರೆ.

ರಾಜಸ್ಥಾನದ ಉದಯಪುರದಲ್ಲಿ ನಡೆಯುತ್ತಿರುವ '2047ರಲ್ಲಿ ಭಾರತದ ಜಲಸಮೃದ್ಧಿ ರಾಷ್ಟ್ರ' ಎಂಬ 2ನೇ ಅಖಿಲ ಭಾರತ ರಾಜ್ಯಗಳ ನೀರಾವರಿ ಸಚಿವರ ಸಮ್ಮೇಳನದಲ್ಲಿ ಭಾಗವಹಿಸಿ ಮೇಕೆದಾಟು ಯೋಜನೆ ಪ್ರಸ್ತಾಪಿಸಿದರು.

ಕೇಂದ್ರ ಸರ್ಕಾರ ಕರ್ನಾಟಕದ ಬಾಕಿ ಇರುವ ನೀರಾವರಿ ಯೋಜನೆಗಳಿಗೆ ಅನುಮತಿ ನೀಡಬೇಕು ಹಾಗೂ ಅನುದಾನ ನೀಡುವ ಮೂಲಕ ಮಳೆಗಾಲದಲ್ಲಿ ಸಮುದ್ರಕ್ಕೆ ಹರಿದು ಹೋಗುವ ನೀರನ್ನು ಕುಡಿಯಲು ಹಾಗೂ ವಿದ್ಯುತ್ ಉತ್ಪಾದನಾ ಯೋಜನೆಗಳಿಗೆ ಬಳಸಲು ಅವಕಾಶ ಮಾಡಿಕೊಡಬೇಕು ಎಂದರು.



ಮೇಕೆದಾಟು ಯೋಜನೆಯ ಡಿಪಿಆರ್ ಪರಿಗಣಿಸಿ ಅನುಮತಿ ನೀಡುವಂತೆ ಸಿಡಬ್ಲ್ಯೂಸಿಗೆ ನಿರ್ದೇಶನ ನೀಡಬೇಕು, ಇದರಿಂದ ತಮಿಳುನಾಡಿಗೆ ಪ್ರತಿ ತಿಂಗಳ ಲೆಕ್ಕಾಚಾರದ ನೀರು ನೀಡಬಹುದು, ಜೊತೆಗೆ 400 ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆ ಮತ್ತು ಬೆಂಗಳೂರಿನ ಕುಡಿಯುವ ನೀರಿನ ಅಗತ್ಯಗಳನ್ನು ಪೂರೈಸಲು ಸಾಧ್ಯವಾಗುತ್ತದೆ ಎಂದಿದ್ದಾರೆ.

ಕರ್ನಾಟಕದ ಯೋಜನೆಗಳಿಗೆ ಕೇಂದ್ರ ಜಲಶಕ್ತಿ ಸಚಿವಾಲಯ ಆದ್ಯತೆ ಮೇರೆಗೆ ಅಗತ್ಯ ಕ್ರಮ ಕೈಗೊಂಡು ಅನು ಮತಿ ಕೊಡಿಸಬೇಕು. 2023–24ರ ಕೇಂದ್ರ ಬಜೆಟ್‌ನಲ್ಲಿ ಭದ್ರಾ ಮೇಲ್ದಂಡೆ ಯೋಜನೆಗೆ 5,300 ಕೋಟಿ ರೂ. ಅನುದಾನ ಘೋಷಿ ಸಿದ್ದರೂ ಈವರೆಗೂ ಹಣ ಬಿಡು ಗಡೆಯಾಗಿಲ್ಲ, ಯೋಜನೆ ಪೂರ್ಣಗೊಳಿಸಲು ಕೂಡಲೇ ಹಣ ಬಿಡುಗಡೆ ಮಾಡುವಂತೆ ಮನವಿ ಮಾಡಿದರು.

2011ರ ಸೆಪ್ಟೆಂಬರ್ 16ರ ತೀರ್ಪಿನಲ್ಲಿ ಕೆಲವು ಬದಲಾವಣೆಗೆ ಸರ್ವೋಚ್ಚ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಕೆಗೆ ಅಗತ್ಯ ಕ್ರಮ ಕೈಗೊಳ್ಳಬೇಕು. ಕೃಷ್ಣಾ ಜಲ ವಿವಾದ ನ್ಯಾಯಮಂಡಳಿಯ 2010ರ ತೀರ್ಪಿನನ್ವಯ ಮೀಸಲಾಗಿರುವ ನೀರಿನ ಪಾಲನ್ನು ಕರ್ನಾಟಕ ಬಳಸಿಕೊಳ್ಳಲು ಗೆಜೆಟ್ ಅಧಿಸೂಚನೆ ಹೊರಡಿಸಬೇಕು ಎಂದರು.

ಮಹದಾಯಿ ಜಲ ವಿವಾದ ಕುರಿತ 2018ರ ಆಗಸ್ಟ್‌ನಲ್ಲಿನ ನ್ಯಾಯಮಂಡಳಿ ತೀರ್ಪಿನನ್ವಯ ಕಳಸಾ ನಾಲಾ ಯೋಜನೆಗೆ ರಾಷ್ಟ್ರೀಯ ವನ್ಯಜೀವಿ ಮಂಡಳಿ ಅನುಮತಿ ದೊರಕಿಸಿಕೊಡಲು ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಬೇಕು.

ನದಿಗಳ ಜೋಡಣೆಯಡಿ ಗೋದಾವರಿ–ಕಾವೇರಿ ಯೋಜನೆಗೆ ಸಂಬಂಧಿಸಿದಂತೆ ರಾಜ್ಯದ ಪಾಲನ್ನು ಮರುಪರಿಶೀಲನೆ ಮಾಡಬೇಕು, ಕರ್ನಾಟಕಕ್ಕೆ ಪ್ರಸ್ತುತ ಕೇವಲ 15.891 ಟಿಎಂಸಿ (ಶೇ.10.74) ನೀರು ಮಾತ್ರ ಹಂಚಿಕೆ ಮಾಡಲಾಗಿದೆ. ಪರಿಣಾಮಕಾರಿ ನಿರ್ವಹಣೆ ಮತ್ತು ನೀರಿನ ಬಳಕೆಯ ದಕ್ಷತೆ ಸಾಧಿಸಲು ಕರ್ನಾಟಕ ಅನೇಕ ಸುಧಾರಣೆಗಳನ್ನು ಜಾರಿಗೆ ತಂದಿದೆ ನೀರಾವರಿ ಮತ್ತು ಕುಡಿಯುವ ನೀರಿನ ಕಾಮಗಾರಿಗಳಿಂದ ಅಕ್ರಮವಾಗಿ ನೀರು ಬಳಸಿಕೊಳ್ಳುವುದನ್ನು ತಡೆಯಲು ನೀರಾವರಿ ಕಾಯ್ದೆಗೆ ತಿದ್ದುಪಡಿ ತರಲಾಗಿದೆ.

ನೀರಾವರಿ ಅಕ್ರಮಗಳ ವಿಚಾರಣೆಗೆ ಅಧಿಕಾರಿಗಳಿಗೆ ಸೂಕ್ತ ಅಧಿಕಾರ ನೀಡಲಾಗಿದೆ, ಪೊಲೀಸ್ ಒಳಗೊಂಡ ಕಾರ್ಯಪಡೆಗೆ ಅವಕಾಶ ನೀಡುವ ಕುರಿತು ತಿದ್ದುಪಡಿ ಮಾಡಲಾಗಿದೆ.

ನೂತನ ರಾಜ್ಯ ಜಲ ನೀತಿಯನ್ನು 2022ರಲ್ಲಿ ಜಾರಿಗೆ ತರಲಾಯಿತು. ಜಲ ಸಂರಕ್ಷಣೆ ಹಾಗೂ ಆರೋಗ್ಯ, ಆಹಾರ, ಇಂಧನ, ನೀರಿನ ಮೂಲಗಳ ಸಮರ್ಪಕ ಬಳಕೆಗೆ ಒತ್ತು ನೀಡಲು ಕೆಲವು ಕ್ರಮಗಳನ್ನು ಕೈಗೊಳ್ಳಬೇಕಿದೆ ಎಂದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ತಂಡೇಲ್ (ತೆ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ರಾಜು ಜೇಮ್ಸ್ ಬಾಂಡ್ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಸನಮ್ ತೇರಿ ಕಸಮ್ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ರಾಜು ಜೇಮ್ಸ್ ಬಾಂಡ್ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಸಿದ್ಲಿಂಗು–2 (ಕ)	4 ಪ್ರದರ್ಶನಗಳು
ರಾಜಕಮಲ್	
ವಿದಾಮುಯರ್ಚಿ (ತ)	4 ಪ್ರದರ್ಶನಗಳು
ಸಂಗಂ	
ಛಾವಾ (ಹಿ)	4 ಪ್ರದರ್ಶನಗಳು
ಲಿಡೋ	
ಭುವನಂ ಗಗನಂ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಮ್ಯಾಕ್ಸ್ (ಕ)	4 ಪ್ರದರ್ಶನಗಳು
ಪ್ರಭಾ	
ಭಗೀರಥ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ವಿದ್ದಾಮುಯರ್ಚಿ (ತ): ಬೆ.6.55ಕ್ಕೆ, ಬೆ10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.15ಕ್ಕೆ, ರಾ.10.24ಕ್ಕೆ.
ಸ್ಕ್ರೀನ್ 2	ಅಧಿಪತ್ರ (ಕ): ಬೆ.10.10ಕ್ಕೆ, ನೋಡಿದವರು ಏನಂತಾರೆ (ಕ): ಮ.1.15ಕ್ಕೆ, ರುದ್ರ ಗರುಡ ಪುರಾಣ (ಕ): ಸಂ.4.10ಕ್ಕೆ, ಬಡಾಸ್ ರವಿಕುಮಾರ್ (ಹಿಂ): ರಾ.7.10ಕ್ಕೆ, ನರೇ ಅನೀಂಟೆ ಮೂನನ್‌ಮಕ್ಕಲ್ (ಮ): ರಾ.10.10ಕ್ಕೆ.
ಸ್ಕ್ರೀನ್ 3	ಮಿ.ರಾಣಿ (ಕ): ಬೆ.10.30ಕ್ಕೆ, ಲವಯಪಾ (ಹಿಂ): ಮ.1.15ಕ್ಕೆ, ರಾ.7.05ಕ್ಕೆ, ರಾ.10ಕ್ಕೆ, ಭಗೀರಥ (ಕ): ಸಂ.4.10ಕ್ಕೆ.
ಸ್ಕ್ರೀನ್ 4	ಅನ್‌ಲಾಕ್ ರಾಘವ (ಕ): ಬೆ.10.25ಕ್ಕೆ, ಸ್ಕೈಫೋರ್ಸ್ (ಹಿಂ): ಮ.1.20ಕ್ಕೆ, ಥಂಡೆಲ್ (ತೆ): ಸಂ.4.15ಕ್ಕೆ, ರಾ.7.20ಕ್ಕೆ, ರಾ.10.25ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ರಾಯಲ್ (ಕ): ಬೆ.10.40ಕ್ಕೆ, ರುದ್ರ ಗರುಡ ಪುರಾಣ (ಕ): ಮ.1.30ಕ್ಕೆ, ಸಂ.6.45ಕ್ಕೆ, ಮ್ಯಾಕ್ಸ್ (ಕ): ಸಂ.4.15ಕ್ಕೆ, ಕುಜಂತೈಗಲ್ ಮುನ್ನೇತ್ರ ಕಳಗಂ (ತ): ರಾ.9.30ಕ್ಕೆ.
ಸ್ಕ್ರೀನ್ 2	ಫಾರೆಸ್ಟ್ (ಕ): ಮ.1.05ಕ್ಕೆ, ಮ.3.50ಕ್ಕೆ, ರಾಯಲ್ (ಕ): ಸಂ.6.35ಕ್ಕೆ, ಸ್ಕೈ ಫೋರ್ಸ್ (ಹಿಂ): ರಾ.9.30ಕ್ಕೆ.
ಸ್ಕ್ರೀನ್ 3	ಸ್ಕೈ ಫೋರ್ಸ್ (ಹಿಂ): ಬೆ.11ಕ್ಕೆ, ರಾ.7.05ಕ್ಕೆ, ರಾಯಲ್ (ಕ): ಮ.1.25ಕ್ಕೆ, ಡೊಮಿನಿಕ್ ಅಂಡ್ ದಿ ಲೇಡಿಸ್ ಪರ್ಸ್ (ಮ): ಸಂ.4.15ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 4	ಫಾರೆಸ್ಟ್ (ಕ): ಬೆ.10.40ಕ್ಕೆ, ರಾ.9.20ಕ್ಕೆ, ಛೂ ಮಂತರ್ (ಕ): ಮ.1.30ಕ್ಕೆ, ಸಂ.6.40ಕ್ಕೆ, ಸ್ಕೈ ಫೋರ್ಸ್ (ಹಿಂ): ಸಂ.4.15ಕ್ಕೆ.

ಪಿವಿಆರ್ ಸಿನಿಮಾಸ್
PVR CINEMAS
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಮುಡಾ ಹಗರಣ: ಅಂತಿಮ ವರದಿ ಸಲ್ಲಿಕೆಗೆ ಕಾಲಾವಕಾಶ ಕೇಳಿದ ಲೋಕಾಯುಕ್ತ!



ಬೆಂಗಳೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಮುಖ ಆರೋಪಿಯಾಗಿರುವ ಮುಡಾ (ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ) ಭೂ ಹಗರಣದ ತನಿಖೆ ನಡೆಸುತ್ತಿರುವ ರಾಜ್ಯ ಲೋಕಾಯುಕ್ತರು ತನ್ನ ಅಂತಿಮ ವರದಿ ಸಲ್ಲಿಸಲು ನ್ಯಾಯಾಲಯದಿಂದ ಹೆಚ್ಚಿನ ಕಾಲಾವಕಾಶವನ್ನು ಕೇಳಿದ್ದಾರೆ.

ಮನವಿಯನ್ನು ಪರಿಗಣಿಸಿದ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದ ನ್ಯಾಯಾಧೀಶ ಸಂತೋಷ್ ಗಜಾನನ ಭಟ್ ಪ್ರಕರಣದ ಮುಂದಿನ ವಿಚಾರಣೆಯನ್ನು ಫೆ.24ಕ್ಕೆ ಮುಂದೂಡಿದ್ದಾರೆ.

ಲೋಕಾಯುಕ್ತ ಎಡಿಜಿಪಿ ಎ. ಸುಬ್ರಮಣ್ಯೇಶ್ವರ ರಾವ್ ಅವರು ವರದಿಯನ್ನು ಪರಿಶೀಲಿಸುತ್ತಿದ್ದಾರೆ ಎಂದು ಪ್ರಾಸಿಕ್ಯೂಷನ್ ಪರವಾಗಿ ವಾದಿಸಿದ ವಕೀಲರು, ತಾಂತ್ರಿಕ ಕಾರಣಗಳಿಂದಾಗಿ ಸಲ್ಲಿಕೆಗೆ ಹೆಚ್ಚುವರಿ ಸಮಯವನ್ನು ಕೋರಿದರು.

ನ್ಯಾಯಮೂರ್ತಿ ಎಂ. ನಾಗಪ್ರಸನ್ನ ನೇತೃತ್ವದ ಹೈಕೋರ್ಟ್ ಪೀಠದ ನಿರ್ದೇಶನದ ಮೇರೆಗೆ ಮೈಸೂರು ಲೋಕಾಯುಕ್ತ ಎಸ್ಪಿ ಟಿ.ಜೆ. ಉದೇಶ್ ಅವರು ಫೆಬ್ರವರಿ 13 ರಂದು ಲೋಕಾಯುಕ್ತ ಎಡಿಜಿಪಿ ಸುಬ್ರಹ್ಮಣ್ಯೇಶ್ವರರಾವ್ ಅವರಿಗೆ ಮುಡಾ ಹಗರಣದ ವರದಿಯನ್ನು ಸಲ್ಲಿಸಿದ್ದರು.

ಮುಡಾ ಹಗರಣದ ಅಂತಿಮ ವರದಿಯು ಐದು ಸಂಪುಟಗಳಲ್ಲಿ 550 ಪುಟಗಳನ್ನು ಒಳಗೊಂಡಿದೆ ಲೋಕಾಯುಕ್ತದ ಕಾನೂನು ಘಟಕ ವರದಿಯನ್ನು ಪರಿಶೀಲಿಸಿ ಚಾರ್ಜ್ ಶೀಟ್ ಸಲ್ಲಿಸಬೇಕೇ ಅಥವಾ ಮುಕ್ತಾಯ ವರದಿಯನ್ನು ಸಲ್ಲಿಸಬೇಕೇ ಎಂದು ನಿರ್ಧರಿಸಲಿದೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಕುಟುಂಬಕ್ಕೆ ಮುಡಾ 14 ನಿವೇಶನಗಳ ಹಂಚಿಕೆಯಲ್ಲಿ ಯಾವುದೇ ರಾಜಕೀಯ ಪ್ರಭಾವ ಕಂಡುಬಂದಿಲ್ಲ ಎಂದು ತನಿಖೆಯಿಂದ ತಿಳಿದುಬಂದಿದೆ ಎಂದು ಮೂಲಗಳು ತಿಳಿಸಿವೆ

ಹಾಸನದಲ್ಲಿ ಕೊಟ್ಟಿಗೆಯಲ್ಲಿ ಕಟ್ಟಿದ್ದ ಕರುವಿನ ಮೇಲೆ ಮಚ್ಚಿನಿಂದ ಭೀಕರ ದಾಳಿ; ರಕ್ತದ ಮಡುವಿನಲ್ಲಿ ನರಳಾಟ

ಹಾಸನ, ಫೆ.18– ರಾಜ್ಯದಲ್ಲಿ ಹಸುಗಳ ಮೇಲಿನ ದಾಳಿ ಪ್ರಕರಣಗಳು ವರದಿಯಾಗುತ್ತಲೇ ಇವೆ. ಬೆಂಗಳೂರು, ಉತ್ತರಕನ್ನಡ ಆಯ್ತು ಇದೀಗ ಹಾಸನದ ಸಕಲೇಶಪುರ ತಾಲೂಕಿನ ಅರೆಕೆರೆ ಗ್ರಾಮದಲ್ಲಿ ಕೊಟ್ಟಿಗೆಯಲ್ಲಿ ಕಟ್ಟಿದ್ದ ಕರುವನ್ನು ದುಷ್ಕರ್ಮಿಗಳು ಮಚ್ಚಿನಿಂದ ಮನಬಂದಂತೆ ಕೊಚ್ಚಿದ್ದಾರೆ.

ನವೀನ್ ಎಂಬುವವರಿಗೆ ಸೇರಿದ ಕರುವಿನ ಮೇಲೆ ದುರುಳರು ಮಚ್ಚಿನಿಂದ ದಾಳಿ ಮಾಡಿದ್ದು ಗಂಭೀರವಾಗಿ ಗಾಯಗೊಂಡಿರುವ ಕರು ರಕ್ತದ ಮಡುವಿನಲ್ಲಿ ನರಳಾಡುತ್ತಿದೆ. ಸದ್ಯ ಕರುವಿಗೆ ವೈದ್ಯರು ಚಿಕಿತ್ಸೆ ನೀಡಿದ್ದಾರೆ. ಈ ಹಿಂದೆ ಬೆಂಗಳೂರಿನ ಚಾಮರಾಜಪೇಟೆಯಲ್ಲಿ ಮೂರು ಹಸುಗಳ ಕೆಚ್ಚಲು ಕೊಯ್ದಿದ್ದರು. ನಂತರ ಉತ್ತರ ಕನ್ನಡ ಜಿಲ್ಲೆಯ ಹೊನ್ನಾವರ ತಾಲೂಕಿನಲ್ಲಿ ಗರ್ಭಿಣಿ ಹಸುವಿನ ತಲೆ–ಕಾಲು ಕಡಿದು, ಹೊಟ್ಟೆ ಸೀಳಿ ಕರುವನ್ನೂ ಹತ್ಯೆ ಮಾಡಿ ಮಾಂಸವನ್ನು ಕೊಂಡೊಯ್ದಿದ್ದರು.


2.5 BHK
HOME INTERIORS @
₹ 2.5 Lakh*
Home Space Mart
✆91089 23123


ಅಭಿನಂದನೆಗಳು
ಬಿ.ಎಸ್.ಎನ್.ಎಲ್. ನೌಕರರ ಹೌಸಿಂಗ್ ಸಹಕಾರ ಸಂಘದ ಅಧ್ಯಕ್ಷರ / ಉಪಾಧ್ಯಕ್ಷರ ಸ್ಥಾನಕ್ಕೆ ಆಯ್ಕೆ
ಬಿ.ಎಸ್.ಎನ್.ಎಲ್. ನೌಕರರ ಹೌಸಿಂಗ್ ಸಹಕಾರ ಸಂಘ (ನಿ) ಮೈಸೂರು. ಇದರ ಆಡಳಿತ ಮಂಡಲಿಯ ಅಧ್ಯಕ್ಷರು/ ಉಪಾಧ್ಯಕ್ಷರ 05 ವರ್ಷಗಳ ಅವಧಿಯ ಆಡಳಿತ ಮಂಡಳಿಯ ಚುನಾವಣೆಯನ್ನು, ದಿನಾಂಕ: 17–02–2025ರಂದು ನಿಗಧಿಪಡಿಸಿದ್ದು, ಅದರಂತೆ ಅಂತಿಮವಾಗಿ ಈ ಕೆಳಕಂಡ ಉಮೇದುವಾರರು 2025–2030 ಸಾಲುಗಳಿಗೆ ಆಡಳಿತ ಮಂಡಳಿ ಅಧ್ಯಕ್ಷರಾಗಿ ಎನ್.ಡಿ. ಸುಂದರ್ / ಉಪಾಧ್ಯಕ್ಷರಾಗಿ ಎ. ನಾಗೇಶ್, ರವರು ಅವಿರೋಧವಾಗಿ ಆಯ್ಕೆಯಾಗಿರುತ್ತಾರೆಂದು ಚುನಾವಣಾಧಿಕಾರಿ ಘೋಷಿಸಿದ್ದಾರೆ ಎಂದು ಸಂಘದ ಮುಖ್ಯಕಾರ್ಯ ನಿರ್ವಹಣಾಧಿಕಾರಿ ಅಂಜಲಿ.ಎ.ಡಿ ತಿಳಿಸಿದ್ದಾರೆ.
ಹಾಗೂ ಆಯ್ಕೆಯಾದ ಎಲ್ಲರಿಗೂ ಅಭಿನಂದನೆಗಳು.
ಎನ್.ಡಿ.ಸುಂದರ್ ಅಧ್ಯಕ್ಷರು
ಎ.ನಾಗೇಶ್ ಉಪಾಧ್ಯಕ್ಷರು
ನಿರ್ದೇಶಕರು
ಮಲ್ಲಪ್ಪ ಗಿಡ್ಡಪ್ಪ
ಜೆ. ಶೇಖರಮೂರ್ತಿ
ಮುರಳಿ
ಜಯಲಕ್ಷ್ಮಿ ಪಿ. ರಾವ್
ಮಹಾಲಕ್ಷ್ಮಮ್ಮ
ಎ. ಸುರೇಶ್
ಎ. ಪ್ರಕಾಶ್
ಕೆ. ಪಿ. ರಾಮಕೃಷ್ಣ
ಲಕ್ಷ್ಮೀನಾರಾಯಣ
ಪಾಪಣ್ಣ
ಡಿ. ಎನ್. ಗಂಗಾಧರ


ರಿ.ನಂ. : 20523/94–95
ಸ್ಥಾಪನೆ : 1994
ದೂ. : 0821 – 2371623
ಶ್ರೀ ಬಸವೇಶ್ವರ ಪತ್ತಿನ ಸಹಕಾರ ಸಂಘ (ನಿ.)
ಬಸವೇಶ್ವರ ರಸ್ತೆ, ಕೆ.ಆರ್. ಮೊಹಲ್ಲಾ, ಮೈಸೂರು–570 004.
ಆಡಳಿತ ಮಂಡಳಿಗೆ 2025–30ರವರೆಗೆ
ಅವಿರೋಧವಾಗಿ ಆಯ್ಕೆಯಾಗಿರುವವರಿಗೆ ಅಭಿನಂದನೆಗಳು
ಶ್ರೀ ಟಿ. ಲಿಂಗರಾಜು ಮೊ.: 96111 55576
ಶ್ರೀ ಎಂ.ಎಸ್. ರುದ್ರಸ್ವಾಮಿ ಮೊ.: 98866 80747
ಶ್ರೀ ಕೆ. ಗುರುಸ್ವಾಮಿ ಮೊ. : 94480 79292
ಶ್ರೀ ಎಸ್. ಷಣ್ಮುಖಾರಧ್ಯ ಮೊ.: 9448600185
ಶ್ರೀ ಮಹಬೂಬ್ ಖಾನ್ ಮೊ. : 98809 30276
ಶ್ರೀ ಪಿ. ಚಂದ್ರಶೇಖರ್ ಮೊ. : 97418 58680
ಶ್ರೀ ಕೀರ್ತಿಕುಮಾರ್ ಮೊ. : 98804 16950
ಶ್ರೀ ಶೇಖರಪ್ಪ ಬಿ. ಮೊ. : 82175 84026
ಶ್ರೀ ಎನ್.ಬಿ.ಶಿವಪ್ರಕಾಶ್ ಮೊ. : 99809 35655
ಶ್ರೀಮತಿ ಎಂ.ಹೆಚ್. ಶಿವಮಣಿ ಮೊ.: 84533 48049
ಶ್ರೀಮತಿ ಎಸ್. ಚೆನ್ನಾಜಿ ಮೊ. : 99022 98218


ಶ್ರೀ ನವೀನ್ ಧರಣ್ ರವರಿಗೆ ಜನ್ಮದಿನದ ಶುಭಾಶಯಗಳು